ಸಂಪುಟ: 05 ಸಂಚಿಕೆ: 163 ಪುಟಗಳು: 08 ಮಂಗಳವಾರ 26 ಆಗಸ್ಟ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಕಲ್ಲಿಗೆ ಸುಂದರ ಆಕಾರ
ಬರಬೇಕಾದರೆ
ಉಳಿಯ ಪೆಟ್ಟು ಬೀಳಲೇ ಬೇಕು
ಬದುಕು ಸುಂದರ ಆಗಲು
ಕಷ್ಟ ಸುಖಗಳನ್ನು
ಅನುಭವಿಸಲೇ ಬೇಕು...

## ಧರ್ಮಸ್ಥಳ ಪ್ರಕರಣ ತನಿಖೆ ಮಧ್ಯೆಯೇ ಅನುಚೇತ್ ಅಮೆರಿಕ ಪ್ರವಾಸಕ್ಕೆ

• ಉದಯವಾಹಿನಿ, ಬೆಂಗಳೂರು

ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳ ಪೊಲೀಸ್ ಠಾಣಾ ವ್ಯಾಪ್ತಿಯ ಪ್ರಕರಣಗಳ ತನಿಖೆಗೆ ರಾಜ್ಯ ಸರ್ಕಾರ ರಚಿಸಿದ್ದ ವಿಶೇಷ ತನಿಖಾ ತಂಡದ (ಎಸ್‌ಐಟಿ) ಸದಸ್ಯ, ಪೊಲೀಸ್ ನೇಮಕಾತಿ ವಿಭಾಗದ ಡಿಐಜಿ ಎಂ.ಎನ್.ಅನುಚೇತ್ ಅವರು ಅಮೆರಿಕ ಪ್ರವಾಸಕ್ಕೆ ತೆರಳಿದ್ದಾರೆ. ಪ್ರಕರಣದ ತನಿಖೆಯ ಮಧ್ಯೆಯೇ ಅವರು ಪ್ರವಾಸಕ್ಕೆ ಹೋಗಿದ್ದಾರೆ ಎಂದು ಗೊತ್ತಾಗಿದೆ.

ರಾಜ್ಯ ಸರ್ಕಾರವು ಆಗಸ್ಟ್ 19ರಿಂದ 31ರವರೆಗೆ ವೇತನ ಸಹಿತ ರಜೆಯನ್ನು ಮಂಜೂರು ಮಾಡಿದ್ದು, ಅನುಚೇತ್ ಅವರು ಆಗಸ್ಟ್ 18ರಿಂದ ಆರಂಭವಾಗಿರುವ ಇಂಟೆಲಿಜೆಂಟ್ ಟ್ರಾನ್ಸ್‌ಪೋರ್ಟೇಷನ್ ಸೊಸೈಟಿ ಆಫ್ ಅಮೆರಿಕ ವರ್ಲ್ಡ್ ಕಾಂಗ್ರೆಸ್– 2025'ರಲ್ಲಿ ಭಾಗವಹಿಸಲು ತೆರಳಿದ್ದಾರೆ ಎಂದು ಗೊತ್ತಾಗಿದೆ. ವೇತನ ಸಹಿತ ರಜೆ ಮಂಜೂರು ಮಾಡುವಂತೆ ಕೋರಿ, ಅನುಚೇತ್ ಅವರು ಜುಲೈ 16ರಂದು ಮನವಿ ಸಲ್ಲಿಸಿದ್ದರು. ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಸೂಚನೆಯ ಮೇರೆಗೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿಯವರು ಆಗಸ್ಟ್ 1ರಂದೇ ಪ್ರವಾಸಕ್ಕೆ ಅನುಮತಿ ನೀಡಿ ಆದೇಶ ಹೊರಡಿಸಿದ್ದರು.

## ಆರ್ಥಿಕತೆಗೆ 'ಗ್ಯಾರಂಟಿ' ಹೊಡೆತ: ಸಿಎಜಿ ವರದಿ ಸರಿಯಲ್ಲ

• ಉದಯವಾಹಿನಿ, ಬೆಂಗಳೂರು

'ಗ್ಯಾರಂಟಿ ಯೋಜನೆಗಳಿಂದ ಆರ್ಥಿಕತೆಗೆ ಹೊಡೆತ ಬೀಳುತ್ತಿದೆ ಎಂದು ಮಹಾಲೇಖಪಾಲರ (ಸಿಎಜಿ) ವರದಿಯಲ್ಲಿ ಉಲ್ಲೇಖಿಸಿರುವುದು ಸತ್ಯಕ್ಕೆ ದೂರವಾದುದು' ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ. ರೇವಣ್ಣ ತಿಳಿಸಿದರು.

ವಿಧಾನಸೌಧದಲ್ಲಿ 31 ಜಿಲ್ಲೆಗಳ ಗ್ಯಾರಂಟಿ ಅನುಷ್ಠಾನ ಸಮಿತಿಗಳ ಅಧ್ಯಕ್ಷರ ಜೊತೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳಿಂದಾಗಿ ರಾಜ್ಯದ ಜನರ ತಲಾದಾಯ ಹೆಚ್ಚಳವಾಗಿದೆ. ಜಿಎಸ್‌ಟಿ ಸಂಗ್ರಹವೂ ಏರಿಕೆ ಆಗಿದೆ ಎಂದರು. 'ಸಿಎಜಿ ವರದಿ ಸಿದ್ಧಪಡಿಸುವಾಗ ಅನುದಾನ ಬಳಕೆ ಕುರಿತಂತೆ ಪರಿಶೀಲಿಸಿ, ವರದಿಯಲ್ಲಿ ತಿಳಿಸಬೇಕು. ಅದನ್ನು ಬಿಟ್ಟು ಯೋಜನೆಗಳ ಕುರಿತಂತೆ ವ್ಯಾಖ್ಯಾನಿಸಬಾರದು. ಯೋಜನೆಗಳಿಂದ ಅಭಿವೃದ್ಧಿ ಮತ್ತು ಆದಾಯ ಕುಂಠಿತವಾಗುತ್ತದೆ ಎಂದು ಹೇಳಿರುವುದು ಸರಿಯಲ್ಲ. ಈ ಬಗ್ಗೆ ಸಿಎಜಿಗೆ ಉತ್ತರಿಸುವ ಕುರಿತು ಮುಖ್ಯಮಂತ್ರಿಯವರ ಜೊತೆ ಚರ್ಚೆ ನಡೆಸಲಾಗುವುದು' ಎಂದು ತಿಳಿಸಿದರು.

## ವಿಲೇವಾರಿ ಮಾಡದ ತಹಶೀಲ್ದಾರರಿಗೆ ಕೃಷ್ಣಬೈರೇಗೌಡ ಕಟ್ಟೆಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ತಹಶೀಲ್ದಾರ್ ನ್ಯಾಯಾಲಯಗಳಲ್ಲಿನ ತಕರಾರು ಪ್ರಕರಣಗಳನ್ನು 90 ದಿನಗಳ ಒಳಗೆ ಇತ್ಯರ್ಥ ಮಾಡದಿದ್ದರೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಎಚ್ಚರಿಕೆ ನೀಡಿದರು. ವಿಡಿಯೋ ಸಂವಾದದ ಮೂಲಕ ರಾಜ್ಯದ ಎಲ್ಲಾ ತಹಶೀಲ್ದಾರರ ಜತೆ ಸಭೆ ನಡೆಸಿ ಅವರು ಮಾತನಾಡಿದರು. ಕಳೆದ ಎರಡು ವರ್ಷಗಳಿಂದ ತಹಶೀಲ್ದಾರ್ ನ್ಯಾಯಾಲಯಗಳಲ್ಲಿ ತಕರಾರು ಅರ್ಜಿಗಳ ವಿಲೇವಾರಿ ಕೆಲಸ ಗಮನಾರ್ಹ ರೀತಿಯಲ್ಲಿ ಪ್ರಗತಿ ಕಂಡಿತ್ತು. ಈ ಮೊದಲು ಒಂದು ಪ್ರಕರಣದ ಇತ್ಯರ್ಥಕ್ಕೆ 212 ದಿನ ತೆಗೆದುಕೊಳ್ಳುತ್ತಿದ್ದರೆ, ಈಗ 82 ದಿನಕ್ಕೆ ಇಳಿಸಲಾಗಿತ್ತು. ಆದರೆ, ದಿನ ಕಳೆದಂತೆ ತಕರಾರು ಅರ್ಜಿಗಳ ಇತ್ಯರ್ಥದ ಕೆಲಸ ಮತ್ತೆ ವೇಗ ಕಳೆದುಕೊಳ್ಳುತ್ತಿದೆ. ಇದನ್ನು ಒಪ್ಪಲು ಸಾಧ್ಯವಿಲ್ಲ' ಎಂದು ಹೇಳಿದರು. ರಾಜ್ಯದಾದ್ಯಂತ ಪೋಡಿ ದುರಸ್ತಿ ಅಭಿಯಾನಕ್ಕೆ ಚಾಲನೆ ನೀಡಿದ್ದರೂ ಈ ಕೆಲಸ ನಿರೀಕ್ಷಿತ ವೇಗ ಪಡೆದಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

## ಬಾನು ಚಾಮುಂಡಿ ಬೆಟ್ಟ ಹತ್ತಬಾರದು: ಶೋಭಾ ಕರಂದ್ಲಾಜೆ

• ಉದಯವಾಹಿನಿ, ಬೆಂಗಳೂರು

'ಬಾನು ಮುಷ್ತಾಕ್ ಅವರು ಚಾಮುಂಡಿ ಬೆಟ್ಟ ಹತ್ತಬಾರದು. ಅವರಿಗೆ ನೀಡಿರುವ ಆಹ್ವಾನವನ್ನು ಕೂಡಲೇ ವಾಪಸ್ ಪಡೆಯಬೇಕು' ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆಗ್ರಹಿಸಿದ್ದಾರೆ. ದಸರಾ ಮಹೋತ್ಸವವು ಮಹಿಷಾಸುರನನ್ನು ಸಂಹಾರ ಮಾಡಿದ ಚಾಮುಂಡೇಶ್ವರಿಯ ವಿಜಯದ ಸಂಕೇತ. ಅದನ್ನು ಒಪ್ಪದವರಿಗೆ ಆಹ್ವಾನ ನೀಡುವ ಮೂಲಕ ಈ ಆಚರಣೆಗೆ ಮತ್ತು ದೇವಸ್ಥಾನಕ್ಕೆ ಅಪಮಾನ ಮಾಡುವ ಕೆಲಸವನ್ನು ಸರ್ಕಾರ ಮಾಡಿದೆ ಎಂದು ದೂರಿದರು.

ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಪ್ರತಿನಿಧಿಸುವ ಹಳದಿ ಮತ್ತು ಕೆಂಪು ಬಣ್ಣದ ಧ್ವಜ, ಭುವನೇಶ್ವರಿ ತಾಯಿಯ ಪರಿಕಲ್ಪನೆಯನ್ನು ಒಪ್ಪದ ಬಾನು ಮುಸ್ತಾಕ್ ಅವರು ದುಷ್ಟರ ಸಂಹಾರ ಮಾಡಿದ ಚಾಮುಂಡೇಶ್ವರಿ ದೇವಿಯನ್ನು ಹೇಗೆ ಒಪ್ಪಲು ಸಾಧ್ಯ ಎಂದು ಪ್ರಶ್ನಿಸಿದರು. ಬಾನು ಮುಷ್ತಾಕ್ ಹಿಂದೂ ಧರ್ಮದ ಮೇಲೆ ನಂಬಿಕೆ ಇಲ್ಲದವರು ಮತ್ತು ಮೂರ್ತಿ ಪೂಜೆ ಒಪ್ಪದವರು. ಒಂದು ವೇಳೆ ಅವರು ಚಾಮುಂಡೇಶ್ವರಿಗೆ ಪುಷ್ಪಾರ್ಚನೆ ಮತ್ತು ದೀಪ ಹಚ್ಚುವ ಕೆಲಸ ಮಾಡುತ್ತಾರೆ ಎಂದಾದರೆ ಉದ್ಘಾಟನೆಗೆ ಬರಲಿ. ಅದಕ್ಕೆ ನಮ್ಮ ವಿರೋಧವಿಲ್ಲ ಎಂದರು.

## ಹೈಕಮಾಂಡ್‌ಗೆ ಪರಮೇಶ್ವರ್ ಎಚ್ಚರಿಕೆ

## ಮತ್ತೆ ಪ್ರತಿಧ್ವನಿಸಿದ ದಲಿತ ಸಿಎಂ ಕೂಗು



# ಆಗ ಸಿದ್ದರಾಮೋತ್ಸವ ಈಗ ಪರಮೋತ್ಸವ

### ಮೈಸೂರಿನಲ್ಲಿ ಪರಮೋತ್ಸವ ಸಮಾವೇಶ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ 75ನೇ ಹುಟ್ಟುಹಬ್ಬ ಹಿನ್ನೆಲೆಯಲ್ಲಿ 2022ರಲ್ಲಿ ದಾವಣಗೆರೆಯಲ್ಲಿ ಸಿದ್ದರಾಮೋತ್ಸವ ಕಾರ್ಯಕ್ರಮ ನಡೆದಿತ್ತು. ಇದರ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತವರು ಕ್ಷೇತ್ರದಲ್ಲಿ ಪರಮೋತ್ಸವ ನಡೆದಿದ್ದು, ಅಚ್ಚರಿಗೆ ಕಾರಣವಾಗಿದೆ. ಗೃಹ ಸಚಿವ ಡಾ. ಜಿ ಪರಮೇಶ್ವರ್ ಅವರ ಹುಟ್ಟುಹಬ್ಬ ಹಿನ್ನೆಲೆ ಅವರ ಅಭಿಮಾನಿಗಳು ಮೈಸೂರಿನಲ್ಲಿ ಪರಮೋತ್ಸವ ಸಮಾವೇಶ ಮಾಡಿದರು. ಈ ಪರಮೋತ್ಸವ ಕಾರ್ಯಕ್ರಮದಲ್ಲಿ ಸಚಿವ ಜಿ. ಪರಮೇಶ್ವರ್ ದಲಿತರು ಮುಖ್ಯಮಂತ್ರಿಯಾಗಬೇಕು ವಿಚಾರವಾಗಿ ಹೈಕಮಾಂಡ್‌ಗೆ ಪರೋಕ್ಷ ಎಚ್ಚರಿಕೆ ನೀಡಿದ್ದಾರೆ. ಒಂದು ಸಮುದಾಯ ನಿಮ್ಮ ಜತೆ ನಿಂತಿದೆ, ಮೋಸ ಮಾಡಬೇಡಿ. ಅವರಿಗೆ ಮೋಸ ಮಾಡಿದರೆ ಬುದ್ಧಿ ಕಲಿಸುತ್ತಾರೆ ಎಂದು ಸ್ವಾಮೀಜಿ ಹೇಳಿದ್ದಾರೆ. ಸ್ವಾಮೀಜಿ ಹೇಳಿರುವ ಈ ಮಾತು ನಿಜ. ದಲಿತ ಸಮುದಾಯಕ್ಕೆ ಅವಕಾಶ ಕೊಡಿ ಅನ್ನುವ ಸ್ಥಿತಿ ಬಂದಿದೆ. ಹೃದಯ ಶ್ರೀಮಂತಿಕೆ ನಿಮಗೆ ಬೇಡ್ವಾ. ಸಮಾಜಕ್ಕೆ ಅನ್ಯಾಯವಾದಾಗ ಪಾಠ ಕಲಿಸಲು ಮತದಾನ ಎಂಬ ಅಸ್ತ್ರ ಇದೆ ನೆನಪಿಟ್ಟುಕೊಳ್ಳಿ. ಮುಂದಿನ ದಿನಗಳಲ್ಲಿ ಹೋರಾಟಕ್ಕೆ ಸಜ್ಜಾಗಿ.

• ಉದಯವಾಹಿನಿ, ಮೈಸೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತವರಲ್ಲಿಯೇ ಗೃಹ ಸಚಿವ ಪರಮೇಶ್ವರ್ ಅವರು ದಲಿತ ಸಿಎಂ ಕೂಗಿಗೆ ಹೋರಾಟದ ಕರೆಯನ್ನು ಕೊಟ್ಟಿದ್ದಾರೆ.

ಈ ಮೂಲಕ ಕಾಂಗ್ರೆಸ್ ಹೈಕಮಾಂಡ್‌ಗೆ ಪರೋಕ್ಷವಾಗಿ ಎಚ್ಚರಿಕೆ ಸಂದೇಶ ರವಾನಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಂದು ಸಮುದಾಯ ನಿಮ್ಮ ಜೊತೆ ನಿಂತಿದೆ. ಅವರಿಗೆ ಮೋಸ ಮಾಡಿದರೆ ಬುದ್ಧಿ ಕಲಿಸುತ್ತಾರೆ ಎಂದು ಸ್ವಾಮೀಜಿ ಹೇಳಿದ್ದಾರೆ. ಸ್ವಾಮೀಜಿ ಹೇಳಿರುವ ಈ ಮಾತು ನಿಜ. ದಲಿತ ಸಮುದಾಯಕ್ಕೆ ಅವಕಾಶ ಕೊಡಿ ಎಂದು ಕೇಳುವ ಸ್ಥಿತಿ ಯಾಕೆ ಬಂತು. ಹೃದಯ ಶ್ರೀಮಂತಿಕೆ ನಿಮಗೆ ಬೇಡ್ವಾ ಸಮುದಾಯಕ್ಕೆ ಅನ್ಯಾಯವಾದಾಗ ಪಾಠ ಕಲಿಸಲು ಜನರಿಗೆ ಮತದಾನ ಎಂಬ ಅಸ್ತ್ರ ಇದೆ ನೆನಪಿಟ್ಟುಕೊಳ್ಳಿ ಎಂದರು. ಮುಂದಿನ ದಿನಗಳಲ್ಲಿ ಹೋರಾಟಕ್ಕೆ ಸಜ್ಜಾಗಿ. ಹೋರಾಟ ಮಾಡದೆ ಇದ್ದರೆ ನನಗೆ ಅಲ್ಲ ಅಂಬೇಡ್ಕರ್ ಗೆ ಅಪಮಾನ ಮಾಡಿದಂತಾಗುತ್ತದೆ. ಕಾಂಗ್ರೆಸ್ ಹೈಕಮಾಂಡ್ ಗೆ ಪರಮೇಶ್ವರ್ ಪರೋಕ್ಷ ಎಚ್ಚರಿಕೆ ರವಾನಿಸಿದ್ದಾರೆ. ಸಿಎಂ ತವರಲ್ಲಿ ಪರಮೋತ್ಸವ ನಡೆಸಲು ಆಯೋಜಕರಿಗೆ ಅನೇಕ ವಿಘ್ನ ಬಂದವು. ಆದರೂ ಪರಮೋತ್ಸವ ಆಯೋಜಿಸಿದ್ದಾರೆ. ವಿದೇಶದಲ್ಲಿ ಭಾರತದಲ್ಲಿನ ಅಸ್ಪೃಶ್ಯತೆ ಬಗ್ಗೆ ಮಾತನಾಡುತ್ತಾರೆ. ಪ್ರಸ್ತುತ ಭಾರತದಲ್ಲಿ ಅಸ್ಪೃಶ್ಯತೆ ಇದೆ. ಯಾವ ದೇಶದಲ್ಲೂ ಇಲ್ಲದ ಅಸ್ಪೃಶ್ಯತೆ ನಮ್ಮ ದೇಶದಲ್ಲಿದೆ. ಭಾರತದಲ್ಲಿ ದಲಿತರಿಗೆ ಸಮಾಧಾನದ ತೃಪ್ತಿ ಬದುಕು ಸಿಕ್ಕಿಲ್ಲ. ಸಮಾನತೆ ಇಲ್ಲದ ಕಾರಣ ನಮಗೆ ಮೀಸಲಾತಿ ಬೇಕೇ ಬೇಕು. ಸಮಾನತೆ ಸ್ವಾಭಿಮಾನದ ಬದುಕಿಗೆ ಇನ್ನೆಷ್ಟು ಕಾಯಬೇಕು ಎಂದು ಪ್ರಶ್ನಿಸಿದರು.


**ಎನ್‌ಐಎಗೆ ಧರ್ಮಸ್ಥಳ ಕೇಸ್ ವಹಿಸಲ್ಲ:** ಮೈಸೂರಲ್ಲಿ ಮಾಧ್ಯಮಗಳ ಜೊತೆ ಮಾತಾಡಿದ ಅವರು, ಹೀಗೆ ತನಿಖೆ ಮಾಡಿ ಹಾಗೆ ತನಿಖೆ ಮಾಡಿ ಎಂದು ಹೇಳಲು ನಾವು ಯಾರು.. ತನಿಖೆಗೆ ಏನು ಅವಶ್ಯಕತೆ ಇದೆಯೋ ಅದನ್ನು ಪೊಲೀಸರು ಮಾಡುತ್ತಾರೆ. ಈ ಕೇಸ್‌ನಲ್ಲಿ ಮಂಪರು ಪರೀಕ್ಷೆ ಬೇಕೋ ಬೇಡವೋ ಎಂಬುದನ್ನ ನಾನು ನಿರ್ಧಾರ ಮಾಡಲು ಸಾಧ್ಯವಿಲ್ಲ. ಎಸ್‌ಐಟಿ ಸರಿಯಾಗಿ ತನಿಖೆ ಮಾಡುತ್ತಿದೆ. ಪ್ರಕರಣವನ್ನು ಎನ್‌ಐಎಗೆ ವಹಿಸುವ ಅಗತ್ಯ ಇಲ್ಲ ಎಂದು ಹೇಳಿದರು. ನಾಯಕರ ಹೇಳಿಕೆಗಳಿಂದ ಸತ್ಯ ಹೊರಬರುವುದಿಲ್ಲ. ಮೊದಲು ಹೇಳಿಕೆಗಳನ್ನು ಕೊಡುವುದನ್ನು ನಿಲ್ಲಿಸಿ. ತನಿಖೆಗೆ ಸಮಯವನ್ನು ನಿಗದಿ ಮಾಡಲು ಸಾಧ್ಯವಿಲ್ಲ.ಇಷ್ಟೇ ಅವಧಿಯಲ್ಲಿ ತನಿಖೆ ಮಾಡಿ ಎಂದು ಹೇಳಲು ಹೇಗೆ ಸಾಧ್ಯ ಆದಷ್ಟು ಬೇಗ ತನಿಖೆ ಮುಗಿಸಿ ಎಂದು ಹೇಳಿದ್ದೇನೆ ಎಂದು ಹೇಳಿದರು.

**ಪರೋಕ್ಷವಾಗಿ ಹಾರೈಸಿದ ಶಾಸಕ!:** ಕಾಂಗ್ರೆಸ್‌ನ ಮೈಸೂರು ದಕ್ಷಿಣ ಚುನಾಯಿತ ಶಾಸಕ ತನ್ವೀರ್ ಸೇಠ್ ಭಾಷಣ ಮಾಡಿ, ಪಕ್ಷದ ಹಿರಿಯ ನಾಯಕ ಹಾಗೂ ಗೃಹ ಮಂತ್ರಿ ಪರಮೇಶ್ವರ್ ಅವರನ್ನು ಪರೋಕ್ಷವಾಗಿ ಸಿಎಂ ಆಗುವಂತೆ ಶುಭಹಾರೈಸಿದರು. ಇದಲ್ಲದೆ, ದಸರಾ ಉದ್ಘಾಟನೆಯ ವಿಚಾರಕ್ಕೆ ಸಂಬಂಧಿಸಿ ಬಿಜೆಪಿ ಸಂಸತ್ ಸದಸ್ಯ ಪ್ರತಾಪ್ ಸಿಂಹ ಅವರ ಪ್ರತಿಕ್ರಿಯೆಗೆ ಕಿಡಿಕಾರಿದ್ದಾರೆ. ಪರಮೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ತನ್ವೀರ್ ಸೇಠ್, ಪರಮೇಶ್ವರ್ ಅವರು ಆಕಸ್ಮಿಕವಾಗಿ ರಾಜಕೀಯಕ್ಕೆ ಬಂದರು. ಸುಧೀರ್ಘವಾಗಿ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿ ಕೆಲಸ ಮಾಡಿದ್ದಾರೆ. ಪಕ್ಷವನ್ನು ಕಟ್ಟಿ ಬೆಳೆಸಿದ್ದಾರೆ ಮತ್ತು ಗಟ್ಟಿಯಾಗಿ ನಿಂತಿದ್ದಾರೆ. ಅವರು ಇನ್ನಷ್ಟು ಎತ್ತರಕ್ಕೆ ಏರಬೇಕು ಎಂದು ಶಾಸಕ ಸೇಠ್ ಹೇಳಿದರು. 'ಎತ್ತರ ಎಂದರೆ ಏನು ಬೇಕಾದ್ರೂ ಆಗಬಹುದು' ಎಂದು ಹೇಳಿದ ಸೇಠ್, ಪರೋಕ್ಷವಾಗಿ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ಏರಲಿ ಎಂದು ಶುಭ ಹಾರೈಸಿದ್ದಾರೆ.

1. ಡಾ. ಜಿ ಪರಮೇಶ್ವರ್ ಅವರು ದಸರಾ ಉದ್ಘಾಟನೆಯ ವಿಚಾರದಲ್ಲಿ ಯಾವುದೇ ತಕರಾರು ತೆಗೆದುಕೊಳ್ಳಬಾರದು ಎಂದು ಹೇಳಿದ್ದಾರೆ.
2. ಗೃಹ ಮಂತ್ರಿ ಪರಮೇಶ್ವರ್ ಅವರನ್ನು ಪರೋಕ್ಷವಾಗಿ ಸಿಎಂ ಆಗುವಂತೆ ಶುಭಹಾರೈಕೆ
3. ಗೃಹ ಇಲಾಖೆಯಲ್ಲಿ ಲಂಚಾವತಾರ ಎಂಬ ಸಾ.ರಾ ಮಹೇಶ್ ಆರೋಪದ ಬಗ್ಗೆ ಪ್ರತಿಕ್ರಿಯ

## ಸಿದ್ದರಾಮಯ್ಯ ತವರಲ್ಲೇ ಸಚಿವ ಪರಮೇಶ್ವರ್ ಹೋರಾಟಕ್ಕೆ ಕರೆ..!

### ದಸರಾ ನಾಡ ಹಬ್ಬ, ಒಂದು ಜಾತಿಗೆ ಧರ್ಮಕ್ಕೆ ಸೀಮಿತವಲ್ಲ



ದಸರಾ ಉದ್ಘಾಟಕರಾಗಿ ಬಾನು ಮುಷ್ತಾಕ್ ಆಯ್ಕೆಗೆ ತಕರಾರು ವಿಚಾರವಾಗಿ ಮಾತನಾಡಿ, ದಸರಾ ನಾಡ ಹಬ್ಬ.ಯಾವುದೇ ಒಂದು ಜಾತಿಗೆ ಧರ್ಮಕ್ಕೆ ಸೀಮಿತವಲ್ಲ. ಒಂದು ಧರ್ಮವನ್ನು ಹೊರಗಿಟ್ಟು ದಸರಾ ಮಾಡಲು ಸಾಧ್ಯನಾ. ಮಿರ್ಜಾ ಇಸ್ಮಾಯಿಲ್ ದಿವಾನರಾಗಿ ದಸರಾ ಮಾಡಿಲ್ವಾ. ನಿಸಾರ್ ಅಹಮದ್ ದಸರಾ ಉದ್ಘಾಟನೆ ಮಾಡಿಲ್ವಾ. ಇದಕ್ಕೆಲ್ಲಾ ತಕರಾರು ತೆಗೆಯಬಾರದು ಎಂದರು. ಉದ್ಘಾಟಕರು ಚಾಮುಂಡಿ ತಾಯಿಯನ್ನು ನಂಬುತ್ತಾರೋ ಬಿಡುತ್ತಾರೋ ಅದು ಅವರಿಗೆ ಸೇರಿದ್ದು. ಇದು ಊರ ಹಬ್ಬ, ಎಲ್ಲರೂ ಸೇರಿಯೇ ಮಾಡಬೇಕು ಎಂದು ಗೃಹ ಸಚಿವ ಪರಮೇಶ್ವರ್ ಹೇಳಿದ್ದಾರೆ.

### ಜೆಡಿಎಸ್‌ನವರು ಮಂಜುನಾಥನ ದರ್ಶನ ಪಡೆಯಲಿ

ಜೆಡಿಎಸ್ ಪಕ್ಷದಿಂದ ಧರ್ಮಸ್ಥಳ ರ‍್ಯಾಲಿ ಮಾಡುತ್ತಿದ್ದಾರೆ ಎಂಬ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿ, ಜೆಡಿಎಸ್‌ನವರು ರ‍್ಯಾಲಿ ಮಾಡಲಿ, ಆ ಮೂಲಕ ಮಂಜುನಾಥನ ದರ್ಶನ ಪಡೆಯಲಿ. ಅವರನ್ನು ನಾವು ತಡೆಯಲು ಆಗುವುದಿಲ್ಲ, ಆದರೆ ಈ ಪ್ರಕರಣದಲ್ಲಿ ರಾಜಕಾರಣ ಬೇಡ ಎಂದು ಹೇಳಿದ್ದೇವೆ. ಎಸ್‌ಐಟಿ ತನಿಖೆಗೆ ಕಾಲಮಿತಿ ನಿಗದಿ ಮಾಡಲು ಸಾಧ್ಯವಿಲ್ಲ, ಆದರೆ, ಆದಷ್ಟು ಬೇಗ ತನಿಖೆ ಮಾಡಿ ಅಂತ ಹೇಳಿದ್ದೇವೆ ಎಂದರು. ಗೃಹ ಇಲಾಖೆಯಲ್ಲಿ ಲಂಚಾವತಾರ ಎಂಬ ಸಾ.ರಾ ಮಹೇಶ್ ಆರೋಪದ ಬಗ್ಗೆ ಪ್ರತಿಕ್ರಿಯಿಸಿ,



ಸಾ.ರಾ ಮಹೇಶ್ ಮಂತ್ರಿಯಾಗಿದ್ದವರು, ಜವಾಬ್ದಾರಿಯುತ ಸ್ಥಾನದಲ್ಲಿದ್ದವರು ಯಾರು ಹಣ ಪಡೆದವರು, ಯಾರು ಹಣ ಕೊಟ್ಟವರು ಎಂಬ ಬಗ್ಗೆ ದೂರು ಕೊಟ್ಟರೆ ತನಿಖೆ ಮಾಡಿಸುತ್ತೇವೆ ಎಂದು ತಿರುಗೇಟು ನೀಡಿದರು.ಬಾನು ಮುಷ್ತಾಕ್ ದಸರಾ ಉದ್ಘಾಟನೆಗೆ ಅಪಸ್ವರ ವಿಚಾರವಾಗಿ ಮಾತನಾಡಿ, ಈ ಹಿಂದೆ ಮೈಸೂರು ಸಂಸ್ಥಾನದಲ್ಲಿ ಮಿರ್ಜಾ ಇಸ್ಮಾಯಿಲ್ ದಿವಾನರಾಗಿದ್ದರು. ಜೊತೆಗೆ ನಿಸಾರ್ ಅಹಮದ್ ದಸರಾ ಉದ್ಘಾಟನೆ ಮಾಡಿದ್ದರು. ನಾಡಿನ ತುಂಬೆಲ್ಲಾ ದಸರಾ ಆಚರಣೆ ಮಾಡುತ್ತಾರೆ.

## ರಾಜ್ಯದಲ್ಲಿ 3 ವರ್ಷಗಳಲ್ಲಿ 6635 ಪ್ರಕರಣ ದಾಖಲು, 4912 ಚಾರ್ಜ್ ಶೀಟ್!

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ 2023 ರಿಂದ ಕಳೆದ ಮೂರು ವರ್ಷಗಳಲ್ಲಿ ಒಟ್ಟು 6635 ಎಸ್ ಸಿ ಎಸ್ ಟಿ ದೌರ್ಜನ್ಯ ಪ್ರಕರಣಗಳು ದಾಖಲಾಗಿವೆ. ಈ ಪೈಕಿ ದೋಷಾರೋಪಣೆ ಪಟ್ಟಿ ಸಲ್ಲಿಸಿರುವುದು 4912 ಪ್ರಕರಣಗಳಲ್ಲಿ ಮಾತ್ರವಾಗಿದೆ.

**ಕ್ರಮ ಕೈಗೊಳ್ಳಲು ಸಿಎಂ ಸೂಚನೆ:** ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಜನರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ 60 ದಿನಗಳ ಒಳಗಾಗಿ ಆರೋಪ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲು ಸೂಚನೆಯನ್ನು ಸಿಎಂ ಸಿದ್ದರಾಮಯ್ಯ ನೀಡಿದರು. ಕಳೆದ ಆರು ತಿಂಗಳಲ್ಲಿ ಶೇ.84 ರಷ್ಟು ಮಾತ್ರ ಪ್ರಕರಣಗಳಲ್ಲಿ ನಿಗದಿತ ಅವಧಿಯ ಒಳಗಾಗಿ ಆರೋಪ ಪಟ್ಟಿ ಸಲ್ಲಿಸಲಾಗಿದೆ. ಶೇ. 100 ಪ್ರಕರಣಗಳಲ್ಲಿ 60ದಿನಗಳ ಒಳಗಾಗಿ ಕಡ್ಡಾಯವಾಗಿ ಆರೋಪ ಪಟ್ಟಿ ಸಲ್ಲಿಸಲು ಕ್ರಮ ಕೈಗೊಳ್ಳಬೇಕು ಎಂದು ಸಿಎಂ ಸ್ಪಷ್ಟ ಸೂಚನೆ ನೀಡಿದರು.






ಪೊಲೀಸರು ಇದರಲ್ಲಿ ಯಾವುದೇ ನೆಪ ಹೇಳಬಾರದು. ನ್ಯಾಯಾಲಯದಲ್ಲಿ 56 ಪ್ರಕರಣಗಳಲ್ಲಿ ತಡೆಯಾಜ್ಞೆ ಇದ್ದು, ಇದನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲು ಮುಖ್ಯಮಂತ್ರಿ ಅವರು ಸೂಚನೆ ನೀಡಿದರು.

ರಾಜ್ಯದಲ್ಲಿ ದೌರ್ಜನ್ಯ ಪ್ರಕರಣಗಳ ತ್ವರಿತ ವಿಚಾರಣೆಗಾಗಿ 11ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸಲಾಗಿದೆ. ಪ್ರಕರಣಗಳ ಸರಿಯಾದ ವಿಚಾರಣೆ ನಡೆಸಿ, ತ್ವರಿತವಾಗಿ ನ್ಯಾಯ ಒದಗಿಸಲು ಕ್ರಮ ಕೈಗೊಳ್ಳಬೇಕು. ಪ್ರಸ್ತುತ ಶಿಕ್ಷೆಯ ಪ್ರಮಾಣ ಶೇ.10ರಷ್ಟಿದ್ದು, ಇದು ಹೆಚ್ಚಾಗಬೇಕು. ಆರೋಪಿಗಳೊಂದಿಗೆ ಪೊಲೀಸರು ಶಾಮೀಲಾಗಿರುವುದು ಕಂಡು ಬಂದರೆ ಅಂತವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ದೌರ್ಜನ್ಯ ಪ್ರಕರಣಗಳಲ್ಲಿ ಅಂಗವೈಕಲ್ಯತೆ ಉಂಟಾದಲ್ಲಿ ನೀಡಲಾಗುವ ವೈದ್ಯಕೀಯ ಪರಿಹಾರದ ಮೊತ್ತವನ್ನು ಹೆಚ್ಚಿಸುವ ಕುರಿತು ಪರಿಶೀಲನೆ ಮಾಡಲಾಗುವುದು ಎಂದು ಭರವಸೆ ನೀಡಿದರು.

**4149 ಚಾರ್ಜ್ ಶೀಟ್!:** 60 ದಿನಗಳ ಒಳಗೆ ದೋಷಾರೋಪಣೆ ಪಟ್ಟಿ 4149 ಪ್ರಕರಣಗಳಲ್ಲಿ ಮಾತ್ರ ದಾಖಲಾಗಿದೆ. ನೋಂದಣಿಯಾದ ಒಟ್ಟು ಪ್ರಕರಣಗಳಲ್ಲಿ 60 ದಿನಗಳ ಒಳಗಾಗಿ 63% ಪ್ರಕರಣಗಳಲ್ಲಿ ಮಾತ್ರ ದೋಷಾರೋಪಣೆ ಪಟ್ಟಿ ಸಲ್ಲಿಕೆ ಯಾಗಿರುತ್ತದೆ.

ಶಿಕ್ಷೆಯಾದ ಪ್ರಕರಣಗಳು ಕೇವಲ 36. ತನಿಖಾ ಹಂತದಲ್ಲಿ ಸುಮಾರು 679 ಪ್ರಕರಣಗಳಿವೆ. ಈ ಹಿನ್ನಲೆಯಲ್ಲಿ ಈ ಹಿಂದೆ ನಡೆದಿರುವ ಪ್ರಕರಣಗಳ ಸ್ಥಿತಿ ಗತಿ ಏನು? ಆಯಾ ವರ್ಷಗಳಲ್ಲಿ ನಡೆದಿರುವ ಪ್ರಕರಣಗಳ ನಿಖರ ದಾಖಲೆ ನೀಡುವಂತೆ ಮುಖ್ಯಮಂತ್ರಿಗಳು ಅಧಿಕಾರಿಗಳಿಗೆ ಸೂಚಿಸಿದರು.

## ಆರ್‌ಎಸ್‌ಎಸ್ ಧ್ಯೇಯ ಗೀತೆ ಹಾಡಿದ ಡಿಕೆಶಿ, ವಿರೋಧಿ ಬಣಕ್ಕೆ ಸಿಕ್ಕ ಬ್ರಹ್ಮಾಸ್ತ್ರ!

■ ಖರ್ಗೆ, ಪ್ರಿಯಾಂಕ್, ಮತ್ತು ಬಿಕೆ ಹರಿಪ್ರಸಾದ್ ಸೇರಿ ಹಲವರಿಂದ ಅಸಮಾಧಾನ ವ್ಯಕ್ತ ■ ರಾಜ್ಯ ರಾಜಕೀಯದಲ್ಲಿ ಪರ ವಿರೋಧ ಚರ್ಚೆ

• ಉದಯವಾಹಿನಿ, ಬೆಂಗಳೂರು

ನಮಸ್ತೇ ಸದಾ ವತ್ಸಲೇ ಮಾತೃಭೂಮೇ .. ಇದು ಆರ್‌ಎಸ್‌ಎಸ್ ಧ್ಯೇಯ ಗೀತೆ. ಸಂಘದ ಶಾಖೆಗಳಲ್ಲಿ ಹಾಡುವ ಈ ಗೀತೆಯಲ್ಲಿ ವಿಧಾನಸಭೆಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಡಿಕೆ ಶಿವಕುಮಾರ್ ಮೊಳಗಿಸಿದ್ದರು. ಆದರೆ ಇದೀಗ ರಾಜ್ಯ ರಾಜಕಾರಣದಲ್ಲಿ ಡಿಕೆಶಿ ನಡೆ ತೀವ್ರ ಚರ್ಚೆಗೆ ಗ್ರಾಸವಾಗುತ್ತಿದೆ. ಡಿಕೆಶಿ ವಿರೋಧಿ ಬಣಕ್ಕೆ ಇದೊಂದು ಬ್ರಹ್ಮಾಸ್ತ್ರವಾಗಿ ಸಿಕ್ಕಿದೆ. ಇದನ್ನು ಮುಂದಿಟ್ಟುಕೊಂಡು ಹೈಕಮಾಂಡ್ ನಾಯಕರ ಗಮನ ಸೆಳೆಯುವ ಪ್ರಯತ್ನವನ್ನು ಈ ಬಣ ನಡೆಸಲು ಸಿದ್ಧತೆ ನಡೆಸುತ್ತಿದೆ.

ವಿಧಾನಸಭೆಯಲ್ಲಿ ಡಿಕೆಶಿ ಸಂಘದ ಧ್ಯೇಯ ಗೀತೆ ಹಾಡಿದ್ದರು. ಈ ಮೂಲಕ ಏನು ಸಂದೇಶ ಕೊಟ್ಟರು ಎಂಬುವುದು ಸದ್ಯ ನಡೆಯುತ್ತಿರುವ ಚರ್ಚೆಯಾಗಿದೆ. ಈಗಾಗಲೇ ಡಿಕೆಶಿ ವಿರುದ್ಧ ಆಂತರಿಕವಾಗಿ ಕತ್ತಿಮಸೆಯುತ್ತಿರುವ ವಿರೋಧಿ ಪಾಳಯ ಇದೀಗ ಸಕ್ರಿಯವಾಗಿ ಇಳಿದು ಹೈಕಮಾಂಡ್ ಗಮನ ಸೆಳೆಯುವ ಪ್ರಯತ್ನಕ್ಕೆ ಮುಂದಾಗಿದೆ.



ಆರ್‌ಎಸ್‌ಎಸ್ ಸಿದ್ಧಾಂತವನ್ನು ಕಾಂಗ್ರೆಸ್ ಹಲವು ನಾಯಕರು ವಿರೋಧ ಮಾಡುತ್ತಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ಅಷ್ಟೇ ಅಲ್ಲ, ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ, ಬಿಕೆ ಹರಿಪ್ರಸಾದ್, ಪ್ರಿಯಾಂಕ್ ಖರ್ಗೆ ಸೇರಿದಂತೆ ಸೈದ್ಧಾಂತಿಕ ಹಿನ್ನೆಲೆಯ ನಾಯಕರು ಸಂಘದ ನಿಲುವಿಗೆ ವಿರುದ್ಧವಾಗಿದ್ದಾರೆ. ಆದರೆ ಈ ನಾಯಕರು ಇದೀಗ ಏನು ಹೇಳುತ್ತಾರೆ ಎಂಬುವುದು ಕುತೂಹಲಕ್ಕೆ ಕಾರಣವಾಗಿದೆ.

ಡಿಕೆಶಿ ಹೇಳಿಕೆಯ ಬೆನ್ನಲ್ಲೇ ವಿರೋಧ ಡಿಕೆಶಿ ಹೇಳಿಕೆಗೆ ಸಾಮಾಜಿಕ ವಲಯದಲ್ಲಿ ವಿರೋಧ ವ್ಯಕ್ತವಾಗುತ್ತಿರುವ ಬೆನ್ನಲ್ಲೇ ಪ್ರಿಯಾಂಕ್ ಖರ್ಗೆ ಟ್ವೀಟ್ ಗಮನ ಸೆಳೆಯುವಂತಿದೆ. ಸಚಿವ ಪ್ರಿಯಾಂಕ್ ಖರ್ಗೆ ಟ್ವೀಟ್ ಮಾಡಿ ಆರ್‌ಎಸ್‌ಎಸ್ ವಿರುದ್ಧ ಕಿಡಿಕಾರಿದ್ದಾರೆ. ಅದರ ಬೆನ್ನಲ್ಲೇ ಹಿರಿಯ ನಾಯಕ ಬಿ ಕೆ ಹರಿಪ್ರಸಾದ್ ಕೂಡಾ ಡಿಕೆ ಶಿವಕುಮಾರ್ ಹೇಳಿಕೆಗೆ ವಿರೋಧ ಸೂಚಿಸಿದ್ದಾರೆ. ಹೀಗಾಗಿ ಚರ್ಚೆ ಹುಟ್ಟಿಕೊಂಡಿದೆ.

**ಹೈಕಮಾಂಡ್ ಕ್ರಮ ಆಗುತ್ತಾ:** ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ನೀಡಿರುವ ಹೇಳಿಕೆ ರಾಷ್ಟ್ರಮಟ್ಟದಲ್ಲಿ ಸದ್ದು ಮಾಡುತ್ತಿರುವ ಹಿನ್ನೆಲೆಯಲ್ಲಿ ಹೈಕಮಾಂಡ್ ಏನು ಕ್ರಮ ಕೈಗೊಳ್ಳಲಿದೆ ಎಂಬುವುದು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ರಾಹುಲ್ ಗಾಂಧಿ ಬಿಜೆಪಿ ಪಕ್ಷಕ್ಕಿಂತ ಹೆಚ್ಚಾಗಿ ಆರ್‌ಎಸ್‌ಎಸ್ ವಿರುದ್ಧ ಮಾತನಾಡುತ್ತಾರೆ. ಪಕ್ಷಕ್ಕೆ ಸೈದ್ಧಾಂತಿಕ ಸ್ವರೂಪ ನೀಡುವ ನಿಟ್ಟಿನಲ್ಲಿ ಪ್ರಯತ್ನ ನಡೆಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಡಿಕೆಶಿ ಸಂಘದ ಧ್ಯೇಯಗೀತೆ ಹಾಡಿರುವುದು ಎತ್ತರ ಚಿತ್ತ ಹೈಮಾಂಡ್ ನತ್ತ ನೆಟ್ಟಿಸುವಂತೆ ಮಾಡಿದೆ.

ಈ ನಡುವೆ ಈ ಅವಕಾಶವನ್ನು ಬಳಕೆ ಮಾಡುವ ನಿಟ್ಟಿನಲ್ಲಿ ಡಿಕೆಶಿ ವಿರೋಧಿ ಪಾಳಯ ಪ್ರಯತ್ನ ನಡೆಸುತ್ತಿದೆ. ಕೆ ಎನ್ ರಾಜಣ್ಣ ದೆಹಲಿಗೆ ತೆರಳಲಿದ್ದು, ಪಕ್ಷದ ಹೈಕಮಾಂಡ್ ನಾಯಕರನ್ನು ಭೇಟಿ ಮಾಡುವ ಸಂದರ್ಭದಲ್ಲಿ ಈ ಬೆಳವಣಿಗೆಯ ಕುರಿತಾಗಿಯೂ ಗಮನ ಸೆಳೆಯುವ ಸಾಧ್ಯತೆ ಇದೆ.

### ಕುಂಭಮೇಳಕ್ಕೂ ಭಿನ್ನಧ್ವನಿ

ಕುಂಭಮೇಳದ ಸಂದರ್ಭದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೀಡಿದ್ದ ಹೇಳಿಕೆ ವಿವಾದಕ್ಕೆ ಕಾರಣವಾಗಿತ್ತು. ಬಿಜೆಪಿ ನಾಯಕರು ಕ್ಯಾಮೆರಾಗಳಿಗಾಗಿ ಗಂಗಾ ನದಿಯಲ್ಲಿ ಸ್ನಾನ ಮಾಡಲು ಪೈಪೋಟಿ ನಡೆಸುತ್ತಿದ್ದಾರೆ. ಬಿಜೆಪಿ ಹಾಗೂ ಆರ್‌ಎಸ್‌ಎಸ್ ನಾಯಕರು ದ್ರೋಹಿಗಳು. ಧರ್ಮದ ಹೆಸರಿನಲ್ಲಿ ಬಡವರನ್ನು ಶೋಷಣೆ ಮಾಡುತ್ತಿದ್ದಾರೆ ಎಂದಿದ್ದರು. ಖರ್ಗೆ ಹೇಳಿಕೆ ಸಾಕಷ್ಟು ವಿವಾದಕ್ಕೆ ಕಾರಣವಾಗಿತ್ತು. ಆದರೆ ಇದರ ಬೆನ್ನಲ್ಲೇ ಡಿಕೆ ಶಿವಕುಮಾರ್ ದಿಢೀರ್ ಆಗಿ ಕುಂಭಮೇಳಕ್ಕೆ ಹೋಗಿದ್ದರು. ಅಲ್ಲಿ ಪವಿತ್ರಸ್ನಾನ ಮಾಡಿದ್ದರು. ಅಲ್ಲದೆ ಗಂಗಾನದಿಯಲ್ಲಿ ಸ್ನಾನ ಮಾಡಿದ ಫೋಟೋವನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಾಕಿದ್ದರು. ಇದು ಚರ್ಚೆಯನ್ನು ಹುಟ್ಟು ಹಾಕಿತ್ತು. ಎಐಸಿಸಿ ಅಧ್ಯಕ್ಷರ ನಿಲುವಿಗೂ ಕೆಪಿಸಿಸಿ ಅಧ್ಯಕ್ಷರ ನಿಲುವಿಗೂ ವ್ಯತ್ಯಾಸ ಏಕೆ ಎಂದು ಬಿಜೆಪಿ ನಾಯಕರು ಪ್ರಶ್ನಿಸಿದ್ದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹10,151/Gram24ct ₹9,305/Gram22ct ಬೆಳ್ಳಿ: ₹121.00/Gram

# ಸೆ.1 ರಿಂದ ಬಿಜೆಪಿ ಧರ್ಮಸ್ಥಳ ಚಲೋ

• ಉದಯವಾಹಿನಿ, ಬೆಂಗಳೂರು

ಶ್ರೀ ಕ್ಷೇತ್ರ ಧರ್ಮಸ್ಥಳ ಪ್ರಕರಣದಲ್ಲಿ ಹಿಂದೂಗಳ ಮನಸಿನಲ್ಲಿ ಉಂಟಾಗಿರುವ ಅನುಮಾನವನ್ನು ಹೋಗಲಾಡಿಸುವ ದೃಷ್ಟಿಯಿಂದ ಸೆಪ್ಟಂಬರ್ 1 ರಿಂದ ಬಿಜೆಪಿ ಧರ್ಮಸ್ಥಳ ಚಲೋ ಕಾರ್ಯಕ್ರಮ ಹಮ್ಮಿಕೊಂಡಿದೆ. ಪಕ್ಷದ ಕಚೇರಿಯಲ್ಲಿ ಸುದ್ದಿಗೋಷ್ಟಿ ನಡೆಸಿದ ಅವರು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ನಮ್ಮ ಧರ್ಮಸ್ಥಳ ಚಲೋ ಹಿಂದೂಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮ.ಇದರಲ್ಲಿ ಯಾರು ಬೇಕಾದರೂ ಭಾಗವಹಿಸಬಹುದು. ನಾವು ಬಾಯಿ ಮುಚ್ಚಿಕೊಂಡಿರಲು ಕಾಂಗ್ರೆಸ್ ನವರಲ್ಲ. ಈ ಸರ್ಕಾರವನ್ನು ಬಗ್ಗಿಸುವ ಶಕ್ತಿ ಹಿಂದೂಗಳಿಗೆ ಇದೆ ಎಂದು ಎಚ್ಚರಿಕೆ ಕೊಟ್ಟರು.

ಧರ್ಮಸ್ಥಳ ವಿರುದ್ಧ ಆರೋಪ ಬಂದಾಗ ಕೋಟ್ಯಂತರ ಭಕ್ತರಲ್ಲಿ ಆತಂಕ ಆದ ಹಾಗೆ ನಮಗೂ ಆತಂಕ ಆಗಿತ್ತು. ನಿಷ್ಪಕ್ಷಪಾತ ತನಿಖೆ ಆಗಲಿ ನೋಡೋಣ ಎಂದು ನಾವು ಸುಮನಿದ್ದವು. ಆದರೆ, ಈ ತನಿಖೆ, ಅಪಪ್ರಚಾರಕ್ಕೆ ಕಡಿವಾಣ ಹಾಕಲಿಲ್ಲ. ರಾಜ್ಯ ಸರ್ಕಾರ ಧರ್ಮಸ್ಥಳ ವಿಚಾರದಲ್ಲಿ ಎಡವಿದೆ.

ಆ ಕಾರಣಕ್ಕಾಗಿಯೇ ಕೆಲವು ಕಾಂಗ್ರೆಸ್‌ನಾಯಕರು ಕೇಸರಿ ಶಲ್ಯ ಹಾಕಿಕೊಂಡು ಧರ್ಮಸ್ಥಳಕ್ಕೆ ಹೊರಟಿದ್ದಾರೆ. ಕಾಂಗ್ರೆಸ್‌ನವರು ಧರ್ಮಸ್ಥಳ ಭೇಟಿ ಪಾಪ ಪ್ರಾಯಶ್ಚಿತ್ತಕ್ಕಾಗಿ ಎಂದು ವ್ಯಂಗ್ಯವಾಡಿದರು. ಉಪ ಮುಖಮಂತ್ರಿ ಡಿ,ಕೆ ಶಿವಕುಮಾರ್ ಅವರ ದೈವಭಕ್ತಿ ಬಗ್ಗೆ ನಾನು ಪ್ರಶ್ನೆ ಮಾಡುವುದಿಲ್ಲ. ಅವರಿಗೂ ಸಹ ಧರ್ಮಸ್ಥಳದ ಬಗ್ಗೆ ಶ್ರದ್ಧೆ ಭಕ್ತಿ ಇದೆ.ಆದರೆ, ಷಡ್ಯಂತ್ರದ ಬಗ್ಗೆ ಡಿಕೆಶಿ ಕೈಕಟ್ಟಿ ಕೂರುವುದು ಸರಿಯಲ್ಲ. ಸಿಎಂ ಮೇಲೆ ಒತ್ತಡ ತಂದು ಡಿಕೆಶಿ ಅವರು ಪ್ರಕರಣವನ್ನು ಎನ್‌ಐಎಗೆ ವಹಿಸಲಿ ಎಂದರು. ಡಿಕೆಶಿ ಆರ್‌ಎಸ್‌ಎಸ್ ಗೀತೆ ಹಾಡಿದ್ದಾರೆಂದರೆ, ಅವರಿಗೆ ಜ್ಞಾನೋದಯ ಆಗಿದೆ ಎಂದರ್ಥ. ಕೆಲವು ಕಾಂಗ್ರೆಸ್ ನಾಯಕರು ಆರ್‌ಎಸ್‌ಎಸ್ ಮೇಲೆ ವಿಷ ಕಕ್ಕುತ್ತಿದ್ದಾರೆ.ಆರೆಸೆಸ್ ವಿಷಕಂಠ ಸಂಸ್ಥೆ, ವಿಷ ನುಂಗಿಕೊಂಡೇ ಸಮಾಜ ಸೇವೆ ಮುಂದುವರೆಸುತ್ತದೆ.

**ಧರ್ಮಸ್ಥಳ ಚಲೋಗೆ ಸಮಿತಿ ರಚನೆ:** ಧರ್ಮಸ್ಥಳ ಚಲೋ ಸಮಿತಿಗೆ ಎಸ್ ಆರ್ ವಿಶ್ವನಾಥ್ ಸಂಚಾಲಕರು, ಪಿಸಿ ಮೋಹನ್ ಸಹ ಸಂಚಾಲಕರು, ಸುನೀಲ್ ಕುಮಾರ್, ರವಿಕುಮಾರ್, ಪ್ರೀತಂ ಗೌಡ, ರಾಜೀವ್, ದೊಡ್ಡನಗೌಡ ಪಾಟೀಲ್, ಜನಾರ್ದನ ರೆಡ್ಡಿ, ರೇಣುಕಾಚಾರ್ಯ, ಭಾರತಿ ಶೆಟ್ಟಿ, ಹರೀಶ್ ಪೂಂಜಾ, ತಮ್ಮೇಶ್ ಗೌಡ, ಭಾಗೀರಥಿ ಮುರುಳ್ಯ ಸಮಿತಿ ಸದಸ್ಯರು ಧರ್ಮಸ್ಥಳ ವಿಚಾರದಲ್ಲಿ ಬಿಜೆಪಿ ರಾಜಕೀಯ ಮಾಡುತ್ತಿಲ್ಲ. ಸರ್ಕಾರದ ಹಿಂದೂ ವಿರೋಧಿ ನೀತಿ, ಹಿಂದೂ, ಬಿಜೆಪಿ ಕಾರ್ಯಕರ್ತರ ಹತ್ಯೆ, ಹಲ್ಲೆ ಎಲ್ಲವನ್ನೂ ನಾವು ಗಮನಿಸಿದ್ದೇವೆ.

ಧರ್ಮಸ್ಥಳ ವಿಚಾರದಲ್ಲಿ ಇಷ್ಟೆಲ್ಲಾ ಅಪಪ್ರಚಾರ ನಡೆಯುತ್ತಿದ್ದಾಗ ಸರ್ಕಾರ ಯಾವ ಕ್ರಮ ತೆಗೆದುಕೊಳ್ಳಲಿಲ್ಲ. ಇದು ಭಕ್ತರ, ಹಿಂದೂಗಳ ಪ್ರಶ್ನೆ ಎಂದು ತಮ್ಮ ನಿರ್ಧಾರವನ್ನು ವಿಜಯೇಂದ್ರ ಸಮರ್ಥನೆ ಮಾಡಿಕೊಂಡರು. ಸಿಎಂ ಅವರು ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಹೆಸರು ಘೋಷಣೆ ಮಾಡಿದ್ದಾರೆ. ಬಾನು ಮುಷ್ತಾಕ್ ಅವರು ಹಿಂದೂ ಪರಂಪರೆ, ಹಿಂದೂ ಆಚಾರ ವಿಚಾರಗಳ ಮೇಲೆ ನಂಬಿಕೆ ಇಟ್ಟು ಬಂದರೆ ಸ್ವಾಗತ ಮಾಡುತ್ತೇವೆ. ಬಾನು ಮುಷ್ತಾಕ್ ಹಾಗೂ ಕೊಡಗಿನ ದೀಪಾ ಬಸ್ತಿ ಇಬ್ಬರಿಗೂ ಸೇರಿ ಬೂಕರ್ ಪ್ರಶಸ್ತಿ ಬಂದಿದೆ.

ಆದರೆ, ಸರ್ಕಾರ ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಅವರನ್ನು ಮಾತ್ರ ಕರೆದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ದೀಪಾ ಬಸ್ತಿ ಅವರನ್ನು ಕರೆದಿಲ್ಲ? ಎಂದು ಪ್ರಶ್ನೆ ಮಾಡಿದರು. ದೀಪಾ ಬಸ್ತಿ ಅವರನ್ನು ಏಕೆ ಕರೆಯಬೇಕು ಎಂಬ ಆಲೋಚನೆ ಸರ್ಕಾರಕ್ಕೆ ಬಂದಿಲ್ಲ? ಕೊಡಗಿನ ಬಗ್ಗೆ ಸಿಎಂಗೆ ಆಸಕ್ತಿ ಕಡಿಮೆ. ದಸರಾ ಧಾರ್ಮಿಕ ಸಂಪ್ರದಾಯ ಒಳಗೊಂಡ ಕಾರ್ಯಕ್ರಮ. ನಮಗೆ ಆಚಾರ ವಿಚಾರ, ಸಂಪ್ರದಾಯ ಎಲ್ಲವೂ ಗೊತ್ತಿದೆ ಎಂದು ಹೇಳಿದರು.

## ನೃತ್ಯೋಲ್ಲಾಸ ಮಾಸಿಕ ಭರತನಾಟ್ಯ ಕಾರ್ಯಕ್ರಮ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಶ್ರೀ ಗಣೇಶ ನೃತ್ಯಾಲಯದ ಕಲಾ ನಿರ್ದೇಶಕರಾದ ಶ್ರೀಯುತ ಗಣೇಶ್ ಹಾಗೂ ಅವರ ಪತ್ನಿ ಶ್ರೀಮತಿ ಭಾವನಾ ಗಣೇಶ್ ನೃತ್ಯ ದಂಪತಿಗಳು ಇವರು ತಮ್ಮ ನೃತ್ಯ ಶಾಲೆಯಲ್ಲಿ ಸುಮಾರು ಒಂದೂವರೆ ವರ್ಷದಿಂದ ಮಾಸಿಕ ಭರತನಾಟ್ಯ ಕಾರ್ಯಕ್ರಮವನ್ನು ಯುವ ಪ್ರತಿಭೆಗಳಿಗೆ ವೇದಿಕೆ ನೀಡುತ್ತಾ ಬಂದಿದ್ದಾರೆ. ಈವರೆಗೆ ಹಲವಾರು ಕಲಾವಿದರು ಈ ಕಾರ್ಯಕ್ರಮದಲ್ಲಿ ಭಾಗಿಯಾಗಿರುತ್ತಾರೆ. ಇದೇ ತಿಂಗಳ ಅಂದರೆ ಆಗಸ್ಟ್ 24ರಂದು ನಡೆದ ಕಾರ್ಯಕ್ರಮದಲ್ಲಿ ಶ್ರೀ ಗಣೇಶ್ ದಂಪತಿಗಳ ಹಿರಿಯ ವಿದ್ಯಾರ್ಥಿಗಳು ಕು. ಪೂರ್ವಿತಾ ಬಿ ಜೆ, ಕು.ಶಾಲಿನಿ ಜಿ, ಕು. ಸಮೃದ್ಧಿ ವಿ ಹೆಬ್ಬಾರ್, ಗುರು ಡಾ. ಧ್ವರಿತಾ ವಿಶ್ವನಾಥ್ ರವರ ಶಿಷ್ಯೆ ಕು. ಶ್ರೀಕೀರ್ತಿ ರಾಮನ್ ರಿಂದ ಭರತನಾಟ್ಯ ಪ್ರಸ್ತುತಿ ನಡೆಸಲಾಗಿತ್ತು. ಇದಕ್ಕೆ ಹಲವಾರು ಕಲಾ ರಸಿಕರು ಸಾಕ್ಷಿಯಾಗಿದ್ದರು. **ವಿಶೇಷ ಆಕರ್ಷಣೆ:** ನೃತ್ಯೋಲ್ಲಾಸ ಕಾರ್ಯಕ್ರಮದಲ್ಲಿ ಭಾಗಿಯಾಗಲು ಆಸಕ್ತ ಯುವ ಕಲಾವಿದರು ಸಂಪರ್ಕಿಸಬಹುದು. ಮೊಬೈಲ್ : +919449255842 ಈ-ಮೇಲ್: shreeganeshanruthya-laya@gmail.com

## ಪಾರ್ಕಿಂಗ್ ಮಾಡಿದ 12 ಸಾವಿರ ವಾಹನ ಸವಾರರ ವಿರುದ್ಧ ಎಫ್‌ಐಆರ್

• ಉದಯವಾಹಿನಿ, ಬೆಂಗಳೂರು

ಅನಧಿಕೃತ ಪಾರ್ಕಿಂಗ್ ಮಾಡಿ ಸಾರ್ವಜನಿಕರ ಸಂಚಾರಕ್ಕೆ ತೊಂದರೆ ಮಾಡುತ್ತಿದ್ದ 12,097 ವಾಹನ ಸವಾರರ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗಿದೆ. ನಗರ ಸಂಚಾರಿ ಪೊಲೀಸರು ಪಾರ್ಕಿಂಗ್ ನಿಯಮಗಳ ಉಲ್ಲಂಘನೆಗಳಿಗೆ ಕಡಿವಾಣ ಹಾಕುವ ದೃಷ್ಟಿಯಿಂದ ಆ.18 ರಿಂದ 24ರವರೆಗೆ ವಿಶೇಷ ಕಾರ್ಯಾಚರಣೆ ಕೈಗೊಂಡಿದ್ದರು.

ಅನಧಿಕೃತವಾಗಿ ಪಾರ್ಕಿಂಗ್ ಮಾಡಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ತೊಂದರೆ ಉಂಟು ಮಾಡುತ್ತಿದ್ದ ವಾಹನ ಸವಾರರ ವಿರುದ್ಧ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ದಿನಗಳಲ್ಲಿಯೂ ಈ ಕಾರ್ಯಾಚರಣೆ ಮುಂದುವರೆಯಲಿದೆ ಎಂದು ತಿಳಿಸಿದ್ದಾರೆ.

## ಎಣ್ಣೆ ಪಾರ್ಟಿಯಲ್ಲಿ ಕಿರಿಕ್; ಸ್ನೇಹಿತನ ಕೊಲೆ

• ಉದಯವಾಹಿನಿ, ಬೆಂಗಳೂರು

ಪಾರ್ಟಿ ವೇಳೆ ಸ್ನೇಹಿತರ ನಡುವೆಯೇ ಜಗಳ ನಡೆದು ಒಬ್ಬನ ಕೊಲೆಯಲ್ಲಿ ಅಂತ್ಯವಾಗಿರುವ ಘಟನೆ ಕುಂಬಳಗೋಡು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ರಾತ್ರಿ ನಡೆದಿದೆ. ಉತ್ತರ ಪ್ರದೇಶ ಮೂಲದ ಅಮಿತ್ (25) ಕೊಲೆಯಾದ ಯುವಕ. ಕುಂಬಳಗೋಡು ಕೈಗಾರಿಕಾ ಪ್ರದೇಶದಲ್ಲಿ ಎಸ್‌ವಿ ಕಾಂಕ್ರೇಟ್ ಪ್ಲ್ಯಾಂಟ್ ಇದೆ. ಈ ಕಾರ್ಖಾನೆಯಲ್ಲಿ ಕೆಲಸ ಮಾಡುವ ತನ್ನ ಊರಿನವನೇ ಆದ ಸ್ನೇಹಿತ ರವಿ ಎಂಬಾತನನ್ನು ಮಾತನಾಡಿಸುವ ಸಲುವಾಗಿ ಅಮಿತ್ ಅಲ್ಲಿಗೆ ಹೋಗಿದ್ದಾನೆ. ರಾತ್ರಿ 7.30ರ ಸುಮಾರಿನಲ್ಲಿ ಅಮಿತ್ ಇತರೆ ಇಬ್ಬರು ಸ್ನೇಹಿತರೊಂದಿಗೆ ಪಾರ್ಟಿ ಮಾಡಿದ್ದಾನೆ. ಆ ಸಂದರ್ಭದಲ್ಲಿ ಕುಡಿದ ಅಮಲಿನಲ್ಲಿ ಅವರುಗಳ ಮಧ್ಯೆಯೇ ಯಾವುದೋ ವಿಚಾರವಾಗಿ ಜಗಳವಾಗಿದೆ. ಗಲಾಟೆ ವೇಳೆ ಮಾತಿಗೆ ಮಾತು ಬೆಳೆದು ವಿಕೋಪಕ್ಕೆ ತಿರುಗಿದಾಗ ಕೈಗೆ ಸಿಕ್ಕಿದ ಗಾಜಿನ ಚೂರಿನಿಂದ ಅಮಿತ್ ಕೈ, ಇನ್ನಿತರ ದೇಹದ ಭಾಗಗಳಿಗೆ ಮನ ಬಂದಂತೆ ಕೊಯ್ದಿದ್ದರಿಂದ ತೀವ್ರ ರಕ್ತಸ್ರಾವವಾಗಿ ಆತ ಮೃತಪಟ್ಟಿದ್ದಾನೆ. ಸುದ್ದಿ ತಿಳಿದು ಕುಂಬಳಗೋಡು ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ, ಪ್ರಕರಣ ದಾಖಲಿಸಿಕೊಂಡು ಅಮಿತ್ ಮೃತದೇಹವನ್ನು ರಾಜರಾಜೇಶ್ವರಿ ಆಸ್ಪತ್ರೆಗೆ ರವಾನಿಸಿದ್ದಾರೆ. ಅಮಿತ್ ಕೊಲೆಗೆ ನಿಖರ ಕಾರಣ ಸದ್ಯಕ್ಕೆ ತಿಳಿದು ಬಂದಿಲ್ಲ. ತನಿಖೆ ಮುಂದುವರೆಸಿದ ಪೊಲೀಸರು ಇಬ್ಬರನ್ನು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಿದ್ದಾರೆ.

## ನಿರಂತರವಾಗಿ ಏರಿಕೆಯಾಗುತ್ತಿದೆ ಜಿಎಸ್‌ಟಿ ನೋಂದಣಿ ಪ್ರಮಾಣ




• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಜಿಎಸ್‌ಟಿ ನೋಂದಣಿ ಪ್ರಮಾಣ ನಿರಂತರವಾಗಿ ಏರಿಕೆಯಾಗುತ್ತಿದೆ. 2024ರ ನವೆಂಬರ್‌ನಿಂದಲೂ ಪ್ರತಿ ತಿಂಗಳು ಜಿಎಸ್‌ಟಿ ನೊಂದಣಿ ಮಾಡಿಕೊಳ್ಳುತ್ತಿರುವರ ಸಂಖ್ಯೆ ಹೆಚ್ಚಾಗುತ್ತಾ ಬಂದಿದೆ. ವಾಣಿಜ್ಯ ತೆರಿಗೆಗಳ ಇಲಾಖೆ ಮಾಹಿತಿ ಪ್ರಕಾರ 2024-25ನೇ ಆರ್ಥಿಕ ಸಾಲಿನಲ್ಲಿ 96,590ರಷ್ಟು ಜಿಎಸ್‌ಟಿ ನೋಂದಣಿ ಮಾಡಿಕೊಂಡಿದ್ದರು. ಪ್ರಸಕ್ತ ಆರ್ಥಿಕ ಸಾಲಿನಲ್ಲಿ ಏಪ್ರಿಲ್‌ನಿಂದ ಜುಲೈ ಅಂತ್ಯದವರೆಗೆ 34,811ರಷ್ಟು ಜಿಎಸ್‌ಟಿ ನೋಂದಣಿಯಾಗಿದೆ. ಪ್ರಸ್ತುತ ಸಾಮಾನ್ಯ ತೆರಿಗೆ ಪದ್ಧತಿಯಡಿ ಶೇ.91ರಷ್ಟು ಜಿಎಸ್‌ಟಿ ಪಾವತಿಯಾಗುತ್ತಿದೆ. ಅಂದರೆ 9,41,164 ಮಂದಿ ತೆರಿಗೆ ಸಂದಾಯ ಮಾಡಿದ್ದಾರೆ. ರಾಜಿ ತೆರಿಗೆ ಪದ್ಧತಿಯಡಿ ಶೇ.9ರಷ್ಟು ತೆರಿಗೆ ಸಂದಾಯವಾಗಿದ್ದು, 98,663ರಷ್ಟು ತೆರಿಗೆ ಪಾವತಿಯಾಗಿದೆ.

2024ರ ಏಪ್ರಿಲ್‌ನಲ್ಲಿ 2204ರಷ್ಟಿದ್ದ ಜಿಎಸ್‌ಟಿ ನೋಂದಣಿ ಕಳೆದ ಏಪ್ರಿಲ್ ತಿಂಗಳಿನಲ್ಲಿ 13,386ಕ್ಕೆ ಏರಿಕೆಯಾಗಿದೆ. ಪ್ರತಿ ತಿಂಗಳು ಜಿಎಸ್‌ಟಿ ನೋಂದಣಿಯಲ್ಲಿ ಏರಿಕೆಯಾಗುತ್ತಾ ಬಂದಿರುವುದು ವಾಣಿಜ್ಯ ತೆರಿಗೆಗಳ ಇಲಾಖೆ ಮಾಹಿತಿಯಿಂದ ಕಂಡುಬಂದಿದೆ. 2024ರ ಅಕ್ಟೋಬರ್‌ನಲ್ಲಿ 7,569ರಷ್ಟಿದ್ದ ಜಿಎಸ್‌ಟಿ ನೋಂದಣಿ ಸಂಖ್ಯೆ ನವೆಂಬರ್‌ನಲ್ಲಿ 10,707ಕ್ಕೆ ಏರಿಕೆಯಾಗಿದೆ. ಡಿಸೆಂಬರ್‌ನಲ್ಲಿ 10420, 2025ರ ಜನವರಿಯಲ್ಲಿ 11571, ಫೆಬ್ರವರಿಯಲ್ಲಿ 10664, ಮಾರ್ಚ್‌ನಲ್ಲಿ 11466, ಏಪ್ರಿಲ್‌ನಲ್ಲಿ 10785, ಮೇ ತಿಂಗಳಿನಲ್ಲಿ 11105, ಜೂನ್‌ನಲ್ಲಿ 10921, ಜುಲೈನಲ್ಲಿ 13386ರಷ್ಟು ಜಿಎಸ್‌ಟಿ ನೋಂದಣಿಯಾಗಿದೆ.

### ಕೆಆರ್ ಮಾರುಕಟ್ಟೆ ಬಳಿ ನಡೆದ ಅಪಘಾತದಲ್ಲಿ ಬಿಎಂಟಿಸಿ ಬಸ್ ಚಾಲಕನ ತಪ್ಪಿಲ್ಲ-ಬೈಕ್ ಚಾಲಕನದ್ದೇ ತಪ್ಪು ಎಂದ ಸಂಸ್ಥೆ

# ನಿರಂತರವಾಗಿ ನಡೆಯುತ್ತಿರುವ ಬಿಎಂಟಿಸಿ ಬಸ್ ಅಪಘಾತ

• ಉದಯವಾಹಿನಿ, ಬೆಂಗಳೂರು

ಆ. 24ರಂದು ಕೆಆರ್ ಮಾರುಕಟ್ಟೆ ಬಳಿ ಬಿಎಂಟಿಸಿ ಬಸ್ ಚಕ್ರಕ್ಕೆ ಸಿಲುಕಿ 11 ವರ್ಷದ ಬಾಲಕ ಮೃತಪಟ್ಟಿದ್ದಾನೆ. ಆದರೆ ಈ ಅಪಘಾತದಲ್ಲಿ ಬಿಎಂಟಿಸಿ ಬಸ್ ಚಾಲಕನ ತಪ್ಪಿಲ್ಲ, ಬೈಕ್ ಚಲಾಯಿಸುತ್ತಿದ್ದವರದ್ದೇ ತಪ್ಪು ಎಂದು ಬಿಎಂಟಿಸಿ ಸ್ಪಷ್ಟನೆ ನೀಡಿದೆ. ಅಪಘಾತದ ಸಿಸಿಟಿವಿ ದೃಶ್ಯಾವಳಿಗಳನ್ನು ಕೂಲಂಕುಶವಾಗಿ ವೀಕ್ಷಿಸಿದ ಸಂಸ್ಥೆ, ಬಸ್‌ನ ಹಿಂದೆ ಬರುತ್ತಿದ್ದ ದ್ವಿಚಕ್ರ ವಾಹನದ ಸವಾರರು ಬಸ್ಸಿನ ಎಡ ಭಾಗದಲ್ಲಿ ಓವರ್ ಟೇಕ್ ಮಾಡಲು ಹೋದಾಗ ಮುಂದೆ ಇದ್ದ ಟೂ ವೀಲರ್ ಗಮನಿಸಿ ಬ್ರೇಕ್ ಹಿಡಿದು ಸ್ಕಿಡ್ ಆಗಿ ಬಸ್ಸಿನ ಎಡಬಾಗದ ಹಿಂದಿನ ಚಕ್ರಕ್ಕೆ ಸ್ವತಹ ತಾವೇ ಕೆಳಗೆ ಬಿದ್ದಿರುತ್ತಾರೆ ಮತ್ತು ಬಸ್‌ನ ಎಡಬಾಗದ ಹಿಂಬದಿಯ ಚಕ್ರಕ್ಕೆ ಮಗು ಉರುಳಿ ಬಂದು ಸಿಲುಕಿ ತೀವ್ರ ಗಾಯಗೊಂಡಿರತ್ತದೆ. ತಕ್ಷಣವೇ ಅವರನ್ನು ವಿಕ್ಟೋರಿಯಾ ಆಸ್ಪತ್ರೆಗೆ ಕರೆದೊಯ್ಯಲಾಗಿ, ಚಿಕಿತ್ಸೆ ಫಲಕಾರಿಯಾಗದೆ 11 ವರುಷದ ಹುಡುಗ ಮೃತಪಟ್ಟಿದ್ದಾರೆ. ಸದರಿ ಘಟನೆಯಲ್ಲಿ ಸಂಸ್ಥೆಯ ಚಾಲಕರ ತಪ್ಪು ಕಂಡು ಬಂದಿರುವುದಿಲ್ಲ ಎಂದು ಸಂಸ್ಥೆ ಹೇಳಿದೆ. ಈ ಬಗ್ಗೆ ಪ್ರಕಟಣೆ ಹೊರಡಿಸಿರುವ ಸಂಸ್ಥೆ, ಭಾನುವಾರ ಸಂಜೆ


ಉದಯವಾಹಿನಿ ಚಿತ್ರ

17:45 ಕ್ಕೆ ಘಟಕ52 (ಹುತ್ತನಹಳ್ಳಿ)ಗೆ ಸೇರಿದ ಬಸ್ ಸಂಖ್ಯೆ KA57F6496 ಕೆ.ಆರ್. ಮಾರುಕಟ್ಟೆ, ಜಾಮಿ ಮಸೀದಿ ಸಮೀಪದಲ್ಲಿ ಅಪಘಾತಕ್ಕೆ ಒಳಗಾಗಿರುತ್ತದೆ.ಈ ಸಂದರ್ಭದಲ್ಲಿ, ಚಾಲಕ ಶ್ರೀ ಸಂತೋಷ್ (ಬಿಲ್ಲೆಸಂಖ್ಯೆ: 17790), ನಿರ್ವಾಹಕ ಶ್ರೀಭಾಸ್ಕರ್ (ಬಿಲ್ಲೆಸಂಖ್ಯೆ: 12671) ಕರ್ತವ್ಯ ನಿರ್ವಹಿಸುತ್ತಿದ್ದರು ಎಂದು ಹೇಳಿದೆ. ವಾಹನವನ್ನು ಪ್ರಸ್ತುತ ಹಲಸೂರು ಗೇಟ್ ಪೊಲೀಸ್ ಠಾಣೆಯಲ್ಲಿ ಇದ್ದು, ಘಟನೆಯ ಬಗ್ಗೆ ಸಂಸ್ಥೆಯ ಹಿರಿಯ ಅಧಿಕಾರಿಗಳಾದ ಉತ್ತರ ವಲಯದ ವಿಭಾಗ ನಿಯಂತ್ರಣ ಅಧಿಕಾರಿಗಳು, ಅಪಘಾತ ಶಾಖೆಯ ಸಿಬ್ಬಂದಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ದುರ್ಘಟನೆಯ ಕುರಿತು ಬೆ.ಮ.ಸಾ.ಸಂಸ್ಥೆ ತೀವ್ರ ಸಂತಾಪ ವ್ಯಕ್ತಪಡಿಸುತ್ತದೆ ಎಂದು ಹೇಳಿದೆ.

**ಬೆಂಗಳೂರಿನ ಕೆ.ಆರ್. ಮಾರುಕಟ್ಟೆ ಬಳಿ ಸಂಭವಿಸಿದ ದುರ್ಘಟನೆಯಲ್ಲಿ ಬಿಎಂಟಿಸಿ ಬಸ್ ಚಕ್ರಕ್ಕೆ ಸಿಲುಕಿ 11 ವರ್ಷದ ಬಾಲಕ ಮೃತಪಟ್ಟಿದ್ದಾನೆ. ಈ ದುರ್ಘಟನೆಗೆ ಬಸ್ ಚಾಲಕನ ತಪ್ಪಿಲ್ಲ, ಬೈಕ್ ಸವಾರ ಓವರ್ ಟೇಕ್ ಮಾಡಿ, ಸ್ಕಿಡ್ ಆಗಿದ್ದೇ ಕಾರಣ ಎಂದು ಬಿಎಂಟಿಸಿ ಸ್ಪಷ್ಟನೆ ನೀಡಿದೆ.**

**ಅಪಘಾತ ನಿಯಂತ್ರಣಕ್ಕೆ ಬೆ.ಮ.ಸಾ.ಸಂಸ್ಥೆಯು ಕೈಗೊಂಡಿರುವ ಕ್ರಮಗಳು:** ಪ್ರತಿದಿನ ಚಾಲಕ ನಿರ್ವಾಹಕರ ಕರ್ತವ್ಯದ ಪ್ರಾರಂಭದ ವೇಳೆಯಲ್ಲಿಯೇ ಸಂಬಂಧಪಟ್ಟ ಘಟಕದ ವ್ಯವಸ್ಥಾಪಕರು, ವಿಭಾಗೀಯ ನಿಯಂತ್ರಣಾಧಿಕಾರಿಗಳು ಚಾಲಕ ನಿರ್ವಾಹಕರಿಗೆ ಸುರಕ್ಷತಾ ಚಾಲನೆ, ಅಪಘಾತದಿಂದ ಆಗುವ ದುಷ್ಪರಿಣಾಮಗಳು ಬಗ್ಗೆ ವಿವರವಾಗಿ ಮನದಟ್ಟು ಮಾಡಿ ಕರ್ತವ್ಯಕ್ಕೆ ನಿಯೋಜಿಸಲಾಗುತ್ತಿದೆ.

- **ಚಾಲಕರಿಗೆ ನಿಯಮಿತವಾಗಿ ರೆಸಿಡೆನ್ಶಿಯಲ್ ತರಬೇತಿ ಶಿಬಿರಗಳು ನಡೆಸಲಾಗುತ್ತಿದೆ.**
- **ಅಪಘಾತ ಪ್ರವೃತ್ತಿಯಲ್ಲಿರುವ ಸಿಬ್ಬಂದಿಗಳಿಗೆ ವೈಯಕ್ತಿಕ ಕೌನ್ಸೆಲಿಂಗ್ ನೀಡಲಾಗುತ್ತಿದೆ.**
- **ರಸ್ತೆ ಸುರಕ್ಷತಾ ಜಾಗೃತಿ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸಲಾಗುತ್ತಿದೆ.**
- **ನಿಯಮ ಉಲ್ಲಂಘನೆ ಮಾಡಿದ ಸಿಬ್ಬಂದಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದೆ.**
- **ಅಪಘಾತಗಳ ಮೂಲ ಕಾರಣಗಳನ್ನು ತಿಳಿದುಕೊಳ್ಳಲು ವಿಶ್ಲೇಷಣೆ ಮತ್ತು ತನಿಖೆ ಪ್ರಕ್ರಿಯೆ ಕೈಗೊಳ್ಳಲಾಗಿದೆ.**

ಬೆಮಸಾ ಸಂಸ್ಥೆಯು ಸಂಸ್ಥೆ ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಸುರಕ್ಷಿತ, ಅಪಘಾತ ರಹಿತ ಸೇವೆ ಒದಗಿಸುವತ್ತ ಹೆಚ್ಚಿನ ಒತ್ತು ನೀಡಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಶೇ.50 ರಷ್ಟು ರಿಯಾಯಿತಿ ಹಿನ್ನೆಲೆಯಲ್ಲಿ ಮುಗಿಬಿದ್ದು ದಂಡ ಕಟ್ಟಿದ ವಾಹನ ಸವಾರರು

• ಉದಯವಾಹಿನಿ, ಬೆಂಗಳೂರು

ಸಂಚಾರಿ ನಿಯಮ ಉಲ್ಲಘಂನೆ ಸಂಬಂಧ ಸಂಚಾರಿ ಇ- ಚಲನ್ ಮುಖಾಂತರ ದಾಖಲಾದ ಪ್ರಕರಣಗಳಲ್ಲಿ ಬಾಕಿ ದಂಡ ಪಾವತಿಗೆ ನೀಡಲಾದ ಶೇ.50 ರಷ್ಟು ರಿಯಾಯಿತಿಗೆ ವಾಹನ ಚಾಲಕರಿಂದ ಭಾರೀ ಉತ್ತಮ ಸ್ಪಂದನೆ ವ್ಯಕ್ತವಾಗಿದೆ. ಎರಡನೇ ಬಾರಿಗೆ ದಂಡ ರಿಯಾಯಿತಿಗೆ ಅವಕಾಶ ಕಲ್ಪಿಸಿದ್ದು, ಎರಡನೇ ದಿನವಾದ ನಿನ್ನೆ ನಗರದಲ್ಲಿ ಭರ್ಜರಿ ಪ್ರತಿಕ್ರಿಯೆ ವ್ಯಕ್ತವಾಗಿ 1.07 ಲಕ್ಷ ಪ್ರಕರಣಗಳಲ್ಲಿ 3.01 ಕೋಟಿ ರೂ. ದಂಡ ಸಂಗ್ರಹವಾಗಿದೆ.

ರಾಜ್ಯ ಸರ್ಕಾರ ಸಂಚಾರಿ ನಿಯಮ ಉಲ್ಲಂಘನೆಗಳ ಹಳೇ ಪ್ರಕರಣಗಳಲ್ಲಿ ಬಾಕಿ ದಂಡ ಪಾವತಿಗೆ ಶೇ.50 ರಷ್ಟು ರಿಯಾಯಿತಿ ನೀಡಿ ಆದೇಶಿಸಿದ್ದು, ಸೆ.19ರವರೆಗೆ ಈ ಅವಕಾಶವಿದೆ. ಮೊದಲ ದಿನ 1.48 ಲಕ್ಷ ಪ್ರಕರಣಗಳಲ್ಲಿ 4.18 ಕೋಟಿ ರೂ. ಸಂಗ್ರಹವಾಗಿತ್ತು. ಎರಡನೇ ದಿನ 1.07 ಪ್ರಕರಣಗಳಲ್ಲಿ 3.01 ಕೋಟಿ ರೂ. ಸಂಗ್ರಹವಾಗಿದೆ.

ವೀಕೆಂಡ್ ಹಿನ್ನೆಲೆಯಲ್ಲಿ 2 ದಿನ ಸಾರ್ವಜನಿಕರೇ ಸ್ವಯಂ ಪ್ರೇರಿತರಾಗಿ ಸಂಚಾರಿ ಠಾಣೆಗಳಿಗೆ ಭೇಟಿ ನೀಡಿ ದಂಡ ಪಾವತಿಸಿದ್ದಾರೆ. ಸೋಮವಾರ ಜನರು ಕಡಿಮೆ ಸಂಖ್ಯೆಯಲ್ಲಿ ದಂಡ ಪಾವತಿಗೆ ಆಗಮಿಸಿದ್ದರು. ಕೆಲವು ಕಡೆ ಸಂಚಾರಿ ಪೊಲೀಸರು ವಾಹನಗಳನ್ನು ತಡೆದು ಪರಿಶೀಲಿಸಿದಾಗ ದಂಡ ಪಾವತಿಸಿದ್ದಾರೆ. ನಗರದಲ್ಲಿ ವಾಹನ ಸವಾರರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದ್ದು, ನಿಗದಿತ ಸಮಯದೊಳಗೆ ನಿರೀಕ್ಷೆಗಿಂತ ಹೆಚ್ಚು ದಂಡ ಸಂಗ್ರಹವಾಗುವ ನಿರೀಕ್ಷೆಯಿದೆ ಎಂದು ಕಬ್ಬನ್‌ಪಾರ್ಕ್ ಸಂಚಾರಿ ಠಾಣೆಯ ಎಎಸ್‌ಐ ಜಯರಾಂ ಎಚ್.ಆರ್. ಅವರು ತಿಳಿಸಿದ್ದಾರೆ. ಸಂಚಾರಿ ಪೊಲೀಸರ ಕಾರ್ಯಾಚರಣೆ, 667 ಸವಾರರ ಮೇಲೆ


ಉದಯವಾಹಿನಿ ಚಿತ್ರ

ಕೇಸು ದಾಖಲು ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವವರ ವಿರುದ್ಧ ಸಂಚಾರಿ ಪೊಲೀಸರು ಒಂದು ವಾರಗಳ ಕಾಲ ಕಾರ್ಯಾಚರಣೆ ನಡೆಸಿ 667 ಸವಾರರ ವಿರುದ್ಧ ಪ್ರಕರಣವನ್ನು ದಾಖಲಿಸಿಕೊಂಡು 90 ಸಾವಿರ ದಂಡ ವಸೂಲಿ ಮಾಡಿದ್ದಾರೆ. ಆ.18 ರಿಂದ 24 ರ ವರೆಗೆ ನಗರದ 53 ಸಂಚಾರಿ ಪೊಲೀಸ್ ಠಾಣೆ ವ್ಯಾಪ್ತಿಗಳಲ್ಲಿ ಸಿಬ್ಬಂದಿ ವಿಶೇಷ ಕಾರ್ಯಾಚರಣೆ ಕೈಗೊಂಡು ವಿವಿಧ ಮಾದರಿಯ 47749 ವಾಹನಳನ್ನು ತಪಾಸಣೆ ಮಾಡಿ ಮದ್ಯಪಾನ ಮಾಡಿ ವಾಹನ ಚಲಾಯಿಸುತ್ತಿದ್ದ ವಾಹನ ಚಾಲಕರು , ಸವಾರರುಗಳ ವಿರುದ್ಧ 667 ಪ್ರಕರಣಗಳನ್ನು ದಾಖಲಿಸಿಕೊಳ್ಳಲಾಗಿದೆ. ಅಲ್ಲದೇ ಅತೀ ವೇಗ ವಾಹನ ಚಲಾಯಿಸುವವರ ವಿರುದ್ಧ ನಡೆಸಿದ ಕಾರ್ಯಾಚರಣೆಯಲ್ಲಿ 90 ಪ್ರಕರಣಗಳನ್ನು ದಾಖಲಿಸಿಕೊಂಡು 90 ಸಾವಿರ ದಂಡ ವಿಧಿಸಿದ್ದಾರೆ.ನಗರದಲ್ಲಿ ಮದ್ಯಪಾನ ಮಾಡಿ ವಾಹನ ಚಲಾಯಿಸುವ ಮತ್ತು ಅತೀ ವೇಗ ವಾಹನ ಚಲಾಯಿಸುವವರ ಹಾವಳಿಯನ್ನು ತಡೆಗಟ್ಟಲು ಮತ್ತು ರಸ್ತೆ ಸುರಕ್ಷತೆಗಾಗಿ ಮುಂದಿನ ದಿನಗಳಲ್ಲಿಯೂ ಸಹ ಕಾರ್ಯಾಚರಣೆಗಳನ್ನು ಹಮಿಕೊಳ್ಳಲಾಗುವುದು ಎಂದು ಸಂಚಾರಿ ಪೊಲೀಸರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ತಮಿಳುನಾಡಿನಲ್ಲಿ ಮುಸುಕುಧಾರಿ ಪತ್ನಿಯ ವಿಚಾರಣೆ

• ಉದಯವಾಹಿನಿ, ಬೆಂಗಳೂರು

ಧರ್ಮಸ್ಥಳದ ಪ್ರಕರಣದ ತನಿಖೆ ನಡೆಸುತ್ತಿರುವ ಎಸ್‌ಐಟಿ ಅಧಿಕಾರಿಗಳು ತ.ನಾಡಿನ ಚಿಕ್ಕರಸಂಪಾಳ್ಯ ಗ್ರಾಮಕ್ಕೆ ತೆರಳಿ ಮಾಸ್ಕ್‌ಮ್ಯಾನ್ ಚಿನ್ನಯ್ಯನ ಪತ್ನಿ ಮಲ್ಲಿಗೆ ಅವರನ್ನು ವಿಚಾರಣೆ ನಡೆಸಿದ್ದಾರೆ.

ಸತ್ಯಮಂಗಲ ಪೊಲೀಸ್ ಠಾಣೆಗೆ ಭೇಟಿ ನೀಡಿದ 5 ಮಂದಿ ಎಸ್‌ಐಟಿ ಅಧಿಕಾರಿಗಳ ತಂಡ ಸ್ಥಳೀಯ ಪೊಲೀಸರ ನೆರವಿನೊಂದಿಗೆ ಚಿನ್ನಯ್ಯನ ಮನೆಗೆ ಭೇಟಿ ನೀಡಿ ಮಾಹಿತಿ ಕಲೆಹಾಕಿದೆ. ಈ ಬಗ್ಗೆ ಸುದ್ದಿಗಾರರೊಂದಿಗೆ ಮಾಹಿತಿ ನೀಡಿರುವ ಮಲ್ಲಿಗೆ ಅವರು, ತಮ್ಮ ಪತಿ ಕೆಲಸಕ್ಕೆ ಹೋಗುತ್ತೇನೆ ಎಂದು ಎರಡು ತಿಂಗಳ ಹಿಂದೆ ತೆರಳಿದ್ದರು. ಧರ್ಮಸ್ಥಳದ ವಿರುದ್ಧದ ಪ್ರಕರಣದಲ್ಲಿ ಅವರು ಹೇಳಿಕೆ ನೀಡಿರುವುದು ನನಗೆ ಟಿವಿಗಳ ಮೂಲಕ ಗೊತ್ತಾಯಿತು. ಈ ನಡುವೆ ತಮಗೆ ಫೋನ್ ಮಾಡಿದ್ದ ಚಿನ್ನಯ್ಯ, ನಾನು ವಕೀಲರ ಜೊತೆ ಇದ್ದೇನೆ, ಭಯ ಬೇಡ, ಬೇಗ ವಾಪಾಸ್ ಬರುತ್ತೇನೆ ಎಂದು ಹೇಳಿದರು.

ಟಿವಿಯಲ್ಲಿ ಬರುತ್ತಿರುವ ವಿಚಾರಗಳ ಬಗ್ಗೆ ಪ್ರಶ್ನಿಸಿದಾಗ ವಾಪಸ್ ಬಂದ ನಂತರ ಎಲ್ಲಾ ಹೇಳುತ್ತೇನೆ. ಸದ್ಯಕ್ಕೆ ನಾನು ಚೆನ್ನಾಗಿದ್ದೇನೆ. ಆತಂಕ ಪಡುವ ಅಗತ್ಯವಿಲ್ಲ ಎಂದಿದ್ದರು. 17 ವರ್ಷಗಳ ಹಿಂದೆ ಮದುವೆಯಾಗಿದ್ದ ನಾವು ಆರಂಭದಲ್ಲಿ ಧರ್ಮಸ್ಥಳದಲ್ಲೇ ವಾಸವಿದ್ದೆವು. ಅಲ್ಲಿ ನಾನು ಪೌರಕಾರ್ಮಿಕಳಾಗಿ ಕೆಲಸಮಾಡುತ್ತಿದ್ದೆ. ಅವರು ಧರ್ಮಸ್ಥಳದಲ್ಲಿ ಸ್ವಚ್ಛತಾ ಕೆಲಸ ಮಾಡುತ್ತಿದ್ದರು. 10 ವರ್ಷಗಳ ಹಿಂದೆ ಸತ್ಯಮಂಗಲದ ಬಳಿ ಬಂದು ನೆಲೆಸಿದ್ದು, ಗಾರ್ಮೆಂಟ್ಸ್ ಹಾಗೂ



ಮಿಲ್‌ಗಳಲ್ಲಿ ಕೆಲಸ ಮಾಡುತ್ತಿದ್ದೇವೆ ಎಂದು ತಿಳಿಸಿದ್ದಾರೆ. ನಾವು ತಮಿಳುನಾಡಿನಲ್ಲಿದ್ದರೂ ಸಂಬಂಧಿಕರು ಮನೆಗೆ ಬಂದಾಗ ಎಲ್ಲರ ಜೊತೆ ಸೇರಿ ಇಲ್ಲಿಂದ ಧರ್ಮಸ್ಥಳಕ್ಕೆ ಹೋಗುತ್ತಿದ್ದೆವು. ಅಲ್ಲಿನ ಮ್ಯಾನೇಜರ್ ಅವರಿಂದ ಚಿನ್ನಯ್ಯ ಚೀಟಿ ಪಡೆದು, ನೇರವಾಗಿ ದರ್ಶನಕ್ಕೆ ಕರೆದುಕೊಂಡು ಹೋಗುತ್ತಿದ್ದರು. ಹಲವಾರು ಬಾರಿ ದೇವಸ್ಥಾನಕ್ಕೆ ಹೋಗಿದ್ದೇವೆ ಎಂದಿರುವ ಮಲ್ಲಿಗೆ, ತಮಗೆ ಯಾವ ಷಡ್ಯಂತ್ರಗಳೂ ಗೊತ್ತಿಲ್ಲ, ಮಹೇಶ್‌ಶೆಟ್ಟಿ ತಿಮರೋಡಿ, ಗಿರೀಶ್ ಮಟ್ಟಣ್ಣನವರ್ ಸೇರಿದಂತೆ ಯಾರ ಪರಿಚಯವೂ ಇಲ್ಲ ಎಂದಿದ್ದಾರೆ. ನಾವು ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರವಾಗಿಲ್ಲ. ಈಗಲೂ ಮನೆಯಲ್ಲಿ ಹಿಂದೂ ದೇವರುಗಳ ಫೋಟೋಗಳಿಗೆ ಪೂಜೆ ಮಾಡುತ್ತೇವೆ. ಚಿನ್ನಯ್ಯ ಅವರ ಅಣ್ಣ ಚರ್ಚಿಗೆ ಹೋಗುತ್ತಿದ್ದರು.

ಅವರಿಗೆ ಕಣ್ಣು ಕಾಣುವುದಿಲ್ಲ. ಅವರ ಮಕ್ಕಳು ಇಲ್ಲದ ಸಂದರ್ಭದಲ್ಲಿ ಅಣ್ಣನನ್ನು ಚರ್ಚಿನಿಂದ ಮನೆಗೆ ಕರೆ ತರಲು ಚಿನ್ನಯ್ಯ ಬೈಕ್‌ನಲ್ಲಿ ಹೋಗುತ್ತಿದ್ದರು.

**ನನ್ನ ಪತಿ ಧರ್ಮಸ್ಥಳದ ಪರಮ ಭಕ್ತ. ಈ ರೀತಿ ಯಾಕೆ ಮಾಡಿದ್ದಾರೋ ಗೊತ್ತಿಲ್ಲ. ಆತ ಒಳ್ಳೆಯವರು. ದುರಾಸೆಯ ಮನುಷ್ಯ ಅಲ್ಲ. ನನಗೆ ಯಾವತ್ತೂ ಕಿರುಕುಳ ಕೊಟ್ಟಿಲ್ಲ, ಚೆನ್ನಾಗಿ ನೋಡಿಕೊಂಡಿದ್ದಾರೆ. ಅವರಿಗೆ ಧರ್ಮಸ್ಥಳದ ಮಂಜುನಾಥನೇ ದಾರಿ ತೋರಿಸುತ್ತಾನೆ. ಅವರಿಗೆ ಯಾವ ಅಪಾಯವಾಗದೆ ಮರಳಿ ಬರುತ್ತಾರೆ ಎಂಬ ವಿಶ್ವಾಸ ನನಗಿದೆ ಎಂದಿದ್ದಾರೆ.**

ಮನೆಯಲ್ಲಿ ಯೇಸುಕ್ರಿಸ್ತನ ಫೋಟೋ ಇರುವ ಕ್ಯಾಲೆಂಡರ್ ಇದೆ. ಅದನ್ನು ಯಾರೋ ಕೊಟ್ಟಿದ್ದರು. ಕ್ಯಾಲೆಂಡರ್ ಎಂಬ ಕಾರಣಕ್ಕಾಗಿ ಇಟ್ಟುಕೊಂಡಿದ್ದೇವೆ. ಇದರ ಹೊರತಾಗಿ ನಾವು ಮತಾಂತರವೂ ಆಗಿಲ್ಲ, ಚರ್ಚಿಗೂ ಹೋಗಿಲ್ಲ ಎಂದಿದ್ದಾರೆ. ಚಿನ್ನಯ್ಯ ಅವರಿಗೆ ಮೊದಲನೇ ಪತ್ನಿ ಇರುವುದು ನನಗೆ ಗೊತ್ತಿರಲಿಲ್ಲ ಟಿವಿಯಲ್ಲಿ ಆಕೆ ಮಾತನಾಡಿರುವುದನ್ನು ಕೇಳಿದ ನಂತರ ವಿಷಯ ಗೊತ್ತಾಯಿತು ಎಂದಿದ್ದಾರೆ. ತಮಗೆ ಒಬ್ಬ ಮಗನಿದ್ದು, ಆತನನ್ನು ನನ್ನ ತಾಯಿ ಬಳಿ ಬಿಟ್ಟಿದ್ದೇವೆ. ಚಿನ್ನಯ್ಯ ನಮ್ಮ ಕುಟುಂಬದ ಆಧಾರ. ಅವರು ಈ ಗೊಂದಲದಲ್ಲಿ ಏಕೆ ಸಿಲುಕಿದರೋ ಗೊತ್ತಿಲ್ಲ. ಎಸ್‌ಐಟಿ ಅಧಿಕಾರಿಗಳು ಕೇಳಿದ ಎಲ್ಲಾ ಪ್ರಶ್ನೆಗಳಿಗೂ ಉತ್ತರಿಸಿದ್ದೇನೆ ಎಂದು ಆಕೆ ತಿಳಿಸಿದ್ದಾರೆ.

## ಕರ್ನಾಟಕ ಚಲನಚಿತ್ರ ಪೋಷಕ ಕಲಾವಿದರ ಸಂಘದ ಸಭೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಚಲನಚಿತ್ರ, ಕಾರ್ಮಿಕ ಕಲಾವಿದರು ಮತ್ತು ತಂತ್ರಜ್ಞರ ಕರ್ನಾಟಕ ಚಲನಚಿತ್ರ, ಪೋಷಕ ಕಲಾವಿದರ ಸಂಘದ ಸಭೆಯು ಸೋಮವಾರ ಗಾಂಧಿನಗರದ ಲ್ಲಿರುವ ಒಕ್ಕೂಟದ ಆವರಣದಲ್ಲಿ ನಡೆಯಿತು. ಗೌರವ ಅಧ್ಯಕ್ಷರು ಪೋಷಕ ಕಲಾವಿದರ ಸಂಘ, ನಿರ್ಮಾಪಕರ ಸಂಘದ ಅಧ್ಯಕ್ಷರಾದ ಉಮೇಶ್ ಬಣಕಾರ್ ಇವರ ಅಧ್ಯಕ್ಷತೆಯಲ್ಲಿ


ಉದಯವಾಹಿನಿ ಚಿತ್ರ

**ಸಭೆಯಲ್ಲಿ ಚಲನಚಿತ್ರ, ಪೋಷಕ ಕಲಾವಿದರಿಗೆ ಆರೋಗ್ಯ, ಹಣಕಾಸಿನ ನೆರವು, ಒಂಟಿ ಆಶಕ್ತ ಕಲಾವಿದರ ಆಶ್ರಮದ ಬಗ್ಗೆ ಸೇರಿದಂತೆ ಹಲವಾರು ಕಾರ್ಯಚಟುವಟಿಕೆಗಳ ಬಗ್ಗೆ ಮಹತ್ವದ ನಿರ್ಣಯ ಕೈಗೊಳ್ಳಲಾಯಿತು.**

ಸಭೆ ನಡೆಯಿತು.

ಈ ಸಂದರ್ಭದಲ್ಲಿ ನೋತನವಾಗಿ ಒಕ್ಕೂಟಕ್ಕೆ ಅಧ್ಯಕ್ಷರಾಗಿ ಆಯ್ಕೆಯಾದ ಸೋಮಶೇಖರ್ ಇವರನ್ನು ಕರ್ನಾಟಕ ಚಲನಚಿತ್ರ ಪೋಷಕ ಕಲಾವಿದರ ಸಂಘದ ವತಿಯಿಂದ ಗೌರವಿಸಲಾಯಿತು. ಸಭೆಯಲ್ಲಿ ಪೋಷಕ ಕಲಾವಿದರ ಸಂಘದ ಅಧ್ಯಕ್ಷರಾದ ಪದ್ಮಿನಿನಂದ, ಗೌರವ ಅಧ್ಯಕ್ಷರಾದ ರವಿಶಂಕರ್, ಒಕ್ಕೂಟದ ಅಧ್ಯಕ್ಷರಾದ ಶ್ರೀ ಸೋಮಶೇಖರ್, .ಖಜಾಂಚಿ ಲಿಂಗರಾಜು, ಕಾರ್ಯದರ್ಶಿ ಮೂಗು ಸುರೇಶ್, ಅರವಿಂದ್, ಪತ್ರಕರ್ತರು ಹಾಗೂ ಸಂಪಾದಕರಾದ ಗಂಡಸಿ ಸದಾನಂದ ಸ್ವಾಮಿ ಸೇರಿದಂತೆ ನೂರಾರು ಕಲಾವಿದರು ಭಾಗವಹಿಸಿದ್ದರು.

## ಶಾಂತಿಯುತ ಗೌರಿ-ಗಣೇಶ, ಈದ್ ಮಿಲಾದ್ ಹಬ್ಬಗಳ ಆಚರಣೆಗೆ ಸೂಕ್ತ ಭದ್ರತೆ: ಆಯುಕ್ತರು

• ಉದಯವಾಹಿನಿ, ಬೆಂಗಳೂರು

ಗೌರಿ-ಗಣೇಶ, ಈದ್ ಮಿಲಾದ್ ಹಬ್ಬಗಳು ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ನಗರದಾದ್ಯಂತ ಯಾವ ರೀತಿ ಭದ್ರತೆ ಕೈಗೊಳ್ಳಬೇಕೆಂಬ ಬಗ್ಗೆ ನಗರ ಪೊಲೀಸ್ ಆಯುಕ್ತರಾದ ಸೀಮಂತ್‌ಕುಮಾರ್ ಸಿಂಗ್ ಅವರು ಕೆಲವು ಸಲಹೆ, ಸೂಚನೆ ನೀಡಿದ್ದಾರೆ. ಆಯುಕ್ತರ ಕಚೇರಿಯಲ್ಲಿನ ಸಭಾಂಗಣದಲ್ಲಿಂದು ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ, ಮೆರವಣಿಗೆ, ವಿಸರ್ಜನೆ ಸಂದರ್ಭಗಳಲ್ಲಿ ಯಾವ ರೀತಿಯಲ್ಲಿ ಭದ್ರತೆ ಕೈಗೊಳ್ಳಬೇಕೆಂಬ ಬಗ್ಗೆ ವಿವರವಾಗಿ ತಿಳಿಸಿದರು.

ಯಾವುದೇ ಕಾರಣಕ್ಕೂ ಸಣ್ಣಪುಟ್ಟ ಘಟನೆಗಳು ಆಗದಂತೆ ನೋಡಿಕೊಳ್ಳಬೇಕು. ಯಾವುದೇ ಸಣ್ಣ ಘಟನೆ ನಡೆದರೂ ತಕ್ಷಣ ಇನ್ಸ್‌ಪೆಕ್ಟರ್ ಸ್ಥಳಕ್ಕೆ ತೆರಳಿ ಅದನ್ನು ಬಗೆಹರಿಸಬೇಕು, ಗಣೇಶ ಮೂರ್ತಿ ಪ್ರತಿಷ್ಠಾಪಿಸುವ ಸ್ಥಳಗಳ ಬಳಿ ಪೊಲೀಸರನ್ನು ನಿಯೋಜಿಸಿ, ಆಯೋಜಕರೊಂದಿಗೆ ಸಂಪರ್ಕ ದಲ್ಲಿರುವಂತೆ ಅವರು ಸೂಚಿಸಿದರು.

ಸೂಕ್ಷ್ಮ ಸ್ಥಳಗಳಲ್ಲಿ ಅಗ್ನಿ ಶಾಮಕ ವಾಹನಗಳೊಂದಿಗೆ ಸಿಬ್ಬಂದಿಗಳನ್ನು ಕೆಲವು ಪ್ರದೇಶಗಳಲ್ಲಿ ಕಾಯ್ದಿರಿಸಿಕೊಳ್ಳಿ. ಬೆಸ್ಕಾಂ ಅಧಿಕಾರಿಗಳ ಜೊತೆ ಸಂಪರ್ಕದಲ್ಲಿರಿ, ಈ ಹಿಂದೆ ಗಣೇಶ ಮೂರ್ತಿ ಪ್ರತಿಷ್ಠಾಪನ ಸ್ಥಳದಲ್ಲಿ ಯಾವುದಾದರೂ ಘಟನೆಗಳು ನಡೆದಿದ್ದರೆ ಅಂತಹ ಸ್ಥಳಗಳಲ್ಲಿ ಹೆಚ್ಚಿನ ಕಟ್ಟೆಚ್ಚರ ವಹಿಸುವಂತೆ ಅವರು ಸಲಹೆ ನೀಡಿದರು. ಒಟ್ಟಾರೆ ನಗರದಲ್ಲಿ ಯಾವುದೇ ರೀತಿಯ ಸಣ್ಣಪುಟ್ಟ ಘಟನೆಗಳು ಆಗದಂತೆ ನೋಡಿಕೊಳ್ಳಬೇಕು ಎಂದು ಆಯುಕ್ತರು ಎಚ್ಚರಿಕೆ ನೀಡಿದರು.

ಅದೇ ರೀತಿ ಈದ್ ಮಿಲಾದ್ ಹಬ್ಬದ ಸಂದರ್ಭದಲ್ಲೂ ಸೂಕ್ತ ಪೊಲೀಸ್ ಬಂದೋಬಸ್ತ್ ಮಾಡ ಬೇಕು. ಯಾವುದೇ ಗಲಭೆಗಳಿಗೆ ಅವಕಾಶ ಕೊಡಬೇಡಿ. ಯಾವುದೇ ಸಣ್ಣ ಘಟನೆ ನಡೆದರೂ ಸಹ ಪ್ರಾರಂಭದಲ್ಲೇ ಬಗೆಹರಿಸಿ ಇತ್ಯರ್ಥ ಪಡಿಸುವಂತೆ ಅವರು ಸೂಚಿಸಿದರು. ಸಭೆಯಲ್ಲಿ ನಗರದ ಎಲ್ಲಾ ವಿಭಾಗಗಳ ಎಸಿಪಿಗಳು, ಡಿಸಿಪಿಗಳು, ಜಂಟಿ ಪೊಲೀಸ್ ಆಯುಕ್ತರು, ಹೆಚ್ಚುವರಿ ಕಮಿಷನರ್‌ಗಳು ಉಪಸ್ಥಿತರಿದ್ದರು.

# ಜೆ.ಸಿ. ರಸ್ತೆ ಕೆಸರುಮಯ: ಸಂಚಾರ ಅಯೋಮಯ

### ರಸ್ತೆ ಗುಂಡಿಮಯ, ಪರಿಸರ ದೂಳುಮಯ, ಸಂಚಾರಕ್ಕೆ ಸಂಕಷ್ಟ, ವ್ಯಾಪಾರಕ್ಕೆ ಹೊಡೆತ

• ಉದಯವಾಹಿನಿ, ಬೆಂಗಳೂರು

ಈ ಕಡೆಯಿಂದ ವಾಹನ ಎತ್ತಿ. ಟೈರ್ ಅಡಿ ಕಲ್ಲು ಇಡಿ. ಈಗ ಆ ಕಡೆಯಿಂದ ಎತ್ತಿ, ಆ ಟೈರ್ ಅಡಿಯೂ ಕಲ್ಲು ಇಡಿ. ಎಲ್ಲಾ ಸೇರಿ ದಬ್ಬಿ. ಜೆ.ಸಿ. ರಸ್ತೆಯನ್ನು ಸಂಪರ್ಕಿಸುವ ಸ್ಥಳದಲ್ಲಿ ಶನಿವಾರ ಸಿಲುಕಿದ್ದ 'ಅಪೆ' ಗೂಡ್ಸ್ ವಾಹನವನ್ನು ತಳ್ಳುತ್ತಿದ್ದಾಗ ವಾಹನ ಚಾಲಕ, ಅವರಿಗೆ ಸಹಾಯ ಮಾಡುತ್ತಿದ್ದವರ ಮಾತು ಇದು. ಒಂದು ವಾಹನವನ್ನು ತಳ್ಳಿ ರಸ್ತೆಗೆ ತಂದು ಎರಡು ನಿಮಿಷ ಕಳೆಯುವ ಹೊತ್ತಿಗೆ ಇನ್ನೊಂದು ಗೂಡ್ಸ್ ವಾಹನ ಸಿಲುಕಿಕೊಂಡಿತು. ಜೆ.ಸಿ. ರಸ್ತೆಯನ್ನು ಅಗೆದು ಹಾಕಿರುವುದರಿಂದ ನಿತ್ಯವೂ ವಾಹನ ಸವಾರರು ಇತರರ ಸಹಾಯವನ್ನು ಪಡೆದುಕೊಂಡೇ ಸಂಚರಿಸಬೇಕಾದ ಪರಿಸ್ಥಿತಿ ಉದ್ಭವವಾಗಿದೆ.

ಪುರಭವನದ ಬಳಿ ಜಯಚಾಮರಾಜೇಂದ್ರ ರಸ್ತೆ (ಜೆ.ಸಿ. ರಸ್ತೆ) ವೈಟ್‌ಟಾಪಿಂಗ್‌ಗಾಗಿ ಅಗೆದು ಹಾಕಿರುವುದರಿಂದ ರಸ್ತೆಯ ಇಕ್ಕೆಲಗಳಲ್ಲಿ ದೂಳು ತುಂಬಿ ಹೋಗಿದೆ. ಪೈಪ್‌ಗಳನ್ನು ಅಳವಡಿಸಲು ಅಗೆದು, ಸರಿಯಾಗಿ ಮುಚ್ಚದೇ ಇರುವುದರಿಂದ ವಾಹನಗಳು ಸಿಲುಕಿಕೊಂಡು


ಉದಯವಾಹಿನಿ ಚಿತ್ರ

**ವಾಹನಗಳ ಪಾರ್ಕಿಂಗ್‌ಗೂ ಸಮಸ್ಯೆ**

ಮುಂದಕ್ಕೆ ಹೋಗಲು ಪರದಾಡುವಂತಾಗಿದೆ ಎಂದು ಆಟೋ ಚಾಲಕ ಚೆನ್ನಿ ಪರಿಸ್ಥಿತಿ ವಿವರಿಸಿದರು.

ಮಿನರ್ವ ವೃತ್ತದಿಂದ ಪುರಭವನದವರೆಗೆ ಬಿಬಿಎಂಪಿಯಿಂದ ವೈಟ್ ಟಾಪಿಂಗ್ ಕಾಮಗಾರಿ, ಜಲಮಂಡಳಿಯಿಂದ ಒಳಚರಂಡಿ ಕೊಳವೆ ಮಾರ್ಗ ಅಳವಡಿಕೆ ಕಾಮಗಾರಿ ನಡೆಯುತ್ತಿದೆ. ಜೊತೆಗೆ ಮಳೆನೀರು ಚರಂಡಿಯನ್ನೂ ನಿರ್ಮಿಸಲಾಗುತ್ತಿದೆ. ಕೆಲವೆಡೆ ರಸ್ತೆ ಬದಿಯಲ್ಲಿ ಅಗೆದು ಪೈಪ್ ಹಾಕಿ ಮುಚ್ಚಿದ್ದಾರೆ. ಇನ್ನೂ ಕೆಲವು ಕಡೆಗಳಲ್ಲಿ ನೆಲ ಅಗೆದು ಹಾಗೆ ಬಿಡಲಾಗಿದೆ. ರಸ್ತೆಯ ಎರಡೂ ಕಡೆ ಒಟ್ಟೊಟ್ಟಿಗೆ ಕಾಮಗಾರಿ ನಡೆಸುತ್ತಿರುವುದರಿಂದ ವಾಹನಗಳ ಪಾರ್ಕಿಂಗ್‌ಗೂ ಸಮಸ್ಯೆಯಾಗಿದೆ. ಯುಟಿಲಿಟಿ ಪೈಪ್‌ಗಳು, ಚರಂಡಿ ಪೈಪ್‌ಗಳನ್ನು ರಸ್ತೆ ಬದಿಯಲ್ಲಿ ರಾಶಿ ಹಾಕಲಾಗಿದೆ. ಅಲ್ಲಲ್ಲಿ ಚರಂಡಿ ಮುಚ್ಚಿರುವುದರಿಂದ ಕೊಳಚೆ ನೀರು ಅಲ್ಲಲ್ಲೇ ನಿಂತು ಗಬ್ಬು ನಾರುತ್ತಿದೆ. ಕಾಮಗಾರಿ ಆರಂಭವಾಗಿ ಎಂಟು ತಿಂಗಳು ಕಳೆದಿದ್ದರೂ ಕಾಲುಭಾಗ ಕೆಲಸವೂ ಆಗಿಲ್ಲ. ಜೆ.ಸಿ. ರಸ್ತೆ ತುಂಬಾ ಗುಂಡಿಗಳು ಬಿದ್ದಿವೆ. ಅವುಗಳನ್ನು ಮುಚ್ಚುವ ಕೆಲಸವನ್ನೂ ಮಾಡಿಲ್ಲ. ಅಗೆದು ಹಾಕ್ತಾರೆ. ಹಾಗೇ ಬಿಟ್ಟು ಹೋಗುತ್ತಾರೆ. ಸಂಚಾರಕ್ಕೆ ತೊಡಕಾಗಿರುವುದರಿಂದ ವಾಹನಗಳು ನಿಧಾನವಾಗಿ ಚಲಿಸುವಂತಾಗಿದೆ. ಇದರಿಂದ ದಟ್ಟಣೆ ಉಂಟಾಗಿದೆ ಎಂದು ಚಾಲಕ ಸುಲೈಮಾನ್ ತಿಳಿಸಿದರು. ದೂಳಿನಿಂದಾಗಿ ಜನರು ಸುತ್ತಮುತ್ತಲ ಅಂಗಡಿಗಳಿಗೆ ಬರುತ್ತಿಲ್ಲ. ವ್ಯಾಪಾರ ತುಂಬಾ ಕಡಿಮೆಯಾಗಿದೆ. ಆದಷ್ಟು ಬೇಗ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ವ್ಯಾಪಾರಿ ಮಹಮ್ಮದ್ ಅಲಿ ಆಗ್ರಹಿಸಿದರು.

**ಕಾಂಕ್ರೀಟೀಕರಣವಾದಾಗ ಸಮಸ್ಯೆ ಇತ್ಯರ್ಥ**

**ವೈಟ್ ಟಾಪಿಂಗ್ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಒಳಚರಂಡಿ ಕೊಳವೆ ಅಳವಡಿಕೆ ಮಳೆನೀರಿನ ಚರಂಡಿ ನಿರ್ಮಾಣ ಸಹಿತ ಮೂಲ ಅವಶ್ಯಕತೆಗಳೊಂದಿಗೆ ಕಾಮಗಾರಿ ನಡೆಸಬೇಕಿರುವುದರಿಂದ ಸ್ವಲ್ಪ ಹೆಚ್ಚು ಸಮಯ ಹಿಡಿಯುತ್ತದೆ. ಕಾಂಕ್ರೀಟೀಕರಣವಾದಾಗ ಸಮಸ್ಯೆ ಪರಿಹಾರಗೊಳ್ಳಲಿದೆ ಎಂದು ಬಿಬಿಎಂಪಿ ಅಧಿಕಾರಿಗಳು ತಿಳಿಸಿದರು.**

**ಒಂದು ವಾಹನ ಕೆಸರಲ್ಲಿ ಸಿಲುಕಿ ಜಾರಿಹೋಗಿ ಪಲ್ಟಿಯಾಗಿತ್ತು. ಒಳಚರಂಡಿಗಾಗಿ ಇಲ್ಲಿ ಅಗೆದು ಸರಿಯಾಗಿ ಮುಚ್ಚದೇ ಹೋಗಿದ್ದಾರೆ. ಅರೆಬರೆ ತುಂಬಿಸಿದ್ದ ಮಣ್ಣು ಮಳೆಗೆ ಕೆಸರಿನಂತಾಗಿದೆ. ಅದರಲ್ಲಿ ವಾಹನಗಳು ಸಿಲುಕಿಕೊಳ್ಳುತ್ತಿವೆ ಎಂದು ಸರಕುಗಳ ಸಾಗಾಟ ವ್ಯವಹಾರ ನಡೆಸುವ ಇಬ್ರಾಹಿಂ ತಿಳಿಸಿದರು.**

## ಮೇಲ್ಸೇತುವೆ ಕೆಳಭಾಗದ ತಡೆಗೋಡೆ ಕುಸಿತ: ವಾಹನ ಸಂಚಾರ ಸ್ಥಗಿತ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೊಳ್ಳೇಗಾಲ

ತಾಲ್ಲೂಕಿನ ಉತ್ತಂಬಳ್ಳಿ ಬಳಿ ಹಾದುಹೋಗಿರುವ ರಾಷ್ಟ್ರೀಯ ಹೆದ್ದಾರಿ-948ರ ಮೇಲ್ಸೇತುವೆ ಕೆಳಭಾಗದ ತಡೆಗೋಡೆ ಭಾನುವಾರ ಕುಸಿದಿದೆ. ಪರಿಣಾಮ ವಾಹನಗಳ ಸಂಚಾರವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಬದಲಿ ಮಾರ್ಗದಲ್ಲಿ ಸಂಚರಿಸುವಂತೆ ತಿಳಿಸಲಾಗಿದೆ. ಈ ಹೆದ್ದಾರಿಯು ಬೆಂಗಳೂರು, ಮೈಸೂರು, ತಮಿಳುನಾಡಿಗೆ ಸಂಪರ್ಕ ಕಲ್ಪಿಸುತ್ತದೆ. ಬೆಳಿಗ್ಗೆ 10.55ರ ವೇಳೆಗೆ ಕುಸಿಯಿತು. ಸಂಚಾರ ನಿರ್ಬಂಧಿಸಿ ರಸ್ತೆಗೆ ಅಡ್ಡಲಾಗಿ ಹಗ್ಗ ಕಟ್ಟಿ ಎಚ್ಚರಿಕೆ ಫಲಕ ಅಳವಡಿಸಲಾಯಿತು.

ಕಾಮಗಾರಿ ಮುಗಿದು ಆರು ತಿಂಗಳಲ್ಲೇ ತಡೆಗೋಡೆ ಭಾಗ ಕುಸಿದಿದ್ದು, ಕಳಪೆ ಕಾಮಗಾರಿ, ಮಣ್ಣು ಬಳಕೆ ಇದಕ್ಕೆ ಕಾರಣವಾಗಿದೆ. ತನಿಖೆ ನಡೆಸಬೇಕು ಎಂದು ರೈತ ಮುಖಂಡ ಮಹೇಶ್ ಕುಮಾರ್ ಒತ್ತಾಯಿಸಿದ್ದಾರೆ. ಶಾಸಕ ಎ.ಆರ್.ಕೃಷ್ಣಮೂರ್ತಿ ಸ್ಥಳಕ್ಕೆ ಭೇಟಿ ನೀಡಿದ್ದು, ಗುತ್ತಿಗೆದಾರರು, ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಿ ಸೇತುವೆ ಪುನರ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗೆ ಒತ್ತಾಯಿಸಿದರು.

## ಒಂದು ಧರ್ಮವನ್ನ ಹೊರಗಿಟ್ಟು ದಸರಾ ಮಾಡಲು ಸಾಧ್ಯನಾ?

### ಮಿರ್ಜಾ ಇಸ್ಮಾಯಿಲ್, ನಿಸಾರ್ ಅಹ್ಮದ್ ದಸರಾ ಉದ್ಘಾಟನೆ ಮಾಡಿಲ್ವಾ? ವಿವಾದಕ್ಕೆ ಪರಮೇಶ್ವರ್ ಉತ್ತರ

• ಉದಯವಾಹಿನಿ, ಮೈಸೂರು

ದಸರಾ ಉದ್ಘಾಟನೆಗೆ ಸಾಹಿತಿ ಬಾನು ಮುಷ್ತಾಕ್ ಹೇಗೆ ಸೂಕ್ತ ವ್ಯಕ್ತಿಯಾಗುತ್ತಾರೆ? ದಸರಾ ಜಾತ್ಯತೀತತೆಯ ಪ್ರತೀಕ ಅಲ್ಲ. ಇದು ಧಾರ್ಮಿಕ ಆಚರಣೆ. ದುರ್ಗಾ ಪೂಜೆ, ನವರಾತ್ರಿ ಉತ್ಸವ ಇರುತ್ತದೆ. ಯದುವಂಶದವರು ಆರಂಭಿಸಿದ ಧಾರ್ಮಿಕ ಹಬ್ಬವಿದು. ಇಂತಹ ದಸರಾ ಉದ್ಘಾಟನೆಗೆ ಧಾರ್ಮಿಕ ನಂಬಿಕೆ ಇಲ್ಲದವರು ಹೇಗೆ ಸೂಕ್ತ ವ್ಯಕ್ತಿಯಾಗುತ್ತಾರೆ ಎನ್ನುವ ಪ್ರಶ್ನೆ ಸಾರ್ವಜನಿಕ ವಲಯದಿಂದ ಕೇಳಿ ಬರುತ್ತಿದೆ. ಈ ಬಗ್ಗೆ ಚರ್ಚೆಯಾಗುತ್ತಿರುವ ಹೊತ್ತಿನಲ್ಲೇ ಈ ವಿಚಾರವಾಗಿ ಗೃಹ ಸಚಿವ ಡಾ. ಪರಮೇಶ್ವರ್ ಪ್ರತಿಕ್ರಿಯಿಸಿದ್ದಾರೆ.

**ದಸರಾ ಉದ್ಘಾಟಕರಿಗೆ ತಕರಾರು ವಿಚಾರ:** ದಸರಾ ನಾಡ ಹಬ್ಬ. ಯಾವ ಜಾತಿಗೆ ಧರ್ಮಕ್ಕೆ ಸೀಮಿತ ಅಲ್ಲ. ಒಂದು ಧರ್ಮವನ್ನ ಹೊರಗಿಟ್ಟು ದಸರಾ ಮಾಡಲು ಸಾಧ್ಯನಾ? ಮಿರ್ಜಾ ಇಸ್ಮಾಯಿಲ್ ದಿವಾನರಾಗಿ ದಸರಾ ಮಾಡಿಲ್ವಾ? ನಿಸ್ಸಾರ್ ಅಹಮದ್ ದಸರಾ ಉದ್ಘಾಟನೆ ಮಾಡಿಲ್ವಾ? ಇದಕ್ಕೆಲ್ಲಾ ತಕರಾರು ತೆಗೆಯಬಾರದು. ಚಾಮುಂಡಿತಾಯಿ ನಂಬುತ್ತಾರೆ ಬಿಡುತ್ತಾರೆ ಅದು ಅವರಿಗೆ ಸೇರಿದ್ದು.

ಇದು ಊರ ಹಬ್ಬ ಎಲ್ಲರೂ ಸೇರಿಯೇ ಮಾಡಬೇಕು ಎಂದರು. ಧರ್ಮಸ್ಥಳ ವಿಚಾರವಾಗಿ ಮೈಸೂರಿನಲ್ಲಿ ಗೃಹ ಸಚಿವ ಡಾ. ಜಿ ಪರಮೇಶ್ವರ್ ಪ್ರತಿಕ್ರಿಯಿಸಿದ್ದಾರೆ. ಹೀಗೆ ತನಿಖೆ ಮಾಡಿ, ಹಾಗೆ ತನಿಖೆ ಮಾಡಿ ಎಂದು ಹೇಳಲು ನಾವು ಯಾರು? ತನಿಖೆಗೆ ಏನು ಅವಶ್ಯಕತೆ ಇದೆಯೋ ಅದನ್ನ ಪೊಲೀಸರು ಮಾಡುತ್ತಾರೆ. ಮಂಪರು ಪರೀಕ್ಷೆ ಬೇಕೊ ಬೇಡವೊ ಎಂಬುದನ್ನ ನಾನು ನಿರ್ಧಾರ ಮಾಡಲು ಸಾಧ್ಯವಿಲ್ಲ.



> **ಮೈಸೂರು ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಅವರ ಆಯ್ಕೆಗೆ ಸಾರ್ವಜನಿಕ ವಲಯದಲ್ಲಿ ಪ್ರಶ್ನೆಗಳು ಎದ್ದಿವೆ. ಇದು ಧಾರ್ಮಿಕ ಆಚರಣೆಯಾಗಿದ್ದು, ಧಾರ್ಮಿಕ ನಂಬಿಕೆ ಇಲ್ಲದವರು ಹೇಗೆ ಸೂಕ್ತವಾಗುತ್ತಾರೆ ಎಂಬುದು ಚರ್ಚೆಯ ವಿಷಯವಾಗಿದೆ. ಗೃಹ ಸಚಿವ ಡಾ. ಪರಮೇಶ್ವರ್ ಪ್ರತಿಕ್ರಿಯಿಸಿ, ದಸರಾ ಜಾತ್ಯತೀತ ಹಬ್ಬವೆಂದರು. ಧರ್ಮಸ್ಥಳ ವಿಚಾರವಾಗಿ ತನಿಖೆ ನಡೆಯುತ್ತಿದೆ. ಸಾರಾ ಮಹೇಶ್ ಆರೋಪದ ಬಗ್ಗೆಯೂ ತನಿಖೆ ನಡೆಸಲು ಸಿದ್ಧ ಎಂದಿದ್ದಾರೆ.**

ಎಸ್ಐಟಿ ಸರಿಯಾಗಿ ತನಿಖೆ ಮಾಡುತ್ತಿದೆ. ಪ್ರಕರಣವನ್ನ ಎನ್ಐಎಗೆ ವಹಿಸುವ ಅಗತ್ಯ ಇಲ್ಲ. ಹೇಳಿಕೆಗಳಿಂದ ಸತ್ಯ ಹೊರಬರುವುದಿಲ್ಲ. ಮೊದಲು ಹೇಳಿಕೆಗಳನ್ನ ಕೊಡುವುದನ್ನು ನಿಲ್ಲಿಸಿ. ತನಿಖೆಗೆ ಸಮಯವನ್ನ ನಿಗದಿ ಮಾಡಲು ಸಾಧ್ಯವಿಲ್ಲ. ಇಷ್ಟೇ ಅವಧಿಯಲ್ಲಿ ತನಿಖೆ ಮಾಡಿ ಎಂದು ಹೇಳಲು ಹೇಗೆ ಸಾಧ್ಯ. ಆದಷ್ಟು ಬೇಗ ತನಿಖೆ ಮುಗಿಸಿ ಎಂದು ಹೇಳಿದ್ದೇನೆ ಎಂದರು.

ಧರ್ಮಸ್ಥಳಕ್ಕೆ ರ್‍ಯಾಲಿಗಳ ವಿಚಾರವಾಗಿ ಅವರೆಲ್ಲಾ ಮಂಜುನಾಥನ ದರ್ಶನ ಮಾಡಲು ಹೋಗುತ್ತಿರಬೇಕು ಹೋಗಲಿ ಬಿಡಿ. ಮಂಜುನಾಥನ ದರ್ಶನಕ್ಕೆ ಹೋಗುವವರನ್ನ ತಡೆಯಲು ಸಾಧ್ಯನಾ? ಪ್ರಕರಣವನ್ನ ಯಾರು ರಾಜಕೀಯ ಮಾಡಬೇಡಿ ಎಂಬುದೇ ನನ್ನ ಮನವಿ ಎಂದರು.

ಆರ್‌ಎಸ್‌ಎಸ್ ವಿಚಾರದಲ್ಲಿ ಡಿ.ಕೆ ಶಿವಕುಮಾರ್ ಹೇಳಿಕೆ ವಿಚಾರದ ಬಗ್ಗೆ ರಾಜಣ್ಣ ಹೇಳಿಕೆಯ ಬಗ್ಗೆ ನಾನು ಯಾವ ಹೇಳಿಕೆಯನ್ನ ನೀಡುವುದಿಲ್ಲ ಎಂದರು. ಗೃಹ ಇಲಾಖೆಯಲ್ಲಿ ಲಂಚ ಅವತಾರ ಎಂಬ ಸಾರಾ ಮಹೇಶ್ ಆರೋಪ ವಿಚಾರವಾಗಿ, ಸಾರಾ ಮಹೇಶ್ ಮಂತ್ರಿ ಆಗಿದ್ದವರು. ಜವಾಬ್ದಾರಿಯುತ ಮುಖಂಡರು. ಯಾರು ಹಣ ಪಡೆದ್ರೂ, ಯಾರು ಕೊಟ್ರು? ಎಂಬುದನ್ನು ದೂರು ಕೊಟ್ರೆ ತನಿಖೆ ಮಾಡಿಸುತ್ತೇವೆ. ಲಂಚ ಕೊಡುವ ಬಗ್ಗೆ, ಕೊಟ್ಟಿರುವ ಬಗ್ಗೆ ಗೊತ್ತಿದ್ರೆ ರೈಟಿಂಗ್ ಅಲ್ಲಿ ಕೊಡಲಿ. ತನಿಖೆ ಮಾಡಿಸುವೆ ಎಂದರು.

### ಅರಣ್ಯ ಇಲಾಖೆಯು ವಶಕ್ಕೆ ಪಡೆದು ಗಿಡ ನೆಡಲು ತೋಡಿದ್ದ ಗುಂಡಿ ಮುಚ್ಚಿ ರೈತರ ಆಕ್ರೋಶ

## ಒತ್ತುವರಿ ತೆರವು ಜಮೀನಿಗೆ ರೈತರ ಲಗ್ಗೆ

• ಉದಯವಾಹಿನಿ, ಕೋಲಾರ

ತಾಲ್ಲೂಕಿನ ಹರಟಿ ಬಳಿ ಅರಣ್ಯ ಪ್ರದೇಶದ ನೂರಾರು ಎಕರೆ ಜಮೀನು ಒತ್ತುವರಿಯಾಗಿದೆ ಎಂದು ಇಲಾಖೆಯವರು ತೆರವು ಮಾಡಿ ಗಿಡಗಳನ್ನು ನೆಡಲು ತೆಗೆದಿದ್ದ ಗುಂಡಿಗಳನ್ನು ರೈತರು ಹಾಗೂ ಮಹಿಳೆಯರ ಭಾನುವಾರ ಮುಚ್ಚಿದ್ದಾರೆ. ಈ ಪ್ರದೇಶದೊಳಗೆ ಏಕಾಏಕಿ ಪ್ರವೇಶಿಸಿ, ಯಾವುದೇ ಜಂಟಿ ಸರ್ವೇ ಮಾಡದೆ ಏಕಾಏಕಿ ನಮ್ಮ ಜಮೀನುಗಳನ್ನು ಅರಣ್ಯ ಇಲಾಖೆಯವರು ವಶಕ್ಕೆ ಪಡೆದುಕೊಂಡಿದ್ದಾರೆ. ನಮ್ಮ ಪ್ರಾಣ ಹೋದರೂ ಜಮೀನು ಬಿಡಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದರು. ಅರಣ್ಯ ಅಧಿಕಾರಿಗಳಿಗೆ ಧಿಕ್ಕಾರ ಕೂಗಿದರು. ಅನ್ನ ಕೊಡುವ ರೈತ, ನಮ್ಮ ಭೂಮಿ ನಮ್ಮ ಹಕ್ಕು ಎಂದು ಜೈ ಹಾಕಿದರು.

ಇವರಿಗೆ ಆಮ್ ಆದ್ಮ ಪಕ್ಷದ ಜಿಲ್ಲಾಧ್ಯಕ್ಷ ವೆಂಕಟಾಚಲಪತಿ, ಕಾರ್ಯಕರ್ತರು ಬೆಂಬಲವಾಗಿ ನಿಂತರು. ಈ ವೇಳೆ ಸ್ಥಳಕ್ಕೆ ಬಂದ ಕೋಲಾರ ಗ್ರಾಮಾಂತರ ಠಾಣಾ ಪೊಲೀಸರು ರೈತರನ್ನು ತಡೆಯಲು ಮುಂದಾದರು. ಗಿಡಗಳನ್ನು ನೆಡಲು ಅರಣ್ಯ ಇಲಾಖೆ ತೆಗೆದಿದ್ದ ಗುಂಡಿ ಗಳನ್ನು ಮುಚ್ಚುವಾಗ ಅರಣ್ಯ ಇಲಾಖೆ ಸಿಬ್ಬಂದಿ, ಪೊಲೀಸರು, ರೈತರ ನಡುವೆ ಮಾತಿನ ಚಕಮಕಿ ನಡೆಯಿತು. ಹೀಗಾಗಿ, ಪ್ರಕ್ಷುಬ್ಧ ವಾತಾವರಣ ನಿರ್ಮಾಣವಾಯಿತು. ತಮ್ಮ ಬಳಿ ದಾಖಲೆಗಳಿವೆ, ತಮ್ಮ ಭೂಮಿಯನ್ನು ತಮಗೆ ಬಿಟ್ಟುಕೊಡಿ ಎಂದು ರೈತರು ಆಗ್ರಹಿಸಿದರು.

ಪ್ರತಿಭಟನಕಾರರು ಅರಣ್ಯ ಇಲಾಖೆ ವಿರುದ್ಧ ಘೋಷಣೆ ಕೂಗಿ ಅಲ್ಲೇ ಅಡುಗೆ ಮಾಡಲಾರಂಭಿಸಿದರು. 20 ಲಕ್ಷ ಖರ್ಚು ಮಾಡಿ ಕಾಂಪೌಂಡ್, ಕೊಳವೆಬಾವಿ ಹಾಕಿ ಪಾಲಿ ಹೌಸ್ ನಿರ್ಮಿಸಿದ್ದೆವು. ಒಡವೆ ಇಟ್ಟು ಮತ್ತೆ 5 ಲಕ್ಷ ಸಾಲ ಮಾಡಿದ್ದೆ. ಬೆಳೆ ಬೆಳೆಯಲು ಬಿಡಿ ಎಂದು ಅರಣ್ಯ ಇಲಾಖೆಯವರನ್ನು ಕೋರಿದ್ದೆ. ಆದರೆ, ಪಾಲಿ ಹೌಸ್ ಒಡೆದು ಹಾಕಿದ್ದಾರೆ. ಸಾಲ ತೀರಿಸುವುದಾದರೂ ಹೇಗೆ? ಬಡ್ಡಿ ಕಟ್ಟಲು ಹಣವಿಲ್ಲದಂತಾಗಿದೆ. ಹಲವಾರು ವರ್ಷಗಳಿಂದ ಈ ಜಮೀನು ನಮ್ಮ ಸುಪರ್ದಿಯಲ್ಲಿದ್ದು, ದುರಸ್ತಿಯಾಗಿದೆ ಎಂದು ರೈತ ಮಹಿಳೆಯೊಬ್ಬರು ಆಕ್ರೋಶ ವ್ಯಕ್ತಪಡಿಸಿದರು. ಜಮೀನಿಗೆ ಸಂಬಂಧಿಸಿದಂತೆ ನಮ್ಮ ಬಳಿ ದಾಖಲೆಗಳಿವೆ. ತಾಕತ್ತಿದ್ದರೆ ಅರಣ್ಯ ಇಲಾಖೆಯವರು ತಮ್ಮ ದಾಖಲಿ ತೋರಿಸಲಿ ನೋಡೋಣ ಎಂದು ರೈತರು ಸವಾಲು ಹಾಕಿದರು.


ಉದಯವಾಹಿನಿ ಚಿತ್ರ

ತಾಲ್ಲೂಕಿನ ಎಚ್.ಮಲ್ಲಂಡಹಳ್ಳಿ, ಹರಟಿ, ಶಿಳ್ಳಂಗೆರೆ ಅರಣ್ಯ ಪ್ರದೇಶದಲ್ಲಿ ಒತ್ತುವರಿಯಾಗಿದೆ ಎನ್ನಲಾಗಿದ್ದ ಸುಮಾರು 343 ಎಕರೆ ಭೂಮಿಯನ್ನು ಅರಣ್ಯ ಇಲಾಖೆಯು ಕಾರ್ಯಾಚರಣೆ ನಡೆಸಿ ತೆರವು ಮಾಡಿತ್ತು. ಒತ್ತುವರಿ ಪ್ರದೇಶದಲ್ಲಿದ್ದ ರೈತರ ಬೆಳೆ, ಕೆಲವೊಂದು ಕಟ್ಟಡಗಳು ತೆರವು ಮಾಡಿ ಅರಣ್ಯ ಇಲಾಖೆಯು ಟ್ರೆಂಚ್ ಮಾಡಿ ತೆರವು ಮಾಡಿದ ಜಾಗದಲ್ಲಿ ಗಿಡಗಳನ್ನು ನೆಡುವ ಸಲುವಾಗಿ ಗುಂಡಿ ತೆಗೆಯಲಾಗಿತ್ತು. ಎಚ್.ಮಲ್ಲಂಡಹಳ್ಳಿ ಹಾಗೂ ಹರಟಿ, ಶಿಳ್ಳಂಗೆರೆ ಗ್ರಾಮದ ಸರ್ವೆ ನಂ 31ರಲ್ಲಿ ಅರಣ್ಯ ಇಲಾಖೆಗೆ ಸೇರಿದ 934 ಎಕರೆ ಭೂಮಿ ಇದೆ. ಅದರಲ್ಲಿ ಕಂದಾಯ ಇಲಾಖೆ 343 ಎಕರೆ ಭೂಮಿಯನ್ನು ಭೂರಹಿತ ರೈತರಿಗೆ ದರ್ಖಾಸ್ತು ಮೂಲಕ ಮಂಜೂರು ಮಾಡಿದೆ. ಇನ್ನ ಉಳಿಕೆ 616 ಎಕರೆ ಭೂಮಿ ಮಾತ್ರ ಅರಣ್ಯ ಇಲಾಖೆಯ ಸುಪರ್ದಿಯಲ್ಲಿದೆ. ಹಲವು ವರ್ಷಗಳಿಂದ ನೂರಾರು ರೈತರಿಗೆ ಭೂಮಿ ಮಂಜೂರು ಮಾಡಲಾಗಿದೆ. ಈ ಪ್ರದೇಶದಲ್ಲಿ ರೈತರು ಸ್ವಾಧೀನದಲ್ಲಿದ್ದು, ಅವರ ಹೆಸರಲ್ಲಿ ದಾಖಲೆ ಪತ್ರಗಳು ಬರುತ್ತಿವೆ.

ಆದರೆ, ಅರಣ್ಯ ಇಲಾಖೆಯವರು ಈ ಜಾಗ ಮೈಸೂರು ಅರಸರ ಕಾಲದಿಂದಲೂ ಇಲಾಖೆಗೆ ಸೇರಿದ್ದು, ನೋಟಿಫೈಡ್ ಫಾರೆಸ್ಟ್ ಎಂದು ಹೇಳಿ ಒತ್ತುವರಿಯಾಗಿದ್ದ 343 ಎಕರೆ ಭೂಮಿಯನ್ನು ಎರಡು ತಿಂಗಳ ಹಿಂದೆ ಪೊಲೀಸ್ ಬಂದೋಬಸ್ತ್‌ನಲ್ಲಿ ತೆರವು ಕಾರ್ಯಾಚರಣೆ ಮಾಡಿದ್ದರು. ಈಗಿರುವಾಗಲೇ ಈಚೆಗೆ ಉಸ್ತುವಾರಿ ಸಚಿವ ಭೈರತಿ ಸುರೇಶ್ ಅವರ ಅಧ್ಯಕ್ಷತೆಯಲ್ಲಿ ನಡೆದ ಕೆಡಿಪಿ ಸಭೆಯಲ್ಲೂ ಇದೇ ವಿಚಾರ ಬಾರಿ ಚರ್ಚೆಗೆ ಗ್ರಾಸವಾಗಿತ್ತು. ದಿಶಾ ಸಭೆಯಲ್ಲೂ ಸುದೀರ್ಘ ಚರ್ಚೆ ನಡೆದಿತ್ತು. ಈ ವೇಳೆ ಶಾಸಕರು ಅರಣ್ಯ ಇಲಾಖೆ ಒತ್ತುವರಿ ತೆರವು ಕಾರ್ಯಾಚರಣೆ ವಿರುದ್ಧ ಆಕ್ರೋಶ ಹೊರ ಹಾಕಿದ್ದರು. ಇದಾದ ನಂತರ ರೈತರು ಜನಪ್ರತಿನಿಧಿಗಳು ಬೆಂಬಲವಿದೆ ಎಂದು ಭಾವಿಸಿ ರೈತರು ಏಕಾಏಕಿ ಅರಣ್ಯ ಇಲಾಖೆ ತೆರವು ಮಾಡಿದ್ದ ಪ್ರದೇಶಕ್ಕೆ ಪ್ರವೇಶಿಸಿದ್ದಾರೆ. ಈ ವೇಳೆ ಅರಣ್ಯ ಇಲಾಖೆ ಸಿಬ್ಬಂದಿ ಹಾಗೂ ರೈತರ ನಡುವೆ ಮಾತಿನ ಚಕಮಕಿ ನಡೆದಿದೆ. ಸದ್ಯ ಪೊಲೀಸರು ರೈತರನ್ನು ವಾಪಸ್ ಕಳಿಸಿದ್ದಾರೆ. ಆದರೆ, ಈ ರೀತಿ ಅತಿಅಕ್ರಮ ಪ್ರವೇಶವನ್ನು ಸಹಿಸುವುದಿಲ್ಲ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ಹೇಳಿದ್ದಾರೆ.

> **ಕೋಲಾರ ಜಿಲ್ಲೆಯಲ್ಲಿ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಿ 3 ಸಾವಿರ ಎಕರೆ ಜಮೀನು ವಶಕ್ಕೆ ಪಡೆದುಕೊಂಡಿದ್ದೇವೆ. ಇನ್ನೂ 8 ಸಾವಿರ ಎಕರೆ ತೆರವುಗೊಳಿಸಬೇಕಿದೆ. ಆ.30ಕ್ಕೆ ಜಂಟಿ ಸರ್ವೆ ನಡೆಸುತ್ತೇವೆ**
>
> –ಸರೀನಾ ಸಿಕ್ಕಲಿಗಾರ್ ಡಿಸಿಎಫ್

> **ಪಹಣಿಯಲ್ಲಿ ನಮ್ಮ ಹೆಸರಿನಲ್ಲಿ ಈ ಜಮೀನು ಇದ್ದು ಉಳುಮೆ ಮಾಡುತ್ತೇವೆ ಅರಣ್ಯ ಇಲಾಖೆ ಅಧಿಕಾರಿಗಳು ಅಕ್ರಮವಾಗಿ ನಮ್ಮ ಜಮೀನನ್ನು ವಶಕ್ಕೆ ಪಡೆದುಕೊಂಡಿದ್ದಾರೆ**
>
> ಹರಟಿ ಭಾಗದ ರೈತರು

## ಹಳ್ಳ ಹಿಡಿದ ಮುಡಾ ನಿವೇಶನ ಅಕ್ರಮ ಹಂಚಿಕೆ ಪ್ರಕರಣ: ರಘು ಆರೋಪ

• ಉದಯವಾಹಿನಿ, ಮೈಸೂರು:

ಮುಡಾದಲ್ಲಿ ನಡೆದಿರುವ ನಿವೇಶನಗಳ ಅಕ್ರಮ ಹಂಚಿಕೆ ಪ್ರಕರಣವನ್ನು ಹಳ್ಳ ಹಿಡಿಸಲಾಗಿದೆ ಎಂದು ಬಿಜೆಪಿ ರಾಜ್ಯ ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷ ಆರ್. ರಘು ದೂರಿದರು. ಇಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಶೇ 50:50ರ ಅನುಪಾತದ ನಿವೇಶನಗಳ ಹಗರಣ ರಾಜ್ಯ ಕಂಡ ಬಹುದೊಡ್ಡ ಭ್ರಷ್ಟಾಚಾರ, ಲೂಟಿಕೋರತನದ್ದಾಗಿದೆ. ಬರೋಬ್ಬರಿ 5ಸಾವಿರ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ಎಂಬ ಆರೋಪದ ಪ್ರಕರಣವಿದು. ಇದರ ತನಿಖೆ ಬಗ್ಗೆ ಸರ್ಕಾರ ಸಾರ್ವಜನಿಕರಿಗೆ ಮಾಹಿತಿ ನೀಡಬೇಕು' ಎಂದು ಒತ್ತಾಯಿಸಿದರು. ನಿವೇಶನ ರಹಿತರಿಗೆ ಸಿಗಬೇಕಾದ ನಿವೇಶನಗಳನ್ನು, ಹಿಂದಿನ ಇಬ್ಬರು ಮುಡಾ ಆಯುಕ್ತರು, ಅಧಿಕಾರಿಗಳು ಕಾನೂನನ್ನು ಗಾಳಿಗೆ ತೂರಿ ವ್ಯವಸ್ಥಿತ ಜಾಲ ರೂಪಿಸಿಕೊಂಡು ಅಕ್ರಮವಾಗಿ ಮಾರಿ ಲೂಟಿ ಮಾಡಿದ್ದಾರೆ. ಪ್ರಾಧಿಕಾರಕ್ಕೆ ಸಾವಿರಾರು ಕೋಟಿ ರೂಪಾಯಿ ನಷ್ಟವಾಗಿದೆ. ಹಗರಣದ ತನಿಖೆಯ ಕುರಿತು ಮಾಹಿತಿ ನೀಡದಿರುವುದು ಅನುಮಾನಗಳಿಗೆ ಕಾರಣವಾಗಿದೆ ಎಂದು ದೂರಿದರು.


ಉದಯವಾಹಿನಿ ಚಿತ್ರ

**ಅನುಮಾನ:** ಈಚೆಗೆ ನಡೆದ ಇ-ಹರಾಜಿನಲ್ಲಿ ಕೇವಲ 200 ನಿವೇಶನಗಳು 100 ಕೋಟಿಗೂ ಹೆಚ್ಚು ಮೊತ್ತಕ್ಕೆ ಮಾರಾಟವಾಗಿವೆ. 20X30 ಅಡಿಯ ನಿವೇಶನವೊಂದು 2 ಕೋಟಿವರೆಗೆ, 50X80 ನಿವೇಶನ 9 ಕೋಟಿವರೆಗೆ ಇ-ಹರಾಜಿನಲ್ಲಿ ಮಾರಾಟವಾಗಿದೆ. ಮಾರುಕಟ್ಟೆ ದರಕ್ಕಿಂತ ಹೆಚ್ಚು ಬೆಲೆಗೆ ಖರೀದಿ ಆಗಿರುವುದನ್ನು ಗಮನಿಸಿದರೆ, ಈ ಪ್ರಕ್ರಿಯೆಯ ಹಿಂದೆ ಮೈಸೂರಿನ ರಿಯಲ್ ಎಸ್ಟೇಟ್ ಉದ್ಯಮಕ್ಕೆ ಚೈತನ್ಯ ನೀಡುವ ಪ್ರಯತ್ನವಿರಬಹುದು ಎಂಬ ಅನುಮಾನ ವ್ಯಕ್ತವಾಗುತ್ತಿದೆ ಎಂದು ಆರೋಪಿಸಿದರು. ಜಾರಿ ನಿರ್ದೇಶನಾಲಯ (ಇಡಿ) ಶೇ 50:50 ಅನುಪಾತದ ನಿವೇಶನಗಳನ್ನು ನೋಂದಣಿ ಮಾಡದಂತೆ ಉಪ ನೋಂದಣಾಧಿಕಾರಿಗಳಿಗೆ ಸೂಚಿಸಿದೆ. ಆದರೆ, ಎಂಡಿಎ ಯಾವುದೇ ಕ್ರಮ ಜರುಗಿಸುತ್ತಿಲ್ಲ. ನ್ಯಾಯಮೂರ್ತಿ ದೇಸಾಯಿ ಆಯೋಗ ನೀಡಿದ ವರದಿಯಲ್ಲೇನಿದೆ ಎಂಬುದನ್ನೂ ಬಹಿರಂಗಪಡಿಸಿಲ್ಲ. ಲೋಕಾಯುಕ್ತ ತನಿಖೆ ಹಾಗೂ ಜನಪ್ರತಿನಿಧಿ ನ್ಯಾಯಾಲಯದಲ್ಲಿ ವಿಚಾರಣೆ ನಡೆಯುತ್ತಿದೆಯಾದರೂ ಮುಖ್ಯಮಂತ್ರಿಯವರ ಕುಟುಂಬದ 14 ನಿವೇಶನಗಳತ್ತಲೇ ವಿಷಯ ಕೇಂದ್ರೀಕೃತವಾಗಿದೆಯೇ ಹೊರತು, ಲೂಟಿಯಾದ ಉಳಿದ ನಿವೇಶನಗಳನ್ನು ರಕ್ಷಿಸುವಲ್ಲಿ ಸರ್ಕಾರ ಕ್ರಮ ಕೈಗೊಂಡಂತೆ ಕಾಣಿಸುತ್ತಿಲ್ಲ ಎಂದು ದೂರಿದರು.

## ಟ್ರ್ಯಾಕ್ಟರ್‌ನಲ್ಲೇ ಒಣಗುತ್ತಿರುವ ಕಬ್ಬು ಸಮರ್ಪಕವಾಗಿ ನುರಿಸಲು ರೈತಸಂಘ ಆಗ್ರಹ

• ಉದಯವಾಹಿನಿ, ಮಂಡ್ಯ

ಕಟಾವು ಮಾಡಿಕೊಂಡು ಮೈಷುಗರ್ ಕಾರ್ಖಾನೆಗೆ ತಂದಿರುವ ಕಬ್ಬು ಒಣಗುತ್ತಿರುವ ಹಿನ್ನೆಲೆಯಲ್ಲಿ ಕಾರ್ಖಾನೆಯಲ್ಲಿ ಸಮರ್ಪಕವಾಗಿ ಕಬ್ಬು ನುರಿಸಬೇಕು ಎಂದು ಆಗ್ರಹಿಸಿ ಮಂಡ್ಯ ಜಿಲ್ಲಾ ರೈತ ಹಿತರಕ್ಷಣಾ ಸಮಿತಿ ಮತ್ತು ಕನ್ನಡ ಪರ ಸಂಘಟನೆಯ ಕಾರ್ಯಕರ್ತರು ಮೈಷುಗರ್ ಕಾರ್ಖಾನೆ ಆವರಣದಲ್ಲಿ ಸೋಮವಾರ ಪ್ರತಿಭಟನೆ ನಡೆಸಿದರು.

ನಗರದ ಮೈಷುಗರ್ ಕಾರ್ಖಾನೆ ಆವರಣದಲ್ಲಿ ಜಮಾವಣೆಗೊಂಡ ಕಾರ್ಯಕರ್ತರು ಅಧ್ಯಕ್ಷರು ಮತ್ತು ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕಾರ್ಖಾನೆಯನ್ನು ಸ್ಥಗಿತಗೊಳಿಸಿದರೆ ಕಟಾವು, ಸಾಗಾಣಿಕೆ ಕಾರ್ಮಿಕರು ಮತ್ತೆ ಮರಳಿ ಬರುವ ನಿರೀಕ್ಷೆಯಿಲ್ಲ. ಏಕೆಂದರೆ ಕೂಲಿ ಕಾರ್ಮಿಕರಿಗೆ ಸರಿಯಾದ ಸೌಲಭ್ಯ ಸಿಗುತ್ತಿಲ್ಲ, ಕಾರ್ಖಾನೆ ಆವರಣದಲ್ಲಿರುವ ಎತ್ತುಗಳಿಗೆ ನೀರು ಕುಡಿಸುವ ತೊಟ್ಟಿಯಲ್ಲಿನ ನೀರನ್ನೇ ತಮ್ಮ ಅಡುಗೆ ಮಾಡಿಕೊಳ್ಳಲು, ಕೆಲಸಗಳಿಗೆ ಬಳಸಿ ಕೊಳ್ಳಬೇಕಾಗಿದೆ. ಇದನ್ನು ಸರಿಪಡಿಸಿ ಸಮಸ್ಯೆ ಬಗೆಹರಿಸಬೇಕು ಎಂದು ಆಗ್ರಹಿಸಿದರು.

ಟ್ರ್ಯಾಕ್ಟರ್ ಮತ್ತು ಎತ್ತಿನ ಗಾಡಿಗಳಲ್ಲಿ ತೆಗೆದು ಕೊಂಡು ಬಂದಿರುವ ಕಬ್ಬು ರಸ್ತೆಯಲ್ಲಿಯೇ ಒಣಗುತ್ತಿದೆ. ಅದು ಸಾಲದೆಂಬಂತೆ ಕಳೆದು ಮೂರು ನಾಲ್ಕು ದಿನಗಳಿಂದ ಸರತಿ ಸಾಲಿನಲ್ಲಿಯೇ ಕಬ್ಬು ತುಂಬಿರುವ ವಾಹನಗಳು ರಸ್ತೆ ಉದ್ದಕ್ಕೂ ನಿಂತಿರುವುದು ಬೇಸರ ತರಿಸಿದೆ. ಕಾರ್ಖಾನೆ ಒಳಗಡೆ ಏನು ಮಾಡುತ್ತಿದ್ದಾರೆ ಎನ್ನುವುದನ್ನು ರೈತರು ಪ್ರಶ್ನಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಕಾರ್ಮಿಕ ವಿರೋಧಿ ನೀತಿಗಳ ವಿರುದ್ಧ ಹೋರಾಟಕ್ಕೆ ಕರೆ

• ಉದಯವಾಹಿನಿ, ಮಡಿಕೇರಿ

ರೈತರು, ನೌಕರರು, ಕಾರ್ಮಿಕರ ಮೇಲೆ ದಾಳಿ ನಡೆಸುತ್ತಿರುವ ಕೇಂದ್ರ ಮತ್ತು ರಾಜ್ಯ ಸರ್ಕಾರದ ನೀತಿಗಳ ವಿರುದ್ಧ ನಾವು ಒಂದಾಗದಿದ್ದರೆ ಉಳಿಗಾಲ ಇಲ್ಲ ಎಂದು ಸಿಐಟಿಯು ಸಂಯೋಜಿತ ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ರಾಮಕೃಷ್ಣ ತಿಳಿಸಿದರು.

ಇಲ್ಲಿನ ಬಾಲಭವನದಲ್ಲಿ ನಡೆದ ಸಿಐಟಿಯು ಸಂಯೋಜಿತ ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘದ ಕೊಡಗು ಜಿಲ್ಲಾ ಸಮಿತಿಯ 5ನೇ ಹಕ್ಕೊತ್ತಾಯ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಮಿಕ ವಿರೋಧಿ ನೀತಿಗಳ ವಿರುದ್ಧ ನಾವೆಲ್ಲರೂ ನಾವು ಟೊಂಕ ಕಟ್ಟಲಿಲ್ಲ ಎಂದರೆ ಕಷ್ಟ. ಎಲ್ಲರೂ ಮೊದಲು ಉದಾರೀಕರಣ, ನವ ಉದಾರೀಕರಣ, ಖಾಸಗೀಕರಣ ಹಾಗೂ ಈಗ ಬರುತ್ತಿರುವ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಕುರಿತು ಅರಿವು ಪಡೆದುಕೊಳ್ಳಬೇಕು ಎಂದರು.

ಈಗ ಎಐ ತಂತ್ರಜ್ಞಾನ ಉತ್ಪಾದನೆ ಮತ್ತು ಸೇವಾ ರಂಗಕ್ಕೆ ಬಂದಿದೆ. ಈ ರಂಗದಲ್ಲಿ ಉದ್ಯೋಗ ಕಡಿತ ಆಗುತ್ತಿದೆ. ಪರಿಸ್ಥಿತಿ ಹೀಗಾದರೆ ನಾವು ಎಲ್ಲಿ ಹೋಗಬೇಕು? ಎಂದು ಪ್ರಶ್ನಿಸಿದ ಅವರು, ಹಾಗೆಂದು ನಾವು ತಂತ್ರಜ್ಞಾನ ವಿರೋಧಿಗಳಲ್ಲ. ತಂತ್ರಜ್ಞಾನ ನಮ್ಮ ಅನುಕೂಲಕ್ಕೆ ಬೇಕೇ ವಿನಃ ನಮ್ಮ ನಾಶಕ್ಕೆ ಅಲ್ಲ ಎಂದು ಪ್ರತಿಪಾದಿಸಿದರು.

## ಕಾಮಗಾರಿ ಪೂರ್ಣಕ್ಕೆ ಮಹಿಳೆಯರ ಪ್ರತಿಭಟನೆ

• ಉದಯವಾಹಿನಿ, ಸಂತೇಮರಹಳ್ಳಿ

ಹೋಬಳಿಗೆ ಸೇರಿದ ಕುದೇರು ಸಮೀಪವಿರುವ ಸ್ವಾಮಿ ವಿವೇಕಾನಂದ ಕಾಲೋನಿಯಲ್ಲಿ ಅಪೂರ್ಣಗೊಂಡಿರುವ ಕಾಮಗಾರಿ ಪೂರ್ಣಗೊಳಿಸಬೇಕೆಂದು ಒತ್ತಾಯಿಸಿ ಕಾಲೋನಿಯ ಮಹಿಳೆಯರು ಪ್ರತಿಭಟನೆ ನಡೆಸಿದರು. ಕಾಲೋನಿಯ ನಿವಾಸಿಗಳು ಕಾಮಗಾರಿ ಅಪೂರ್ಣಗೊಂಡಿರುವ ಸ್ಥಳದಲ್ಲಿ, ಕಾಮಗಾರಿ ನಿರ್ವಹಣೆ ಮಾಡಿರುವ ಅಧಿಕಾರಿಗಳ ವಿರುದ್ಧ ಧಿಕ್ಕಾರ ಕೂಗುತ್ತಾ ಆಕ್ರೋಶ ವ್ಯಕ್ತಪಡಿಸಿ, ಪ್ರತಿಭಟಿಸಿದರು.

ಕಾಲೊನಿಯಲ್ಲಿ 15ಕ್ಕೂ ಹೆಚ್ಚು ಕುಟುಂಬಗಳು ವಾಸವಾಗಿದ್ದು, ಇಲ್ಲಿರುವ ಕುಟುಂಬಗಳು ಹಂದಿಗಳನ್ನು ಸಾಕಿಕೊಂಡು ಜೀವನ ನಡೆಸುತ್ತಿದ್ದೇವೆ. ಕಾಲೋನಿಯಲ್ಲಿ ಮೂಲಸೌಲಭ್ಯವಿಲ್ಲದೆ ನಿವಾಸಿಗಳು ತೊಂದರೆ ಪಡುವ ಸ್ಥಿತಿ ನಿರ್ಮಾಣವಾಗಿದೆ ಎಂದು ಪ್ರತಿಭಟನಕಾರರು ಕಿಡಿಕಾರಿದರು. ಶಾಸಕ ಎ.ಆರ್.ಕೃಷ್ಣಮೂರ್ತಿ ಅವರು ಕಾಲೋನಿಗೆ ಮೂಲಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಎಸ್‌ಸಿಪಿ ಯೋಜನೆಯಡಿ 30 ಲಕ್ಷ ವೆಚ್ಚದಲ್ಲಿ ಕಾಂಕ್ರೀಟ್ ರಸ್ತೆ ಹಾಗೂ ಬಾಕ್ಸ್ ಚರಂಡಿ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದ್ದರು.


ಉದಯವಾಹಿನಿ ಚಿತ್ರ

ಕಾಮಗಾರಿ ನಿರ್ವಹಣೆ ಹೊಂದಿರುವ ನಿರ್ಮಿತಿ ಕೇಂದ್ರ, 6 ತಿಂಗಳ ಹಿಂದೆ ಕಾಲೋನಿಯಲ್ಲಿ ಬಾಕ್ಸ್ ಚರಂಡಿ, ಬೀದಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳಲ್ಲಿ ಡಕ್ ನಿರ್ಮಾಣ ಕಾಮಗಾರಿಯನ್ನು ಸಮರ್ಪಕವಾಗಿ ಮಾಡದೇ ಇರುವ ಪರಿಣಾಮ, ಮಳೆ ಬಂದಾಗ ಚರಂಡಿಯಲ್ಲಿ ನೀರು ಮುಂದೆ ಹೋಗದೆ ಮನೆಗಳ ಮುಂಭಾಗದಲ್ಲೇ ನಿಲ್ಲುತ್ತಿದೆ. ಸೊಳ್ಳೆಗಳ ಕಾಟ, ದುರ್ವಾಸನೆಯನ್ನು ನಿವಾಸಿಗಳು ನಿತ್ಯ ಅನುಭವಿಸುವಂತಾಗಿದೆ ಎಂದು ಮಹಿಳೆಯರು ಆರೋಪಿಸಿದರು.

ಆರು ತಿಂಗಳ ಹಿಂದೆ ಕಾಮಗಾರಿ ಆರಂಭಿಸಿ, ಚರಂಡಿ ಕಾಮಗಾರಿಯನ್ನು ಮಾತ್ರ ಮಾಡಿ ರಸ್ತೆ ಕಾಮಗಾರಿ ಸ್ಥಗಿತಗೊಳಿಸಲಾಗಿದೆ. ಮಳೆಗಾಲ ಆಗಿರುವುದರಿಂದ ರಸ್ತೆಯಲ್ಲಿ ನೀರು ನಿಂತು ನಿವಾಸಿಗಳು ಮನೆಯಿಂದ ಹೊರಗಡೆ ಬರುವುದಕ್ಕೆ ತೊಂದರೆಯಾಗಿದೆ. ಸಂಬಂಧಪಟ್ಟ ಮೇಲಧಿಕಾರಿಗಳು ಹಾಗೂ ಶಾಸಕರು ಇತ್ತ ಗಮನಹರಿಸಿ, ಅಪೂರ್ಣಗೊಂಡಿರುವ ಕಾಮಗಾರಿಯನ್ನು ಪೂರ್ಣಗೊಳಿಸಬೇಕೆಂದು ಒತ್ತಾಯಿಸಿದರು.

### ಪ್ರದೀಪ್ ಈಶ್ವರ್, ಸೀತಾರಾಮ್ ಈ ಇಬ್ಬರು ಬಲಿಜ ಸಮುದಾಯದ ನಾಯಕರಲ್ಲಿ ಯಾರಿಗೆ ಸಿಗಲಿದೆ ಸಚಿವ ಸ್ಥಾನ?

## ಕ್ಷೇತ್ರದಲ್ಲಿ ನಡೆಯುತ್ತಿದೆ ಕಾವೇರಿದ ಚರ್ಚೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಕಾಂಗ್ರೆಸ್ ನೇತೃತ್ವದ ರಾಜ್ಯ ಸರಕಾರದ ಸಚಿವ ಸಂಪುಟ ವಿಸ್ತರಣೆ ಸುದ್ದಿ ಆಗಾಗ್ಗೆ ಸದ್ದು ಮಾಡುತ್ತಲೇ ಇದೆ. ಈಗಲೂ ಅಂಥದ್ದೇ ಸುದ್ದಿ ಹರಿದಾಡುತ್ತಿದ್ದು, ಬಲಿಜ ಸಮುದಾಯಕ್ಕೆ ಸಚಿವ ಸ್ಥಾನ ಸಿಗುವ ಸಾಧ್ಯತೆ ಇದ್ದು, ಶಾಸಕರಾದ ಪ್ರದೀಪ್ ಈಶ್ವರ್, ಎಂ.ಆರ್.ಸೀತಾರಾಮ್ ಅವರ ಹೆಸರು ಕೇಳಿಬರುತ್ತಿದೆ. ವಿಧಾನಸಭೆ ಚುನಾವಣೆಯಲ್ಲಿ ಬಲಿಜ ಸಮುದಾಯಕ್ಕೆ ಸೇರಿದ ಪ್ರದೀಪ್ ಈಶ್ವರ್ ಅವರು ಏಕೈಕ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಸಚಿವ ಸಂಪುಟದಲ್ಲಿ ಸದ್ಯಕ್ಕೆ ಬಲಿಜಿಗ ಸಮುದಾಯಕ್ಕೆ ಸಚಿವ ಸ್ಥಾನ ನೀಡಿಲ್ಲ. ಕೆಲವು ಕ್ಷೇತ್ರಗಳಲ್ಲಿ ನಿರ್ಣಾಯಕ ಪಾತ್ರ ವಹಿಸಿರುವ ಬಲಿಜ ಸಮುದಾಯದವರಿಗೆ ಸಚಿವ ಸ್ಥಾನ ನೀಡುವುದು ಕಾಂಗ್ರೆಸ್‌ಗೆ ಅನಿವಾರ್ಯವಾಗಿದೆ. ಹೀಗಾಗಿ ಈ ಬಾರಿ ಸಚಿವ ಸಂಪುಟ ವಿಸ್ತರಣೆ, ಪುನಾರಚನೆ ವೇಳೆ ಬಲಿಜ ಸಮುದಾಯಕ್ಕೆ ಸಚಿವ ಸ್ಥಾನ ನೀಡಲೇಬೇಕೆಂಬ ಪಟ್ಟು ಹೆಚ್ಚಾಗಿದೆ.

**ಪ್ರದೀಪ್ ಈಶ್ವರ್ ಬಗ್ಗೆ ಒಲವು:** ಇದರ ಬೆನ್ನಲ್ಲೇ ಇದೇ ಮೊದಲ ಬಾರಿಗೆ ಪ್ರಭಾವಿಯನ್ನು ಸೋಲಿಸಿ ಶಾಸಕರಾಗಿರುವ ಶಾಸಕ ಪ್ರದೀಪ್ ಈಶ್ವರ್ ಅವರಿಗೆ ಸಚಿವ ಸ್ಥಾನ ನೀಡಬೇಕೆಂಬ ಆಗ್ರಹ ಹೆಚ್ಚಾಗಿದೆ. ಗೆದ್ದ ದಿನದಿಂದಲೂ ಕ್ಷೇತ್ರದಲ್ಲಿ ನಮ್ಮ ಚಿಕ್ಕಬಳ್ಳಾಪುರ, ನಮ್ಮ ಊರಿಗೆ ನಮ್ಮ ಶಾಸಕರು ಸೇರಿದಂತೆ ಹಲವಾರು ಕಾರ್ಯಕ್ರಮಗಳ ಮೂಲಕ ಮನೆ ಮಾತಾಗಿರುವ ಪ್ರದೀಪ್ ಈಶ್ವರ್, ಜನರ ಸಮಸ್ಯೆಗಳನ್ನು ಮನೆಗಳ ಬಳಿಗೆ ಹೋಗಿ ಪರಿಹರಿಸುತ್ತಿದ್ದಾರೆ.


ಉದಯವಾಹಿನಿ ಚಿತ್ರ

ಬಲಿಜ ಸಮುದಾಯಕ್ಕೆ ಸಚಿವ ಸ್ಥಾನ?

ಅಲ್ಲದೇ ಕಾಂಗ್ರೆಸ್ ಪಕ್ಷದ ಮುಂಚೂಣಿ ಕಾರ್ಯಕ್ರಮಗಳಲ್ಲೂ ಭಾಗವಹಿಸಿ ಗಮನ ಸೆಳೆದಿದ್ದಾರೆ. ಕಾಂಗ್ರೆಸ್ ಹೈಕಮಾಂಡ್‌ಗೂ ಶಾಸಕ ಪ್ರದೀಪ್ ಈಶ್ವರ್ ಅವರ ಕಾರ್ಯವೈಖರಿ ಬಗ್ಗೆ ಮೆಚ್ಚುಗೆ ಇದೆ. ಮಾಜಿ ಸಚಿವ ಕೆ. ಸುಧಾಕರ್ ಅವರ ರಾಜಕೀಯ ವಿರೋಧಿಯಾಗಿರುವ ಪ್ರದೀಪ್ ಈಶ್ವರ್ ಅವರು ಇತ್ತೀಚೆಗೆ, ಬಾಬು ಆತ್ಮಹತ್ಯೆ ಪ್ರಕರಣವನ್ನು ಸಿಬಿಐ ವಹಿಸಿದರೆ ತನಿಖೆ ಎದುರಿಸಲು ಸಿದ್ಧವಾಗಿದ್ದೀರಾ ಎಂದು ಸವಾಲು ಹಾಕಿದ್ದರು.

ಅವರ ಕಾರ್ಯವೈಖರಿ ಸೇವಾ ಮನೋಭಾವ ಮೆಚ್ಚಿ ಅವರಿಗೆ ಸಚಿವ ಸ್ಥಾನ ಸಿಗಬಹುದೆಂಬ ನಿರೀಕ್ಷೆ ಜನರಲ್ಲಿದೆ. ಕ್ಷೇತ್ರದಲ್ಲಿ ಈಗಾಗಲೇ ಕಾಂಗ್ರೆಸ್ ಮುಖಂಡರು ಸೇರಿದಂತೆ ಪ್ರದೀಪ್ ಈಶ್ವರ್ ಅವರ ಅಭಿಮಾನಿಗಳು ರಾಜ್ಯ ಸಚಿವ ಸಂಪುಟದಲ್ಲಿ ಪ್ರದೀಪ್ ಈಶ್ವರ್ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಮನವಿ ಮಾಡಿದ್ದಾರೆ.

ಅಲ್ಲದೇ ಹೈಕಮಾಂಡ್ ಗಮನಕ್ಕೂ ತಂದಿದ್ದಾರೆ. ಕೇವಲ ಕ್ಷೇತ್ರ ಮಾತ್ರವಲ್ಲ, ಇಡೀ ರಾಜ್ಯದಲ್ಲೇ ಗಮನ ಸೆಳೆದಿರುವ ಶಾಸಕ ಪ್ರದೀಪ್ ಈಶ್ವರ್ ಅವರಿಗೆ ಒಳ್ಳೆಯ ವರ್ಚಸ್ಸು ಇದೆ. ಹೀಗಾಗಿ ಅವರಿಗೆ ಸ್ಥಾನ ನೀಡಬೇಕೆಂಬ ಕೂಗು ಇದೆ. ವರ್ಚಸ್ಸು, ಜನಪ್ರಿಯತೆಯನ್ನು ಪರಿಗಣಿಸಿ ಸಚಿವ ಸ್ಥಾನ ನೀಡಲೇಬೇಕೆಂಬ ಒತ್ತಾಯ ಕೇಳಿಬಂದಿದೆ.

**ಸೀತಾರಾಮ್ ಹೆಸರು:** ಮತ್ತೊಂದೆಡೆ ಬಲಿಜ ಸಮುದಾಯಕ್ಕೆ ಸೇರಿದ ವಿಧಾನ ಪರಿಷತ್ ಸದಸ್ಯ, ಮಾಜಿ ಸಚಿವರಾಗಿರುವ ಎಂ.ಆರ್.ಸೀತಾರಾಮ್ ಅವರಿಗೂ ಸಚಿವ ಸ್ಥಾನ ಸಿಗುವ ಮಾತುಗಳು ಕೇಳಿಬರುತ್ತಿವೆ. ಕಾಂಗ್ರೆಸ್ ಪಕ್ಷದಲ್ಲಿ ಹಲವು ವರ್ಷಗಳಿಂದ ದುಡಿದಿರುವ ಸೀತಾರಾಮ್ ಅವರಿಗೆ ಹಿಂದಿನ ಸರಕಾರಗಳ ಅವಧಿಯಲ್ಲಿ ಸಚಿವ ಸ್ಥಾನ ನೀಡಲಾಗಿದೆ. ಬಲಿಜ ಸಮುದಾಯ ಪ್ರಬಲ ಮುಖಂಡರೆನಿಸಿರುವ ಸೀತಾರಾಮ್ ಅವರು ಆರ್ಥಿಕವಾಗಿ ಸದೃಢವಾಗಿದ್ದು, ಸಮುದಾಯದ ಬೆಂಬಲವೂ ಇದೆ. ಪಕ್ಷದಲ್ಲಿನ ಹಿರಿತನ, ಸಮುದಾಯದ ಬೆಂಬಲ ಕಾರಣ ಅವರಿಗೂ ಸಚಿವ ಸ್ಥಾನ ಸಿಗುವ ಸಾಧ್ಯತೆಗಳೂ ಇವೆ.

ಸದ್ಯ ಸಚಿವ ಸಂಪುಟದಲ್ಲಿ ಬಲಿಜ ಸಮುದಾಯ ಸಚಿವ ಸ್ಥಾನದ ನಿರೀಕ್ಷೆಯನ್ನು ಇಟ್ಟುಕೊಂಡಿದೆ. ಈ ಬಾರಿ ಸಿಕ್ಕೇ ಸಿಗುತ್ತದೆ ಎಂಬ ವಿಶ್ವಾಸವೂ ಸಮುದಾಯದಲ್ಲಿದೆ. ಹೀಗಾಗಿ ಸದ್ಯ ಸಚಿವ ಸ್ಥಾನದ ಆಕಾಂಕ್ಷಿತರಾಗಿರುವ ಶಾಸಕ ಪ್ರದೀಪ್ ಈಶ್ವರ್, ಮಾಜಿ ಸಚಿವ ಎಂ.ಆರ್.ಸೀತಾರಾಮ್ ಅವರಿಬ್ಬರಲ್ಲಿ ಹೈಕಮಾಂಡ್ ಯಾರಿಗೆ ಮಣೆ ಹಾಕಲಿದೆ ಎಂಬುದನ್ನು ಕಾದುನೋಡಬೇಕು.

### ಭಿನ್ನರಿಗೆ ಶಾಸಕ ಪ್ರದೀಪ್ ಎಚ್ಚರಿಕೆ

**ಶಾಸಕ ಪ್ರದೀಪ್ ಈಶ್ವರ್ ಅವರು ಭಿನ್ನಮತೀಯ ಮುಖಂಡರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದು, ಹಣದಿಂದಲೇ ಚುನಾವಣೆ ಗೆಲ್ಲಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ನಾನು ಹಣ ಇಟ್ಟುಕೊಂಡು ಚುನಾವಣೆಯನ್ನು ಎದುರಿಸಿಲ್ಲ, ಆದರೆ ಕೆಲವರು ಹಣದ ಹಿಂದೆ ಬಿದ್ದಿದ್ದಾರೆ. ಇಂತಹ ವಿಷಯಗಳು ಚುನಾವಣೆಯಲ್ಲಿ ಕೆಲಸ ಮಾಡುವುದಿಲ್ಲ. ಪಕ್ಷಕ್ಕೆ ವಿರುದ್ಧವಾಗಿ ಕೆಲಸ ಮಾಡುವ ಯಾರನ್ನೂ ಸಹಿಸುವುದಿಲ್ಲ ಎಂದು ಅವರು ಎಚ್ಚರಿಕೆ ನೀಡಿದರು.**

### ನಾನಾ ಸೇವೆ

**ಮತ್ತೊಂದೆಡೆ ಕ್ಷೇತ್ರದಲ್ಲಿ ಅಮ್ಮ ಆಂಬ್ಯುಲೆನ್ಸ್, ಅಮ್ಮ ಕ್ಲಿನಿಕ್ ಮೂಲಕ ಈಗಾಗಲೇ ಸಾವಿರಾರು ಜನರ ಪ್ರಾಣ ರಕ್ಷಿಸುವ ಕೆಲಸ ಮಾಡಿದ್ದಾರೆ. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡುವ ಕೆಲಸವನ್ನು ಮಾಡುತ್ತಿದ್ದಾರೆ. ಸರಕಾರಿ ಮಕ್ಕಳಿಗೆ ಬಟ್ಟೆ, ಮಹಿಳೆಯರಿಗೆ ಸೀರೆ, ಅರಿಶಿಣ - ಕುಂಕುಮ ಕೊಡುವ ಕೆಲಸ ಮಾಡುತ್ತಿದ್ದಾರೆ. ಬಡ ವಿದ್ಯಾರ್ಥಿಗಳ ಅಭ್ಯುದಯಕ್ಕೆ ಉಚಿತ ನೀಟ್ ತರಬೇತಿ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳ ನೆರವಿಗಾಗಿ ಉಚಿತ ತರಬೇತಿ ಶಿಬಿರಗಳನ್ನು ಏರ್ಪಡಿಸಿ ಜನರ ಮೆಚ್ಚುಗೆಗೆ ಪಾತ್ರವಾಗಿದ್ದಾರೆ.**

## ಮಿನಿ ನ್ಯೂಸ್

### ಟೀಕೆಗಳು ಸಾಯುತ್ತವೆ ಕೆಲಸ ಉಳಿಯುತ್ತೆ

• ಉದಯವಾಹಿನಿ, ಮಾಗಡಿ

ತಾಲ್ಲೂಕಿನ ಮರುಳುದೇವನಪುರ ಗ್ರಾಮದಲ್ಲಿ 50 ಲಕ್ಷ ವೆಚ್ಚದಲ್ಲಿ ಕಾಂಕ್ರೀಟ್ ರಸ್ತೆ, ಶುದ್ಧ ನೀರು ಘಟಕ, ನೂತನ ಹಾಲು ಉತ್ಪಾದಕರ ಸಹಕಾರಿ ಸಂಘ ಕಟ್ಟಡ ಉದ್ಘಾಟನಾ ಕಾರ್ಯಕ್ರಮ ನಡೆಯಿತು. ಮಾಗಡಿ ಕೋಟೆ ಅಭಿವೃದ್ಧಿಗೆ 103 ಕೋಟಿ ಅನುದಾನ ಬಿಡುಗಡೆಯಾಗಿಲ್ಲ. ಅದು ಪಾರಂಪಾರಿಕ ಅಭಿವೃದ್ಧಿ ತಾಣಗಳ ಪ್ರಾಧಿಕಾರಕ್ಕೆ ಬಿಡುಗಡೆ ಮಾಡಲಾಗಿದೆ ಎಂಬ ಮಾಜಿ ಶಾಸಕ ಎ. ಮಂಜುನಾಥ್ ಅವರ ಹೇಳಿಕೆಗೆ ಶಾಸಕ ಬಾಲಕೃಷ್ಣ ಅವರು ಟೀಕೆಗಳು ಸಾಯುತ್ತವೆ. ಕೆಲಸ ಉಳಿಯುತ್ತದೆ ಎಂದು ಉತ್ತರಿಸಿದರು. ವಿರೋಧ ಪಕ್ಷದವರು ಟೀಕೆ ಮಾಡಲಿ, ನಮ್ಮ ಅಭಿವೃದ್ಧಿ ಕಾರ್ಯಗಳಿಗೆ ಜನರೇ ಉತ್ತರ ಕೊಡುತ್ತಾರೆ. 2 ಕೋಟಿ ವೆಚ್ಚದಲ್ಲಿ ಪಟ್ಟಣದ ಎನ್ಇಎಸ್ ಸರ್ಕಲ್ ಅಭಿವೃದ್ಧಿಪಡಿಸಲಾಗುತ್ತಿದೆ.

ಈ ಹಿನ್ನೆಲೆ ಮಾಜಿ ಶಾಸಕ ಇಟ್ಟಿರುವ ಗಾಂಧಿ ಪ್ರತಿಮೆಯನ್ನು ಸ್ಥಳಾಂತರಿಸಿ, 10 ಅಡಿ ಎತ್ತರದ ಗಾಂಧೀಜಿ ಪ್ರತಿಭೆಯನ್ನು ನಿರ್ಮಿಸಲಾಗುವುದು. ಇದಕ್ಕೆ ಮಾಜಿ ಶಾಸಕರ ಹೆಸರನ್ನು ಪ್ರತಿಮೆ ಕೆಳಗೆ ಹಾಕಿಸುತ್ತೇನೆ ಎಂದು ಟಾಂಗ್ ನೀಡಿದರು. ಎಲ್ಲಾ ಕಚೇರಿಗಳು ಒಂದೆಡೆ ಬರುತ್ತಿರುವುದರಿಂದ ಸಕಲ ಅಭಿವೃದ್ಧಿ ಮಾಡುತ್ತೇನೆ. ವಿರೋಧ ಪಕ್ಷದವರು ಟೀಕೆ ಮಾಡುತ್ತಲೇ ಇರಲಿ, ನಾನು ಅಭಿವೃದ್ಧಿ ಕೆಲಸ ಮಾಡುತ್ತೇನೆ ಎಂದರು. ರಾಜ್ಯ ಸರ್ಕಾರ ಎಸ್ಐಟಿ ಮೂಲಕ ಧರ್ಮಸ್ಥಳಕ್ಕೆ ಅಂಟಿದ್ದ ಕಳಂಕವನ್ನು ತೊಳೆಯಲಾಗುತ್ತಿದೆ. ಇದರಿಂದ ಧರ್ಮಾಧಿಕಾರಿಗಳು, ಭಕ್ತರು ನಿರಾಳವಾಗಿದ್ದಾರೆ ಎಂದರು.

### ದುಡ್ಡು ಕೊಡಲಿಲ್ಲವೆಂದು ಶಾಸಕರ ಕಚೇರಿಗೆ ಕಲ್ಲು ತೂರಿದ ವ್ಯಕ್ತಿ

• ಉದಯವಾಹಿನಿ, ರಾಮನಗರ

ಮದ್ಯದ ಅಮಲಿನಲ್ಲಿ ಶಾಸಕರ ಕಚೇರಿಗೆ ಕಲ್ಲು ತೂರಿ, ಕಿಟಕಿ ಗಾಜು ಒಡೆದು ಹಾಕಿದ ಕಾರ್ಮಿಕನೊಬ್ಬ ಐಜೂರು ಠಾಣೆ ಪೊಲೀಸರ ಅತಿಥಿಯಾಗಿದ್ದಾನೆ. ನಗರದ ಟ್ರ್ಯೂಪ್‌ಲೈನ್‌ನ ಮುತ್ತುರಾಜು ಬಂಧಿತ ಕಾರ್ಮಿಕ. ಪೇಂಟಿಂಗ್ ಕೆಲಸ ಮಾಡುವ ಮುತ್ತುರಾಜು ಇತ್ತೀಚೆಗೆ ಶಾಸಕರ ಕಚೇರಿಗೆ ಹೋಗಿ ದುಡ್ಡು ಕೇಳಿದ್ದ. ಆಗ ಅಲ್ಲಿದ್ದವರು ಹಣ ನೀಡಿರಲಿಲ್ಲ. ಇದರಿಂದ ಕುಪಿತಗೊಂಡಿದ್ದ ಆತ ಬೆಳಿಗ್ಗೆ 9 ಗಂಟೆ ಸುಮಾರಿಗೆ ಕಚೇರಿಗೆ ಅಕ್ರಮವಾಗಿ ಪ್ರವೇಶಿಸಿದ್ದ. ಕಚೇರಿಯ ಎರಡು ಕಿಟಕಿಗಳಿಗೆ ಕಲ್ಲು ತೂರಿ ಗಾಜುಗಳನ್ನು ಒಡೆದು ಹಾಕಿ, 4 ಸಾವಿರ ನಷ್ಟ ಉಂಟುಮಾಡಿದ್ದ.

ಆತನ ಕೃತ್ಯವನ್ನು ಸ್ಥಳದಲ್ಲಿದ್ದ ಒಬ್ಬರು ತಮ್ಮ ಮೊಬೈಲ್‌ನಲ್ಲಿ ಸೆರೆ ಹಿಡಿದ್ದರು. ಅದನ್ನು ಶಾಸಕರ ಆಪ್ತ ಸಹಾಯಕ ಶಶಿಧರ್ ಅವರಿಗೆ ಕಳಿಸಿದ್ದರು ಎಂದು ಪೊಲೀಸರು ತಿಳಿಸಿದರು. ಚಿತ್ರದಲ್ಲಿ ವ್ಯಕ್ತಿ ಮುತ್ತುರಾಜು ಎಂಬುದು ಗೊತ್ತಾಗುತ್ತಿದ್ದಂತೆ ಆತನ ವಿರುದ್ಧ ಶಶಿಧರ್ ಠಾಣೆಗೆ ದೂರು ಕೊಟ್ಟಿದ್ದರು. ಸಾರ್ವಜನಿಕ ಆಸ್ತಿಗೆ ಹಾನಿಯುಂಟು ಮಾಡಿದ ಆರೋಪದ ಮೇಲೆ, ಆತನ ವಿರುದ್ಧ ಪ್ರಕರಣ ದಾಖಲಿಸಿಕೊಂಡು ಬಂಧಿಸಲಾಯಿತು ಎಂದು ಪೊಲೀಸರು ಹೇಳಿದರು.

### ಶಾರ್ಟ್ ಸರ್ಕಿಟ್: 48 ಕುರಿ ಸಾವು

• ಉದಯವಾಹಿನಿ, ಗೂಳೂರು

ತಾಲ್ಲೂಕಿನ ಕಮ್ಮರವಾರಿಪಲ್ಲಿ ಗ್ರಾಮದಲ್ಲಿ ವಿದ್ಯುತ್ ಶಾರ್ಟ್ ಸರ್ಕಿಟ್ ಆಗಿ ಬೆಂಕಿ ಹೊತ್ತಿಕೊಂಡು 48 ಕುರಿಗಳು ಮೃತಪಟ್ಟಿವೆ. ಒಂದು ಕುರಿ 10 ಸಾವಿರ ಮೌಲ್ಯದಾಗಿದ್ದು, 48 ಕುರಿಗಳ ಸಾವಿನಿಂದ ನನಗೆ 4.8 ಲಕ್ಷ ನಷ್ಟವಾಗಿದೆ ಎಂದು ರೈತ ಮಂಜುನಾಥ್ ಬೇಸರ ವ್ಯಕ್ತಪಡಿಸಿದರು. ತಾಲ್ಲೂಕಿನ ತಿಮ್ಮಂಪಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಮ್ಮರವಾರಿಪಲ್ಲಿ ಗ್ರಾಮದ ರೈತ ಮಂಜುನಾಥ್ 70ಕ್ಕೂ ಹೆಚ್ಚು ಕುರಿಗಳನ್ನು ಸಾಕಿದ್ದಾರೆ. ಸಂಜೆ ಗ್ರಾಮದಲ್ಲಿನ ತಮ್ಮ ಕುರಿಗಳ ಹಟ್ಟಿಗೆ ಕುರಿಗಳನ್ನು ಬಿಟ್ಟಿದ್ದರು. ಈ ವೇಳೆ ಮನೆ ಟಿ.ವಿ.ಯಲ್ಲಿ ಶಾರ್ಟ್ ಸರ್ಕಿಟ್ ಉಂಟಾಗಿದ್ದು, ಬೆಂಕಿಯ ಕಿಡಿ ಮನೆಯ ಪಕ್ಕದ ಕುರಿಗಳ ಹಟ್ಟಿ ಮೇಲೆ ಬಿದ್ದಿದ್ದು, 48 ಕುರಿಗಳು ಮೃತಪಟ್ಟಿವೆ ಎಂದು ತಿಳಿದುಬಂದಿದೆ. ಘಟನಾ ಸ್ಥಳಕ್ಕೆ ಭೇಟಿ ನೀಡಿದ ಬೆಸ್ಕಾಂ ಅಧಿಕಾರಿ ಹರೀಶ್, ಸ್ಥಳ ಪರಿಶೀಲನೆ ಮಾಡಿದರು.

### ಸಂಪುಟದಿಂದ ರಾಜಣ್ಣ ವಜಾ ಖಂಡಿಸಿ ಪ್ರತಿಭಟನೆ

• ಉದಯವಾಹಿನಿ, ಗೌರಿಬಿದನೂರು

ಕೆ.ಎನ್. ರಾಜಣ್ಣ ಅವರನ್ನು ಸಚಿವ ಸ್ಥಾನದಿಂದ ವಜಾ ಮಾಡಿದ್ದನ್ನು ಖಂಡಿಸಿ ತಾಲ್ಲೂಕಿನ ವಿವಿಧ ಸಂಘಟನೆಗಳು, ಕೆ.ಎನ್. ರಾಜಣ್ಣ ಅಭಿಮಾನಿಗಳ ನೇತೃತ್ವದಲ್ಲಿ ಇದೇ 30ರಂದು ಪ್ರತಿಭಟನೆ ನಡೆಸಲಾಗುವುದು ಎಂದು ವಾಲ್ಮೀಕಿ ಸಂಘದ ಮುಖಂಡ ಆರ್. ಅಶೋಕಕುಮಾರ್ ತಿಳಿಸಿದ್ದಾರೆ. ಈ ಕುರಿತು ಪ್ರತಿಕ್ರಿಯಿಸಿದ ಅವರು, ಕೆ.ಎನ್. ರಾಜಣ್ಣ ಅವರು ದಲಿತ, ಹಿಂದುಳಿದ, ಬಡವರು, ರೈತ ವರ್ಗಗಳಿಗೆ ಅಪಾರ ಕೊಡುಗೆ ನೀಡಿದ್ದಾರೆ.

ಅಂಥ ನಾಯಕನನ್ನು ಸಚಿವ ಸ್ಥಾನದಿಂದ ವಜಾ ಮಾಡಿರುವುದು ವಾಲ್ಮೀಕಿ, ದಲಿತ, ಹಿಂದುಳಿದ ವರ್ಗಗಳಿಗೆ ಮಾಡಿದ ಅನ್ಯಾಯ ಎಂದು ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆ ನಡೆಯುವ ದಿನ ಕೆ.ಎನ್. ರಾಜಣ್ಣ ಅವರ ಭಾವಚಿತ್ರ ಮತ್ತು ಸಂಘಟನೆಗಳ ಬಾವುಟ ಹಿಡಿದು, ಅಂಬೇಡ್ಕರ್ ವೃತ್ತದಿಂದ ತಾಲ್ಲೂಕಿನ ಪ್ರಜಾಸೌಧದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಲಾಗುವುದು. ಎಲ್ಲಾ ದಲಿತಪರ ಸಂಘಟನೆಗಳು, ಕೆ.ಎನ್. ರಾಜಣ್ಣ ಅವರ ಅಭಿಮಾನಿಗಳು ಈ ಪ್ರತಿಭಟನೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಪ್ರಕಟಣೆಯಲ್ಲಿ ಮನವಿ ಮಾಡಿದರು.

### ಗ್ರಾಮಸ್ಥರಿಗೆ ಹಕ್ಕು ಪತ್ರ ವಿತರಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಗುಡಿಬಂಡೆ

ತಾಲ್ಲೂಕು ಪಂಚಾಯಿತಿ ಆವರಣದಲ್ಲಿ ಕೋರೇನಹಳ್ಳಿ ಗ್ರಾಮಸ್ಥರಿಗೆ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ಅವರು ಖಾಲಿ ನಿವೇಶನಗಳ ಹಕ್ಕು ಪತ್ರಗಳನ್ನು ವಿತರಣೆ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಈ ವರ್ಷದ ಅಂತ್ಯದ ಒಳಗೆ ಗುಡಿಬಂಡೆ ತಾಲ್ಲೂಕಿನ ಎಲ್ಲಾ ಹಳ್ಳಿ, ಪಟ್ಟಣ ವ್ಯಾಪ್ತಿಯ ನಿವೇಶನರಹಿತರಿಗೆ 4 ಸಾವಿರ ಉಚಿತ ನಿವೇಶನಗಳನ್ನು ನೀಡಲಾಗುವುದು ಎಂದು ಭರವಸೆ ನೀಡಿದರು. ತಾಲ್ಲೂಕಿನ ಕೊಂಡರೆಡ್ಡಿಹಳ್ಳಿ ಗ್ರಾಮಸ್ಥರಿಗೆ ಹಕ್ಕುಪತ್ರ ವಿತರಣೆ ಮಾಡುತ್ತಿದ್ದ ಸ್ಥಳಕ್ಕೆ ಬಂದಿದ್ದ ಕೋರೇನಹಳ್ಳಿ ಗ್ರಾಮಸ್ಥರು ತಮಗೂ ಉಚಿತ ನಿವೇಶನ ನೀಡಬೇಕು ಎಂಬ ಬೇಡಿಕೆ ಇಟ್ಟಿದ್ದರು. ಇದನ್ನು ಪರಿಗಣಿಸಿ, ಈಗ ಕೋರೇನಹಳ್ಳಿ ಗ್ರಾಮದ 26 ಫಲಾನುಭವಿಗಳಿಗೆ ಉಚಿತ ನಿವೇಶನದ ಹಕ್ಕುಪತ್ರಗಳನ್ನು ವಿತರಣೆ ಮಾಡುತ್ತಿದ್ದೇನೆ ಎಂದು ಹೇಳಿದರು. ಕಡೇಹಳ್ಳಿ ಗ್ರಾಮದಲ್ಲಿ ನಿವೇಶನ ಹಕ್ಕು ಪತ್ರ ನೀಡಲು ಕೆಲವು ತೊಡಕುಗಳಿದ್ದು, ಅವುಗಳನ್ನು ಪರಿಹರಿಸಿ, ಶೀಘ್ರವೇ ಹಕ್ಕುಪತ್ರ ನೀಡಲಾಗುವುದು ಎಂದರು. ತಹಶೀಲ್ದಾರ್ ಸಿಗ್ಬತುಲ್ಲಾ ಮಾತನಾಡಿ, ಬಡವರಿಗೆ ನಿವೇಶನ ನೀಡಲು ಜಾಗ ಗುರುತಿಸಿ ಹಸ್ತಾಂತರ ಮಾಡುವಂತೆ ಶಾಸಕರು ತಿಳಿಸಿದ್ದಾರೆ. ಈ ಪ್ರಕಾರ ಈಗಾಗಲೇ 80ಕ್ಕೂ ಹೆಚ್ಚು ಜಮೀನು ಗುರುತಿಸಲಾಗಿದೆ. ಫಲಾನುಭವಿಗಳಿಗೆ ಶೀಘ್ರವೇ ನಿವೇಶನ ಕಲ್ಪಿಸಲಾಗುವುದು ಎಂದರು.

ಅಂತರಾಳದಿಂದ..
EDITORIAL

# ದೇಶದ್ರೋಹ ಕಾನೂನಿನ ಅಪಬಳಕೆ ಪತ್ರಿಕಾ ಸ್ವಾತಂತ್ರ್ಯದ ಮೇಲೆ ಪ್ರಹಾರ



ಇಬ್ಬರು ಪತ್ರಕರ್ತರ ಮೇಲೆ ದೇಶದ್ರೋಹದ ಪ್ರಕರಣ ದಾಖಲಿಸಿರುವ ಅಸ್ಸಾಂ ಪೊಲೀಸರ ಕ್ರಮ, ಅಭಿವ್ಯಕ್ತಿ ಸ್ವಾತಂತ್ರ್ಯದ ಮೇಲೆ ನಡೆಸಿರುವ ದಾಳಿ ಹಾಗೂ ನ್ಯಾಯಾಂಗಕ್ಕೆ ವಿರುದ್ಧವಾದುದು. 'ದಿ ವೈರ್' ಪತ್ರಿಕೆಯ ಸಿದ್ದಾರ್ಥ್ ವರದರಾಜನ್ ಹಾಗೂ ಕರಣ್ ಥಾಪರ್ ಅವರಿಗೆ ಸಮನ್ಸ್ ನೀಡಿರುವ ಪೊಲೀಸರು, ದೇಶದ್ರೋಹಕ್ಕೆ ಸಂಬಂಧಿಸಿದ, 'ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) ಸೆಕ್ಷನ್ 152'ರ (ಭಾರತದ ಸಾರ್ವಭೌಮತ್ವ, ಏಕತೆ ಮತ್ತು ಸಮಗ್ರತೆಗೆ ಧಕ್ಕೆ) ಅನ್ವಯ ಪ್ರಕರಣ ದಾಖಲಿಸಿದ್ದಾರೆ. ಈ ಇಬ್ಬರು ಪತ್ರಕರ್ತರ ವಿರುದ್ಧ ಯಾವುದೇ ಬಲವಂತದ ಕ್ರಮ ಕೈಗೊಳ್ಳದಂತೆ ಅಸ್ಸಾಂ ಪೊಲೀಸರಿಗೆ ಸುಪ್ರೀಂ ಕೋರ್ಟ್ ಅಗಸ್ಟ್ 12ರಂದು ಆದೇಶ ನೀಡಿತ್ತು. ಅದೇ ದಿನ, ಪತ್ರಕರ್ತರ ವಿರುದ್ಧ ಹೊಸದಾಗಿ ಎಫ್‌ಐಆರ್ ದಾಖಲಿಸಿರುವ ಪೊಲೀಸರು, ಸಮನ್ಸ್ ಜಾರಿಗೊಳಿಸಿದ್ದಾರೆ. ದಿ ವೈರ್‌ನಲ್ಲಿ ಪ್ರಕಟಗೊಂಡ ವರದಿಯೊಂದರಲ್ಲಿ, ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ ಭಾರತೀಯ ವಾಯುಪಡೆ ಯುದ್ಧ ವಿಮಾನಗಳನ್ನು ಕಳೆದುಕೊಂಡಿದೆ ಎಂದು ಉಲ್ಲೇಖಿಸಲಾಗಿತ್ತು.

> **ಎಫ್‌ಐಆರ್‌ನ ಪ್ರತಿ ಅಥವಾ ಅಪರಾಧಕ್ಕೆ ಸಂಬಂಧಿಸಿದ ಯಾವುದೇ ವಿವರಗಳನ್ನು ಸಮನ್ಸ್ ಒಳಗೊಂಡಿಲ್ಲ. ಪತ್ರಕರ್ತರಿಗೆ ಸಮನ್ಸ್ ನೀಡುವ ಮೂಲಕ, ಅವರಿಗೆ ತಿಳಿಸದ ಅಪರಾಧಗಳಿಗಾಗಿ ಬಂಧನದ ಬೆದರಿಕೆ ಒಡ್ಡುವ ರೂಪದಲ್ಲಿರುವ ಈ ಪ್ರಕರಣ ಅತಾರ್ಕಿಕವಾದುದು, ಆತಂಕ ಹುಟ್ಟಿಸುವಂತಹದ್ದು ಹಾಗೂ ಕಾನೂನಿನ ಸಿಂಧುತ್ವ ಹೊಂದಿಲ್ಲದೆ ಇರುವುದಾಗಿದೆ.**

ಇಂಡೊನೇಷ್ಯಾದಲ್ಲಿ ನಡೆದ ವಿಚಾರ ಸಂಕಿರಣವೊಂದಕ್ಕೆ ಸಂಬಂಧಿಸಿದ ವರದಿಯಲ್ಲಿನ ಉಲ್ಲೇಖ, ಪತ್ರಕರ್ತರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಪೊಲೀಸರಿಗೆ ನೆಪವಾಗಿದೆ. ವರದಿ ಮಾಡುವ ಹಾಗೂ ಸಾರ್ವಜನಿಕ ಹಿತಾಸಕ್ತಿ ವಿಷಯಗಳಿಗೆ ಸಂಬಂಧಿಸಿದಂತೆ ಪ್ರತಿಕ್ರಿಯಿಸುವ ಹಕ್ಕು ಪತ್ರಕರ್ತರಿಗಿದ್ದು, ಆ ಹಕ್ಕುಗಳನ್ನು ಹತ್ತಿಕ್ಕುವ ಪ್ರಯತ್ನಗಳು ನಡೆಯುತ್ತಿವೆ. ನಾಗರಿಕರ ಅಭಿವ್ಯಕ್ತಿ ಸ್ವಾತಂತ್ರ್ಯದ ವಿಸ್ತರಣೆಯಂತಿರುವ ಪತ್ರಕರ್ತರ ಹಕ್ಕುಗಳು ಪ್ರಜಾಪ್ರಭುತ್ವ ವ್ಯವಸ್ಥೆಯ ಜೀವಾಳವಾಗಿವೆ. ಆದರೆ, ಸರ್ಕಾರದ ನೀತಿಗಳಿಗೆ ಪೂರಕವಾಗಿ ಕಾರ್ಯ ನಿರ್ವಹಿಸುವಂತೆ ಪತ್ರಕರ್ತರು ಹಾಗೂ ಮಾಧ್ಯಮ ಸಂಸ್ಥೆಗಳ ಮೇಲೆ ನಿರಂತರವಾಗಿ ಒತ್ತಡ ಹೇರಲಾಗುತ್ತಿದೆ. ಜಾಗತಿಕ ಪತ್ರಿಕಾ ಸ್ವಾತಂತ್ರ್ಯ ಸೂಚ್ಯಂಕ ದಲ್ಲಿ ಭಾರತ 151ನೇ ಸ್ಥಾನದಲ್ಲಿದೆ. ಈ ಸ್ಥಾನ, ದೇಶದಲ್ಲಿ ಮಾಧ್ಯಮ ಸ್ವಾತಂತ್ರ್ಯಕ್ಕೆ ಎದುರಾಗಿರುವ ಅಪಾಯ ನೈಜವಾದುದು ಎನ್ನುವುದನ್ನು ಸಂಕೇತಿಸುವಂತಿದೆ. 'ದಿ ವೈರ್' ಪತ್ರಕರ್ತರ ಮೇಲೆ ದಾಖಲಾಗಿರುವ ಪ್ರಕರಣಗಳು ಹಾಗೂ ದೇಶದ ಬೇರೆ ಭಾಗಗಳಲ್ಲಿ ದಾಖಲಾಗಿರುವ ಇಂತಹುದೇ ಪ್ರಕರಣಗಳು ಪತ್ರಿಕಾ ಸ್ವಾತಂತ್ರ್ಯ ಸೂಚ್ಯಂಕದಲ್ಲಿ ಭಾರತದ ಸ್ಥಾನ ಉತ್ತಮಗೊಳ್ಳುವ ಯಾವುದೇ ಸಾಧ್ಯತೆ ಇಲ್ಲದಿರುವುದರ ಸೂಚನೆಯಾಗಿದೆ. ಪತ್ರಕರ್ತರ ಮೇಲೆ ಸೆಕ್ಷನ್ 152 ಅನ್ನು ಬಳಸಿ ಪ್ರಕರಣ ದಾಖಲಿಸಿರುವುದು, ಪೊಲೀಸರು ತಮ್ಮ ಕಾರ್ಯವ್ಯಾಪ್ತಿಯನ್ನು ಮೀರಿರುವ ಮತ್ತೊಂದು ಉದಾಹರಣೆಯಾಗಿದೆ. ಬಿಎನ್‌ಎಸ್ ಸೆಕ್ಷನ್ 152, ದೇಶದ್ರೋಹಕ್ಕೆ ಸಂಬಂಧಿಸಿದ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 124ಎ ನ ವೇಷಧಾರಿಯಾಗಿದೆ.

ಈ ವಿಧಿಯ ಅನ್ವಯ ಯಾವುದೇ ಎಫ್‌ಐಆರ್ ದಾಖಲಿಸದಂತೆ ಸುಪ್ರೀಂ ಕೋರ್ಟ್ 2022ರಲ್ಲಿ ನಿರ್ದೇಶನ ನೀಡಿದೆ. ಅದಕ್ಕೆ ಪರ್ಯಾಯವಾಗಿ ಮತ್ತಷ್ಟು ಕಠಿಣ ಹಾಗೂ ವ್ಯಾಪಕವಾದ ಸೆಕ್ಷನ್ 152 ಅನ್ನು ಸರ್ಕಾರ ಬಳಸುತ್ತಿದೆ. ಹೊಸ ಕಾನೂನಿನ ಬಳಕೆಗೆ ಸಂಬಂಧಿಸಿದ ಅರ್ಜಿಯೊಂದು ಕೋರ್ಟ್ ಪರಿಶೀಲನೆಯಲ್ಲಿರುವ ಸಂದರ್ಭದಲ್ಲೇ, ಪತ್ರಕರ್ತರ ವಿರುದ್ಧ ದೇಶದ್ರೋಹದ ಪ್ರಕರಣವನ್ನು ಪೊಲೀಸರು ದಾಖಲಿಸಿದ್ದಾರೆ. 'ದಿ ವೈರ್' ಪತ್ರಕರ್ತರು ಮಾತ್ರವಲ್ಲದೆ, ಕೇಂದ್ರ ಹಾಗೂ ರಾಜ್ಯ ಸರ್ಕಾರವನ್ನು ಟೀಕಿಸಿದ ಮತ್ತೊಬ್ಬ ಪತ್ರಕರ್ತನ ಮೇಲೆಯೂ ಸೆಕ್ಷನ್ 152ರ ಅನ್ವಯ ಅಸ್ಸಾಂ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಪತ್ರಕರ್ತರ ವಿರುದ್ಧ ದೇಶದ್ರೋಹದ ಪ್ರಕರಣಗಳನ್ನು ದಾಖಲಿಸಿರುವುದು ಅಧಿಕಾರದ ಸ್ಪಷ್ಟ ದುರುಪಯೋಗ. ಸುಪ್ರೀಂ ಕೋರ್ಟ್ ಮಧ್ಯಪ್ರವೇಶದಿಂದಾಗಿ 'ದಿ ವೈರ್' ಪತ್ರಕರ್ತರು ಬಂಧನಕ್ಕೆ ಒಳಗಾಗುವುದರಿಂದ ರಕ್ಷಣೆ ಪಡೆದಿದ್ದಾರೆ. ದೇಶದ್ರೋಹ ಪ್ರಕರಣದ ಬಳಕೆಯ ಕುರಿತಾದ ತನ್ನ ನಿರ್ದೇಶನ ಉಲ್ಲಂಘನೆಯಾಗದಂತೆ ಹಾಗೂ ಹಳೆಯ ಕಾನೂನು ಹೊಸ ರೂಪಾಂತರಗಳೊಂದಿಗೆ ನುಸುಳದಂತೆ ಸುಪ್ರೀಂ ಕೋರ್ಟ್ ನೋಡಿಕೊಳ್ಳಬೇಕಾಗಿದೆ.



# ರಾಮಾಯಣ

## ಶರಭಂಗಮುನಿಯು ಬ್ರಹ್ಮಲೋಕವನ್ನು ಸೇರಿದ ವೃತ್ತಾಂತ

• ಹಿಂದಿನ ಸಂಚಿಕೆಯಿಂದ 117ನೆಯ ಅಧ್ಯಾಯ

ಆದ್ದರಿಂದ ಇವರು ದೇವೇಂದ್ರನ ಬೆನ್ನುಹಿಡಿದು ಬಂದ ದೇವತೆಗಳಾಗಿರಬೇಕು. ಇದಕ್ಕೆ ಸಂದೇಹವಿಲ್ಲ. ಒಂದು ಕ್ಷಣಮಾತ್ರ ನೀನು ಸೀತಾದೇವಿಯನ್ನು ಕಾದುಕೊಂಡಿರು. ನಾನು ಈ ವಿಷಯವನ್ನು ಚೆನ್ನಾಗಿ ವಿಚಾರಿಸಿಕೊಂಡು ಬರುತ್ತೇನೆ'' ಎಂದು ಹೇಳಿ ಸೀತಾದೇವಿಯನ್ನು ಲಕ್ಷ್ಮಣನ ಸಮೀಪದಲ್ಲಿರಿಸಿ ತಾನು ಮುಂದೆ ಶರಭಂಗಮುನೀಶ್ವರನ ಸಮೀಪಕ್ಕೆ ಹೋದನು. ಆಗ ಅಂತರಿಕ್ಷಮಾರ್ಗದಲ್ಲಿ ರಥಾರೂಢನಾಗಿ ಶರಭಂಗಮುನೀಶ್ವರನೊಡನೆ ಸಂಭಾಷಣೆ ಮಾಡುತ್ತಿದ್ದ ದೇವೇಂದ್ರನು ಶ್ರೀರಾಮನನ್ನು ಕಂಡು ಶರಭಂಗಮುನೀಶ್ವರನನ್ನು ಕುರಿತು ಎಲೈ ಶರಭಂಗಮುನೀಶ್ವರನೆ, ಶ್ರೀರಾಮನು ನಿನ್ನ ಸಮೀಪಕ್ಕೆ ಬರುತ್ತಿದ್ದಾನೆ. ಆತನು ನನ್ನನ್ನು ಕಂಡು ಸಂಭಾಷಣೆಮಾಡುವುದಕ್ಕೆ ಮೊದಲೇ ನನ್ನನ್ನು ಕಳುಹಿಸಿಕೊಡು. ಶ್ರೀರಾಮನು ಯುದ್ಧರಂಗದಕ್ಕಿ ಅನೇಕ ರಾಕ್ಷಸರನ್ನು ಜಯಿಸಿ ಯಾರಿಗೂ ಅಸಾಧ್ಯವಾದ ಸಾಹಸವನ್ನು ಮಾಡುವನು ಎಂದು ಹೇಳಿ ಸ್ವರ್ಗಲೋಕಕ್ಕೆ ಹೋದನು. ಆ ಬಳಿಕ ಶ್ರೀರಾಮನು ಸೀತಾಲಕ್ಷ್ಮಣಸಮೇತನಾಗಿ ಶರಭಂಗಮುನೀಶ್ವರನ ತಪೋವನವನ್ನು ಸೇರಿ ಆ ಮುನಿಯನ್ನು ಕಂಡು ವಂದಿಸಿದನು. ಆತನು ಅರ್ಘ್ಯಪಾದ್ಯಾದಿ ಸತ್ಕಾರಗಳನ್ನು ಮಾಡಿ ಆಸನವನ್ನು ಕೊಟ್ಟು ಸಮೀಪದಲ್ಲಿ ಕುಳ್ಳಿರಿಸಿಕೊಳ್ಳಲು, ಶ್ರೀರಾಮನು ಮುನೀಶ್ವರರೆ, ಇಷ್ಟುಹೊತ್ತಿನವರೆಗೆ ಅಂತರಿಕ್ಷಮಾರ್ಗದಲ್ಲಿ ಕಾಣಿಸುತ್ತಿದ್ದ ರಥವು ಯಾರದು? ಆ ರಥದಲ್ಲಿದ್ದವನಾರು ? ಆತನು ಇಲ್ಲಿಗೆ ಬರಲು ಕಾರಣವೇನು? ಎಂದು ಪ್ರಶ್ನೆಮಾಡಿದನು. ಶರಭಂಗಮುನಿಯು ಶ್ರೀರಾಮ, ಅಂತರಿಕ್ಷಮಾರ್ಗದಲ್ಲಿ ಕಾಣಿಸಿದ ರಥವು ದೇವೇಂದ್ರನದು. ಆದರಲ್ಲಿದ್ದವನು. ದೇವೇಂದ್ರನು. ಆತನು ನನ್ನನ್ನು ಬ್ರಹ್ಮಲೋಕಕ್ಕೆ ಕರೆದುಕೊಂಡು ಹೋಗುವುದಕ್ಕೆ ಇಲ್ಲಿಗೆ ಬಂದನು. ನಾಷು ಬಹುಕಾಲ ಉಗ್ರವಾದ ತಪಸ್ಸನ್ನು ಮಾಡಿ ನನ್ನ ತಪಸ್ಸಾಮಥರ್ಕ್ಮದಿಂದ ಬ್ರಹ್ಮಲೋಕವನ್ನು ಸಾಧ್ಯಮಾಡಿಕೊಂಡೆನು. ದೇವೇಂದ್ರನು ಕರೆದರೂ ನಾನು ಬ್ರಹ್ಮಲೋಕಕ್ಕೆ ಹೋಗಲಿಲ್ಲ. ಏಕೆಂದರೆ, ನಾನು ದೂರದಿಂಪಲೇ ನಿನ್ನ ಬರುವಿಕೆಯನ್ನು ಕಂಡೆನು. ಪ್ರೀತಿ ಯಿಂದ ಅತಿಥಿಯಾದ ನಿನ್ನನ್ನು ಪೂಜಿಸದೆ ಬ್ರಹ್ಮಲೋಕಕ್ಕೆ ಹೋಗಬಾರದೆಂದು ನಿಂತೆನು. ಇನ್ನು ನಿನ್ನೊಡನೆ ಸಂಭಾಷಣೆಮಾಡಿ ಹೋಗುತ್ತೇನೆ. ನನ್ನ ತಪಸ್ಸಾಮರ್ಥದಿಂದ ಸಂಪಾದಿಸಿದ ಬ್ರಹ್ಮ ಲೋಕವನ್ನು ನೀನು ಸ್ವೀಕರಿಸು ಎಂದು ನುಡಿದನು. ಸಕಲ ಶಾಸ್ತಾರ್ಥತತ್ತ್ವವಿಚಾರವನ್ನು ಬಬ್ಬ ಶ್ರೀರಾಮನು ಶರಭಂಗಮುನೀಶ್ವರನನ್ನು ಕುರಿತು ಮುನೀಶ್ವರರೆ, ನಾನು ಉತ್ತಮವಾದ ಪ್ರಣ್ಯ ಲೋಕವನ್ನು ಸಂಪಾದಿಸಿಕೊಳ್ಳುತ್ತೇನೆ. ನಮಗೆ ಒಂದು ಆಶ್ರಮವನ್ನು ತೋರಿಸಿದರೆ ಆ ಆಶ್ರಮದಲ್ಲಿ ಸುಖವಾಗಿರುವೆವು ಎಂದು ನುಡಿದನು.

ಶರಭಂಗಮುನಿಯು 5 ಶ್ರೀರಾಮ ಇಲ್ಲಿಂದ ಮುಂದೆ ಸಮೀಪದಲ್ಲಿ ಧರ್ಮಾತ್ಮನಾದ ಸುತೀಕ್ಷ್ಣಮುನೀಶ್ವರನಿದ್ದಾನೆ. ಆತನ ಸಮೀಪಕ್ಕೆ ಹೋದರೆ ಆ ಮುನೀಶ್ವರನು ನಿನಗೆ ಉತ್ತಮವಾದ ಸ್ಥಳವನ್ನು ತೋರಿನುವನು. ಈ ಮಂದಾಕಿನೀತೀರದಲ್ಲಿಯೇ ಹೋಗಿ ಮುಂದೆ ದೋಣಿಯಿಂದ ಈ ನದಿಯನ್ನು ದಾಟಿ ಆಚೆಯ ತೀರಕ್ಕೆ ಹೋದರೆ ಅಲ್ಲಿ ಸುತೀಕ್ಷ್ಣಮುನಿಯ ಆಶ್ರಮವನ್ನು ಕಾಣುವ. ಅಲ್ಲಿಗೆ ಇದೇ ದಾರಿ. ಎಲೈ ಶ್ರೀರಾಮ, ನಾನು ಈ ಶರೀರವನ್ನು ಬಿಟ್ಟು ಸ್ವರ್ಗಲೋಕಕ್ಕೆ ಹೋಗುತ್ತಲಿದ್ದೇನೆ. ಒಂದೆಂ ಕ್ಷಣಮಾತ್ರ ನೋಡುತ್ತಿರು ಎಂದು ಹೇಳಿ ನಿತ್ಯಾಗ್ನಿಹೋತ್ರವನ್ನು ಮಾಡಿ ಆ ಶ್ರೌತಾಗ್ನಿಯನ್ನು ಆಜ್ಯಾಹುತಿಗಳಿಂದ ಪ್ರಜ್ವಲಿಸಿದನು. ಅನಂತರ ಶ್ರೌತಾಗ್ನಿಜ್ವಾಲೆಯನ್ನು ಪ್ರವೇಶಿಸಿ ರಕ್ತ ಮಾಂಸ ಮೇದಸ್ಸು ಮಜ್ಜೆ ಅಸ್ಥಿ ಶುಕ್ಲಗಳೆಂಬ ಸಪ್ತಧಾತುವಿಕಾರವಾದ ಶರೀರವನ್ನು ಬಿಟ್ಟು ದಿವ್ಯವಾಗಿ ಮೂವತ್ತು ವರುಷದ ಮೋಹನವಾದ ಯೌವನಾವಸ್ಥೆಯನ್ನು ಪಡೆದು ಸಾಕ್ಷಾತ್ ಯಜ್ಞಪುರುಷನ ರೀತಿಯಲ್ಲಿ ಅತ್ಯಂತ ಪ್ರಕಾಶಮಾನವಾದ ಶರೀರಕಾಂತಿಯುಳ್ಳವನಾಗಿ ಒಪ್ಪುತ್ತ, ಆಹಿತಾಗ್ನಿಗಳಾಗಿ ಮಹಾತ್ಮರಾದ ಯೆಷಿಗಳೆ ಲೋಕಗಳನ್ನೂ ದೇವತೆಗಳ ಲೋಕಗಳನ್ನೂ ದಾಟಿ ಬ್ರಹ್ಮಲೋಕಕ್ಕೆ ಹೋಗಲು ಬ್ರಹ್ಮದೇವನು ಆ ಮುನೀಶರನನ್ನು ಸ್ವಾಗತ ವಚನಾದಿಗಳಿಂದ ಸತ್ಕರಿಸಿದನು.

ಮುಂದುವರಿಯುವುದು...



• ಶ್ರೀ. ವಿನೋದ ಕಾಮತ್

**ಹಿಂದೂಗಳ ಹಬ್ಬಗಳಲ್ಲಿ ಶ್ರೀ ಗಣೇಶ ಚತುರ್ಥಿಗೆ ವಿಶೇಷ ಸ್ಥಾನವಿದೆ. ಶ್ರೀ ಗಣೇಶ ಚತುರ್ಥಿಯ ದಿನದಂದು ಮತ್ತು ಈ ಹಬ್ಬದ ಇತರ ದಿನಗಳಂದು ಶ್ರೀ ಗಣೇಶತತ್ತ್ವವು ಇತರ ದಿನಗಳ ತುಲನೆಯಲ್ಲಿ 1000 ಪಟ್ಟು ಹೆಚ್ಚು ಕಾರ್ಯರತವಾಗಿರುತ್ತದೆ. ಇಂತಹ ಸಮಯದಲ್ಲಿ ಶ್ರೀ ಗಣಪತಿಯ ಉಪಾಸನೆಯನ್ನು ಮಾಡುವುದರಿಂದ ಆಧ್ಯಾತ್ಮಿಕ ಸ್ತರದಲ್ಲಿ ಗಣೇಶತತ್ತ್ವದ ಹೆಚ್ಚು ಲಾಭವಾಗುತ್ತದೆ.**

# ಗಣೇಶನ ಪೂಜೆಗೆ ವಿಶಿಷ್ಟ ವಸ್ತು ದೂರ್ವೆ

ಗಣೇಶಭಕ್ತರಿಗೆ ವಿಘ್ನಹರ್ತಾ, ಸಿದ್ಧಿದಾತಾ ಮತ್ತು ಅಷ್ಟದಿಕ್ಕುಗಳ ಅಧಿಪತಿಯಾದ ಶ್ರೀ ಗಣೇಶನ ಭಾವಪೂರ್ಣ ಪೂಜೆಯನ್ನು ಮಾಡಿ ಅವನ ಆಶೀರ್ವಾದವನ್ನು ಪಡೆಯುವ ಹಂಬಲ ಸದಾ ಇರುತ್ತದೆ. ಗಣೇಶಭಕ್ತರು ಗಣೇಶಪೂಜೆಯನ್ನು ಭಾವಪೂರ್ಣವಾಗಿ ಮಾಡುವಂತಾಗಲಿ, ಅವರ ಮೇಲೆ ಗಣಪತಿಯ ಕೃಪೆಯಾಗಲಿ ಎಂಬ ಉದ್ದೇಶದಿಂದ ಶ್ರೀ ಗಣೇಶ ಚತುರ್ಥಿಯನ್ನು ಶಾಸ್ತ್ರೀಯವಾಗಿ ಹೇಗೆ ಆಚರಿಸಬೇಕು ಎಂಬ ಮಾರ್ಗದರ್ಶನವನ್ನು ಮುಂದಿನ ಲೇಖನದ ಮೂಲಕ ನೀಡಲಾಗಿದೆ. ಗಣೇಶನ ಪೂಜೆಯಲ್ಲಿ ದೂರ್ವೆಗೆ ವಿಶೇಷ ಮಹತ್ವವಿದೆ. ದೂಃಅವಮ್ ಹೀಗೆ ದೂರ್ವೆ ಈ ಶಬ್ದವು ನಿರ್ಮಾಣವಾಗಿದೆ. 'ದೂಃ' ಅಂದರೆ ದೂರದಲ್ಲಿ ಇರುವುದು ಮತ್ತು 'ಅವಮ್' ಅಂದರೆ ಯಾವುದು ಹತ್ತಿರ ತರುತ್ತದೆಯೋ ಅದು. ದೂರದಲ್ಲಿರುವ ಶ್ರೀ ಗಣೇಶನ ಪವಿತ್ರಕಗಳನ್ನು ಯಾವುದು ಹತ್ತಿರ ತರುತ್ತದೆಯೋ, ಅದುವೇ ದೂರ್ವೆ ಆಗಿದೆ.

### ಶ್ರೀ ಗಣಪತಿಗೆ ದೂರ್ವೆಯನ್ನು ಅರ್ಪಿಸುವುದರ ಕಾರಣಗಳು

**ಪೌರಾಣಿಕ ಕಾರಣ:** ಗಣಪತಿಯು ತನ್ನನ್ನು ಮದುವೆಯಾಗಬೇಕೆಂದು ಓರ್ವ ಅಪ್ಸರೆಯು ಧ್ಯಾನಮಗ್ನನಾಗಿದ್ದ ಗಣಪತಿಯ ಧ್ಯಾನಭಂಗ ಮಾಡಿದಳು. ಗಣಪತಿಯು ವಿವಾಹಕ್ಕೆ ನಿರಾಕರಿಸಿದ್ದರಿಂದ ಅಪ್ಸರೆಯು ಗಣಪತಿಗೆ ಶಾಪ ಕೊಟ್ಟಳು. ಇದರಿಂದ ಗಣಪತಿಯ ತಲೆಗೆ ದಾಹವಾಗತೊಡಗಿತು. ಈ ದಾಹವನ್ನು ಕಡಿಮೆ ಮಾಡಿಕೊಳ್ಳಲು ಗಣಪತಿಯು ತಲೆಯ ಮೇಲೆ ದೂರ್ವೆಗಳನ್ನು ಧರಿಸಿದನು. ಈ ಕಾರಣಕ್ಕಾಗಿ ಗಣಪತಿಗೆ ದೂರ್ವೆಗಳನ್ನು ಅರ್ಪಿಸುತ್ತಾರೆ.

**ಆಯುರ್ವೇದಕ್ಕನುಸಾರ ಕಾರಣ:** ಆಯುರ್ವೇದವು ಸಹ ದೂರ್ವೆಯ ರಸದಿಂದ ಶರೀರದ ಉಷ್ಣತೆಯು ಕಡಿಮೆಯಾಗುತ್ತದೆ ಎಂದು ಹೇಳುತ್ತದೆ.

**ಆಧ್ಯಾತ್ಮಿಕ ಕಾರಣ:** ನಾವು ಪೂಜಿಸುವ ಮೂರ್ತಿಯಲ್ಲಿ ದೇವತ್ವವು ಹೆಚ್ಚಿಗೆ ಬಂದು ನಮಗೆ ಚೈತನ್ಯದ ಲಾಭವಾಗಬೇಕು ಎಂಬುದು ಪೂಜೆಯ ಒಂದು ಉದ್ದೇಶವಾಗಿರುತ್ತದೆ. ಆದುದರಿಂದ ಆಯಾಯ ದೇವತೆಗಳ ತತ್ತ್ವವನ್ನು ಹೆಚ್ಚೆಚ್ಚು ಆಕರ್ಷಿಸುವಂತಹ ವಸ್ತುಗಳನ್ನು ದೇವತೆಗಳಿಗೆ ಅರ್ಪಿಸುವುದು ಸೂಕ್ತವಾಗಿದೆ. ದೂರ್ವೆಯಲ್ಲಿ ಗಣೇಶತತ್ತ್ವವನ್ನು ಆಕರ್ಷಿಸುವ ಕ್ಷಮತೆಯು ಎಲ್ಲಕ್ಕಿಂತ ಹೆಚ್ಚಿಗೆ ಇರುವುದರಿಂದ ಗಣಪತಿಗೆ ದೂರ್ವೆಗಳನ್ನು ಅರ್ಪಿಸುತ್ತಾರೆ.

**ದೂರ್ವೆ ಹೇಗಿರಬೇಕು ?:** ಗಣಪತಿಗೆ ಎಳೆಯ ದೂರ್ವೆಗಳನ್ನು ಅರ್ಪಿಸಬೇಕು. ಎಳೆಯ ದೂರ್ವೆಗೆ 'ಬಾಲತೃಣಮ್' ಎನ್ನುತ್ತಾರೆ. ಬಲಿತಿರುವ ದೂರ್ವೆಯು ಒಂದು ರೀತಿಯ ಹುಲ್ಲಿನಂತೆಯೇ ಇರುತ್ತದೆ. ದೂರ್ವೆಗಳಿಗೆ 3, 5, 7 ಹೀಗೆ ಬೆಸ ಸಂಖ್ಯೆಯ ಗರಿಗಳಿರಬೇಕು.

### ದೂರ್ವೆಗಳ ಸಂಖ್ಯೆ ಎಷ್ಟಿರಬೇಕು ?

**ಬೆಸ ಸಂಖ್ಯೆಗಳು ಶಕ್ತಿಗೆ ಸಂಬಂಧಿಸಿರುತ್ತವೆ. ದೂರ್ವೆಗಳನ್ನು ಹೆಚ್ಚಾಗಿ ಬೆಸ ಸಂಖ್ಯೆಗಳಲ್ಲಿ ಅರ್ಪಿಸುತ್ತಾರೆ. ಬೆಸ ಸಂಖ್ಯೆಗಳಿಂದ ಮೂರ್ತಿಯಲ್ಲಿ ಶಕ್ತಿಯು ಹೆಚ್ಚು ಪ್ರಮಾಣದಲ್ಲಿ ಬರುತ್ತದೆ. ಗಣಪತಿಗೆ ವಿಶೇಷವಾಗಿ 21 ದೂರ್ವೆಗಳನ್ನು ಅರ್ಪಿಸುತ್ತಾರೆ. 21 ಈ ಸಂಖ್ಯೆಯು ಸಂಖ್ಯಾಶಾಸ್ತ್ರಕ್ಕನುಸಾರ 2 + 1=3 ಹೀಗೆ ಆಗಿದೆ. ಶ್ರೀ ಗಣಪತಿಯು '3' ಈ ಸಂಖ್ಯೆಗೆ ಸಂಬಂಧಿಸಿದ್ದಾನೆ. '3' ಈ ಸಂಖ್ಯೆಯು ಕರ್ತ, ಧರ್ತದೊಂದಿಗೆ ಹರ್ತವೂ ಆಗಿರುವುದರಿಂದ ಈ ಶಕ್ತಿಯಿಂದ 360 ಲಹರಿಗಳನ್ನು ನಾಶ ಮಾಡಲು ಸಾಧ್ಯವಾಗುತ್ತದೆ. ಸಮ ಸಂಖ್ಯೆಗಳಲ್ಲಿ ದೂರ್ವೆಗಳನ್ನು ಅರ್ಪಿಸಿದರೆ 360 ಲಹರಿಗಳು ಹೆಚ್ಚಿಗೆ ಆಕರ್ಷಿತವಾಗುತ್ತವೆ ಮತ್ತು ನಂತರ 108 ಲಹರಿಗಳೂ ಆಕರ್ಷಿತವಾಗುತ್ತವೆ.**

**ದೂರ್ವೆಯು ಎಷ್ಟು ಉದ್ದವಾಗಿರಬೇಕು?:** ಮೊದಲು ಗಣಪತಿಯ ಮೂರ್ತಿಯು ಸುಮಾರು ಒಂದು ಮೀಟರಿನಷ್ಟು ಎತ್ತರವಾಗಿರುತ್ತಿತ್ತು. ಆದುದರಿಂದ ಸಮಿತ್ತಿನಷ್ಟು ಉದ್ದದ ದೂರ್ವೆಗಳನ್ನು ಅರ್ಪಿಸುತ್ತಿದ್ದರು. ಮೂರ್ತಿಯೇ ಸಮಿತ್ತುಗಳ ಆಕಾರದಷ್ಟು ಇದ್ದರೆ ಚಿಕ್ಕ ಆಕಾರದ ದೂರ್ವೆಗಳನ್ನು ಅರ್ಪಿಸಬೇಕು. ಮತ್ತು ಮೂರ್ತಿಯು ತುಂಬಾ ದೊಡ್ಡದಾಗಿದ್ದರೂ ಸಮಿತ್ತಿನ ಆಕಾರದ ದೂರ್ವೆಗಳನ್ನೇ ಅರ್ಪಿಸಬೇಕು.

ಸಮಿತ್ತುಗಳನ್ನು ಒಟ್ಟಿಗೆ ಕಟ್ಟುವಂತೆ ದೂರ್ವೆಗಳನ್ನೂ ಒಟ್ಟಿಗೆ ಕಟ್ಟುತ್ತಾರೆ. ದೂರ್ವೆಗಳನ್ನು ಒಟ್ಟಿಗೆ ಕಟ್ಟುವುದರಿಂದ ಅವುಗಳ ಸುಗಂಧವು ಹೆಚ್ಚು ಸಮಯ ಉಳಿಯುತ್ತದೆ. ಅವು ಹೆಚ್ಚು ಸಮಯ ತಾಜಾ ಆಗಿರಬೇಕೆಂದು ಅವುಗಳನ್ನು ನೀರಿನಲ್ಲಿ ಅದ್ದಿ ಅರ್ಪಿಸುತ್ತಾರೆ. ಇವುಗಳಿಂದ ಗಣಪತಿಯ ಪವಿತ್ರಕಗಳು ಹೆಚ್ಚು ಕಾಲ ಮೂರ್ತಿಯಲ್ಲಿ ಉಳಿಯುತ್ತವೆ.

# ವಿಶ್ವಾಸ್ .ಡಿ. ಗೌಡರಿಗೆ ಡಾ. ಅ.ನ.ಕೃ ಸಾರ್ವಭೌಮ ರಾಜ್ಯ ಪ್ರಶಸ್ತಿ

• ಉದಯವಾಹಿನಿ, ಸಕಲೇಶಪುರ

ಕರ್ನಾಟಕ ರಾಜ್ಯ ಬರಹಗಾರರ ಸಂಘ (ರಿ) ರಾಜ್ಯ ಘಟಕ ಹೂವಿನಹಡಗಲಿ, ಜಿಲ್ಲಾ ಘಟಕ ಹಾಸನದ ವತಿಯಿಂದ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರನ್ನು ರಾಜ್ಯಮಟ್ಟದಲ್ಲಿ ಗೌರವಿಸುವ ಕಾರ್ಯಕ್ರಮ ಹಾಸನದಲ್ಲಿ ಜರುಗುತ್ತಿದೆ. ಹಾಸನದ ಕನ್ನಡ ಸಾಹಿತ್ಯ ಪರಿಷತ್ ಸಭಾಂಗಣದಲ್ಲಿ ಆಗಸ್ಟ್ 31, 2025 (ಭಾನುವಾರ) ಬೆಳಿಗ್ಗೆ 9:30ಕ್ಕೆ ನಡೆಯಲಿರುವ ಈ ವಿಶೇಷ ಕಾರ್ಯಕ್ರಮದಲ್ಲಿ ಧೀಮಂತ ನಾಯಕ ಶ್ರೀ ಎಚ್. ಜ್ವಾಲನಯ್ಯ ಅವರ ಸ್ಮರಣಾರ್ಥ ಕೃತಿ ಬಿಡುಗಡೆ, ಕಾವ್ಯಗಾನ, ಕಲಾ ಕುಂಚ, ಭರತನಾಟ್ಯ ಸೇರಿದಂತೆ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

ಇದೇ ಸಂದರ್ಭದಲ್ಲಿ ಸಾಧಕರಿಗೆ ರಾಜ್ಯಮಟ್ಟದ ಸನ್ಮಾನ ಕಾರ್ಯಕ್ರಮವೂ ನಡೆಯಲಿದೆ. ನಾಡು, ನುಡಿ, ಸಾಹಿತ್ಯ, ಪತ್ರಿಕಾ ಮಾಧ್ಯಮ ಹಾಗೂ ಸಾಮಾಜಿಕ ಸೇವಾ ಕ್ಷೇತ್ರಗಳಲ್ಲಿ ಸಲ್ಲಿಸಿರುವ ಅಮೂಲ್ಯ ಕೊಡುಗೆಯನ್ನು ಪರಿಗಣಿಸಿ, ಶ್ರೀಯುತ ವಿಶ್ವಾಸ್ .ಡಿ. ಗೌಡರಿಗೆ ಡಾ. ಅ.ನ.ಕೃ ಸಾರ್ವಭೌಮ ರಾಜ್ಯ ಪ್ರಶಸ್ತಿ ಗಣ್ಯರ ಸಮ್ಮುಖದಲ್ಲಿ ಪ್ರದಾನವಾಗಲಿದೆ ಎಂದು ಬರಹಗಾರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷರಾದ ಶ್ರೀ ಸುಂದರೇಶ್ ಡಿ. ಉಡುವಾರೆ ತಿಳಿಸಿದ್ದಾರೆ.

ಈ ಸಂತಸದ ಕ್ಷಣದಲ್ಲಿ ರಾಜ್ಯ ಘಟಕದ ಅಧ್ಯಕ್ಷರಾದ ಶ್ರೀ ಮಧುನಾಯಕ ಲಂಬಾಣಿ ಅವರು ಹರ್ಷ ವ್ಯಕ್ತಪಡಿಸಿ, ಕರ್ನಾಟಕ ರಾಜ್ಯ ಬರಹಗಾರರ ಸಂಘ (ರಿ), ಸಕಲೇಶಪುರ ತಾಲ್ಲೂಕಿನ ಅಧ್ಯಕ್ಷ, ಲೇಖಕ, ಸಂಘಟಕ, ಪತ್ರಕರ್ತ, ಅಂಕಣಕಾರ, ಜೀವನಾಡಿ ಮಾಸಪತ್ರಿಕೆಯ ಉಪಸಂಪಾದಕರಾದ ವಿಶ್ವಾಸ್ .ಡಿ. ಗೌಡರಿಗೆ ಈ ಪ್ರಶಸ್ತಿ ಲಭಿಸುತ್ತಿರುವುದು ನಮಗೆ ಹೆಮ್ಮೆ ತಂದಿದೆ ಎಂದು ತಿಳಿಸಿದ್ದಾರೆ.



**ಕನ್ನಡ ಸಾಹಿತ್ಯ ಲೋಕದ ಹೆಮ್ಮೆಯ ಸಂಗತಿ**

**ರಾಜ್ಯದ ಅನೇಕ ವೇದಿಕೆಗಳಲ್ಲಿ ತಮ್ಮ ವೈಖರಿಯ ಬರಹಗಳ ಮೂಲಕ ಹಾಗೂ ಕಾವ್ಯಸೃಷ್ಟಿಗಳ ಮೂಲಕ ಪ್ರೇಕ್ಷಕ-ಓದುಗರ ಮೆಚ್ಚುಗೆ ಗಳಿಸಿರುವ ವಿಶ್ವಾಸ್ .ಡಿ. ಗೌಡರಿಗೆ ಈಗಾಗಲೇ ಹಲವಾರು ರಾಜ್ಯಮಟ್ಟದ ಪ್ರಶಸ್ತಿಗಳು ಲಭಿಸಿವೆ. ಅವರ ಈ ಸಾಧನೆ ಕನ್ನಡ ಸಾಹಿತ್ಯ ಲೋಕದ ಹೆಮ್ಮೆಯ ಸಂಗತಿಯಾಗಿದೆ.**




ಗಣೇಶೋತ್ಸವ ಸಮಾರಂಭಗಳು ನಗರಗಳು ಸೇರಿದಂತೆ ಪ್ರತಿ ರಾಜ್ಯದ ಎಲ್ಲಾ ಹಳ್ಳಿ ಹಳ್ಳಿಗಳಲ್ಲಿ ಮನೆಗಳಲ್ಲಿ ಮನೆಯ ಅಂಗಳದ ಬೀದಿಗಳಲ್ಲಿ ಗಣೇಶ ಹಬ್ಬ ಆಚರಿಸುತ್ತಾರೆ. ಗಣೇಶೋತ್ಸವಗಳು ಅತೀ ವಿಜೃಂಭಣೆಯಿಂದ ಆಚರಿಸುವ ಹಬ್ಬಗಳಲ್ಲಿ ಗಣೇಶ ಚತುರ್ಥಿಗೆ ತನ್ನದೇ ಆದ ವೈಶಿಷ್ಟವಿದೆ. ಭಾದ್ರಪದ ಮಾಸ ಶುಕ್ಲಪಕ್ಷ ಚತುರ್ಥಿಯಂದು ಮಾಡುವ ಗಣೇಶನ ಹಬ್ಬ ಒಂದು ರೀತಿಯಲ್ಲಿ ವಿನಾಯಕನ ಹುಟ್ಟು ಹಬ್ಬವೆಂದೇ ಹೇಳಬಹುದು. ಗಣೇಶನ ಹಬ್ಬವನ್ನು ದೇಶದಾದ್ಯಂತ ಆಚರಿಸುತ್ತಾರೆ, ಜಾತಿ ಮತ ಬೇದವಿಲ್ಲದೇ ಶ್ರೀಗಣೇಶವನ್ನು ವೈಭವದಿಂದ 5 ದಿನಗಳವರೆಗೆ ಪೂಜಿಸುತ್ತಾರೆ. ಕೆಲವರು ಒಂದೇ ದಿನ ಪೂಜಿಸುತ್ತಾರೆ.

ಗಣೇಶನ ಪೂಜೆಯ ಮೊದಲ ದಿನವೆ ಗೌರಿಪೂಜೆ ಮಾಡುತ್ತಾರೆ. ದೇಶದಲ್ಲೇ ಅತಿ ಹೆಚ್ಚು ವೈಭವದಿಂದ ಗಣೇಶಹಬ್ಬ ಆಚರಿಸುವ ಮಹಾರಾಷ್ಟ್ರ, ಗೋವಾ, ತಮಿಳುನಾಡು ಮತ್ತು ಕರ್ನಾಟಕ ರಾಜ್ಯದ ಪ್ರತಿಯೊಂದು ಮನೆ ಮನೆಯಂಗಳದಲ್ಲಿ ಗಣಪತಿಯ ಮೂರ್ತಿಯನ್ನು ತಂದು ಒಂದು ದಿನ, ಮೂರು, ಐದು, ಏಳು ಹನ್ನೊಂದು ಹಾಗು ಇಪ್ಪತ್ತೊಂದು ದಿನಗಳವರೆಗೆ ಪೂಜಿಸಿ, ಆರಾಧಿಸುತ್ತಾರೆ. ಮನೆಯಲ್ಲಿ ಯಾವುದೇ ಒಂದು ಶುಭ ಸಮಾರಂಭ ನಡೆಯುವ ಸಂದರ್ಭದಲ್ಲಿ ಶುಭ ಸಮಾರಂಭ ಆರಂಭವಾಗುವುದೇ ಗಣೇಶನ ಪೂಜೆಯಿಂದ ಗಣಪತಿಯನ್ನು ವಿಘ್ನನಿವಾರಕ ಎನ್ನುತ್ತಾರೆ. ನಾವು ಮಾಡುವಂತಹ ಕೆಲಸವು ಯಾವುದೇ ತೊಂದರೆಯಿಲ್ಲದೇ ಶೀಘ್ರವಾಗಿ ಪೂರ್ಣವಾಗಲಿ ಎಂದು ವಿನಾಯಕನಿಗೆ ಪೂಜೆ ಮಾಡುತ್ತೇವೆ. ಗಣೇಶ ಏಕದಂತ, ಮಂಗಳಮೂರ್ತಿ ವಿಘ್ನೇಶ್ವರ, ಲಂಬೋದರ, ವಿನಾಯಕ ಗಜಮುಖ ಮೋಷಿಕವಾಹಕ, ಮೋದಕ ಪ್ರಿಯ, ಪಿಲ್ಲೈಯಾರ್, ಮುಂತಾದ ಅನೇಕ ಹೆಸರುಗಳಿವೆ. ವಿಘ್ನಗಳನ್ನು ವಿನಾಶ ಮಾಡುವುದರಿಂದ ವಿಘ್ನೇಶ್ವರ ಎಂದು ಕರೆಯುತ್ತೇವೆ. ಗಣೇಶ ಮೂರ್ತಿಗಳನ್ನು ವಿಸರ್ಜಿಸುವ ಮುನ್ನ ಹೂವು, ವಸ್ತ್ರ, ಪೂಜ ಸಾಮಗ್ರಿಗಳು, ಅಲಂಕಾರಿಕ ವಸ್ತುಗಳು ಕಾಗದ ಪ್ಲಾಸ್ಟಿಕ್‌ನಿಂದ ಮಾಡಲಾದ ವಸ್ತುಗಳನ್ನು ಮುಂತಾದವುಗಳನ್ನು ತೆಗೆಯಬೇಕು. ವಿಸರ್ಜನೆ ಮಾಡುವ ಗಣೇಶನ ಮೂರ್ತಿಯನ್ನು ನೀರಿನಲ್ಲಿ ವಿಸರ್ಜನೆ ಮಾಡುವುದರಿಂದ ನೀರು ಪವಿತ್ರವಾಗುತ್ತದೆ. ಕೆರೆ, ಸಮುದ್ರದ ನೀರಿನಲ್ಲಿ ಮಣ್ಣಿನ ಗಣೇಶ ವಿಗ್ರಹಗಳನ್ನು ಮಾತ್ರ ನೀರಿನಲ್ಲಿ ವಿಸರ್ಜನೆ ಮಾಡಬೇಕು. ಪ್ಲಾಸ್ಟಿಕ್ ವಸ್ತುಗಳು ಮರ ಮತ್ತು ಬಿದಿರು ಕಡ್ಡಿಗಳು ಕಸ ವಿಲೇವಾರಿ ಸ್ಥಳಗಳಿಗೆ ನೀಡಬೇಕು. ನಮ್ಮ ಸುತ್ತಮುತ್ತ ಇರುವ ಪರಿಸರ ನಾವು ಕಾಪಡಬೇಕು. ಈ ಗಣೇಶ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಮಣ್ಣಿನಿಂದ ಮಾಡಿದ ಗಣಪತಿಗಳನ್ನು ನಮ್ಮ ನಮ್ಮ ಮನೆಗಳಲ್ಲಿ ಪ್ರತಿಷ್ಠಾಪನೆ ಮಾಡಿ ಆಚರಿಸೋಣ.

### ಗಣೇಶ ಹಬ್ಬಕ್ಕೆ ವಿವಿಧ ಬಗೆಯ ಕಜಾಯ

**ಕುಚ್ಚಲಕ್ಕಿ ಕಜ್ಜಾಯ :** ಕುಚ್ಚಲಕ್ಕಿ, ಬೆಲ್ಲ, ಕಾಯಿತುರಿ ತಲಾ ಒಂದು ಕಪ್, ಏಲಕ್ಕಿಪುಡಿ 1ಚಮಚ.

**ವಿಧಾನ:** ಕುಚ್ಚಲಕ್ಕಿಯನ್ನು ಪಟಪಟ ಸಿಡಿಯುವ ತನಕ ಹುರಿಯಿರಿ. ಅನಂತರ ತರಿತರಿಯಾಗಿ ಬೀಸಿ, ಮಿಕ್ಸಿಗೆ ಹಾಕಿಕೊಳ್ಳಿ, ಬೆಲ್ಲ ಕಾಯಿತುರಿ ಏಲಕ್ಕಿ ಮಿಶ್ರಣಕ್ಕೆ ಅಕ್ಕಿಯ ತರಿಯನ್ನು ಬೆರಸಿ.



☛ ವಿ.ಎಂ.ಎಸ್.ಗೋಪಿ
• ಉದಯವಾಹಿನಿ, ವಿಶೇಷ

## ವೀರೇಂದ್ರ ಹೆಗ್ಗಡೆರವರಿಗೆ ಧೈರ್ಯ, ಆತ್ಮಸ್ಥೈರ್ಯ ಲಭಿಸಲಿ

# ದುಷ್ಟ ಶಕ್ತಿಗಳಿಗೆ ಸೋಲಾಗಲಿ

• ಉದಯವಾಹಿನಿ, ರಾಜಾಜಿನಗರ



☛ ಉದಯವಾಹಿನಿ ಚಿತ್ರ

**ಧರ್ಮ ರಕ್ಷಣಾ ಪೂಜೆ**


ಧರ್ಮಸ್ಥಳ ಪಾದಯಾತ್ರ ಸಮಿತಿ ವತಿಯಿಂದ ಶ್ರೀ ಕ್ಷೇತ್ರ ಧರ್ಮಸ್ಥಳ ವಿರುದ್ಧ ಅಪಪ್ರಚಾರ, ಷಡ್ಯಂತ್ರ , ನಿರಾಧಾರ ಅರೋಪ ವಿರುದ್ದ ಧರ್ಮ ರಕ್ಷಣೆಗಾಗಿ ಧರ್ಮದ ರಕ್ಷಣಾ ಪೂಜೆ ಕಾರ್ಯಕ್ರಮ. ಮಾಜಿ ಶಿಕ್ಷಣ ಸಚಿವರು, ಶಾಸಕರಾದ ಎಸ್.ಸುರೇಶ್ ಕುಮಾರ್ ರವರ ನೇತೃತ್ವದಲ್ಲಿ ಮೋದಿ ವೃತ್ತದಿಂದ ಪಾದಯಾತ್ರೆ ಮೂಲಕ ಸಾಗಿ ಶ್ರೀ ಶನ್ಯೈಶ್ಚರ ಸ್ವಾಮಿ ಸನ್ನಿಧಾನ ಮತ್ತು ಶ್ರೀ ಮಂಜುನಾಥ ಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು. ಎಸ್.ಸುರೇಶ್ ಕುಮಾರ್ ರವರು ಮಾತನಾಡಿ ಶ್ರೀ ಕ್ಷೇತ್ರದ ಧರ್ಮಸ್ಥಳದ ವಿರುದ್ದ ವ್ಯವಸ್ಥಿತವಾಗಿ ಅಪಪ್ರಚಾರ, ಷಡ್ಯಂತ್ರ, ಪಿತೂರಿ ಮಾಡುತ್ತಿದ್ದಾರೆ, ನಮ್ಮ ಧರ್ಮದ ವಿರುದ್ದ ವ್ಯವಸ್ಥಿತ ಸಂಚು ನಡೆಯುತ್ತಿದೆ.

ಬುರುಡೆ ಬಿಟ್ಟ ಬುರುಡೆ ವ್ಯಕ್ತಿಯ ಬಗ್ಗೆ ಪೂರ್ವಪರ ಯೋಚನೆ ಮಾಡದೇ ಇರುವುದು ಸರ್ಕಾರದ ವೈಫಲ್ಯ ಎಂದು ಕಾಣುತ್ತದೆ. ಅವನ ಮಾತುಗಳಿಗೆ ಸರ್ಕಾರ ನಂಬಿರುವುದು ದುರಂತ. ಕಂಚಿ ಕಾಮಕೋಟಿ, ಶಬರಿಮಲೆ ಶ್ರೀ ಕ್ಷೇತ್ರ ಧರ್ಮಸ್ಥಳ ವಿರುದ್ದ ಮಾಡಿದ ಸಂಚುಗಳು ಸೋಲುತ್ತಿದೆ. ಜನರ ಭಾವನೆ ಭರವಸೆ ಶ್ರೀ ಕ್ಷೇತ್ರ ಧರ್ಮಸ್ಥಳದ ಮೇಲಿದೆ. ಜನರ ನಂಬಿಕೆಗೆ ಧಕ್ಕೆ ತರುತ್ತಿರುವ ವ್ಯಕ್ತಿಗಳಿಗೆ ಒಳ್ಳೆ ಬುದ್ದಿ ಕೊಡಲಿ ಎಂದು ಮಂಜುನಾಥನಲ್ಲಿ ಪ್ರಾರ್ಥಿಸುತ್ತೇನೆ. ಶ್ರೀ ಕ್ಷೇತ್ರ ಧರ್ಮಸ್ಥಳ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆರವರಿಗೆ ಧೈರ್ಯ, ಆತ್ಮಸ್ಥೈರ್ಯ ಲಭಿಸಲಿ, ದುಷ್ಟ ಶಕ್ತಿಗಳಿಗೆ ಸೋಲಾಗಲಿ ಎಂದು ವಿಶೇಷ ಪೂಜೆ. ಷಡ್ಯಂತ್ರ ಮಾಡಿದವರು ಪರಿತಪಿಸುತ್ತಿದ್ದಾರೆ. ಅವರಿಗೆ ಒಳ್ಳೆ ಬುದ್ದಿ ಕೊಡಲಿ. ಧರ್ಮ ಉಳಿಯಬೇಕು, ಅಧರ್ಮ ಅಳಿಯಬೇಕು ಎಂದು ವಿಶೇಷ ಪೂಜೆ ಸಲ್ಲಿಸುತ್ತಿದ್ದೇವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಉಪಮಹಾಪೌರರಾದ ರಂಗಣ್ಣ,ಮಾಜಿ ಪಾಲಿಕೆ ಸದಸ್ಯರುಗಳಾದ ಎಂ.ಮುನಿರಾಜು, ರಾಜಣ್ಣ, ಹೆಚ್.ಆರ್.ಕೃಷ್ಣಪ್ಪ, ಹೆಚ್.ವಿಜಯಕುಮಾರ್,ದೀಪಾ ನಾಗೇಶ್, ಪ್ರತಿಮ,ಮಂಡಲದ ಅಧ್ಯಕ್ಷರಾದ ಸುದರ್ಶನ್, ಪ್ರಧಾನ ಕಾರ್ಯದರ್ಶಿ ಗಿರೀಶ್ ಗೌಡ, ಬಿಜೆಪಿ ಮುಖಂಡರುಗಳಾದ ಕಾಮಧೇನು ಸುರೇಶ್, ಗಂಗಾಧರ್ (ಗೂಳಿ),ಯಶಸ್ ನಾಯಕ್, ಕೇಶವಮೂರ್ತಿ, ರಾಕೇಶ್, ವಿಶ್ವನಾಥ್, ಮೋಹನ್ ರಾಜು, ಕಿರಣ್, ಅನಿಲ್ ರಂಗಣ್ಣ,ಯುವ ಮೋರ್ಚಾ ಅಧ್ಯಕ್ಷರಾದ ಸಂಜಯ್ ಕುಮಾರ್ ರವರು ಮತ್ತು ಹಿಂದೂ ಪರ ಹೋರಾಟಗಾರರು, ಬಿಜೆಪಿ ಮುಖಂಡರು, ಕಾರ್ಯಕರ್ತರು ಭಾಗವಹಿಸಿದ್ದರು.

# ಸಂತ ಮದರ್ ತೆರೇಸಾರವರ 115ನೇ ಜನ್ಮದಿನಾಚರಣೆ

**1979ರಲ್ಲಿ ನೊಬೆಲ್ ಶಾಂತಿ ಪ್ರಶಸ್ತಿ: 1980 ರಲ್ಲಿ ಭಾರತ ರತ್ನ ಪ್ರಶಸ್ತಿ, 2016 ರಲ್ಲಿ ವ್ಯಾಟಿಕನ್ ಸಿಟಿಯಲ್ಲಿ ದೊರೆತ ಜಗತ್ಪ್ರಸಿದ್ಧ ಸಂತ ಪದವಿ ಪ್ರಶಸ್ತಿ,ಪದ್ಮಶ್ರೀ ಪ್ರಶಸ್ತಿ, ಮ್ಯಾಗ್ಸೆಸೆ ಪ್ರಶಸ್ತಿ, ನೆಹರು ಶಾಂತಿ ಪ್ರಶಸ್ತಿ, ಟೆಂಪಲ್ಟನ್ ಪ್ರಶಸ್ತಿ, 23 ನೇ ಪೋಪ್ ಜಾನ್ ನೀಡಿದ ಶಾಂತಿ ಪ್ರಶಸ್ತಿ, ಕೇಂಬ್ರಿಡ್ಜ್ ವಿಶ್ವವಿದ್ಯಾಲಯ ನೀಡಿದ ಗೌರವ ಡಾಕ್ಟರೇಟ್ ಹಾಗೂ ಸ್ಯಾನ್ ಡಿಯೋಗೋ ವಿಶ್ವವಿದ್ಯಾಲಯ ನೀಡಿದ ಮಾನವೀಯತೆಯ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಿತು. ಮದರ್ ತೆರೆಸಾರವರ ಮಾನವೀಯತೆಯ ಸಾಕಾರವಾಗಿ, ಕಾರುಣ್ಯ ಮೂರ್ತಿಯಾಗಿ, ವಿಶ್ವ ಮಾತೆಯಾಗಿ,ವಿಶ್ವ ಜನ ಮಾನಸದಲ್ಲಿ ಅಮರರಾಗಿದ್ದಾರೆ.**





**ಕಲಾ ಸಾಹಿತ್ಯ**
**ಕೃಷ್ಣಪ್ಪ**
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

ಮದರ್ ತೆರೇಸಾ 1910 ಆ.26ರಂದು ಯುಗೋಸ್ಲಾವಿಯಾದಲ್ಲಿ ಜನಿಸಿದರು. ಮೂಲ ಹೆಸರು ಆಗ್ನೆಸ್. ಬಾಲ್ಯದಿಂದಲೂ ಗುಣಮಟ್ಟದ ಶಿಕ್ಷಣದ ಜೊತೆಗೆ ದೈವದಲ್ಲಿ ನಂಬಿಕೆ, ಭಕ್ತಿ-ಶ್ರದ್ಧಾ ಭಾವಗಳನ್ನು ತಳೆದಿದ್ದರು. ತಾಯಿಯ ಸದ್ಗುಣಗಳು ಕೂಡ ದೊರಕಿದವು. ಆಗ್ನೆಸ್ 17ನೇ ವಯಸ್ಸಿನಲ್ಲಿ ಕ್ರೈಸ್ತ ಮಿಷನರಿ ಸೇರಿ ಡಬ್ಲಿನ್ ಮತ್ತು ಡಾರ್ಜಿಲಿಂಗಿನಲ್ಲಿ ಸಂನ್ಯಾಸಿಯಾಗಿ ತರಬೇತಿ ಪಡೆದರು.ಆ ಬಳಿಕ ರೋಮನ್ ಕ್ಯಾಥೋಲಿಕ್ ಚರ್ಚಿನಲ್ಲಿ ಸನ್ಯಾಸಿಯಾದ ಇವರಿಗೆ ಮದರ್ ತೆರೇಸಾ ಎಂಬ ಹೆಸರು ಬಂದಿತು. 1929 ರಲ್ಲಿ ದೀನದಲಿತರ, ನಿರಾಶ್ರಿತರ, ಬಡರೋಗಿಗಳ ಸೇವೆ ಮಾಡಲು ಕಲ್ಕತ್ತೆಗೆ ಬಂದರು. ಆ ಬಳಿಕ ಡಾರ್ಜಿಲಿಂಗ್ ನ ಕಾನ್ವೆಂಟ್ ಶಾಲೆಯಲ್ಲಿ ಶಿಕ್ಷಕಿಯಾಗಿ ಎರಡು ವರ್ಷವರೆಗೆ ಸೇವೆ ಸಲ್ಲಿಸಿದರು.

ನಂತರ ತಮ್ಮ ವೃತ್ತಿಗೆ ರಾಜೀನಾಮೆ ನೀಡಿ ಬಡವರ ಹಾಗೂ ಬಡರೋಗಿಗಳ ಸೇವೆಗೆ ಕಂಕಣ ತೊಟ್ಟರು. ಕಲ್ಕತ್ತಾ ರಸ್ತೆಗಳಲ್ಲಿ ಕಡುಬಡವರು, ಬಡರೋಗಿಗಳು, ಯಾವ ನೆರವೂ ಇಲ್ಲದೇ ಹೀನಾಯ ಸ್ಥಿತಿಯಲ್ಲಿ ನರಳುತ್ತಿದ್ದು, ಅಂಥವರ ಬಾಳಿಗೆ ಮದರ್ ತೆರೇಸಾ ಕಣ್ಣೀರಿಟ್ಟರು. ಕಲ್ಕತ್ತಾದಲ್ಲಿ ನಿರ್ಮಲ ಹೃದಯ ಎಂಬ ಕೇಂದ್ರವನ್ನು ಸ್ಥಾಪಿಸಿದರು. ಯಾವ ಚಿಕಿತ್ಸೆ,ಊಟ-ಉಪಚಾರ ಗಳಿಲ್ಲದೇ ನರಳುತ್ತಿರುವ ರೋಗಿಗಳನ್ನು ನಿರ್ಮಲ ಹೃದಯಕ್ಕೆ ಕರೆತಂದು ಅವರಿಗೆ ಶುಶ್ರೂಷೆ ಮಾಡಿದರು. ಅನನ್ಯವಾದ ಮಮತೆ, ಪ್ರೀತಿ, ಕರುಣೆ ತೋರಿದರು. ಈ ಮಧ್ಯದಲ್ಲಿ ಮದರ್ ತೆರೇಸಾ ಅವರಿಗೆ ಭಾರತದ ಪೌರತ್ವ ಕೂಡ ಲಭ್ಯವಾಯಿತು.

ಮಿಷನರೀಸ್ ಆಫ್ ಚಾರಿಟಿ ಅಂಗವಿಕಲ ಹಾಗೂ ಮಾನಸಿಕ ರೋಗಿಗಳಿಗೆ ಈಡಾದ ಮಕ್ಕಳಿಗಾಗಿ ಶಿಶು ಭವನಗಳನ್ನು ಸ್ಥಾಪಿಸಿದರು. ಹಸಿದವರ ಹೊಟ್ಟೆ ತುಂಬಿಸಲು ರೋಗಿಗಳನ್ನು ಉಪಚರಿಸಲು ಅಂಗವಿಕಲ ಮಕ್ಕಳನ್ನು ಪೋಷಿಸಲು, ಕುಷ್ಠ ರೋಗಿಗಳ ಆರೈಕೆಗಾಗಿ ಮದರ್ ತೆರೇಸಾ ಅವರು ಯಾವ ಸಂಕೋಚವೂ ಇಲ್ಲದೆ ಕೈ ಚಾಚಿ ಹಣ ಸಂಗ್ರಹಿಸಿದರು. ಸಂಗ್ರಹಿಸಿದ ಹಣವನ್ನು ಸಾರ್ಥಕ ರೀತಿಯಲ್ಲಿ ವಿನಿಯೋಗಿಸಿದರು. ತಮ್ಮ ಹೃದಯವನ್ನ ಪ್ರೀತಿಗೆ,ತಮ್ಮ ಕೈಗಳನ್ನ ಸೇವೆಗೆ ಮೀಸಲಿಟ್ಟರು. ಇಂದು ಮದರ್ ತೆರೇಸಾ ಅವರಿಂದ ಪ್ರೇರಣೆ ಪಡೆದು ಅವರ ಆದರ್ಶಗಳನ್ನು ಪಾಲಿಸುತ್ತಾ ಅವರ ಮಾರ್ಗದರ್ಶನದಲ್ಲಿ ವಿಶ್ವದ ಹಲವಾರು ರಾಷ್ಟ್ರಗಳಲ್ಲಿ 500 ಸೇವಾ ಕೇಂದ್ರಗಳು ಸ್ಥಾಪಿತವಾಗಿದ್ದು, ಐದು ಸಾವಿರಕ್ಕೂ ಹೆಚ್ಚು ಸಂಖ್ಯೆಯಲ್ಲಿ ಸಹೋದರ, ಸಹೋದರಿಯರು ಸೇವಾ ಕಾರ್ಯದಲ್ಲಿ ತೊಡಗಿದ್ದಾರೆ.

05 ಲಕ್ಷ ಕುಟುಂಬಗಳಿಗೆ ನೆರವು ನೀಡಲಾಗುತ್ತಿದೆ, ಸುಮಾರು 01 ಲಕ್ಷಕ್ಕೂ ಹೆಚ್ಚಿನ ಕುಷ್ಠರೋಗಿಗಳನ್ನು ಈ ಸೇವಾ ಕೇಂದ್ರಗಳಲ್ಲಿ ಉಪಚರಿಸ ಲಾಗುತ್ತಿದೆ. ದಯೆ,ಪ್ರೀತಿ,ಮಮತೆ, ಮಾನವೀಯತೆಗಳಿಂದ ಕೂಡಿದ ಮದರ್ ತೆರೇಸಾ ಅವರು ಭಾರತಕ್ಕೆ ಬಂದು ಸಮಾಜ ಸೇವೆಯನ್ನೇ ತಮ್ಮ ಜೀವಮಾನದ ಧ್ಯೇಯವಾಗಿಸಿಕೊಂಡು ಅದಕ್ಕಾಗಿ ತಮ್ಮ ಬದುಕನ್ನೇ ಅರ್ಪಿಸಿಕೊಂಡ ಮಹಾ ಮಾತೆ.

ಉದಯ ವಾಹಿನಿ

ಪ್ರಾದೇಶಿಕ

ಮಂಗಳವಾರ 26 ಆಗಸ್ಟ್ 2025 | 05

• ಐ.ಟಿ–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅಧಿಕಾರಿಗಳಿಗೆ ಸೂಚನೆ

# ನೆರೆ ಹಾವಳಿ ಎದುರಿಸಲು ಸನ್ನಧರಾಗಿ, ವಿಳಂಬ ಮಾಡದೆ ಪರಿಹಾರ ಒದಗಿಸಬೇಕು

• ಉದಯವಾಹಿನಿ ಕಲಬುರಗಿ

ಇತ್ತೀಚೆಗೆ ಜಿಲ್ಲೆಯಾದ್ಯಂತ ಸುರಿದ ಸತತ ಮಳೆ ಮತ್ತು ಮುಂದಿನ ದಿನದಲ್ಲಿ ಸಂಭಾವ್ಯ ನೆರೆ ಹಾವಳಿ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಅಧಿಕಾರಿಗಳು ಸನ್ನಧರಾಗಬೇಕು ಎಂದು ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅಧಿಕಾರಿಗಳಿಗೆ ಸೂಚಿಸಿದರು.



ಉದಯವಾಹಿನಿ ಚಿತ್ರ

ವಿಡಿಯೋ ಕಾನ್ಫರೆನ್ಸ್ ಮೂಲಕ ಕಲಬುರಗಿ ಜಿಲ್ಲಾಡಳಿತದ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ನೆರೆ ಹಾವಳಿಯಿಂದ ಯಾವುದೇ ರೀತಿಯ ಜನ-ಜಾನುವಾರು ಪ್ರಾಣ ಹಾನಿಯಾಗದಂತೆ ಎಚ್ಚರ ವಹಿಸಬೇಕು. ಮಳೆಯಿಂದ ಮನೆ ಕುಸಿದು ಬಿದ್ದಲ್ಲಿ, ಭಾಗಶ: ಹಾನಿಯಯಾದಲ್ಲಿ ಎನ್.ಡಿ.ಆರ್.ಎಫ್./ ಎಸ್.ಡಿ.ಆರ್.ಎಫ್. ನಿಯಮಾವಳಿ ಪ್ರಕಾರ ತಕ್ಷಣವೇ ಪರಿಹಾರ ಒದಗಿಸಬೇಕು. ಯಾವುದೇ ವಿಳಂಬ ಸಲ್ಲದು ಎಂದು ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

**ಯಾವುದೇ ವಿಳಂಬ ಸಲ್ಲದು**

ಸಹಾಯಕ ಆಯುಕ್ತರು, ತಹಶೀಲ್ದಾರರು ಹಾಗೂ ಸಂಬಂಧಪಟ್ಟ ನೋಡಲ್ ಅಧಿಕಾರಿಗಳು ನದಿ ದಂಡೆ ಪ್ರದೇಶದಲ್ಲಿ ನೆರೆ ಹಾವಳಿಗೆ ತುತ್ತಾಗುವ ಸಂಭಾವ್ಯ ಗ್ರಾಮಗಳಿಗೆ ಭೇಟಿ ನೀಡಿ ಗ್ರಾಮಸ್ಥರಿಗೆ ಸಂಕಷ್ಟದ ಸಮಯದಲ್ಲಿ ಸರ್ಕಾರ ನಿಮ್ಮೊಂದಿಗೆ ಎಂಬುದನ್ನು ಅವರಿಗೆ ಮನವರಿಕೆ ಮಾಡಿಕೊಡಬೇಕು. ಎಲ್ಲಾ ರೀತಿಯ ಸುರಕ್ಷತೆಯ ನೆರವು ಖಾತ್ರಿಪಡಿಸಬೇಕು. ಪ್ರವಾಹದಿಂದ ಆತಂಕದಲ್ಲಿರುವ ಸ್ಥಳಿಯ ನಿವಾಸಿಗಳಿಗೆ ಧೈರ್ಯ ತುಂಬಿ ಅವರ ಆತ್ಮ ವಿಶ್ವಾಸ ಹೆಚ್ಚಿಸಬೇಕು. ಪ್ರವಾಹ ಬಂದಲ್ಲಿ ಏನೆಲ್ಲ ಸುರಕ್ಷಾ ಕ್ರಮ ತೆಗೆದುಕೊಳ್ಳಬೇಕೆಂದು ಅವರಿಗೆ ಅರಿವು ಮೂಡಬೇಕೆಂದರು. ತಾಲ್ಲೂಕು ಮತ್ತು ಗ್ರಾಮ ಮಟ್ಟದ ಎಲ್ಲಾ ಹಂತದ ಅಧಿಕಾರಿ–ಸಿಬ್ಬಂದಿಗಳು ಕೇಂದ್ರಸ್ಥಾನದಲ್ಲಿದ್ದ ಪರಿಸ್ಥಿತಿ ಅನುಗುಣವಾಗಿ ಕಾರ್ಯನಿರ್ವಹಿಸಬೇಕು.

ಸಾರ್ವಜನಿಕರು ನದಿ, ಜಲಾಶಯ, ಕೆರೆ, ಕಟ್ಟೆಯತ್ತ ಬಟ್ಟೆ ಒಗೆಯಲು, ದನ–ಕರು ಮೇಯಿಸಲು ಹೋಗದಂತೆ ಗ್ರಾಮವಾರು ಡಂಗೂರ ಸಾರಬೇಕು. ವಿಶೇಷವಾಗಿ ಯುವ ಸಮುದಾಯ ಇಂತಹ ಸಂದರ್ಭದಲ್ಲಿ ಸೆಲ್ಫಿ, ನೀರಿನೊಂದಿಗೆ ಈಜುವಂತಹ ದುಸ್ಸಾಹಸಗಳಿಗೆ ಮುಂದಾಗುವದನ್ನು ಪೊಲೀಸ್ ಇಲಾಖೆ ತಡೆಯಬೇಕು ಎಂದರು. ಪ್ರವಾಹ ಸಂದರ್ಭದಲ್ಲಿ ಅಫಜಲಪೂರ ತಾಲ್ಲೂಕಿನ ಧಾರ್ಮಿಕ ಸ್ಥಾನಗಳಾದ ದೇವಲ ಗಾಣಗಾಪೂರ ಮತ್ತು ಘತ್ತರಗಾಗೆ ಬರುವ ಭಕ್ತಾದಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ವಿಶೇಷ ಗಮನ ಹರಿಸಬೇಕು.

ಸತತ ಮಳೆಯಾಗುತ್ತಿರುವುದರಿಂದ ಸಾಂಕ್ರಾಮಿಕ ರೋಗಗಳ ಕಾಟ ಹೆಚ್ಚಲಿದ್ದು, ಆರೋಗ್ಯ ಇಲಾಖೆ ಇದರ ನಿಯಂತ್ರಣಕ್ಕೆ ಮುಂದಾಗಬೇಕು. ಮಳೆಗಾಲ ಇರುವುದರಿಂದ ಕಲುಷಿತ ನೀರು ಸೇವನೆಯಿಂದಲೆ ಬಹಳಷ್ಟು ಸಮಸ್ಯೆ ಕಂಡು ಬರುತ್ತವೆ. ಇದರ ನಿಯಂತ್ರಣಕ್ಕೆ ನೀರು ಪೂರೈಕೆಯ ಲ್ಯಾಬ್ ಟೆಸ್ಟ್ ಹೆಚ್ಚಿಸಬೇಕು. ಕಲಬುರಗಿ ಮಹಾನಗರ, ನಗರ–ಪಟ್ಟಣ ಪಂಚಾಯತಿ ಸೇರಿದಂತೆ ಹಳ್ಳಿಯ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆಯಾಗುವಂತೆ ಅಧಿಕಾರಿಗಳು ನೋಡಿಕೊಳ್ಳಬೇಕೆಂದರು.

> ಇದೂವರೆಗಿನ ಮಳೆಯಿಂದಾದ ಬೆಳೆ, ರಸ್ತೆ, ಮನೆ ಹಾನಿ ಕುರಿತು ವಿವರಿಸಿ ಮಾತನಾಡಿದ ಅವರು, ಜಿಲ್ಲೆಯಾದ್ಯಂತ ಇರುವ ಜಲಾಶಯಗಳಲ್ಲಿ ಶೇ. 60 ರಿಂದ 85ರಷ್ಟು ಭರ್ತಿಯಾಗಿದ್ದು, ಪ್ರತಿ ದಿನ ಇದರ ಒಳ ಹರಿವು ಮತ್ತು ಹೊರ ಹರಿವಿನ ಮೇಲೆ ನಿಗಾ ಇರಿಸಲಾಗಿದೆ. 67 ಕೆರೆಗಳು ಸಂಪೂರ್ಣ ಭರ್ತಿಯಾಗಿದ್ದು, 51 ಕೆರೆಗಳು ಶೇ.90ರಷ್ಟು ಭರ್ತಿಯಾಗಿವೆ. ಜಿಲ್ಲೆಯಾದ್ಯಂತ ಪ್ರವಾಹಕ್ಕೆ ತುತ್ತಾಗುವ 153 ಗ್ರಾಮಗಳನ್ನು ಸಮಸ್ಯಾತ್ಮಕ ಗ್ರಾಮಗಳೆಂದು ಗುರುತಿಸಿದ್ದು, ಪ್ರವಾಹ ಬಂದಲ್ಲಿ ಸ್ಥಳೀಯರನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲು 90 ಕಾಳಜಿ ಕೇಂದ್ರ ಸಹ ಗುರುತಿಸಿದೆ. ಅದೇ ರಿತಿ ಜಾನುವಾರುಗಳಿಗೆ ತಾತ್ಕಲಿಕ 40 ಗೋಶಾಲೆ ತೆರೆಯಲು ಸಹ ಯೋಜನೆ ರೂಪಿಸಲಾಗಿದೆ. ಇನ್ನು ಗ್ರಾಮವಾರು ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ನೋಡಲ್ ಅಧಿಕಾರಿಯನ್ನಾಗಿಸಿ ನೇಮಿಸಿ ನೆರೆ ಹಾವಳಿ ಕಾರ್ಯಕ್ಕೆ ತಾಲ್ಲೂಕು ಆಡಳಿತದೊಂದಿಗೆ ಸಮನ್ವಯ ಸಾಧಿಸಲು ಸೂಚಿಸಲಾಗಿದೆ -ಬಿ.ಫೌಜಿಯಾ ತರನ್ನುಮ್, ಡಿಸಿ

### ಬೆಳೆ ಹಾನಿ ಸಮೀಕ್ಷಾ ವರದಿ ನಿಖರವಾಗಿರಲಿ

ಪ್ರವಾಹ ಪೀಡಿತ ಪ್ರದೇಶದಲ್ಲಿ ಬೆಳೆ ಹಾನಿ ಕುರಿತು ಕಂದಾಯ, ಕೃಷಿ, ತೋಟಗಾರಿಕೆ ಅಧಿಕಾರಿಗಳು ಜಂಟಿ ಸಮೀಕ್ಷೆ ಕೈಗೊಂಡು ಸರ್ಕಾರಕ್ಕೆ ವರದಿ ಸಲಿಸಬೇಕು. ಸಮೀಕ್ಷೆ ಕೈಗೊಳ್ಳುವ ಮುನ್ನ ಗ್ರಾಮದಲ್ಲಿ ಡಂಗೂರ ಸಾರಬೇಕು. ಹೆಚ್ಚಿನ ಪ್ರಚಾರ ನೀಡಿದಲ್ಲಿ ಮಾತ್ರ ರೈತರು ಪರಿಹಾರ ಪಡೆಯಲು ಸಾಧ್ಯವಾಗಲಿದೆ. ಬೆಳೆ ಹಾನಿ ವರದಿ ಕಾಟಾಚಾರವಾಗಿರದೆ ನಿಖರವಾಗಿರಬೇಕು ಎಂದ ಸಚಿವ ಪ್ರಿಯಾಂಕ್ ಖರ್ಗೆ ಅವರು ತಾಲ್ಲೂಕಿನ ತಹಶೀಲ್ದಾರರು, ತಾಲ್ಲೂಕಾ ಪಂಚಾಯತ್ ಇ.ಓ. ಗಳು ಇದರ ಸಂಪೂರ್ಣ ಹೊಣೆಗಾರಿಕೆ ವಹಿಸಬೇಕು ಎಂದು ನಿರ್ದೇಶನ ನೀಡಿದರು.

## ಅಲೆಮಾರಿ ಸಮುದಾಯಗಳಿಗೆ ಶೇ 1% ಮೀಸಲಾತಿ ನೀಡಲು ಕ್ರಾಂತಿ ಕಾರಿ ಸಾಂಸ್ಕೃತಿಕ ವೇದಿಕೆ ಆರ್‌ಸಿಎಫ್ ಆಗ್ರಹ

• ಉದಯವಾಹಿನಿ ಸಿಂಧನೂರು

ಅಲೆಮಾರಿ ಸಮುದಾಯಗಳಿಗೆ ಶೇ 1% ಮೀಸಲಾತಿ ನೀಡಲು ಕ್ರಾಂತಿಕಾರಿ ಸಾಂಸ್ಕೃತಿಕ ವೇದಿಕೆ ಆರ್ ಸಿಎಫ್ ರಾಜ್ಯ ಮುಖಂಡ ಗಂಗಾಧರ್ ಆಗ್ರಹ

ಅಲೆಮಾರಿಗಳಿಗೆ ಶೇ.1 ಒಳಮೀಸಲು ಕಲ್ಪಿಸಿಲು ಕ್ರಾಂತಿಕಾರಿ ಸಾಂಸ್ಕೃತಿಕ ವೇದಿಕೆ ಆರ್ ಸಿಎಫ್ ರಾಜ್ಯದ ಕಾಂಗ್ರೆಸ್‌ನ ಸಿದ್ದರಾಮಯ್ಯ ಸರ್ಕಾರವನ್ನು ಆಗ್ರಹಿಸುತ್ತದೆ. ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿರುವ 49 ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಜಾತಿಗಳ ಅಲೆಮಾರಿಗಳಿಗೆ ಪ್ರತ್ಯೇಕವಾಗಿ ಶೇ.1ರಷ್ಟು ಒಳ ಮೀಸಲಾತಿ ಕಲ್ಪಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯರನ್ನು ನಾವು ಒತ್ತಾಯಿಸುತ್ತೇವೆ.



ಉದಯವಾಹಿನಿ ಚಿತ್ರ

ಒಳಮೀಸಲಾತಿ ಹಂಚಿಕೆಯಲ್ಲಿ ಅಲೆಮಾರಿ ಸಮುದಾಯಗಳಿಗೆ ಅನ್ಯಾಯವಾಗಿದೆ. ಸಅತ್ಯಂತ ಶೋಷಣೆಗೆ ಒಳಗಾಗಿರುವ ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ 49 ಜಾತಿಗಳ ಅಲೆಮಾರಿಗಳ ಸ್ಥಿತಿಗತಿಯ ದತ್ತಾಂಶ ಸಂಗ್ರಹಿಸಿದ ನ್ಯಾ.ನಾಗಮೋಹನ್ ದಾಸ್ ಏಕ ಸದಸ್ಯ ಆಯೋಗವು ಈ ಜಾತಿಗಳ ಜನರಿಗೆ ಪ್ರತ್ಯೇಕ ಗುಂಪು ಸೃಷ್ಟಿಸಿ, ಶೇ.1ರಷ್ಟು ಒಳಮೀಸಲಾತಿ ನೀಡುವಂತೆ ಶಿಫಾರಸು ಮಾಡಿತ್ತು. ಆದರೆ, ರಾಜ್ಯ ಸರಕಾರವು ಈ ಶಿಫಾರಸು ಕಡೆಗಣಿಸಿ ಬಲಾಢ್ಯ ಜಾತಿಗಳ ಮತ ಸೆಳೆಯಲು ಅವುಗಳಿಗೆ ಸಿಂಹಪಾಲು ನೀಡಿ ಅಲೆಮಾರಿಗಳಿಗೆ ಅನ್ಯಾಯ ಮಾಡಿದೆ. ಒಳಮೀಸಲಾತಿ ಹಂಚುವಾಗ ಅಲೆಮಾರಿ ಜಾತಿಗಳನ್ನು ಬಲಾಢ್ಯ ಸಮುದಾಯಗಳ ಗುಂಪಿನಲ್ಲಿ ಸೇರಿಸಲಾಗಿದೆ. ಆ ಗುಂಪಿನಲ್ಲಿರುವ ಸಮುದಾಯಗಳ ಜನರು ಅಕ್ಷರಸ್ಥರಾಗಿದ್ದಾರೆ.

**ಅಕ್ಷರ ಜ್ಞಾನವೇ ಇಲ್ಲ**

ಆದರೆ, 49 ಜಾತಿಗಳ ಅಲೆಮಾರಿಗಳಿಗೆ ಇನ್ನು ಅಕ್ಷರ ಜ್ಞಾನವೇ ಇಲ್ಲವಾಗಿದೆ. ವಾಸ್ತವ ಸ್ಥಿತಿ ಹೀಗಿರುವಾಗ ಅಲೆಮಾರಿಗಳು ಆ ಸಮುದಾಯಗಳ ಜನರೊಂದಿಗೆ ಪೈಪೋಟಿ ನಡೆಸಿ ಮೀಸಲು ಪಡೆಯುವುದು ಕಷ್ಟಸಾಧ್ಯ.

ಹಾಗಾಗಿ ರಾಜಕೀಯ, ಶಿಕ್ಷಣ ಮತ್ತು ಉದ್ಯೋಗ ಮತ್ತು ಸಾಮಾಜಿಕವಾಗಿ ಸ್ಥಾನಮಾನ ಮರೀಚಿಕೆಯಾಗಲಿದೆ. ಆದ್ದರಿಂದ ರಾಜ್ಯ ಸರಕಾರ ಈಗ ಹಂಚಿಕೆ ಮಾಡಿರುವ ಒಳ ಮೀಸಲಾತಿಯನ್ನು ಮರು ಪರಾಮರ್ಶೆಗೆ ಒಳಪಡಿಸಿ ಅಲೆಮಾರಿಗಳಿಗೆ ಪ್ರತ್ಯೇಕವಾಗಿ ಶೇ.1ರಷ್ಟು ಒಳ ಮೀಸಲಾತಿ ಕಲ್ಪಿಸಬೇಕು ಎಂದು ನಮ್ಮ ಆಗ್ರಹವಾಗಿದೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದರು.

## ಕ್ರೀಡೆಯಲ್ಲಿ ಸೋಲು ಗೆಲುವು ಸಮಾನವಾಗಿ ಸ್ವೀಕರಿಸಿ, ಸೋಲೆ ಗೆಲುವಿನ ಮೆಟ್ಟಿಲು: ಅಧ್ಯಕ್ಷೆ ಸುವರ್ಣ

• ಉದಯವಾಹಿನಿ,ಚಿಂಚೋಳಿ

ಕ್ರೀಡೆಯಲ್ಲಿ ಕ್ರೀಡಾಪಟುಗಳು ಸೋಲು ಗೆಲುವು ಸಮಾನವಾಗಿ ಸ್ವೀಕರಿಸಿ,ಸೋಲೆ ಗೆಲುವಿನ ಮೆಟ್ಟಲಾಗಿದ್ದು ಶಾಂತತೆಯಿಂದ ಕ್ರೀಡಾಕೂಟದಲ್ಲಿ ಕ್ರೀಡಾಪಟುಗಳು ಭಾಗವಹಿಸಿ ಎಂದು ಪೋಲಕಪಳ್ಳಿ ಗ್ರಾಮ ಪಂಚಾಯತ್ ಅಧ್ಯಕ್ಷೆ ಸುವರ್ಣ ಜಗನ್ನಾಥ ಹೇಳಿದರು. ಪಟ್ಟಣದ ತಾಲ್ಲೂಕಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್ ಮತ್ತು ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಮತ್ತು ತಾಲ್ಲೂಕಾ ಪಂಚಾಯತ್ ವತಿಯಿಂದ ಹಮ್ಮಿಕೊಂಡ 2025–26ನೇ ತಾಲ್ಲೂಕಾ ಮಟ್ಟದ ದಸರಾ ಕ್ರೀಡಾಕೂಟ ಉದ್ಘಾಟನಾ ಕಾರ್ಯಕ್ರಮ ನೆರವೇರಿಸಿ ಮಾತನಾಡಿದ ಅವರು ಕ್ರೀಡೆಯಿಂದ ದೈಹಿಕ ಮಾನಸಿಕ ಶಕ್ತಿ ಹೆಚ್ಚುತ್ತದೆ. ಕ್ರೀಡಾಪಟುಗಳು ತಾಲ್ಲೂಕಾ ಮಟ್ಟದಲ್ಲಿ ಗೆಲುವು ಸಾಧಿಸಿ ಜಿಲ್ಲಾ ಮತ್ತು ರಾಜ್ಯಮಟ್ಟದಲ್ಲಿ ಗೆಲುವು ಸಾಧಿಸಿ ತಾಲ್ಲೂಕಿನ ಹೆಸರು ಉನ್ನತಮಟ್ಟಕ್ಕೆ ಕೊಂಡೊಯ್ಯಬೇಕು ಎಂದರು.



ಉದಯವಾಹಿನಿ ಚಿತ್ರ

ಕ್ರೀಡಾಂಗಣದ ವ್ಯವಸ್ಥಾಪಕ ಮಲ್ಲಿಕಾರ್ಜುನ ನೆಲ್ಲಿ ಮಾತನಾಡಿ ಕ್ರೀಡಾಪಟುಗಳು ಯಾವುದೇ ದುಶ್ಚಟಗಳಿಗೆ ಬಲಿಯಾಗದೆ ಕ್ರೀಡೆಯಿಂದ ಸದೃಢವಾಗಿ ಆರೋಗ್ಯ ವೃದ್ಧಿಸಿಕೊಳ್ಳಬೇಕು. ಕ್ರೀಡಾಕೂಟದಲ್ಲಿ ಅಂಪೈರ್ ನಿರ್ಣಯವೇ ಅಂತಿಮವಾಗಿರುತ್ತದೆ,ಯುವಕರು ಶಾಂತತೆಯಿಂದ ಕ್ರೀಡೆಗಳು ಆಡಬೇಕು,ತಾಲ್ಲೂಕಿನ ಕೀರ್ತಿ ರಾಜ್ಯಮಟ್ಟದಲ್ಲಿ ಗುರುತಿಸಬೇಕು ಎಂದರು.

ದೈಹಿಕ ಶಿಕ್ಷಣಾಧಿಕಾರಿ ನಾರಾಯಣ ರೆಡ್ಡಿ,ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ಶಾಮರಾವ ಮೋಘಾ ಮಾತನಾಡಿದರು. ಮಲ್ಲಿಕಾರ್ಜುನ ಪಸ್ತಾಪುರ ಸ್ವಾಗತಿಸಿದರು, ಶಾಂತಕುಮಾರ ನಿರೂಪಿಸಿದರು,ನಾಗರತ್ನ ವಂದಿಸಿದರು.

## ಗ್ರಾಮೀಣ ಭಾಗದ ಅಭಿವೃದ್ಧಿಗೆ ಬದ್ಧ: ಬೆಲ್ದಾಳೆ

• ಉದಯವಾಹಿನಿ ಬೀದರ

ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ವಿಶೇಷ ಕಾಳಜಿ ವಹಿಸಿ ಸರ್ಕಾರದ ವಿವಿಧ ಇಲಾಖೆಗಳಿಂದ ಅನುದಾನ ತಂದು ಜನರಿಗಾಗಿ ದುಡಿದು ಕ್ಷೇತ್ರ ಅಭಿವೃದ್ಧಿ ಪಡಿಸಲಾಗುತ್ತಿದೆ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು. ಬೀದರ್ ದಕ್ಷಿಣ ಕ್ಷೇತ್ರದ ನಿರ್ಣಾ ಗ್ರಾಮದ ಹೊರವಲಯದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ 18 ಕೋಟಿ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಾಣವಾಗಲಿರುವ ಡಾ. ಬಿ.ಆರ್. ಅಂಬೇಡ್ಕರ್ ರವರ ಬಾಲಕಿಯರ ವಸತಿ ಶಾಲೆ ಕಟ್ಟಡ ನಿರ್ಮಾಣ ಕಾಮಗಾರಿ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.



ಉದಯವಾಹಿನಿ ಚಿತ್ರ

ಗ್ರಾಮೀಣ ಭಾಗಗಳ ಸಮಗ್ರ ಅಭಿವೃದ್ಧಿಗೆ ಹತ್ತಾರು ಯೋಜನೆಗಳ ಕಾಮಗಾರಿಗೆ ಚಾಲನೆ ನೀಡಿ ಶಿಕ್ಷಣ, ಆರೋಗ್ಯ, ಮೂಲ ಸೌಕರ್ಯಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಪಂಚಾಯತ್ ವ್ಯಾಪ್ತಿಯ ಗ್ರಾಮಗಳಿಗೆ ಪ್ರಮುಖವಾಗಿ ಕುಡಿಯುವ ನೀರು, ರಸ್ತೆ ಚರಂಡಿ ಸ್ವಚ್ಛತೆ, ಉತ್ತಮ ಪರಿಸರ ನಿರ್ಮಾಣ ಸೇರಿದಂತೆ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಅಧಿಕಾರಿಗಳು ಹೆಚ್ಚಿನ ನಿಗಾವಹಿಸಿ ಕೆಲಸ ಮಾಡಬೇಕು.

ಪ್ರಮುಖವಾಗಿ ಮೂಲ ಸೌಲಭ್ಯಗಳ ಕೊರತೆ ಎದುರಿಸುತ್ತಿದ್ದ ಗ್ರಾಮಗಳಿಗೆ ಗ್ರಾಮಸ್ಥರ ಸಾಕಷ್ಟು ವರ್ಷಗಳ ಬೇಡಿಕೆಯಾಗಿದ್ದ ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಕ್ಷೇತ್ರದ ಪ್ರಗತಿಗೆ ಮತ್ತಷ್ಟು ನೆರವು ನೀಡಲಾಗುವುದು ಎಂದು ಹೇಳಿದರು.

## ಕುಟುಂಬದ ಹಿಡಿತಕ್ಕೆ ಸಹಕಾರಿ ಸಕ್ಕರೆ ಕಾರ್ಖಾನೆ ಆಡಳಿತ: ಆಕ್ಷೇಪ

• ಉದಯವಾಹಿನಿ ರಾಮದುರ್ಗ

ಧನಲಕ್ಷ್ಮೀ ಸಹಕಾರಿ ಸಕ್ಕರೆ ಕಾರ್ಖಾನೆಯಲ್ಲಿ ಕುತಂತ್ರದಿಂದ ಅಧಿಕಾರಕ್ಕೆ ಬಂದು ಸರ್ವಾಧಿಕಾರಿ ಧೋರಣೆ ಅನುಸರಿಸುತ್ತಿರುವ ಒಂದು ಕುಟುಂಬದ ವಿರುದ್ಧ ಸೆಣಸಾಡಲು ಈ ಸಾರಿಯ ಚುನಾವಣೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಕಬ್ಬು ಬೆಳೆಗಾರರ ಪೆನೆಲ್‌ನ ಪಿ.ಎಫ್.ಪಾಟೀಲ ಹೇಳಿದರು.

ಇಲ್ಲಿನ ಶ್ರೀನಿವಾಸ ಕಲ್ಯಾಣ ಮಂಟಪದಲ್ಲಿ ಸೇರಿದ್ದ ಮಹಾದೇವಪ್ಪ ಯಾದವಾಡ ಪೆನೆಲ್ ವಿರುದ್ಧ ಬಣದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಕಳೆದ ಹತ್ತು ವರ್ಷಗಳಿಂದಲೂ ಯಾದವಾಡ ಕುಟುಂಬದವರು ಕಾರ್ಖಾನೆಯ ಆಡಳಿತ ನಡೆಸುತ್ತಿದ್ದಾರೆ. ಅವರಿಗೆ ಕಬ್ಬು ಬೆಳೆಗಾರರು, ಷೇರುದಾರರು ಕಣ್ಣಿಗೆ ಕಾಣುವುದಿಲ್ಲ. ಅವರಿಗೆ ಪೈಪೋಟಿ ನೀಡಲು ಪಕ್ಕದ ತಾಲ್ಲೂಕಿನ ಕಾಣದ ಕೈಗಳು ಬೆಂಬಲ ಸೂಚಿಸಿವೆ. ಅವುಗಳ ಲಾಭ ಪಡೆದು ಪರ್ಯಾಯ ಪೆನೆಲ್ ಮೂಲಕ ಕಾರ್ಖಾನೆಯ ಆಡಳಿತ ಹಿಡಿದಿಟ್ಟುಕೊಳ್ಳಲು ಒಗ್ಗಟ್ಟು ಪ್ರದರ್ಶಿಸಬೇಕು ಎಂದು ಹೇಳಿದರು. ಮಾಜಿ ಶಾಸಕ ಬಿ.ಬಿ.ಹಿರೇರಡ್ಡಿ ಅವರು ಫೋಟೊ ಬಳಸಿಕೊಂಡು ಪ್ರತ್ಯೇಕ ಪೆನೆಲ್‌ನಲ್ಲಿ ಚುನಾವಣೆ ಎದುರಿಸಬೇಕಿದೆ ಎಂದು ಸಾಲಾಪೂರದ ಲಕ್ಷ್ಮಣ ಕನಸಗೇರಿ ಹೇಳಿದರು.



ಉದಯವಾಹಿನಿ ಚಿತ್ರ

ಸುಮಾರು 19 ಸಾವಿರ ಷೇರುದಾರರಲ್ಲಿ ಕೇವಲ 4 ಸಾವಿರ ಷೇರುದಾರರಿಗೆ ಮತದಾನ ಹಕ್ಕು ನೀಡಿ ಗೆದ್ದಿರುವ ಯಾದವಾಡ ಕುಟುಂಬಕ್ಕೆ ತಕ್ಕ ಪಾಠ ಕಲಿಸಲು ಎಲ್ಲಾ ಷೇರುದಾರರು ಪಣ ತೊಡಬೇಕು. ಸಕ್ಕರೆ ಕಾರ್ಖಾನೆಯಿಂದ ಯಾದವಾಡ ಕುಟುಂಬ ತೊಲಗಿಸಿ ಆಂದೋಲನ ಮಾಡುವ ಮೂಲಕ ಷೇರುದಾರರು ಮೋಸ ಮಾಡಿದವರಿಗೆ ತಕ್ಕ ಉತ್ತರ ನೀಡಲು ಮುಂದಾಗಬೇಕು ಎಂದು ಬಿ.ಆರ್.ದೊಡಮನಿ (ರಡ್ಡಿ) ಹೇಳಿದರು.

> ಕಳೆದ ಚುನಾವಣೆಯಲ್ಲಿ ಷೇರುದಾರರ ಮತದಾನ ರದ್ದು ಪಡಿಸುವ ಮೂಲಕ ಅಧಿಕಾರಕ್ಕೆ ಬಂದಿರುವ ಯಾದವಾಡ ಕುಟುಂಬ ಎಲ್ಲಾ ಕಸರತ್ತುಗಳನ್ನು ಮಾಡಲಿದೆ. ಷೇರುದಾರರು ತಮ್ಮ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಪಡೆದು ಚುನಾವಣೆಯಲ್ಲಿ ಮತದಾನಕ್ಕೆ ಮುಂದಾಗಬೇಕು -ರಮೇಶ ದೇಶಪಾಂಡೆ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ


## ನಿರ್ವಹಣೆ ಇಲ್ಲದೆ ದುರ್ವಾಸನೆ ಬೀರುತ್ತಿರುವ ಸಾರ್ವಜನಿಕ ಶೌಚಾಲಯ

• ಉದಯವಾಹಿನಿ ಕಾರಟಗಿ

ಪುರಸಭೆ ವ್ಯಾಪ್ತಿಯ ನೂತನ ಬಸ್ ನಿಲ್ದಾಣದ ಬಳಿ ಇರುವ ಸಾರ್ವಜನಿಕ ಶೌಚಾಲಯ ಕುರಿತು ಇತ್ತೀಚೆಗೆ ಸಾರ್ವಜನಿಕರಿಂದ ದೂರುಗಳು ಬಂದಿದ್ದವು ಸಾರ್ವಜನಿಕ ಶೌಚಾಲಯವನ್ನು ಗುತ್ತಿಗೆ ಪಡೆದು ನಿರ್ವಹಣೆ ಮಾಡಲು ಇರುವಂತಹ ವ್ಯಕ್ತಿ ಶೌಚಾಲಯವನ್ನು ಸರಿಯಾದ ಕ್ರಮದಲ್ಲಿ ನಿರ್ವಹಣೆ ಮಾಡ್ತಾ ಇಲ್ಲ ಶೌಚಾಲಯಗಳನ್ನು ಸ್ವಚ್ಛವಾಗಿ ಇಡುತ್ತಿಲ್ಲ ಎಂದು ಪಟ್ಟಣದ ಸಾರ್ವಜನಿಕರಿಂದ ದೂರುಗಳು ಕೇಳಿಬಂದಿದ್ದವು ಈ ಕುರಿತು ಕಾರಟಗಿ ಪುರಸಭೆಯ ಮುಖ್ಯ ಅಧಿಕಾರಿ ಸಾಬಣ್ಣ ಕಟ್ಟಿಕಾರ್ ಇವರು ಇಂದು ಬಸ್ಟ್ಯಾಂಡ್ ಹತ್ತಿರದ ಸಾರ್ವಜನಿಕ ಶೌಚಾಲಯ ನಿರ್ವಹಣೆ ಕುರಿತು ಪ್ರಾತ್ಯಕ್ಷಿತವಾಗಿ ಪರಿಶೀಲಿಸಲು ಬಂದಿದ್ದರು, ಆ ಸಂದರ್ಭದಲ್ಲಿ ಶೌಚಾಲಯಗಳ ನಿರ್ವಹಣೆಯಲ್ಲಿ ಲೋಪಗಳು ಕಂಡು ಬಂದಿದ್ದರಿಂದ ಮುಖ್ಯಾಧಿಕಾರಿಗಳು ನಿರ್ವಹಣೆ ಮಾಡುವ ವ್ಯಕ್ತಿಗೆ ಶೌಚಾಲಯಗಳ ಸ್ವಚ್ಛತೆಗೆ ಹೆಚ್ಚಿನ ಪ್ರಾಶಸ್ತ್ಯ ನೀಡಿ ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡುವಂತೆ ಸೂಚನೆ ನೀಡಿದರು. ಅಧಿಕಾರಿಗಳಿಗೆ ಕ್ಯಾರೇ ಎನ್ನದೆ ಏಕವಚನದಲ್ಲಿ ಮಾತನಾಡಿದ್ದನ್ನು ಪ್ರತ್ಯಕ್ಷವಾಗಿ ಪತ್ರಕರ್ತರೆ ನೋಡಿ ಹೇಳಿದರೂ ನಮಗೆ ಪುರಸಭೆ ಸಂಬಂಧ ಬರುವುದಿಲ್ಲ, ನಮಗೆ ಡಿಪೋ ಸಂಬಂಧವಿರುತ್ತದೆ, ನಮಗೆ ಮಂತ್ರಿ ಎಂಎಲ್‌ಎ ಗುರುತು ಎಂದು ಪುರಸಭೆ ಅಧಿಕಾರಿಗಳ ಫೋಟೋ ತೆಗೆದು ಡಿಪೋದವರಿಗೆ ಕಳುಹಿಸಿದ್ದಾನೆ. ಸಾರ್ವಜನಿಕರು ಹಣಕೊಟ್ಟು ಶೌಚಾಲಯಕ್ಕೆ ಹೋದರು ಕೂಡ ಶೌಚಾಲಯಗಳ ನಿರ್ವಹಣೆಯನ್ನು ಸರಿಯಾದ ಕ್ರಮದಲ್ಲಿ ಮಾಡ್ತಾಯಿಲ್ಲ ಶೌಚಾಲಯ ಒಳಗಡೆ ಗೋಡೆಗಳ ಮೇಲೆ ವೈಶ್ಯವಾಟಿಕೆಗೆ ಸಂಬಂಧಿಸಿದಂತೆ ಫೋನ್ ನಂಬರ್ಗಳು, ಅಶ್ಲೀಲ ಪದಗಳ ಬರವಣಿಗೆ, ಮೂತ್ರದ ನಂತರ ಸಮರ್ಪಕ ನೀರನ್ನು ಒದಗಿಸದೆ ದುರ್ನಾಥ ಬೀರುತ್ತಿರುವುದು, ಎಲ್ಲೆಂದರಲ್ಲಿ ಬೀಡಿ, ಸಿಗರೇಟ್, ಗುಟ್ಕಾಂತಹ ವಸ್ತುಗಳು ತುಂಬಿವೆ ಇದರಿಂದ ಶೌಚಾಲಯಕ್ಕೆ ಹೋಗುವ ಜನರಿಗೆ ರೋಗ ಹರಡುವ ಭಯ ಎದುರಾಗಿದೆ ಕೇವಲ ಹಣ ವಸೂಲಿ ಮುಂದಾಗಿರುವ ಸಾರ್ವಜನಿಕ ಶೌಚಾಲಯ ಗುತ್ತಿಗೆದಾರನ ವಿರುದ್ಧ ಕ್ರಮ ಕೈಗೊಳ್ಳುವಂತೆ ಸ್ಥಳದಲ್ಲಿರುವ ಸಾರ್ವಜನಿಕರು ಒತ್ತಾಯಿಸಿದ್ದಾರೆ, ಬಸ್ ನಿಲ್ದಾಣಕ್ಕೆ ಆಗಮಿಸುವ ಜನರಿಗಾಗಿ ನಿರ್ಮಾಣಗೊಂಡಿರುವ ಶೌಚಾಲಯವನ್ನು ಸರಿಯಾದ ಕ್ರಮದಲ್ಲಿ ನಿರ್ವಹಣೆ ಮಾಡದೆ ನಿರ್ಲಕ್ಷ ವಹಿಸಿದ ವ್ಯಕ್ತಿಯ ಗುತ್ತಿಗೆ ಕರಾರನ್ನು ರದ್ದುಮಾಡಿ ಸರಿಯಾಗಿ ನಿರ್ವಹಣೆ ಮಾಡುವವರಿಗೆ ಶೌಚಾಲಯ ಗುತ್ತಿಗೆ ನೀಡುವಂತೆ ಪಟ್ಟಣ ಜನತೆ ಆಗ್ರಹಿಸಿದ್ದಾರೆ.



ಉದಯವಾಹಿನಿ ಚಿತ್ರ



**ಕ್ರಮ ಕೈಗೊಳ್ಳುವಂತೆ ಒತ್ತಾಯ**

## ಬೇಯಿಸಿದ ಅಡಿಕೆ ಒಣಗಿಸಲು ಬಿಡದ ಮಳೆರಾಯ

• ಉದಯವಾಹಿನಿ ಬಸವಾಪಟ್ಟಣ

ಈ ಬಾರಿ ವಾಡಿಕೆಗಿಂತ ಅಧಿಕ ಮಳೆಯಾಗಿರುವ ಪರಿಣಾಮ, ಅಡಿಕೆ ಇಳುವರಿ ಕಡಿಮೆಯಾಗಿದ್ದು, ಬೇಯಿಸಿದ ಅಡಿಕೆ ಒಣಗಿಸಲು ರೈತರು ಪೇಚಾಡುತ್ತಿದ್ದಾರೆ. ಬಸವಾಪಟ್ಟಣ ಹೋಬಳಿಯಲ್ಲಿ ಐದು ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಅಡಿಕೆ ಬೆಳೆಯಲಾಗುತ್ತಿದೆ. ಅಧಿಕ ಮಳೆಯಿಂದಾಗಿ ಇಳುವರಿಯು ಎಕರೆಗೆ 5 ಕ್ವಿಂಟಲ್‌ನಿಂದ 8 ಕ್ವಿಂಟಲ್‌ವರೆಗೆ ಇಳಿಕೆಯಾಗಿದೆ.

ಮಳೆಗಾಲದಲ್ಲಿಯೇ ಅಡಿಕೆ ಕೊಯ್ದು ಬರುವುದರಿಂದ, ಬೇಯಿಸಿದ ಅಡಿಕೆಯನ್ನು ಒಣಗಿಸಲು ಬಿಸಿಲು ಬೀಳದೇ ತೊಂದರೆಯಾಗುವುದು ಸಹಜ. ಆದರೆ ಈ ವರ್ಷ ಮಳೆ ನಿರಂತರವಾಗಿ ಸುರಿಯುತ್ತಿರುವುದರಿಂದ 15 ದಿನಗಳಿಂದ ಬಿಸಿಲಿಲ್ಲದೇ ಬೇಯಿಸಿದ ಅಡಿಕೆ ಹಾಳಾಗುತ್ತಿವೆ ಎಂದು ಇಲ್ಲಿನ ಅಡಿಕೆ ಬೆಳೆಗಾರ ಹಾಲೇಶಪ್ಪ ಹೇಳಿದರು.



ಉದಯವಾಹಿನಿ ಚಿತ್ರ

ಮಳೆಗಾಲದಲ್ಲಿ ಬೇಯಿಸಿದ ಅಡಿಕೆ ಒಣಗಿಸಲು ಶೇಡ್ ಹೌಸ್‌ಗಳು ನೆರವಿಗೆ ಬರುತ್ತವೆ. ರೈತರು ಸಬ್ಸಿಡಿ ದರದಲ್ಲಿ ದೊರೆಯುವ ಶೇಡ್ ಹೌಸ್‌ಗಳನ್ನು ನಿರ್ಮಿಸಿಕೊಂಡು ಸುಲಭವಾಗಿ ಅಡಿಕೆ ಒಣಗಿಸಬಹುದು.

ಕಣಿವೆ ಬಿಳಚಿಯಲ್ಲಿ ಎರಡು ವರ್ಷದಿಂದ ಶೇಡ್ ಹೌಸ್ ಗಳಲ್ಲಿ ಅಡಿಕೆ ಒಣಗಿಸುತ್ತಿದ್ದೇವೆ ಎಂದು ಅಡಿಕೆ ಕೇಣಿದಾರ ಎಸ್.ಅಷ್ಟೋಜಿರಾವ್ ಹೇಳಿದರು. ಯಂತ್ರಗಳಲ್ಲಿ ಸುಲಿದ ಅಡಿಕೆಯ ಸ್ವಲ್ಪ ಭಾಗ ಪುಡಿಯಾಗುತ್ತದೆ. ಇದರಿಂದ ಸಹಜವಾಗಿ ತೂಕ ಕಡಿಮೆಯಾಗಿ ರೈತರಿಗೆ ನಷ್ಟವಾಗುತ್ತದೆ. ಆದರೆ ಕೈಯಿಂದ ಸುಲಿಯಲು ಕೂಲಿಕಾರರ ಕೊರತೆಯೂ ಕಾಡುತ್ತಿದೆ ಎಂದು ಇಲ್ಲಿನ ಅಡಿಕೆ ಬೆಳೆಗಾರರಾದ ಕೆ. ರುದ್ರಪ್ಪ ಮತ್ತು ಬಿ.ಚಂದ್ರಪ್ಪ ತಿಳಿಸಿದರು.

# ಸೌಕರ್ಯವಿಲ್ಲದ ಮಾರುಕಟ್ಟೆ: ರೈತರು, ವ್ಯಾಪಾರಿಗಳು, ಸಾರ್ವಜನಿಕರ ಪರದಾಟ

• ಮಾರುಕಟ್ಟೆಯಲ್ಲಿ ಸ್ವಚ್ಛತೆ, ಶೌಚಾಲಯ, ನೀರು ಮತ್ತು ವಿದ್ಯುತ್ ಸೌಲಭ್ಯಗಳ ಕೊರತೆ, ಮಳೆ ಬಂದರೆ ಫಜೀತಿ ಹೇಳತೀರದು

• ಉದಯವಾಹಿನಿ ಸಿರುಗುಪ್ಪ

ಪಟ್ಟಣದಲ್ಲಿರುವ ದಿನದ ಮಾರುಕಟ್ಟೆಯು ನಗರಸಭೆಯ ನಿರ್ಲಕ್ಷ್ಯಕ್ಕೆ ಗುರಿಯಾಗಿದ್ದು, ಮೂಲಸೌಕರ್ಯಗಳ ಕೊರತೆಯಿಂದ ಸೊರಗುತ್ತಿದೆ. ವ್ಯಾಪಾರಸ್ಥರು ಮತ್ತು ಗ್ರಾಹಕರು ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ.

ತಾಲ್ಲೂಕಿನ ವಿವಿಧ ಭಾಗಗಳಿಂದ ರೈತರು ಕೃಷಿ ಉತ್ಪನ್ನಗಳನ್ನು ಇಲ್ಲಿಗೆ ತರುತ್ತಾರೆ. ವ್ಯಾಪಾರಿಗಳು ತಮ್ಮ ಸರಕುಗಳೊಂದಿಗೆ ಬರುತ್ತಾರೆ. ದೈನಂದಿನ ಬಳಕೆಯ ವಸ್ತುಗಳನ್ನು ಖರೀದಿಸಲು ಎಲ್ಲಾ ವರ್ಗಗಳ ಜನರು ಬರುತ್ತಾರೆ. ಆದರೆ ಇಂಥ ಸಮೃದ್ಧ ವ್ಯಾಪಾರ ಚಟುವಟಿಕೆಯ ಕೇಂದ್ರವಾದ ಮಾರುಕಟ್ಟೆಯಲ್ಲಿ ಮೂಲಸೌಕರ್ಯಗಳ ಕೊರತೆ ಎದ್ದು ಕಾಣುತ್ತಿದೆ.

ಮಾರುಕಟ್ಟೆಯಲ್ಲಿ ಸ್ವಚ್ಛತೆ, ಶೌಚಾಲಯ, ನೀರು ಮತ್ತು ವಿದ್ಯುತ್ ಸೌಲಭ್ಯಗಳ ಕೊರತೆ ಇದೆ. ಮಳೆ ಬಂದರೆ ಫಜೀತಿ ಹೇಳತೀರದು. ಬಿಸಿಲಿನಲ್ಲಿ ತರಕಾರಿ ಒಣಗುತ್ತಿವೆ. ಮಾರುಕಟ್ಟೆಗಳಲ್ಲಿ ಸರಿಯಾದ ಸ್ಥಳಾವಕಾಶವಿಲ್ಲದೇ ಇರುವುದರಿಂದ ವ್ಯಾಪಾರಸ್ಥರು ತೊಂದರೆ ಅನುಭವಿಸುತ್ತಿದ್ದಾರೆ. ವ್ಯಾಪಾರಿಗಳು ಹಾಗೂ ಗ್ರಾಹಕರು ಎದುರಿಸುತ್ತಿರುವ ಸಮಸ್ಯೆಗೆ ಶಾಶ್ವತ ಪರಿಹಾರ ಸಿಗದಂತಾಗಿದೆ.





ಉದಯವಾಹಿನಿ ಚಿತ್ರ

### ಪ್ಲಾಸ್ಟಿಕ್ ವಿಲೇವಾರಿ ಬಹುದೊಡ್ಡ ಸಮಸ್ಯೆ

ಮಾರುಕಟ್ಟೆಯಲ್ಲಿ ನಿಷೇಧಿತ ಪ್ಲಾಸ್ಟಿಕ್ ಚಾಲ್ತಿಯಲ್ಲಿದೆ. ಬಳಸಿದ ನಂತರ ಅದರ ವಿಲೇವಾರಿಗೂ ವ್ಯವಸ್ಥೆ ಇಲ್ಲ. ಇದೂ ಕೂಡ ಬಹುದೊಡ್ಡ ಸಮಸ್ಯೆಯಾಗಿದೆ. ಎಲ್ಲೆಂದರಲ್ಲಿ ಎಸೆಯಲಾಗುತ್ತಿರುವ ಪ್ಲಾಸ್ಟಿಕ್ ಕೊನೆಗೆ ಚರಂಡಿ ಸೇರುತ್ತಿದೆ. ಮಾರುಕಟ್ಟೆಯಲ್ಲಿನ ಪ್ಲಾಸ್ಟಿಕ್ ಕವರ್‌ಗಳನ್ನು ಜಾನುವಾರುಗಳು ತಿನ್ನುತ್ತಿವೆ. ಪಟ್ಟಣದ ವಿವಿಧ ಓಣಿಗಳಲ್ಲಿ ಒಣಕಸದ ಜೊತೆಗೆ ಪ್ಲಾಸ್ಟಿಕ್‌ಗೆ ಬೆಂಕಿ ಹಚ್ಚಲಾಗುತ್ತಿದೆ ಎಂಬ ದೂರುಗಳು ಕೂಡ ಇವೆ. 'ಪಟ್ಟಣದಲ್ಲಿ ಸುಸಜ್ಜಿತ ತರಕಾರಿ ಮಾರುಕಟ್ಟೆ ನಿರ್ಮಿಸಲಾಗುವುದು ಎಂಬ ಮಾತುಗಳನ್ನು ಮೂರು ದಶಕಗಳಿಂದಲೂ ಕೇಳುತ್ತಿದ್ದೇವೆ. ಆದರೆ ಕಾರ್ಯರೂಪಕ್ಕೆ ಬಂದಿಲ್ಲ. ಇನ್ನಾದರೂ ಸಂಬಂಧಿಸಿದವರು ಇತ್ತ ಗಮನಹರಿಸಬೇಕು' ಎಂದು ತರಕಾರಿ ವ್ಯಾಪಾರಿಗಳು ಒತ್ತಾಯಿಸಿದ್ದಾರೆ.

> ಉದ್ಘಾಟನೆ ಮಾಡದ ಕಟ್ಟಡಗಳನ್ನು ಜಿಲ್ಲಾಧಿಕಾರಿ ಗಮನಕ್ಕೆ ತಂದು ಕಟ್ಟಡ ನೆಲಸಮಗೊಳಿಸಿ ಮುಕ್ತ ಮಾರುಕಟ್ಟೆ ಮಾಡಿ ವ್ಯಾಪಾರಿಗಳಿಗೆ ಹಾಗೂ ಗ್ರಾಹಕರಿಗೆ ಅನುಕೂಲ ಮಾಡಿಕೊಡಲಾಗುತ್ತದೆ -ಗಂಗಾಧರ, ಪೌರಾಯುಕ್ತ ನಗರಸಭೆ ಸಿರುಗುಪ್ಪ

**ತರಕಾರಿ ಮಾರುಕಟ್ಟೆಯಲ್ಲಿ ಅವ್ಯವಸ್ಥೆ**

ವ್ಯಾಪಾರಿಗಳಿಗೆ ಸರಿಯಾಗಿ ಕುಳಿತುಕೊಳ್ಳಲು ವ್ಯವಸ್ಥೆ ಇಲ್ಲ, ತ್ಯಾಜ್ಯ ಪದಾರ್ಥವನ್ನು ಎಲ್ಲೆಂದರಲ್ಲಿ ಎಸೆಯುತ್ತಿದ್ದು, ಹಂದಿಗಳ ಕಾಟ ಮಿತಿಮೀರಿದೆ. ಮಾರುಕಟ್ಟೆಯಲ್ಲಿ ಎಲ್ಲೆಂದರಲ್ಲೇ ನೀರು ನಿಂತು ಸೊಳ್ಳೆಗಳ ಕಾಟ ವಿಪರೀತವಾಗಿದೆ.

ಕಲುಷಿತ ವಾತಾವರಣ ಮತ್ತು ಮೂಲಸೌಲಭ್ಯ ಕೊರತೆಯಿಂದಾಗಿ ಗ್ರಾಹಕರು ಮಾರುಕಟ್ಟೆಯಲ್ಲಿ ಪರದಾಡುತ್ತಿದ್ದಾರೆ. ವಾಹನ ನಿಲುಗಡೆಗೆ ಸರಿಯಾದ ವ್ಯವಸ್ಥೆ ಇಲ್ಲದೆ ರಸ್ತೆಯಲ್ಲೇ ನಿಲ್ಲಿಸಲಾಗುತ್ತಿದೆ. ಇದರಿಂದ ಸುತ್ತಲ ಜಾಗದಲ್ಲಿ ಟ್ರಾಫಿಕ್ ಸಮಸ್ಯೆ ಉಂಟಾಗುತ್ತಿದೆ. ಸೂಕ್ತವಾದ ಪಾದಚಾರಿ ಮಾರ್ಗ ಇಲ್ಲದ ಕಾರಣ ಅಪಾಯದ ನಡುವೆಯೇ ಜನರೂ, ವಾಹನಗಳೂ ರಸ್ತೆಯ ಮೇಲೆಯೇ ಸಾಗಬೇಕಾಗಿದೆ.

**ಅಧಿಕಾರಿಗಳ ನಿರ್ಲಕ್ಷ್ಯ:** ನಗರಸಭೆಯವರು ಮಾರುಕಟ್ಟೆಗಳ ಅಭಿವೃದ್ಧಿಗೆ ಆಸಕ್ತಿ ತೋರುತ್ತಿಲ್ಲ. ಪ್ರತಿ ಅಂಗಡಿಗಳಿಂದ ಸುಂಕ ವಸೂಲಿ ಮಾಡಲಾಗುತ್ತದೆ. ವ್ಯಾಪಾರಕ್ಕೆ ಸೂಕ್ತ ಸ್ಥಳ ಒದಗಿಸಿಲ್ಲ. ಸೌಲಭ್ಯವೂ ಇಲ್ಲ ಎಂಬಂತಾಗಿದೆ ಎಂದು ವ್ಯಾಪಾರಿಗಳು ದೂರಿದ್ದಾರೆ. ಪಟ್ಟಣದಲ್ಲಿ ಸುಸಜ್ಜಿತ ತರಕಾರಿ ಮಾರುಕಟ್ಟೆ ನಿರ್ಮಿಸಲಾಗುವುದು ಎಂಬ ಮಾತುಗಳನ್ನು ಮೂರು ದಶಕಗಳಿಂದಲೂ ಕೇಳುತ್ತಿದ್ದೇವೆ. ಆದರೆ, ಕಾರ್ಯರೂಪಕ್ಕೆ ಬಂದಿಲ್ಲ. ಇನ್ನಾದರೂ ಸಂಬಂಧಿಸಿದವರು ಇತ್ತ ಗಮನಹರಿಸಬೇಕು ಎಂದು ತರಕಾರಿ ವ್ಯಾಪಾರಿಗಳು ಒತ್ತಾಯಿಸಿದ್ದಾರೆ.

## ಮಿನಿ ನ್ಯೂಸ್

### ಸರ್ಕಾರಿ ಶಾಲೆ ಜಮೀನು ಒತ್ತುವರಿ ತೆರವು

• ಉದಯವಾಹಿನಿ ಕಾರಟಗಿ

ಸಮೀಪದ ಬೂದಗುಂಪಾ, ಹಾಲಸಮುದ್ರ, ಹಾಗೂ ತಿಮ್ಮಾಪುರ ಗ್ರಾಮಗಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಸೇರಿದ 1 ಎಕರೆ 10 ಗುಂಟೆ ಜಾಗದ ಒತ್ತುವರಿ ಇತ್ತೀಚೆಗೆ ಮಾಡಲಾಯಿತು. ತಹಶೀಲ್ದಾರ್ ಎಂ. ಕುಮಾರಸ್ವಾಮಿ, ತಾಲ್ಲೂಕು ಪಂಚಾಯಿತಿ ಇಒ ಲಕ್ಷ್ಮೀದೇವಿ, ಬಿಇಒ ನಟೇಶ ಹಾಗೂ ಪೊಲೀಸ್ ಇನ್‌ಸ್ಪೆಕ್ಟರ್ ಸುಧೀರ್ ಅವರ ಮುಂದಾಳತ್ವದಲ್ಲಿ ಜಂಟಿ ಕಾರ್ಯಾಚರಣೆ ನಡೆಯಿತು.

**ಹೈಡ್ರಾಮಾ:** ಬೆಳಿಗಿನ ಜಾವ ಆರಂಭವಾದ ಕಾರ್ಯಾಚರಣೆಗೆ ಸಣ್ಣ ಮಟ್ಟದಲ್ಲಿ ಪ್ರತಿರೋಧ ಎದುರಾಯಿತು. ಗ್ರಾಮದ ಕೆಲವರು ಶಾಲೆಯ ಮೂಲೆಯಲ್ಲಿನ ಮನೆಯೊಂದನ್ನು ಬಿಟ್ಟು ಇನ್ನುಳಿದ ಎಲ್ಲಾ ಬಡವರ, ಪರಿಶಿಷ್ಟ ಸಮುದಾಯದ ಜನರ ಶೆಡ್ ತೆರವು ಮಾಡಲಾಗಿದೆ ಎಂದಿದ್ದರಿಂದ ಅಧಿಕಾರಿಗಳ ಜೊತೆ ವಾಗ್ವಾದ ನಡೆಯಿತು. ಮತ್ತೊಂದು ಸಭೆ ನಡೆಸಿ ಅದನ್ನು ಕೂಡ ತೆರವು ಮಾಡಲಾಗುವುದು ಎಂದು ತಿಳಿಸಿದರು.

### ತಲ್ವಾರ್ ಹಿಡಿದು ರೀಲ್ಸ್: ಇಬ್ಬರ ಬಂಧನ

• ಉದಯವಾಹಿನಿ ಕುಷ್ಟಗಿ

ಸಾರ್ವಜನಿಕರಿಗೆ ಭಯ ಹುಟ್ಟಿಸುವ ರೀತಿಯಲ್ಲಿ ತಲ್ವಾರ್ ಹಿಡಿದು ರೀಲ್ಸ್ ಮಾಡಿ, ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟ ಇಬ್ಬರು ಯುವಕರನ್ನು ಪೊಲೀಸರು ಬಂಧಿಸಿದ್ದಾರೆ.

ಮುಲ್ಲಾರ ಓಣಿ ನಿವಾಸಿ ಶಾಮೀದಸಾಬ್ ರಾಜೇಸಾಬ್ ಕಿಡದೂರು ಮತ್ತು ಸಂದೀಪ ನಗರದ ಪರಶುರಾಮ ಹನುಮಂತ ಆಚಾರಿ ಎಂಬುವವರ ವಿರುದ್ಧ ಇಲ್ಲಿಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

**ಆಗಿದ್ದೇನು:** ಗಜೇಂದ್ರಗಡ ರಸ್ತೆಯಲ್ಲಿರುವ ಡಾಬಾವೊಂದರ ಬಳಿ ಬೈಕ್ ಮೇಲೆ ಬಂದ ಆರೋಪಿ ಶಾಮೀಬ್‌ಸಾಬ್ ಸಿನಿಮೀಯ ರೀತಿಯಲ್ಲಿ ತಲ್ವಾರ್ ಹಿಡಿದು ಇಳಿಯುತ್ತಾನೆ. ತಲ್ವಾರ್ ಅನ್ನು ಇನ್ನೊಬ್ಬ ಆರೋಪಿ ಪರಶುರಾಮನತ್ತ ತೂರುತ್ತಾನೆ. ಅದನ್ನು ಹಿಡಿದ ಪರಶುರಾಮ, ಸಾರ್ವಜನಿಕವಾಗಿ ಜನರಲ್ಲಿ ಭಯ ಹುಟ್ಟಿಸುವ ರೀತಿಯಲ್ಲಿ ಪ್ರದರ್ಶಿಸುತ್ತಾನೆ. ಈ ದೃಶ್ಯಕ್ಕೆ ಮಹಾಕಾಯ ಎಂಬ ಹಾಡಿನ ಹಿನ್ನೆಲೆ ಸಂಗೀತ ಎಡಿಟ್ ಮಾಡಿ ಅದನ್ನು ಇನ್‌ಸ್ಟಾಗ್ರಾಂನಲ್ಲಿ ಹರಿಬಿಡಲಾಗಿತ್ತು. ಈ ದೃಶ್ಯ ಮೊಬೈಲ್‌ನಲ್ಲಿ ಹರಿದಾಡುತ್ತಿರುವುದನ್ನು ಗಮನಿಸಿದ ಪೊಲೀಸರು ಸ್ವಯಂ ಪ್ರೇರಣೆಯಿಂದ ಇಬ್ಬರ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಈ ವಿಡಿಯೊ ದೃಶ್ಯವನ್ನು ಅಲ್ತಾಫ್ ಜಾಕೀರಸಾಬ್ ಎಂಬಾತ ಮೊಬೈಲ್‌ನಲ್ಲಿ ಸೆರೆ ಹಿಡಿದ್ದ ಎಂದು ಆರೋಪಿಗಳು ಪೊಲೀಸರಿಗೆ ಹೇಳಿಕೆ ನೀಡಿದ್ದಾರೆ.

### ಹಣಕ್ಕೆ ಬೇಡಿಕೆ: ಮೂವರ ಬಂದನ

• ಉದಯವಾಹಿನಿ ಭಟ್ಕಳ

ತರಕಾರಿ ವ್ಯಾಪಾರಿ ಅನ್ವರ್ ಭಾಷಾ ಮಹಮ್ಮದ್ ಸಾಬ್ ಎಂಬುವವರಿಗೆ ದೂರವಾಣಿ ಕರೆ ಮಾಡಿ 20 ಲಕ್ಷ ಹಣಕ್ಕೆ ಬೇಡಿಕೆ ಇಟ್ಟ ಮೂವರನ್ನು ಬಂಧಿಸುವಲ್ಲಿ ಶಹರ ಠಾಣಾ ಪೊಲೀಸರು ಯಶಸ್ವಿಯಾಗಿದ್ದಾರೆ.

ಭಟ್ಕಳದ ಅಬ್ಬುಹುರೇರಾ ಕಾಲೊನಿ ನಿವಾಸಿ ಮೊಹಮ್ಮದ ಫಾರಿಸ್ ಅಬ್ದುಲ್ ಮುತಲ್ಲಬ್ ಕೋಡಿ (20), ಮೂಸಾ ನಗರದ ನಿವಾಸಿ ಮೊಹಮ್ಮದ ಅರ್ಶದ ಮೊಹಮ್ಮದ ಜುಬೇರ್ ಬ್ಯಾರಿ (22) ಹಾಗೂ ಕುಂದಾಪುರ ಹಾಲಾಡಿಯ ಜನತಾ ಕಾಲೊನಿ ನಿವಾಸಿ ಎಂಜಿನಿಯರಿಂಗ್ ವಿದ್ಯಾರ್ಥಿ ಅಮನ್ ಮಸೂದ ಖಾನ್ (20) ಬಂಧಿತರು. ತನಿಖೆ ಕೈಗೊಂಡ ಭಟ್ಕಳ ಶಹರ ಪೊಲೀಸ್ ಠಾಣೆಯ ಪೊಲೀಸ್ ಇನ್‌ಸ್ಪೆಕ್ಟರ್ ದಿವಾಕರ ಪಿ.ಎಂ. ಅವರ ಮಾರ್ಗದರ್ಶನ ಮತ್ತು ಭಟ್ಕಳ ನಗರ ಪೊಲೀಸ್ ಠಾಣೆಯ ನವೀನ ಎಸ್. ನಾಯ್ಕ ಪಿ.ಎಸ್.ಐ ಅವರ ನೇತೃತ್ವದಲ್ಲಿ ವಿಶೇಷ ತಂಡವನ್ನು ರಚಿಸಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

### ಯೋಗ ಪ್ರತಿ ಗ್ರಾಮಕ್ಕೆ ತಲುಪಲಿ

• ಉದಯವಾಹಿನಿ ಯಲ್ಲಾಪುರ

ಯೋಗಾಭ್ಯಾಸ ನಿರಂತರವಾಗಿ ನಡೆಯಬೇಕು. ಯಲ್ಲಾಪುರದ ಪ್ರತಿ ಗ್ರಾಮಕ್ಕೆ ಯೋಗ ತಲುಪಬೇಕು ಎಂದು ವಿಶ್ವದರ್ಶನ ಶಿಕ್ಷಣ ಸಮೂಹದ ಅಧ್ಯಕ್ಷ ಹರಿಪ್ರಕಾಶ ಕೋಣೆಮನೆ ಹೇಳಿದರು.

ಪಟ್ಟಣದ ವಿಶ್ವದರ್ಶನ ಆವರಣದಲ್ಲಿ ಪತಂಜಲಿ ಯೋಗಪೀಠ ಹರಿದ್ವಾರ ಕೊಡಮಾಡಿದ ರಾಜ್ಯಮಟ್ಟದ ಸಮಾಜಸೇವಾರತ್ನ ಪುರಸ್ಕಾರ ಸ್ವೀಕರಿಸಿ ಮಾತನಾಡಿದರು. ಪತಂಜಲಿ ಸಮಿತಿಯ ಉತ್ತರ ಕರ್ನಾಟಕ ಕಿರಣ ಮನೋಳ್ಕರ್ ಅಗ್ನಿಹೋತ್ರ ಹೋಮ ನಡೆಸಿ, ಯೋಗವೆಂಬ ಯಜ್ಞದಲ್ಲಿ ಸದಾ ನಿರತರಾಗೋಣ ನಿತ್ಯವೂ ನಕಾರಾತ್ಮಕ ವಾತಾವರಣ ತೊಲಗಿಸಲು ಅಗ್ನಿಹೋತ್ರ ಮಾಡೋಣ' ಎಂದರು.

ಹಿರಿಯರಾದ ಅನುಸೂಯಾ ಮುದ್ದೇಪಾಲ್ ಮಾತನಾಡಿ, ಯೋಗಕ್ಕೆ ಅಸಾಧ್ಯವಾದದ್ದನ್ನು ಸಾಧ್ಯವಾಗಿಸುವ ಶಕ್ತಿ ಇದೆ' ಎಂದರು. ಪತಂಜಲಿಯ ಯೋಗ ಸಮಿತಿ ಕರ್ನಾಟಕ ರಾಜ್ಯ ಕೃಷಿ ಪ್ರಭಾರಿ ಸಂಜಯ ಕುಸ್ತಿಗಾರ ಯೋಗಾಭ್ಯಾಸದ ತರಬೇತಿ ನೀಡಿದರು. ಪತಂಜಲಿಯ ತಾಲ್ಲೂಕು ಸಮಿತಿ ಅಧ್ಯಕ್ಷ ವಿ.ಕೆ.ಭಟ್ ಅಧ್ಯಕ್ಷತೆ ವಹಿಸಿದ್ದರು. ಪ್ರಕಾಶ ಭಟ್ಟ, ಪ್ರೇಮಾ ಗಾಂಪ್ಸರ್, ಅಪರ್ಣಾ ಭಟ್ಟ, ರಾಘವೇಂದ್ರ ಪಟಗಾರ, ವಿಶ್ವಾಸ ಯೋಗ ಕುರಿತ ತಮ್ಮ ಅನಿಸಿಕೆಗಳ ಹಂಚಿಕೊಂಡರು.

### ಗಣೇಶ ಚತುರ್ಥಿ ಹಬ್ಬ ಆಚರಣೆಗೆ ಅನುಮತಿಯ ಪರವಾನಿಗೆಯ ಏಕ-ಗವಾಕ್ಷಿ ಕೇಂದ್ರ ಆರಂಭ

• ಉದಯವಾಹಿನಿ ಕಾರಟಗಿ

ಗಣೇಶ್ ಉತ್ಸವ ಆಚರಣೆ ಆಗಸ್ಟ್ 27ರಂದು ಪ್ರಾರಂಭವಾಗಲಿದ್ದು ಕಾರಟಗಿ ತಾಲ್ಲೂಕಿನಲ್ಲಿ ಗಣೇಶ ಮೂರ್ತಿಯ ಪ್ರತಿಷ್ಠಾಪನೆ ಮತ್ತು ಹಬ್ಬದ ಆಚರಣೆಯ ಪರವಾನಿಗೆ ನೀಡಲು ಕಾರಟಗಿ ಪೊಲೀಸ್ ಠಾಣೆಯಲ್ಲಿ ಏಕಗವಾಕ್ಷಿ ಕೇಂದ್ರ ಆರಂಭಿಸಲಾಗಿದೆ. ಗಣೇಶ ಮೂರ್ತಿ ಪ್ರತಿಷ್ಠಾಪನೆ ಹಾಗೂ ಮೆರವಣಿಗೆ ಸೇರಿದಂತೆ ಹಬ್ಬದ ನಿಮಿತ್ಯ ನಡೆಯುವ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಿಗಾಗಿ , ಕಡ್ಡಾಯವಾಗಿ ಏಕಗವಾಕ್ಷಿ ಕೇಂದ್ರದಲ್ಲಿ ಅನುಮತಿಯನ್ನು ಪಡೆಯಲು ಠಾಣೆಯ ಪಿ ಐ ಸುಧೀರ್ ಬೆಂಕಿಯವರು ತಿಳಿಸಿದ್ದಾರೆ.

ಪುರಸಭೆ, ಅಗ್ನಿಶಾಮಕ ಇಲಾಖೆ, ಜೆಸ್ಕಾಂ, ಪೊಲೀಸ್ ಇಲಾಖೆಯ ಪರವಾನಿಗೆಯನ್ನು ಅಧಿಕಾರಿಗಳು ಏಕಗವಾಕ್ಷಿ ಕೇಂದ್ರದಲ್ಲಿ ನೀಡಲು ಕಾರ್ಯನಿರ್ವಹಿಸಲಿದ್ದು ಪಟ್ಟಣದ ಗಣೇಶ ಉತ್ಸವ ಆಚರಿಸುವ ನಾಗರಿಕರು ಇದರ ಸದುಪಯೋಗ ಪಡೆದುಕೊಳ್ಳಲು ಕೋರಲಾಗಿದೆ



ಉದಯವಾಹಿನಿ ಚಿತ್ರ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಮಧ್ಯಾಹ್ನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ನಿಮ್ಮ ಸಂಬಂಧದ ಎಲ್ಲಾ ದೂರುಗಳು , ದ್ವೇಷಗಳು ಈ ಅದ್ಭುತವಾದ ದಿನದಂದು ಕಣ್ಮರೆಯಾಗುತ್ತವೆ. ಬಹಳಷ್ಟು ಸಾಧಿಸುವ ಸಾಮರ್ಥ್ಯ ಹೊಂದಿದ್ದೀರಿ, ನಿಮಗೆ ದೊರಕುವ ಅವಕಾಶಗಳನ್ನು ಉಪಯೋಗಿಸಿಕೊಳ್ಳಿ.

**ವೃಷಭ** ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಹಣಕಾಸಿನ ಲಾಭ ತರುವ ಅದ್ಭುತವಾದ ಹೊಸ ಕಲ್ಪನೆಗಳನ್ನು ಪ್ರಸ್ತುತಪಡಿಸುತ್ತೀರಿ. ನಿಮ್ಮ ಮಕ್ಕಳು ನಿಮ್ಮ ಉದಾರ ವರ್ತನೆಯ ದುರುಪಯೋಗ ಮಾಡಲು ಬಿಡಬೇಡಿ.

**ಮಿಥುನ** ನೀವು ಆರೋಗ್ಯ ಸಮಸ್ಯೆಯಿಂದಾಗಿ ಪ್ರಮುಖ ಕೆಲಸಕ್ಕೆ ಹೋಗಲು ಸಾಧ್ಯವಾಗದಿರುವುದರಿಂದ ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಆದರೆ ನಿಮ್ಮನ್ನು ಮೇಲೆತ್ತಲು ನಿಮ್ಮ ತಾರ್ಕಿಕತೆಯನ್ನು ಬಳಸಿ.

**ಕರ್ಕಾಟಕ** ಅತಿಥಿಗಳು ನಿಮ್ಮ ಮನೆಯನ್ನು ಒಂದು ಆಹ್ಲಾದಕರ ಮತ್ತು ಅದ್ಭುತ ಸಂಜೆಗಾಗಿ ಬಳಸಿಕೊಳ್ಳುತ್ತಾರೆ. ನೀವು ನಿಮ್ಮ ಸಿಹಿಯಾದ ಪ್ರೀತಿಯ ಜೀವನದಲ್ಲಿನ ಉತ್ಕಟತೆಯನ್ನು ಆನಂದಿಸುತ್ತೀರಿ.

**ಸಿಂಹ** ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ.

**ಕನ್ಯಾ** ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಸಹತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ.

**ತುಲಾ** ಅನಿರೀಕ್ಷಿತ ಪ್ರಣಯ ಭಾವ ಸಂಜೆಯ ಹೊತ್ತಿಗೆ ನಿಮ್ಮ ಮನಸ್ಸನ್ನು ಆವರಿಸುತ್ತದೆ. ಕೆಲಸದಲ್ಲಿ ನಿಮ್ಮ ಪ್ರತಿಸ್ಪರ್ಧಿಗಳು ಇಂದು ಅವರ ಕೆಟ್ಟ ಕರ್ಮಗಳ ಪರಿಣಾಮವನ್ನು ಅನುಭವಿಸುತ್ತಾರೆ.

**ವೃಶ್ಚಿಕ** ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ, ಕುಟುಂಬದ ರಹಸ್ಯ ಸುದ್ದಿ ಅಚ್ಚರಿ ನೀಡಬಹುದು.

**ಧನಸ್ಸು** ನಿಮ್ಮಲ್ಲಿ ಕೆಲವು ಆಭರಣ ಅಥವಾ ಗೃಹಬಳಕೆಯ ಸಾಧನಗಳನ್ನು ಖರೀದಿಸುವ ಸಾಧ್ಯತೆಗಳಿವೆ. ತಮ್ಮ ಪ್ರೀತಿಪತ್ರರೊಡನೆ ಸಣ್ಣ ಪ್ರಯಾಣ ಕೈಗೊಳ್ಳುವವರು ಅತ್ಯಂತ ಸ್ಮರಣೀಯ ಸಮಯವನ್ನು ಹೊಂದುತ್ತಾರೆ.

**ಮಕರ** ಸ್ನೇಹಿತರ ಶೀತಲ ವರ್ತನೆ ನಿಮ್ಮ ಮನಸ್ಸಿಗೆ ನೋವು ತರುತ್ತದೆ. ಆದರೆ ಶಾಂತವಾಗಿರಲು ಪ್ರಯತ್ನಿಸಿ. ನಿಮಗೆ ಇದು ಹಿಂದೆ ನೀಡುವ ಬದಲಿಗೆ ದುಃಖವನ್ನು ತಡೆಗಟ್ಟಲು ಪ್ರಯತ್ನಿಸಿ.

**ಕುಂಭ** ಪ್ರೀತಿಪಾತ್ರರು ನಿಮ್ಮ ಯಾವುದೇ ಮಾತಿನಿಂದ ಕೋಪಗೊಳ್ಳಬಹುದು. ಅವರು ನಿಮ್ಮಿಂದ ಕೋಪಗೊಳ್ಳುವುದಕ್ಕಿಂತ ಮೊದಲೇ ನಿಮ್ಮ ತಪ್ಪನ್ನು ಅನುಭವಿಸಿ ಮತ್ತು ಅವರನ್ನು ಮನವರಿಕೆ ಮಾಡಿಕೊಳ್ಳಿ.

**ಮೀನ** ನಗು ನಿಮ್ಮ ಎಲ್ಲಾ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಆರ್ಥಿಕ ನಿರ್ಬಂಧಗಳನ್ನು ತಪ್ಪಿಸಲು ನಿಮ್ಮ ಬಜೆಟ್‌ಗೆ ಅಂಟಿಕೊಳ್ಳಿ. ಸಂಬಂಧಿಗಳು ಬೆಂಬಲ ನೀಡುತ್ತಾರೆ.

### ಕೃಷ್ಣಾ, ಘಟಪ್ರಭಾ, ಮಲಪ್ರಭಾ ನದಿಗಳು ನಾಲ್ಕಾರು ದಿನಗಳಿಂದ ಉಕ್ಕಿ ಹರಿಯುತ್ತಿವೆ

# ಬೆಳೆ ನೀರುಪಾಲು: ಸಂಕಷ್ಟದಲ್ಲಿ ರೈತರು

• ಉದಯವಾಹಿನಿ ಬಾಗಲಕೋಟೆ

ಮಡಿನಲ್ಲಿನ ನೀರು ಕೊಟ್ಟು ವರ್ಷ ಪೂರ್ತಿ ಸಲಹುವ ಜಿಲ್ಲೆಯ ಮೂರೂ ನದಿಗಳು ಉಕ್ಕಿ ಹರಿಯುತ್ತಿವೆ. ಪರಿಣಾಮ ಬಿತ್ತಿ ಬೆಳೆದಿದ್ದ ಬೆಳೆಯು ಕಣ್ಮುಂದೆಯೇ ನೀರು ಪಾಲಾಗುತ್ತಿದೆ. ಜೊತೆಗೆ ಹಲವು ಮನೆಗಳಿಗೂ ನೀರು ನುಗ್ಗಿ ನಷ್ಟ ಉಂಟು ಮಾಡಿವೆ. ಕೃಷ್ಣಾ, ಘಟಪ್ರಭಾ, ಮಲಪ್ರಭಾ ನದಿಗಳು ನಾಲ್ಕಾರು ದಿನಗಳಿಂದ ಉಕ್ಕಿ ಹರಿಯುತ್ತಿವೆ. ನದಿ ದಡದ ಸಾವಿರಾರು ಎಕರೆ ಭೂಮಿಯಲ್ಲಿ ನೀರು ಹೊಕ್ಕಿದೆ. ಮೆಕ್ಕೆಜೋಳ, ಕಬ್ಬು, ಈರುಳ್ಳಿ, ಹೆಸರು ಸೇರಿದಂತೆ ಹಲವು ಬೆಳೆಗಳು ನೀರಿನಲ್ಲಿ ನಿಂತಿವೆ. ನದಿಗಳ ಆರ್ಭಟದ ಜೊತೆಗೆ ಜಿಲ್ಲೆಯಲ್ಲಿಯೂ ನಾಲ್ಕಾರು ದಿನ ಸತತವಾಗಿ ಮಳೆ ಸುರಿಯಿತು. ಪರಿಣಾಮ ಹಳ್ಳಗಳೂ ಉಕ್ಕಿ ಹರಿದವು. ಹೊಲದ ಒಡ್ಡುಗಳು ಕಿತ್ತು ಹೋಗಿವೆ. ನೀರು ನಿಂತು ಬೆಳೆ ಹಾಳಾಗಿದೆ. ಆಗಸ್ಟ್ ತಿಂಗಳಿನಲ್ಲಿ ಸುರಿದ ಮಳೆಯಿಂದಾಗಿ 6,407 ಹೆಕ್ಟೇರ್ ಪ್ರದೇಶದಲ್ಲಿನ ಬೆಳೆ ಹಾನಿಯಾಗಿದೆ. ಅದರಲ್ಲಿ ಕೃಷಿಯ 4,885 ಹೆಕ್ಟೇರ್, ತೋಟಗಾರಿಕೆ ಬೆಳೆಗಳ 1,522 ಹೆಕ್ಟೇರ್ ಬೆಳೆ ಹಾಳಾಗಿದೆ. ಇನ್ನು ಸರ್ವೆ ನಡೆದಿದ್ದು, ಇದರ ಪ್ರಮಾಣ ಹೆಚ್ಚಾಗಲಿದೆ.

**ಜಿಲ್ಲೆಯ 6,407 ಹೆಕ್ಟೇರ್‌ನಲ್ಲಿ ಬೆಳೆದಿದ್ದ ಬೆಳೆ ಹಾನಿ**

**ಅಪಾರ ಬೆಳೆ ಹಾನಿ: ಕೂಡಲಸಂಗಮ:** ಕೃಷ್ಣಾ ಮಲಪ್ರಭಾ ನದಿಯ ಪಾತ್ರದಲ್ಲಿ ಅಧಿಕ ಮಳೆ ಸುರಿದ ಪರಿಣಾಮ ನಾರಾಯಣಪುರ ಬಸವಸಾಗರ ಜಲಾಶಯ ಹಿನ್ನಿರು ಅಧಿಕಗೊಂಡು ಕೂಡಲಸಂಗಮ ಸಮೀಪದ ಕೃಷ್ಣಾ ನದಿ ದಡದ ಗ್ರಾಮಗಳಲ್ಲಿ ಕೃಷಿಭೂಮಿಗೆ ನೀರು ನುಗ್ಗಿ ಅಪಾರ ಹಾನಿಯಾಗಿದೆ. ಕೂಡಲಸಂಗಮ ಚವಡಕಮಲದಿನ್ನಿ ವಳಕಲದಿನ್ನಿ ಬಿಸಲದಿನ್ನಿ ತುರಡಗಿ ಕಟಗೂರ ಹಂಡರಗಲ್ಲ ಮಲಪ್ರಭಾ ನದಿ ದಡದ ಕೂಡಲಸಂಗಮ ಕೆಂಗಲ್ಲ ಕಜಗಲ್ಲ ವರಗೋಡದಿನ್ನಿ ಹೂವನೂರ ನಂದನೂರ ಗಂಜಿಹಾಳ ಬೆಳಗಲ್ಲ ಇದ್ದಲಗಿ ಬಿಸನಾಳಕೊಪ್ಪ ಅಡವಿಹಾಳ ಕಮದತ್ತ ಸೇರಿದಂತೆ ವಿವಿಧ ಗ್ರಾಮದ ರೈತರ ಭೂಮಿಗೆ ನೀರು ನುಗ್ಗಿ ಅಪಾರ ಪ್ರಮಾಣದ ಬೆಳೆ ಹಾನಿಯಾಗಿದೆ.

ಕಳೆದ ತಿಂಗಳ ಅವಧಿಯಲ್ಲಿ 2 ಬಾರಿ ನೀರು ಜಮೀನಿಗೆ ನುಗ್ಗಿ ಈರುಳ್ಳಿ ಹೆಸರು ಕಬ್ಬು ಬೆಳೆಗಳಿಗೆ ಹಾನಿಮಾಡಿದೆ ಈರುಳ್ಳಿ ಹೆಸರು ಕೊಳೆತು ಹೊಗಿದೆ' ಎನ್ನುತ್ತಾರೆ ನದಿಯ ದಡದ ರೈತರು. ಪ್ರತಿ ವರ್ಷ ಮುಂಗಾರು ಮಳೆಗಾಲದ ಅವಧಿಯಲ್ಲಿ ನದಿ ಪಾತ್ರದಲ್ಲಿ ಮಳೆಯಾದರೆ ತೊಂದರೆ ಅನುಭವಿಸುವಂತಾಗಿದೆ. ನಾರಾಯಣಪುರ ಜಲಾಶಯ ನಿರ್ಮಾಣವಾದಾಗ ನದಿಯಲ್ಲಿ ಅಧಿಕ ನೀರು ಇರುತಿತ್ತು. ಈಗ ನದಿಯಲ್ಲಿ ಹೂಳು ತುಂಬಿದ ಪರಿಣಾಮ ನೀರಿನ ಸಂಗ್ರಹ ಸಾಮರ್ಥ್ಯ ಕಡಿಮೆಯಾಗಿದೆ. ಸ್ವಲ್ಪ ಮಳೆಯಾದರೂ ನದಿಯ ಒಡಲು ತುಂಬಿ ಜಮೀನುಗಳಿಗೆ ನೀರು ನುಗ್ಗುತ್ತದೆ.

15 ವರ್ಷಗಳಿಂದ ಮಲಪ್ರಭಾ ನದಿಯ ದಡದ ರೈತರು ತೊಂದರೆ ಅನುಭವಿಸುತ್ತಿದ್ದೇವೆ. ಫಸಲು ಕೈಗೆ ಬರುವ ಸಮಯದಲ್ಲೇ ಸಬೆಳೆಗೆ ನೀರು ನುಗ್ಗಿ ಹಾಳಾಗುತ್ತದೆ.


ಉದಯವಾಹಿನಿ ಚಿತ್ರ

### ಹೆಚ್ಚಿದ ಸಂಕಷ್ಟ

ಘಟಪ್ರಭಾ ನದಿ ಪ್ರವಾಹದಿಂದ ನದಿ ತೀರದ ಜನರ ಜೀವನ ದುಸ್ತರವಾಗಿದೆ. ಮುದ್ದಾಪೂರ, ಕಸಬಾ ಜಂಬಗಿ, ಚಿಕ್ಕೂರ ಮುಂತಾದ ಗ್ರಾಮಗಳ ಜಮೀನುಗಳಿಗೆ ಪ್ರವಾಹದಿಂದ ಹಾನಿಯಾಗಿದೆ. ಈ ವರ್ಷದ ಪ್ರವಾಹದಿಂದ ನೂರಾರು ಎಕರೆ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ. ಈರುಳ್ಳಿ, ಹೆಸರು, ಉದ್ದು, ಮುಂತಾದ ಬೆಳೆಗಳು ಕೈಗೆ ಬರುವಷ್ಟರಲ್ಲಿ ಪ್ರವಾಹಕ್ಕೆ ತುತ್ತಾಗಿ ಜಮೀನಿನಲ್ಲಿಯೇ ಕೊಳೆತಿವೆ. ಮಳೆ ಪ್ರಮಾಣ ನಮ್ಮ ಭಾಗದಲ್ಲಿ ಕಡಿಮೆಯಾದರೂ ಬೆಳೆಗಳಿಗೆ ಔಷಧ ಸಿಂಪಡಿಸದಿರುವುದರಿಂದ ಬೆಳೆಗಳು ನಾಶವಾಗಿವೆ ಎನ್ನುತ್ತಾರೆ ಇಲ್ಲಿನ ರೈತರು. ಮಹಾಲಿಂಗಪುರ ಸಮೀಪದಲ್ಲಿ ಹರಿಯುವ ಘಟಪ್ರಭಾ ನದಿಯಿಂದಲೂ ಕಬ್ಬು ಬೆಳೆಯಲ್ಲಿ ನಾಲ್ಕಾರು ದಿನಗಳಿಂದ ನೀರು ನಿಂತಿದೆ.

### ಹೊಲಗಳಿಗೆ ನುಗ್ಗಿದ ನೀರು

ತಾಲ್ಲೂಕಿನಲ್ಲಿ 2332 ಹೆಕ್ಟೇರ್ ಕೃಷಿ ಬೆಳೆ ಹಾಗೂ 1457.21 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿದೆ ಎಂದು ತಹಶೀಲ್ದಾರ್ ಪ್ರದೀಪಕುಮಾರ ಹಿರೇಮಠ ತಿಳಿಸಿದ್ದಾರೆ. ಕಂದಾಯ ಕೃಷಿ ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆ ಅಧಿಕಾರಿಗಳನ್ನು ಒಳಗೊಂಡ ಬೆಳೆ ಹಾನಿಗೆ ಜಂಟಿ ಸಮೀಕ್ಷೆ ತಂಡ ರಚಿಸಿದ್ದು ಸಮೀಕ್ಷಾ ಕಾರ್ಯ ಕೈಗೊಳ್ಳಲಾಗಿದೆ ಎಂದು ಹೇಳಿದರು. ಕೃಷ್ಣಾ ಮತ್ತು ಮಲಪ್ರಭಾ ನದಿಗಳ ಪ್ರವಾಹಕ್ಕೆ ತಾಲ್ಲೂಕಿನ 36 ಗ್ರಾಮಗಳು ತುತ್ತಾಗುತ್ತಿದ್ದು ಪ್ರವಾಹಕ್ಕೆ ತುತ್ತಾಗುವ ಪ್ರದೇಶಗಳಿಗೆ ನೋಡೆಲ್ ಅಧಿಕಾರಿಗಳನ್ನು ನೇಮಿಸಿ ನಿಗಾ ವಹಿಸುವಂತೆ ಸೂಚಿಸಲಾಗಿದೆ. ಪ್ರವಾಹದ ಬಗ್ಗೆ ಡಂಗುರ ಸಾರಿ ಎರಡು ನದಿ ತೀರದ ಗ್ರಾಮಗಳ ಜನರಲ್ಲಿ ಜಾಗೃತಿ ಮೂಡಿಸಲಾಗಿದೆ' ಎಂದು ಅವರು ತಿಳಿಸಿದ್ದಾರೆ.

## ಕಾನೂನು ಬಾಹಿರ ಕೃತ್ಯದಲ್ಲಿ ಭಾಗಿಯಾಗದಂತೆ ಸೂಚನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಬಸವನಬಾಗೇವಾಡಿ

ಪಟ್ಟಣದ ಪೊಲೀಸ್ ಠಾಣೆ ಆವರಣದಲ್ಲಿ ಮಾನ್ಯ ಪಿ.ಐ ಮತ್ತು ಪಿಎಸ್‌ಐ ರವರ ನೇತೃತ್ವದಲ್ಲಿ ಠಾಣಾ ವ್ಯಾಪ್ತಿಯ ರೌಡಿ ಮತ್ತು ಕಮ್ಯೂನಲ್ ಗೂಂಡಾಗಳ ಪರೇಡ್ ಮಾಡಿಸಿ ಗಣೇಶ್ ಮತ್ತು ಈದ್ ಮಿಲಾದ್ ಹಬ್ಬಗಳಲ್ಲಿ ಯಾವುದೇ ರೀತಿಯಲ್ಲಿ ಕಾನೂನು ಬಾಹಿರ ಕೃತ್ಯಗಳಲ್ಲಿ ಭಾಗಿಯಾಗದಂತೆ ಮತ್ತು ಸಂಘಟಿತ ಅಪರಾಧ, ಧರ್ಮ ಸಂಘಟಿತ ಅಪರಾಧಗಳಲ್ಲಿ ಮತ್ತು ಆಕ್ರಮ ಕೂಟಗಳಲ್ಲಿ ಭಾಗವಹಿಸದಂತೆ ಮುನ್ನೆಚ್ಚರಿಕೆ ನೀಡಲಾಯಿತು.

ಒಂದು ವೇಳೆ ಭಾಗಿಯಾದಲ್ಲಿ ನಿರ್ದಾಕ್ಷಣ್ಯ ಕ್ರಮ ಕೈಗೊಂಡು ಗಡಿಪಾರು ಮಾಡಲಾಗುವುದು ಎಂದು ಸಿಪಿಐ ಗುರುಶಾಂತ್ ದಾಶ್ಯಾಳ ಕಟ್ಟುನಿಟ್ಟಾಗಿ ಸೂಚಿಸಿದರು.

## ಕುದುರಿ ಸಾಲವಾಡಗಿ ಗ್ರಾಮದಲ್ಲಿ ಮನೆ ಅಂಗಡಿಗಳ ತೆರವು

• ಉದಯವಾಹಿನಿ ಹೂವಿನ ಹಿಪ್ಪರಗಿ

ಸಮೀಪದ ಕುದುರಿ ಸಾಲವಾಡಗಿ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ನೇತೃತ್ವದಲ್ಲಿ, ಅತಿಕ್ರಮಣ ತೆರವು ಕಾರ್ಯಾಚರಣೆ ನಡೆಸಲಾಯಿತು.

ಸುಮಾರು 12 ಸಾವಿರ ಜನಸಂಖ್ಯೆನೂ ಹೊಂದಿರುವ ಕುದುರಿ ಸಾಲವಾಡಗಿ ಸುತ್ತಮುತ್ತಲಿನ ಹಲವಾರು ಗ್ರಾಮಗಳಿಗೆ. ಮಧ್ಯವರ್ತಿ ಸ್ಥಳವಾಗಿರುವ ಗ್ರಾಮದಲ್ಲಿನ ಲೋಕೋಪಯೋಗಿ ಇಲಾಖೆಯ ಪ್ರಮುಖ ರಸ್ತೆಯನ್ನು ಅತಿಕ್ರಮಣ ಮಾಡಿಕೊಂಡು ಮನೆಗಳನ್ನು ಹಾಗೂ ಅಂಗಡಿ. ಮುಗ್ಗಟ್ಟುಗಳನ್ನು ನಿರ್ಮಿಸಿಕೊಂಡು ವಾಸವಿದ್ದ ಸಾರಿಗೆ ಸಂಚಾರಕ್ಕೆ ತುಂಬಾ ತೊಂದರೆಯಾಗಿರುವ ಕುರಿತಾಗಿ ಜನರ ಆರೋಪದ ಮೇರೆಗೆ ಗ್ರಾಮ ಪಂಚಾಯಿತಿಯವರು ಆರು ತಿಂಗಳ ಹಿಂದೆ ಅಂಗಡಿಕಾರರ ಹಾಗೂ ಮನೆಗಳ ಮಾಲೀಕರಿಗೆ ನೋಟಿಸ್ ನೀಡಿದರು. ಕೂಡ ಪ್ರಯೋಜನವಾಗಿರಲಿಲ್ಲ ಇದರಿಂದ ರಸ್ತೆ ನಿರ್ಮಾಣಕ್ಕೆ ತೊಂದರೆಯಾಗುತ್ತಿದೆ ಎಂದು ಮನಗೊಂಡು ಲೋಕೋಪಯೋಗಿ ಇಲಾಖೆಯವರು ಗ್ರಾ.ಪಂ ಆಡಳಿತ ಮಂಡಳಿ. ಅಧ್ಯಕ್ಷರು ಉಪಾಧ್ಯಕ್ಷರು ಸರ್ವ ಸದಸ್ಯರು ನೇತೃತ್ವದಲ್ಲಿ ಸಹಕಾರದಿಂದ ರಸ್ತೆ ತೆರವು ಕಾರ್ಯಾಚರಣೆ ಮುಂದಾದರು.

## ಟ್ರ್ಯಾಕ್ಟರ್ ಜಗ್ಗಾಟ ಸ್ಪರ್ಧೆ ಏರ್ಪಡಿಸಿದ ಆಯೋಜಕರ ಮೇಲೆ ಪ್ರಕರಣ ದಾಖಲು

• ಉದಯವಾಹಿನಿ ಬಸವನ ಬಾಗೇವಾಡಿ

ಪಟ್ಟಣದಲ್ಲಿ ಗೆಳೆಯರ ಬಳಗ ಹಾಗೂ ಕರವೇ ಸಂಘಟನೆ ನೇತೃತ್ವದಲ್ಲಿ ನಂದಿ ತರಕಾರಿ ಮಾರುಕಟ್ಟೆ ಆವರಣದಲ್ಲಿ ಹಮ್ಮಿಕೊಂಡ ಟ್ರ್ಯಾಕ್ಟರ್ ಜಗ್ಗುವ ಸ್ಪರ್ಧೆಯಲ್ಲಿ ಕಟ್ಟಡದ ಮೇಲೆ ಕುಳಿತು ಸ್ಪರ್ಧೆ ವೀಕ್ಷಿಸುತ್ತಿದ್ದ ವೇಳೆ ಪತ್ರಾಸ್ ಖುಷಿದು ಇವರು ಯುವಕರು ಮೇಲಿಂದ ಬಿದ್ದು ಗಾಯಗೊಂಡ ಘಟನೆ ಸಂಬಂಧಿಸಿ ದಂತೆ ಟ್ರ್ಯಾಕ್ಟರ್ ಸ್ಪರ್ಧೆ ಆಯೋಜಕರ ಮೇಲೆ ಪ್ರಕರಣ ದಾಖಲಾಗಿವೆ

ಟ್ರ್ಯಾಕ್ಟರ್ ಸ್ಪರ್ಧೆ ಆಯೋಜನೆಗೆ ಪೊಲೀಸ ಇಲಾಖೆ ಅನುಮತಿ ನೀಡದೆ ಸ್ಪರ್ಧೆ ಆಯೋಜಿಸದಂತೆ ಇಲಾಖೆಯಿಂದ ನೋಟಿಸ್ ನೀಡಿದರು ನಿರ್ಲಕ್ಷಿಸಿ ಪಟ್ಟಣದ ಗೆಳೆಯರ ಬಳಗ ಕರವೇ ಮುಖಂಡರು ಟ್ರಾಕ್ಟರ್ ಸ್ಪರ್ಧೆ ಆಯೋಜಿಸಿದ ಕಾರಣ ವೀಕ್ಷಣೆಗೆ ಬಂದಿದ್ದ ಯುವಕರು ಕಟ್ಟಡದ ಮೇಲಿಂದ ಬಿದ್ದು ಗಾಯಗೊಂಡರು. ಅವಗಡಕ್ಕೆ ಕಾರಣರಾದ ಆಯೋಜಕರಾದ ಪುರಸಭೆ ಉಪಾಧ್ಯಕ್ಷ ಹಾಗೂ ಕರ್ವೆ ಮುಖಂಡ ಅಶೋಕ ಹಾರಿವಾಳ ಸಂಗಮೇಶ ಹಾರಿವಾಳ ಸಚಿನ್ ಹಾರಿವಾಳ ದಾನೇಶ್ ಬಡಿಗೇರ ಗುರುವಂದಾಲ ಹಾಗೂ ಇತರರ ಮೇಲೆ ಗಾಯಗೊಂಡವರ ಪರವಾಗಿ ಒಂದು ದೂರು ಮತ್ತು ಪೊಲೀಸ್ ಇಲಾಖೆಯಿಂದ ಸ್ವಯಂ ಪ್ರೇರಿತವಾಗಿ ಸರ್ಕಾರಿ ದೂರು ಸೇರಿ ಎರಡು ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ ಎಂದು ಪೊಲೀಸ್ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ

## ಶಾಸಕರು ಅಧ್ಯಕ್ಷತೆಯಲ್ಲಿ ನಗರ ದಸರಾ ಉತ್ಸವ: ಕುಡಿಯುವ ನೀರಿನ ಸಭೆ

• ಉದಯವಾಹಿನಿ ಸಿಂಧನೂರು

ತುಂಗಭದ್ರಾ ಡ್ಯಾಂ ಕ್ರೆಸ್ಟ್ ಗೇಟ್ ಸಮಸ್ಯೆಯಿಂದಾಗಿ ಬೇಸಿಗೆಯ ಎರಡನೇ ಬೆಳೆಗೆ ನೀರು ಕೊಡುವುದಿಲ್ಲ ಎಂದು ಈಗಾಗಲೇ ಸರ್ಕಾರ ಆದೇಶವನ್ನು ಘೋಷಣೆ ಮಾಡಿದ್ದು. ಈ ಹಿನ್ನೆಲೆಯಲ್ಲಿ ಡಿಸೆಂಬರ್ ನಲ್ಲಿ ಕಾಲುವೆ ನೀರು ಬಂದು ಮಾಡಲಾಗುವುದು ಅದಕ್ಕಾಗಿ ತಮ್ಮ ತಮ್ಮ ಗ್ರಾಮ ಪಂಚಾಯತ್ ವ್ಯಾಪ್ತಿಯ ಕುಡಿಯುವ ನೀರಿನ ಕೆರೆಗಳನ್ನು ಸ್ವಚ್ಚಗೊಳಿಸಿ ನೀರು ತುಂಬಿಸುವ ಕೆಲಸವಾಗಬೇಕು. ಇನ್ನಷ್ಟು ಜಾಗ ಇದ್ದರೆ ಅಗಲವಾಗಿ ಇದ್ದರೆ ಮಾಹಿತಿ ನೀಡಿ. ಸರ್ಕಾರದಿಂದ ಅನುದಾನ ಒದಗಿಸಲಾಗುವುದು. ಮತ್ತು ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಸಮಸ್ಯೆ ತಾಗದಂತೆ ನಿಗಾವಹಿಸಬೇಕು ಎಂದು ಪಿಡಿಒಗಳಿಗೆ ಶಾಸಕ ಹಂಪನಗೌಡ ಬಾದರ್ಲಿ ಸೂಚನೆ ನೀಡಿದರು.

ನಗರದ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ದಸರಾ ಉತ್ಸವ ಹಾಗೂ ಕುಡಿಯುವ ನೀರಿನ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಮಾತನಾಡಿದ ಅವರು ನಗರದ ದಸರಾ ಉತ್ಸವ ಆಚರಿಸುವ ಸಲುವಾಗಿ ಪೂರ್ವಬಾವಿ ಸಭೆಯನ್ನು ಅಂಬಾ ಮಠ.ಅಲಬನೂರ ಗಾಂಧಿನಗರ ಆರ್ ಎಚ ಕ್ಯಾಂಪ್ ನಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಭೆ ಮಾಡಲಾಗುವುದು. ಸಭೆಗೆ ನಾನು ಬರುತ್ತೇನೆ ಎಂದು ಹೇಳಿದರು.

ನಾಲ್ಕು ತಿಂಗಳ ಗತಿಸಿದರೂ ಇನ್ನೂ ಹಕ್ಕು ಪತ್ರ ವಿತರಣೆ ಮಾಡಿಲ್ಲ ಎಂದು ಬಳ್ಳಾರಿ ಹೆಡೆಗಿನಾಳ ಅಲಬನೂರು ಗ್ರಾಮ ಪಂಚಾಯಿತಿ ವ್ಯಾಪ್ತಿ ಅರ್ಹತೆ ಹೊಂದಿದವರಿಗೆ ಯಾಕೆ ಹಕ್ಕು ಪತ್ರ ವಿತರಣೆ ಮಾಡಿಲ್ಲ ಎಂದು ಸಂಬಂಧಿಸಿದ ಪಿಡಿಒ ಅಧಿಕಾರಿಗಳಿಗೆ ಶಾಸಕರು ತರಾಟೆ ತೆಗೆದುಕೊಂಡರು.

ಇನ್ನು ಒಂದು ವಾರದೊಳಗೆ ಹಕ್ಕು ಪತ್ರ ವಿತರಣೆ ಮಾಡದೆ ಇದ್ದರೆ. ಸಸ್ಪೆಂಡ್ ಮಾಡಲಾಗುವುದು ಎಂದು ಎಚ್ಚರಿಸಿದರು.


ಉದಯವಾಹಿನಿ ಚಿತ್ರ

> ತುಂಗಭದ್ರಾ ಜಲಾಶಯ ಕ್ರಸ್ಟ್ ಗೇಟ್ ಪೆಂಡಾಗಿ ಸಮಸ್ಯೆಗೆ ಕಾರಣವಾಗಿದ್ದು. ತಿಂಗಳು ವರೆಗೂ ಜನರಿಗೂ ಜಾನುವಾರುಗಳಿಗೆ ಕುಡಿಯುವುದಕ್ಕೆ ನೀರು ಸಮಸ್ಯೆ ಉದ್ಭವಿಸದಂತೆ ನೀರು ಸಂಗ್ರಹ ಮಾಡುವುದಕ್ಕೆ ಮುಂದಾಗಬೇಕು. ತಮ್ಮ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗೌರಿ ಗಣೇಶ ಹಾಗೂ ಈದ್ ಮಿಲಾದ್ ಹಬ್ಬಗಳನ್ನು ಅಧ್ಯಕ್ಷರು. ಸದಸ್ಯರು ಅಧಿಕಾರಿಗಳ ಸೇರಿಕೊಂಡು ಆಚರಿಸಿ.
>
> –ಹಂಪನಗೌಡ ಬಾದರ್ಲಿ, ಶಾಸಕ

## ಮೊಸಳೆ ದಾಳಿಗೆ ಬಲಿಯಾದ ರೈತನ ಕುಟುಂಬಕ್ಕೆ ಶಾಸಕ ನಾಡಗೌಡರಿಂದ 25 ಸಾವಿರ ನೆರವು

• ಉದಯವಾಹಿನಿ ಮುದ್ದೇಬಿಹಾಳ

ತಂಗಡಗಿ ಸಮೀಪದ ಕುಂಚಗನೂರ ಗ್ರಾಮಕ್ಕೆ ಶಾಸಕ ಹಾಗೂ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಸಿ.ಎಸ್. ನಾಡಗೌಡ ಅವರು ಸೋಮವಾರ ಭೇಟಿ ನೀಡಿ, ಕೃಷ್ಣಾ ನದಿಯಲ್ಲಿ ಮೊಸಳೆ ದಾಳಿಯಿಂದ ಸಾವನ್ನಪ್ಪಿದ ರೈತ ಕಾಶಪ್ಪ ಕಂಬಳಿ ಅವರ ಕುಟುಂಬಕ್ಕೆ ಸಾಂತ್ವನ ಹೇಳಿದರು.

ಕುಟುಂಬಸ್ಥರ ನೋವಿಗೆ ಸ್ಪಂದಿಸಿದ ಅವರು ಮೃತ ರೈತನ ಕುಟುಂಬಕ್ಕೆ ತಕ್ಷಣ 25,000 ವೈಯುಕ್ತಿಕ ನೆರವನ್ನು ಹಸ್ತಾಂತರಿಸಿದರು. ಘಟನೆಯ ಮಾಹಿತಿ ಪಡೆದ ಕೂಡಲೇ ಮರಣೋತ್ತರ ಪರೀಕ್ಷೆಯ ವರದಿ ಬಂದ ಬಳಿಕ ಪ್ರಕೃತಿ ವಿಕೋಪ ಪರಿಹಾರ ನಿಧಿ ಅಡಿ ಸರ್ಕಾರದಿಂದ ಸಿಗುವ 5 ಲಕ್ಷ ಪರಿಹಾರವನ್ನು ಆದಷ್ಟು ಬೇಗ ಕೊಡಿಸುವ ಭರವಸೆ ನೀಡಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ''35–36 ವರ್ಷದ ಯುವಕ, ನಾಲ್ವರು ಮಕ್ಕಳ ತಂದೆ ಸಾವನ್ನಪ್ಪಿರುವುದು ನೋವು ತಂದಿದೆ. ದನಗಳನ್ನು ಹೊಳೆ ಸ್ನಾನಕ್ಕೆ ಕರೆದೊಯ್ದಾಗ ಅವಘಡ ಸಂಭವಿಸಿದ್ದು, ಕೆಲವರ ಪ್ರಕಾರ ಮೊಸಳೆ ಎಳೆದುಕೊಂಡು ಹೋಗಿದ್ದಾನೆ ಎಂದು ಹೇಳಲಾಗುತ್ತಿದೆ. ಅರಣ್ಯ, ಪೊಲೀಸ್ ಹಾಗೂ ತಹಶೀಲ್ದಾರರು ಕೂಡಾ ಘಟನೆ ಬಳಿಕ ಸಹಕಾರ ನೀಡಿದ್ದಾರೆ ಎಂದು ವಿವರಿಸಿದರು.

ಅವರು ಮುಂದುವರಿದು, ಕಾಶಪ್ಪ ಬಡಕುಟುಂಬಕ್ಕೆ ಸೇರಿದ್ದರಿಂದ ಹೆಚ್ಚುವರಿ ನೆರವಿನ ವ್ಯವಸ್ಥೆ ಮಾಡಲು ನಾನು ಪ್ರಯತ್ನಿಸುತ್ತೇನೆ. ಕುಟುಂಬದವರು ಮಕ್ಕಳು ಚೆನ್ನಾಗಿ ಓದಿ ವಿದ್ಯಾವಂತರಾಗುವಂತೆ ನೋಡಿಕೊಳ್ಳಬೇಕು'' ಎಂದು ಸಲಹೆ ನೀಡಿದರು.


ಉದಯವಾಹಿನಿ ಚಿತ್ರ

## ನ್ಯಾಯಾಧೀಶರ ಮನೆಯಲ್ಲಿ ಕಳ್ಳತನ: ಚಿನ್ನಾಭರಣ, ನಗದು ದೋಚಿದ ಕಳ್ಳರು

• ಉದಯವಾಹಿನಿ ಮುದ್ದೇಬಿಹಾಳ

ಪಟ್ಟಣದ ಹುಡ್ಕೋ ಬಡಾವಣೆಯಲ್ಲಿರುವ 5ನೇ ಜಿಲ್ಲಾ ಹೆಚ್ಚುವರಿ ನ್ಯಾಯಾಧೀಶ ಸಚಿನ್ ಕೌಶಿಕ್ ಅವರ ಬಾಡಿಗೆ ಮನೆಯಲ್ಲಿ ಕಳ್ಳತನ ಸಂಭವಿಸಿದ್ದು, ಲಕ್ಷಾಂತರ ರೂ. ಮೌಲ್ಯದ ಚಿನ್ನಾಭರಣ ಹಾಗೂ ನಗದು ಕಳ್ಳತನವಾಗಿರುವ ಘಟನೆ ಸೋಮವಾರ ಮಧ್ಯಾಹ್ನ ಬೆಳಕಿಗೆ ಬಂದಿದೆ.

ಶನಿವಾರ ಮತ್ತು ಭಾನುವಾರ ರಜೆ ಇರುವುದರಿಂದ ನ್ಯಾಯಾಧೀಶರು ಕುಟುಂಬ ಸಮೇತ ತಮ್ಮೂರಿಗೆ ತೆರಳಿದ್ದರು. ಈ ಅವಧಿಯಲ್ಲಿ ಕಳ್ಳರು ಮನೆಯ ಮುಂಭಾಗದ ಬೀಗ ಮುರಿದು ಒಳನುಗ್ಗಿ ಬಟ್ಟೆ ಬರೆ, ಟ್ರೇಜರಿ, ದೇವರ ಕೋಣೆ ಸೇರಿ ಮನೆಯ ಪ್ರತಿಯೊಂದು ಮೂಲೆಯನ್ನೂ ಜಾಲಾಡಿದ್ದಾರೆ. ಮನೆಯ ಒಳಗಿನ ವಸ್ತುಗಳು ಚಲ್ಲಾಪಿಲ್ಲಿಯಾಗಿ ಬಿದ್ದಿರುವುದನ್ನು ಅಕ್ಕಪಕ್ಕದವರು ಗಮನಿಸಿ, ಬಾಗಿಲು ತೆರೆದಿರುವುದನ್ನು ಕಂಡ ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಿದರು.

ಘಟನೆಯ ಗಂಭೀರತೆ ಅರಿತು ಜಿಲ್ಲಾ ಎಸ್ಪಿ, ಬಸವನ ಬಾಗೇವಾಡಿ ಡಿಎಸ್ಪಿ ಬಲ್ಲಪ್ಪ ನಂದಗಾಂವಿ, ಸಿಪಿಐ ಮೆಹಮ್ಮೂದ್ ಫಸಿಯುದ್ದೀನ್, ಪಿಎಸ್‌ಐ ಸಂಜಯ್ ತಿಪ್ಪರಡ್ಡಿ ಸ್ಥಳಕ್ಕೆ ಬಂದು ಪಕ್ಕದ ಮನೆಯ ವಕೀಲರ ಸಮ್ಮುಖ ತಪಾಸಣೆ ನಡೆಸಿದರು. ಪ್ರಥಮ ಮಾಹಿತಿ ದಾಖಲಾಗಿದ್ದು, ನ್ಯಾಯಾಧೀಶರು ವಾಪಸ್ಸಾದ ಬಳಿಕ ನಿಖರ ಕಳ್ಳತನದ ವಿವರ ತಿಳಿದು ಎಫ್‌ಐಆರ್ ದಾಖಲಾಗಲಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಗಮನಾರ್ಹ ಸಂಗತಿಯೇನೆಂದರೆ, ತಿಂಗಳ ಹಿಂದೆ ಮುದ್ದೇಬಿಹಾಳದಲ್ಲಿ ಹೆಚ್ಚುವರಿ ಜಿಲ್ಲಾ ನ್ಯಾಯಾಲಯ ಮಂಜೂರಾದ ಬಳಿಕ, ನ್ಯಾಯಾಧೀಶ ಕೌಶಿಕ್ ಅವರು ವರ್ಗಾವಣೆಯಾಗಿ ಬಂದು ಹುಡ್ಕೋ ಬಡಾವಣೆಯ ಈ ಮನೆಯನ್ನು ಬಾಡಿಗೆಗೆ ಪಡೆದು ವಾಸವಾಗಿದ್ದರು.


ಉದಯವಾಹಿನಿ ಚಿತ್ರ

**ಆಕ್ರೋಶ**

ಹುಡ್ಕೋ ಬಡಾವಣೆ ಶ್ರೀಮಂತರು, ಸುಶಿಕ್ಷಿತರು ಮಾತ್ರವಲ್ಲದೆ ಶಾಸಕ ಹಾಗೂ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಸಿ.ಎಸ್. ನಾಡಗೌಡ ವಾಸವಾಗಿರುವ ಪ್ರಮುಖ ಬಡಾವಣೆ. ಆದಾಗ್ಯೂ ಇಲ್ಲಿ ಸರಿಯಾದ ಬೀದಿ ದೀಪಗಳಿಲ್ಲ, ಅಳವಡಿಸಿದ್ದ ಸಿಸಿಟಿವಿ ಕ್ಯಾಮೆರಾಗಳು ಕಾರ್ಯನಿರ್ವಹಿಸದೆ ಬಂದ್ ಆಗಿವೆ, ಪೊಲೀಸರು ನಿಯಮಿತವಾಗಿ ಗಸ್ತು ತಿರುಗುವುದಿಲ್ಲ. ಈ ನಿರ್ಲಕ್ಷ್ಯವೇ ಕಳ್ಳರಿಗೆ ಧೈರ್ಯ ನೀಡಿದೆ ಎಂದು ಸುತ್ತಲಿನ ನಿವಾಸಿಗಳು ಹಾಗೂ ಪುರಸಭೆ ಸದಸ್ಯೆ ಸಂಗಮ್ಮ ದೇವರಳ್ಳಿ ಆಕ್ರೋಶ ವ್ಯಕ್ತಪಡಿಸಿದರು.

## ಶಾಶ್ವತ ಪರಿಹಾರಕ್ಕೆ ಸೂಚನೆ

• ಉದಯವಾಹಿನಿ ಬಾಗಲಕೋಟೆ

ಮುಧೋಳ ತಾಲ್ಲೂಕಿನ ಮಿರ್ಜಿಗ್ರಾಮದಕ್ಕೆ ಪ್ರತಿ ವರ್ಷ ಪ್ರವಾಹಕ್ಕೆ ಈಡಾಗುತ್ತಿದ್ದು, ಗ್ರಾಮದ ಸಂತ್ರಸ್ತರಿಗೆ ಶಾಶ್ವತ ಪರಿಹಾರಕ್ಕೆ ಕ್ರಮಕೈಗೊಳ್ಳುವಂತೆ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಾನಕಿ ಕೆ.ಎಂ ಅಧಿಕಾರಿಗಳಿಗೆ ಸೂಚಿಸಿದರು. ಮುಧೋಳ ತಾಲ್ಲೂಕಿನ ಮಿರ್ಜಿಗ್ರಾಮದಲ್ಲಿ ಪ್ರವಾಹಕ್ಕೆ ತುತ್ತಾದ ಮನೆಗಳನ್ನು ವೀಕ್ಷಣೆ ಮಾಡಿ ನಂತರ ಕಾಳಜಿ ಕೇಂದ್ರಕ್ಕೆ ಭೇಟಿ ನೀಡಿ ಸಂತ್ರಸ್ತರಯೋಗಕ್ಷೇಮ ವಿಚಾರಿಸಿ ಮಾತನಾಡಿದ ಅವರು ಪ್ರತಿ ವರ್ಷ ಪ್ರವಾಹ ಬಂದಾಗಲೆಲ್ಲ ಗ್ರಾಮಗಳಲ್ಲಿಯ ಮನೆಗಳಿಗೆ ನೀರು ಬರುತ್ತಿದೆ.

ಎಷ್ಟು ಮನೆಗಳಿಗೆ ನೀರು ಬರುತ್ತಿದೆ, ಅಂತಹ ಕುಟುಂಬಗಳನ್ನು ಪಟ್ಟಿ ಮಾಡಿಕೊಂಡು ಸರಕಾರಿಜಾಗೆ ಗುರುತಿಸಿ ಸ್ಥಳಾಂತರಿಸುವ ಕೆಲಸವಾಗಬೇಕು ಎಂದರು. ಮುಗುಳಖೋಡ ಗ್ರಾಮದಲ್ಲಿ ಸರಕಾರಿ ಗೌಂಟೌನ್‌ಜಾಗ ಇರುವುದಾಗಿ ತಿಳಿಸಿದಾಗ ಪ್ರವಾಹಕ್ಕೆ ಬಾತಿಗೊಂಡ ಕುಟುಂಬಗಳಿಗೆ ಜಾಗ ನೀಡಿ ಸರಕಾರದ ವಿವಿಧ ವಸತಿ ಯೋಜನೆಗಳಲ್ಲಿ ಮನೆಕಟ್ಟಿಕೊಡುವ ಕೆಲಸ ಮಾಡಲು ತಿಳಿಸಿದರು. ಕಾಳಜಿ ಕೇಂದ್ರದಲ್ಲಿ ಊಟ, ವಸತಿ ಹಾಗೂ ಇತರೆ ಸೌಲಭ್ಯಗಳ ನೀಡುತ್ತಿರುವ ಬಗ್ಗೆ ಪರಿಶೀಲನೆ ನಡೆಸಿದರು.

## ಬೆನಕನಳ್ಳಿ ಹೊಸ ಬಡಾವಣೆಗೆ ಶಾಶ್ವತ ಪರಿಹಾರಕ್ಕೆ: ಬಾಲರಾಜ್ ಗುತ್ತೇದಾರ ಆಗ್ರಹ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಬೆನಕನಳ್ಳಿ ಗ್ರಾಮದಲ್ಲಿ ನಾಲ್ಕೈದು ದಿನಗಳ ಹಿಂದೆ ಸುರಿಯುತ್ತಿರುವ ಮಳೆಯಿಂದಾಗಿ ಮನೆಗಳಿಗೆ ನೀರು ನುಗ್ಗಿ ಧವಸ ಧಾನ್ಯಗಳು ಅಪಾರ ಪ್ರಮಾಣದ ಹಾನಿಯಾಗಿದ್ದು ಬೆನಕನಳ್ಳಿ ಗ್ರಾಮಕ್ಕೆ ಶಾಶ್ವತ ಪರಿಹಾರ ನೀಡಬೇಕು ಎಂದು ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷ ಬಾಲರಾಜ್ ಗುತ್ತೇದಾರ ಸರ್ಕಾರಕ್ಕೆ ಒತ್ತಾಯಿಸಿದರು. ತಾಲ್ಲೂಕಿನ ಬೆನಕನಳ್ಳಿ ಗ್ರಾಮಕ್ಕೆ ಬಿಜೆಪಿ ಮುಖಂಡ ಜೆ.ಕೆ.ಪಾಟೀಲ್ ಹಾಗೂ ಜೆಡಿಎಸ್ ಜಿಲ್ಲಾಧ್ಯಕ್ಷ ಬಾಲರಾಜ್ ಗುತ್ತೇದಾರ ಜಂಟಿಯಾಗಿ ಗ್ರಾಮಕ್ಕೆ ಭೇಟಿ ನೀಡಿ ಜನರಿಗೆ ಧೈರ್ಯ ತುಂಬಿ ಮಾತನಾಡಿದ ಅವರು,ಪ್ರತಿವರ್ಷ ಮಳೆಗಾಲ ಬಂದರೆ ಸಾಕು ಗ್ರಾಮವೆಲ್ಲ ಜಲಾವೃತವಾಗುತ್ತದೆ ಇದಕ್ಕೆ ಶಾಶ್ವತ ಪರಿಹಾರ ನೀಡಬೇಕು. ಜಿಲ್ಲೆಯಲ್ಲಿ ನಿರಂತರವಾಗಿ ಸುರಿದ ಭಾರೀ ಮಳೆಯ ಪರಿಣಾಮ ಗ್ರಾಮದ ಹೊಸ ಬಡಾವಣೆಯ ಮನೆಗಳು ಜಲಾವೃತವಾಗಿದ್ದು, ಹಲವು ಮನೆಗಳಲ್ಲಿ ನೀರು ನುಗ್ಗಿದ ಪರಿಣಾಮ ದವಸ- ಧಾನ್ಯಗಳು ಹಾಳಾಗಿವೆ,ಮಳೆ ಬಂದರೆ ಗ್ರಾಮದಲ್ಲಿರುವ ಜನರು ಆತಂಕದಲ್ಲಿ ಜೀವನ ಸಾಗಿಸುತ್ತಾರೆ,ಮನೆ ಹಾನಿ,ಬೆಳೆಹಾನಿ,ದಿನನಿತ್ಯ ಬಳಸುವ ವಸ್ತುಗಳು ಹಾನಿಯಿಂದ ಜನರು ಬೆಸತ್ತು ಹೋಗಿದ್ದಾರೆ.

ಕಳೆದೆರಡು ವರ್ಷಗಳಿಂದ ಯಾವುದೇ ಪರಿಹಾರವು ನೀಡುತ್ತಿಲ್ಲಾ ಎಂದು ಸ್ಥಳೀಯರು ಆರೋಪಿಸಿತ್ತಿದ್ದು ಕೂಡಲೇ ಸಂಭದಪಟ್ಟ ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ ಮಳೆಯಿಂದ ನಷ್ಟವಾಗಿರುವ ಸಾಮಾಗ್ರಿಗಳಿಗೆ ಪರಿಹಾರ ನೀಡಬೇಕು ಹಾಗೂ ಪ್ರತಿಬಾರಿ ಹೆಚ್ಚಿನ ಮಳೆ ಬಂದರೆ ಗ್ರಾಮದ ಹೊಸ ಬಡಾವಣೆಯ ಮನೆಗಳು ಜಲಾವೃತವಾಗಿತ್ತಿದ್ದು ಮುಂದೆ ಈ ರೀತಿ ಆಗದಂತೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಆಗ್ರಹಿಸಿದ್ದರು.

ಈ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ಹಾಗೂ ಬಿಜೆಪಿ ಪಕ್ಷದ ಮುಖಂಡರು ಕಾರ್ಯಕರ್ತರು ಇದ್ದರು.


ಉದಯವಾಹಿನಿ ಚಿತ್ರ

### • ಸಂಗ್ರಹಿಸಿಟ್ಟ ಗಣೇಶ ಮೂರ್ತಿಗಳನ್ನು ಕಟ್ಟುನಿಟ್ಟಾಗಿ ಪರಿಶೀಲಿಸುವಂತೆ ಮೂರ್ತಿ ತಯಾರಕರ ಆಗ್ರಹ

# ಪಿಒಪಿ ಗಣೇಶನಿಗೆ ಬೇಕಿದೆ ಕಡಿವಾಣ: ತಪ್ಪಿತಸ್ಥರ ಮೇಲೆ ಕ್ರಮಕ್ಕೆ ಒತ್ತಾಯ

• ಉದಯವಾಹಿನಿ ಗದಗ

ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ (ಪಿಒಪಿ) ತಯಾರಾಗುವ ಗಣೇಶ ಮೂರ್ತಿಗಳ ಮಾರಾಟ ಮತ್ತು ಬಳಕೆಗೆ ಈ ಬಾರಿ ಕಟ್ಟುನಿಟ್ಟಾಗಿ ನಿರ್ಬಂಧ ಹೇರಿ ಜಿಲ್ಲಾಡಳಿತ ಆದೇಶಿಸಿದೆ. ಆದರೆ, ಪರಿಸರಕ್ಕೆ ಹಾನಿಕಾರವಾಗಿರುವ ಪಿಒಪಿ ಗಣೇಶ ಮೂರ್ತಿಗಳ ಮಾರಾಟ ಲಕ್ಷ್ಮೇಶ್ವರ, ಶಿರಹಟ್ಟಿ ಸೇರಿದಂತೆ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ರಾಜಾರೋಷವಾಗಿ ನಡೆದಿದೆ. ಇದು ಮಣ್ಣಿನಲ್ಲಿ ಗಣೇಶ ಮೂರ್ತಿ ತಯಾರಿಸುವ ಕಲಾವಿದರ ನಿದ್ದೆಗೆಡಿಸಿದೆ.

ಸರ್ಕಾರದ ಆದೇಶ ಉಲ್ಲಂಘಿಸಿ ಪ್ಲಾಸ್ಟರ್ ಆಫ್ ಪ್ಯಾರಿಸ್ ಗಣೇಶ ವಿಗ್ರಹಗಳ ತಯಾರಿಕೆ ಮತ್ತು ಮಾರಾಟಕ್ಕೆ ಯತ್ನಿಸಿರುವವರ ವಿರುದ್ಧ ಕೂಡಲೇ ಕ್ರಮಕೈಗೊಳ್ಳಬೇಕು' ಎಂದು ಗದಗ ಜಿಲ್ಲಾ ಗಣೇಶ ಮೂರ್ತಿ ತಯಾರಕರ ಸಂಘ ಆಗ್ರಹಿಸಿದೆ. ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರಿಗೂ ಪತ್ರ ಬರೆದಿದೆ.


ಉದಯವಾಹಿನಿ ಚಿತ್ರ

**ದುರಾಸೆಯಿಂದ ಪರಿಸರಕ್ಕೆ ಹಾನಿ**

ಮಣ್ಣಿನಿಂದ ತಯಾರಿಸಿದ ಗಣೇಶ ಮೂರ್ತಿಗಳನ್ನು ಪೂಜಿಸುವುದೇ ಶ್ರೇಷ್ಠ ಎಂಬ ನಂಬಿಕೆ ಇದೆ. ಆದರೆ, ಕೆಲವರು ಕಡಿಮೆ ಸಮಯದಲ್ಲಿ ಹೆಚ್ಚಿನ ವಿಗ್ರಹಗಳನ್ನು ತಯಾರಿಸಬಹುದು ಎಂಬ ದುರಾಸೆಯಿಂದ ಪರಿಸರಕ್ಕೆ ಹಾನಿ ಉಂಟು ಮಾಡುವ ಪಿಒಪಿ ಗಣೇಶ ಮೂರ್ತಿಗಳನ್ನು ತಯಾರು ಮಾಡಿ, ಮಾರುತ್ತಿದ್ದಾರೆ. ಇದಕ್ಕೆ ಕಡಿವಾಣ ಹಾಕಬೇಕಿದೆ' ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಮುತ್ತಣ್ಣ ಭರಡಿ ಆಗ್ರಹಿಸಿದ್ದಾರೆ. ಪಿಒಪಿ ಗಣೇಶ ಮೂರ್ತಿಗಳ ತಯಾರಿಕೆ ಮತ್ತು ಮಾರಾಟ ಹಾಗೂ ಬಣ್ಣ ಲೇಪನ ಮಾಡುವುದು ಜಲಮಾಲಿನ್ಯ ತಡೆ , ನಿಯಂತ್ರಣ ಕಾಯ್ದೆ 1974 ಕಲಂ 33 (ಎ) ಪ್ರಕಾರ ಕಾನೂನುಬಾಹಿರ. ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ನಿಷೇಧಿಸಿ ಆದೇಶ ಹೊರಡಿಸಿದೆ. ಹೀಗಿದ್ದರೂ ಪಿಒಪಿ ಗಣೇಶ ವಿಗ್ರಹಗಳ ಮಾರಾಟ ಕಳೆದ ವರ್ಷ ರಾಜ್ಯದಲ್ಲಿ ಎಗ್ಗಿಲ್ಲದೇ ನಡೆದಿತ್ತು. ಈ ವರ್ಷವೂ ಅದೇರೀತಿ ನಡೆದರೆ ಪರಿಸರಸ್ನೇಹಿ ಗಣೇಶ ವಿಗ್ರಹ ತಯಾರಕರಿಗೆ ಆರ್ಥಿಕವಾಗಿ ತುಂಬಾ ತೊಂದರೆಯಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ. ತೊಂದರೆಯಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಹೀಗಾಗಿ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಕಳೆದ ವರ್ಷ ಹಾಗೂ ಈ ವರ್ಷ ತಂದು ಕೂಡಿಟ್ಟ ವಿಗ್ರಹಗಳನ್ನು ಪರಿಶೀಲಿಸಬೇಕು. ಪಿಒಪಿ ಮೂರ್ತಿಗಳಿದ್ದರೆ ವಶಪಡಿಸಿಕೊಂಡು, ತಪ್ಪಿತಸ್ಥರ ಮೇಲೆ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದ್ದಾರೆ.

ಪಿಒಪಿ ವಿಗ್ರಹ ನಿಯಂತ್ರಣಕ್ಕಾಗಿ ರಾಜ್ಯದಾದ್ಯಂತ ಒಂದೇ ಹೆಲ್ಪ್‌ಲೈನ್ ನಂಬರ್ ಆರಂಭಿಸಬೇಕು. ಮಣ್ಣಿನ ಗಣೇಶ ವಿಗ್ರಹ ತಯಾರಿಸುವ ಕಲಾವಿದರಿಗೆ ಸರ್ಕಾರದಿಂದ ಗುರುತಿನ ಚೀಟಿ ನೀಡಿ, ಕಲಾವಿದರನ್ನು ಪ್ರೋತ್ಸಾಹಿಸಬೇಕು ಎಂದು ಒತ್ತಾಯಿಸಿದ್ದಾರೆ.

### ಪಿಒಪಿ ಹಾವಳಿ ನಡುವೆಯೂ ಹೆಚ್ಚಿದ ಬೇಡಿಕೆ

ನರೇಗಲ್ ಪಟ್ಟಣ ಹಾಗೂ ಹೋಬಳಿ ವ್ಯಾಪ್ತಿಯ ವಿವಿಧೆಡೆ ಪಿಒಪಿ ಮೂರ್ತಿಗಳ ಹಾವಳಿ ನಡುವೆಯೂ ಸಾಂಪ್ರದಾಯಿಕ ಶೈಲಿಯಲ್ಲಿ ಮಣ್ಣಿನಿಂದ ಮಾಡಿದ ಗಣಪತಿಗಳಿಗೆ ಬೇಡಿಕೆ ಹೆಚ್ಚಿದೆ. ನರೇಗಲ್ ಪಟ್ಟಣದ ಕುಂಬಾರರ ಮನೆಯಲ್ಲಿ, ಸಮೀಪದ ಕೋಟುಮಚಗಿಯ ನಾಗಪ್ಪ ಬಡಿಗೇರ ಅವರ ಮನೆಯಲ್ಲಿ ಸುಂದರ ಗಣಪತಿಗಳು ಸಿದ್ಧಗೊಳ್ಳುತ್ತಿವೆ. ಒಂದು ಅಡಿ ಎತ್ತರದ ಗಣಪನಿಂದ ಹಿಡಿದು ನಾಲ್ಕು ಅಡಿ ಎತ್ತರದ ಗಣಪನವರೆಗೂ ಇವರು ಗಣಪತಿಗಳನ್ನು ತಯಾರು ಮಾಡುತ್ತಾರೆ. ಎಲ್ಲಾ ಮೂರ್ತಿಗಳೂ ಜೀವಕಳೆ ಮತ್ತು ದೈವಕಳೆಗಳಿಂದ ಸುಂದರವಾಗಿ ಕಂಗೊಳಿಸುವುದರಿಂದ ಇವರ ಗಣಪತಿಗಳು ಪ್ರಸಿದ್ಧಿ ಪಡೆದಿವೆ. ಗಣಪತಿ ಮೂರ್ತಿಗಳ ವಿನ್ಯಾಸ, ಕೆಲಸದ ಆಧಾರದ ಮೇಲೆ ದರ ನಿಗದಿಪಡಿಸಲಾಗಿದೆ. ಸಾಮಾನ್ಯವಾಗಿ 201ರಿಂದ 10,001ವರೆಗೂ ದರ ನಿಗದಿಯಾಗಿರುತ್ತದೆ. ದೊಡ್ಡ ಪ್ರಮಾಣದ ಮೂರ್ತಿಗಳ ಬೇಡಿಕೆ ಇದ್ದಲ್ಲಿ ಮುಂಚಿತವಾಗಿ ಹೇಳಿದರೆ ಮಾಡಿ ಕೊಡುತ್ತೇವೆ ಎನ್ನುತ್ತಾರೆ ಮೂರ್ತಿ ತಯಾರಕರು.

## ಬ್ಯಾಂಕ್ ಮ್ಯಾನೇಜರ್ ಮೇಲೆ ಹಲ್ಲೆ ನಡೆಸಿ ಹಣ, ಚಿನ್ನಾಭರಣ ದರೋಡೆ

• ಉದಯವಾಹಿನಿ ಕಲಬುರಗಿ

ಬ್ಯಾಂಕ್ ಮ್ಯಾನೇಜರ್ ಒಬ್ಬರ ಮೇಲೆ ಹಲ್ಲೆ ನಡೆಸಿ ಹಣ, ಚಿನ್ನಾಭರಣ ದರೋಡೆ ಮಾಡಿರುವ ಘಟನೆ ನಗರದಲ್ಲಿ ನಡೆದಿದೆ. ಬಾಗಲಕೋಟೆ ಜಿಲ್ಲೆಯ ಬನಹಟ್ಟಿ ತಾಲ್ಲೂಕಿನ ಆಸಂಗಿ ಗ್ರಾಮದಲ್ಲಿರುವ ಬ್ಯಾಂಕ್ ಆಫ್ ಬರೋಡಾದಲ್ಲಿ ಜಾಯಿಂಟ್ ಮ್ಯಾನೇಜರ್ ಆಗಿರುವ ಮಲ್ಲಿಕಾರ್ಜುನ ಕಡೂನ್ ಎಂಬುವವರ ಮೇಲೆ ಹಲ್ಲೆ ನಡೆಸಿ 80 ಸಾವಿರ ರೂ.ಮೌಲ್ಯದ ಬಂಗಾರದ ಚೈನ್, 2,500 ರೂ.ನಗದು ದೋಚಲಾಗಿದೆ. ಕಡೂನ್ ಅವರು ಬನಹಟ್ಟಿಯಿಂದ ಮಧ್ಯರಾತ್ರಿ 2 ಗಂಟೆ ಸುಮಾರಿಗೆ ಕಲಬುರಗಿಗೆ ಆಗಮಿಸಿ ನಗರದ ಜಗತ್‌ನ ಭೀಮನಗರಕ್ಕೆ ಹೋಗಲು ಸರ್ದಾರ ವಲ್ಲಭಭಾಯಿ ಪಟೇಲ್ ವೃತ್ತದಲ್ಲಿ ಆಟೋಗಾಗಿ ಕಾಯುತ್ತ ನಿಂತಿದ್ದಾರೆ.

ಈ ವೇಳೆ ಆಟೋ ಚಾಲಕನೊಬ್ಬ ಇವರ ಬಳಿಗೆ ಬಂದು ಎಲ್ಲಿಗೆ ಹೋಗಬೇಕು ಎಂದು ಕೇಳಿ ಜಗತ್ ಸರ್ಕಲ್‌ಗೆ 20 ರೂ. ಆಗುತ್ತದೆ ಎಂದಿದ್ದಾನೆ. ಇವರು ಆಟೋದಲ್ಲಿ ಕೂರುವ ಮೊದಲೇ ಒಬ್ಬ ಅಪರಿಚಿತ ವ್ಯಕ್ತಿ ಆಟೋದಲ್ಲಿ ಕುಳಿತಿದ್ದ. ಆಟೋ ಎಸ್.ಬಿ.ಪೆಟ್ರೋಲ್ ಪಂಪ್ ಹತ್ತಿರ ಹೋಗುತ್ತಿದ್ದಂತೆಯೇ ಮತ್ತಿಬ್ಬರು ಆಟೋ ನಿಲ್ಲಿಸಿ ಅದರಲ್ಲಿ ಕುಳಿತಿದ್ದಾರೆ. ಆಗ ಆಟೋ ಚಾಲಕ ಜಗತ್ ಸರ್ಕಲ್‌ಗೆ ಹೋಗುವ ಬದಲು ಸರ್ಕಾರಿ ಆಸ್ಪತ್ರೆ ಕಡೆಗೆ ಆಟೋ ತಿರುಗಿಸಿದ್ದಾನೆ. ಆಗ ಕಡೂನ್ ಅವರು ನಾನು ಜಗತ್‌ಗೆ ಹೋಗಬೇಕು ಎಂದಿದ್ದಾರೆ.

# ದಿನೇಶ್‌ಗೆ ಇದ್ದ ಆರೋಗ್ಯ ಸಮಸ್ಯೆಗಳು ಒಂದೆರಡಲ್ಲ

ಹಿರಿಯ ನಟ ದಿನೇಶ್ ಮಂಗಳೂರು ಅವರು ಆಗಸ್ಟ್ 25ರಂದು ನಿಧನರಾಗಿದ್ದಾರೆ. ಅವರು ಹಲವು ವರ್ಷಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದು, ಬ್ರೈನ್ ಸ್ಟ್ರೋಕ್ ಮತ್ತು ಮೂತ್ರಪಿಂಡದ ಸಮಸ್ಯೆಗಳನ್ನು ಎದುರಿಸುತ್ತಿದ್ದರು. ಅವರ ಮಗ ಸಜನ್ ಅವರು ತಂದೆಯ ಆರೋಗ್ಯ ಸ್ಥಿತಿ ಮತ್ತು ಅವರ ಕೊನೆಯ ದಿನಗಳ ಬಗ್ಗೆ ಮಾಹಿತಿ ನೀಡಿದ್ದಾರೆ. ದಿನೇಶ್ ಅವರ ನಿಧನವು ಕನ್ನಡ ಚಿತ್ರರಂಗಕ್ಕೆ ತುಂಬಲಾರದ ನಷ್ಟವಾಗಿದೆ.



ಹಿರಿಯ ನಟ ದಿನೇಶ್ ಮಂಗಳೂರು ಅವರು ನಿಧನ ಹೊಂದಿದ್ದಾರೆ. ಕರಾವಳಿ ಪಾತ್ರಗಳನ್ನು ಮಾಡಿ ಗಮನ ಸೆಳೆದಿದ್ದ ಅವರು ನಮ್ಮ ಜೊತೆ ಇಲ್ಲವಾಗಿದ್ದಾರೆ. ಇದು ಕನ್ನಡ ಚಿತ್ರರಂಗಕ್ಕೆ ಉಂಟಾದ ದೊಡ್ಡ ನಷ್ಟ. ದಿನೇಶ್ ಸಾವಿಗೆ ಅನೇಕರು ಕಂಬನಿ ಮಿಡಿದಿದ್ದಾರೆ. ಹಾಗಾದರೆ ದಿನೇಶ್ ಅವರು ನಿಧನಕ್ಕೂ ಮೊದಲು ಏನೆಲ್ಲ ಸಮಸ್ಯೆ ಎದುರಿಸಿದ್ದರು ಅವರಿಗೆ ಇದ್ದ ಸಮಸ್ಯೆ ಏನು ಎಂಬಿತ್ಯಾದಿ ಪ್ರಶ್ನೆಗೆ ಅವರ ಮಗ ಸಜನ್ ಪ್ರತಿಕ್ರಿಯೆ ನೀಡಿದ್ದಾರೆ.

ತಂದೆಗೆ ವರ್ಷದ ಹಿಂದೆ ಬ್ರೈನ್ ಸ್ಟ್ರೋಕ್ ಆಗಿತ್ತು. ಅವರು ಅನಾರೋಗ್ಯದಿಂದ ಬಳಲುತ್ತಿದ್ದರು. ಆಗಸ್ಟ್ 6ರಂದು ಆಸ್ಪತ್ರೆಗೆ ದಾಖಲು ಮಾಡಿದ್ದೆವು. ಸ್ವಲ್ಪ ದಿನದ ಬಳಿಕ ಚೇತರಿಸಿಕೊಂಡಿದ್ದರು. ವಾರದ ಹಿಂದೆ ಮತ್ತೆ ಆರೋಗ್ಯದಲ್ಲಿ ಏರುಪೇರು ಆಗಿದ್ದರಿಂದ ಮತ್ತೆ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಆಗಸ್ಟ್ 25 ಮುಂಜಾನೆ ಅವರು ಕೊನೆಯುಸಿರೆಳೆದಿದ್ದಾರೆ ಎಂದು ಅವರು ವಿವರ ನೀಡಿದ್ದಾರೆ. 'ಕಾಂತಾರ' ಸಿನಿಮಾದಲ್ಲಿ ದಿನೇಶ್ ನಟಿಸಿದ್ದಾರೆ ಎಂದು ಹೇಳಲಾಗಿತ್ತು. ಇದಕ್ಕೆ ಸಜನ್ ಸ್ಪಷ್ಟನೆ ನೀಡಿದ್ದಾರೆ. 'ಆ ದಿನಗಳು ಚಿತ್ರದಿಂದ ನನ್ನ ತಂದೆ ನಟನೆ ಆರಂಭಿಸಿದರು.




# ಡಬಲ್ ಸ್ಟ್ರಿಂಗ್ ಬಿಕಿನಿ ತೊಟ್ಟ ಪಾಪ್ ತಾರೆ

ಡಬಲ್ ಸ್ಟ್ರಿಂಗ್ ಬಿಕಿನಿ ಎಂದರೇನು ಮತ್ತು ಅದರ ವಿಶೇಷತೆ ಏನು ಎಂಬುದನ್ನು ಈ ಲೇಖನ ವಿವರಿಸುತ್ತದೆ. ಇದು ಸಾಮಾನ್ಯ ಬಿಕಿನಿಗಿಂತ ಎರಡು ಪಟ್ಟಿಗಳನ್ನು ಹೊಂದಿದ್ದು, ಹೆಚ್ಚು ಸ್ಟೈಲಿಶ್ ಆಗಿ ಕಾಣುತ್ತದೆ. ಜಾಗತಿಕ ಸೆಲೆಬ್ರಿಟಿಗಳು ಇದನ್ನು ಧರಿಸುತ್ತಾರೆ. ಈ ಬಿಕಿನಿಯ ವಿನ್ಯಾಸ, ಶೈಲಿ ಮತ್ತು ಬೆಲೆಗಳ ಬಗ್ಗೆ ಲೇಖನದಲ್ಲಿ ತಿಳಿಸಲಾಗಿದೆ.

ದುವಾ ಲಿಪಾ ಈ ಬಿಕಿನಿಯನ್ನು ಧರಿಸಿದ್ದರು, ಇದರ ಬೆಲೆ ಸುಮಾರು ಭಾರತದ ಬೆಲೆಯಲ್ಲಿ ಸುಮಾರು 22,517 ರೂಪಾಯಿ. ಲಿಪಾ ಅವರ ಡಬಲ್ -ಸ್ಟ್ರಾಪ್ ವಿನ್ಯಾಸವು ಬಿಕಿನಿಯನ್ನು ಇನ್ನಷ್ಟು ಆಕರ್ಷಕವಾಗಿಸಿದೆ. ಮೇಲ್ಭಾಗದಲ್ಲಿರುವ ಲೇಯರ್ಡ್ ಬ್ಯಾಂಡ್‌ಗಳು ಬೆಂಬಲವನ್ನು ಒದಗಿಸುವುದಲ್ಲದೆ, ಶೈಲಿಗೆ ವಿಶೇಷ ಸ್ಪರ್ಶವನ್ನು ನೀಡಿದೆ. ಖ್ಯಾತ ಗಾಯಕಿ ದುವಾ ಲಿಪಾ ತಮ್ಮ ಡ್ರೆಸ್ ಮತ್ತು ಹೇಳಿಕೆಯಿಂದ ಸುದ್ದಿ ಆಗುತ್ತಾರೆ. ಅವರ ಬಟ್ಟೆಯ ವಿನ್ಯಾಸಗಳಿಗೆ ಹೆಸರುವಾಸಿ. ಅವರು ಇತ್ತೀಚೆಗೆ ಡಬಲ್ ಬಿಕಿನಿಯನ್ನು ಧರಿಸಿದ್ದರು.

ಈ ಫೋಟೋಗಳು ಸಾಕಷ್ಟು ವೈರಲ್ ಆಗಿ ಗಮನ ಸೆಳೆದಿವೆ. ಸಾಮಾನ್ಯ ಸ್ಟ್ರಿಂಗ್ ಬಿಕಿನಿಯು ಕೇವಲ ಒಂದು ತೆಳುವಾದ ಪಟ್ಟಿಯನ್ನು ಹೊಂದಿದ್ದರೆ, ಡಬಲ್ ಸ್ಟ್ರಿಂಗ್ ಬಿಕಿನಿಯು ಡಬಲ್ ಲೇಯರ್ಡ್ ಸ್ಟ್ರಾಪ್‌ಗಳನ್ನು ಹೊಂದಿರುತ್ತದೆ. ಈ ಸ್ಟ್ರಾಪ್‌ಗಳು ಕೆಲವೊಮ್ಮೆ ಸೊಂಟದಲ್ಲಿ, ಕೆಲವೊಮ್ಮೆ ಭುಜಗಳಲ್ಲಿ ಮತ್ತು ಕೆಲವೊಮ್ಮೆ ಕುತ್ತಿಗೆಯಲ್ಲಿ ಇರುತ್ತವೆ. ಇದು ಹೆಚ್ಚು ಸುರಕ್ಷಿತ ಮತ್ತು ಟ್ರೆಂಡಿಯಾಗಿದೆ. ಇದು ಕ್ಲಾಸಿಕ್ ಬಿಕಿನಿಗೆ ಹೊಸ ರೂಪ ನೀಡುತ್ತದೆ. ಡಬಲ್ ಸ್ಟ್ರಾಪ್‌ಗಳು ಉತ್ತಮವಾಗಿ ರಕ್ಷಣೆ ಮಾಡುತ್ತದೆ. ಈ ವಿನ್ಯಾಸದಲ್ಲಿ ಅನೇಕ ಬಣ್ಣ ಮತ್ತು ಶೈಲಿಯ ಸಂಯೋಜನೆಗಳನ್ನು ಬಳಸಬಹುದು. ಹೆಸರೇ ಸೂಚಿಸುವಂತೆ, ಡಬಲ್ ಸ್ಟ್ರಿಂಗ್ ಬಿಕಿನಿಯು ಸಾಮಾನ್ಯ ಬಿಕಿನಿಯ ಬದಲಿಗೆ ಎರಡು ಪಟ್ಟಿಗಳನ್ನು ಹೊಂದಿದ್ದು, ಇದು ಹೆಚ್ಚು ಸ್ಟೈಲಿಶ್ ಮತ್ತು ಆಧುನಿಕವಾಗಿ ಕಾಣುವಂತೆ ಮಾಡುತ್ತದೆ.

# 'ಸೆ. 1ರ ರಾತ್ರಿಯೇ ಸಿಗೋಣವಾ'




ಕಿಚ್ಚ ಸುದೀಪ್ ಅವರ ಹುಟ್ಟುಹಬ್ಬ ಸಮೀಪಿಸಿದೆ. ತಮ್ಮ ತಾಯಿಯ ಅಗಲಿಕೆಯ ನೋವಿನೊಂದಿಗೆ ಅವರು ಅಭಿಮಾನಿಗಳಿಗೆ ಓಪನ್ ಲೆಟರ್ ಬರೆದಿದ್ದಾರೆ. ಸೆ. 1ರಂದು ಅಭಿಮಾನಿಗಳೊಂದಿಗೆ ಹುಟ್ಟುಹಬ್ಬ ಆಚರಿಸಲು, ಸೆ.2ರಂದು ಶಾಂತವಾಗಿರಲು ಅವರು ವಿನಂತಿಸಿದ್ದಾರೆ. ಕಿಚ್ಚ ಸುದೀಪ್ ಅವರ ಬರ್ತ್‌ಡೇ ಸಮೀಪಿಸಿದೆ. ಸೆಪ್ಟೆಂಬರ್ 2 ಅವರ ಹುಟ್ಟುಹಬ್ಬ. ಪ್ರತಿ ವರ್ಷ ಈ ದಿನ ಫ್ಯಾನ್ಸ್‌ಗೆ ಸಖತ್ ವಿಶೇಷ. ಇದನ್ನು ಅವರು ಹಬ್ಬದ ರೀತಿಯಲ್ಲಿ ಆಚರಿಸುತ್ತಾರೆ. ಈ ಬಾರಿಯೂ ಅದು ಮುಂದುವರಿಯಲಿದೆ. ಆದರೆ, ತಾಯಿ ಇಲ್ಲದೆ ಸುದೀಪ್ ಆಚರಿಸಿಕೊಳ್ಳುತ್ತಿರುವ ಮೊದಲ ಜನ್ಮದಿನ. ಹೀಗಾಗಿ, ಅವರಿಗೆ ಬೇಸರ ಇದೆ. ಆದರೆ, ಅಭಿಮಾನಿಗಳಿಗೋಸ್ಕರ ಸೆಪ್ಟೆಂಬರ್ 1ರಂದೇ ಅಭಿಮಾನಿಗಳ ಜೊತೆಗೂಡಿ ಈ ವಿಶೇಷ ದಿನ ಆಚರಿಸಿಕೊಳ್ಳಲು ಅವರು ರೆಡಿ ಆಗಿದ್ದಾರೆ. ಅವರು ಅಭಿಮಾನಿಗಳಿಗಾಗಿ ಓಪನ್ ಪತ್ರ ಬರೆದಿದ್ದಾರೆ. ಆ ಪತ್ರದ ಸಾಲುಗಳು ಇಲ್ಲಿವೆ. 'ಸೆಪ್ಟೆಂಬರ್ ಎರಡರ ಬೆಳಗಿನಲ್ಲಿ ಅಲ್ಲ ಸೆಪ್ಟೆಂಬರ್ ಒಂದರ ರಾತ್ರಿಯೇ ಸಿಗೋಣವಾ ಸೆಪ್ಟೆಂಬರ್ ಎರಡರಂದು ನೀವು ನನ್ನನ್ನು ಭೇಟಿಮಾಡುವುದಕ್ಕಾಗಿ ಎಷ್ಟು ಕಾಯುವಿರೋ ಅದಕ್ಕಿಂತ ಹೆಚ್ಚಾಗಿ ನಾನು ನಿಮಗಾಗಿ ಕಾಯುತ್ತೇನೆ.

ಆ ದಿನ ನೀವು ಪಡುವ ಸಂಭ್ರಮ, ಆಚರಿಸುವ ವಿಡಿಯೋಗಳನ್ನು ನೋಡಿದಾಗ ಪ್ರತಿಸಲವೂ ನನಗೆ ಮರುಹುಟ್ಟು ಪಡೆದಂತಾಗುತ್ತದೆ. ನಿಸ್ಸಂದೇಹವಾಗಿ ನನ್ನ ಬದುಕಿಗೆ ಮೌಲ್ಯ ತುಂಬಿದವರು ನೀವು. ನಿಮ್ಮೆದುರು ನಿಂತು ವಿನೀತನಾಗುವುದಕ್ಕಿಂತ ಖುಷಿ ಏನಿದೆ ಆದ್ದರಿಂದಲೇ ದಶಕಗಳಿಂದ ನಿಮ್ಮನ್ನು ಮನೆಯ ಹತ್ತಿರ ಭೇಟಿಮಾಡುತ್ತಲೇ ನಾನೂ ಸಂಭ್ರಮಸಿದ್ದೇನೆ. ಆದರೆ ಈ ಸಲ ತುಂಬಾ ಕಷ್ಟವಾಗುತ್ತಿದೆ.

# ಆಗಸ್ಟ್ 29ಕ್ಕೆ ಅಂದೊಂದಿತ್ತು ಕಾಲ




ಸಿದ್ ಶ್ರೀರಾಮ್ ಕಂಠದಲ್ಲಿ ಮೂಡಿಬಂದ ಮುಂಗಾರು ಮಳೆಯಲ್ಲಿ.. ಹಾಡು ಜನಪ್ರಿಯ ಆಗಿದೆ. ಹಾಡಿನ ಮೂಲಕ ಅಂದೊಂದಿತ್ತು ಕಾಲ ಸಿನಿಮಾ ಮೇಲೆ ಪ್ರೇಕ್ಷಕರಿಗೆ ನಿರೀಕ್ಷೆ ಮೂಡುವಂತಾಗಿದೆ. ವಿನಯ್ ರಾಜ್‌ಕುಮಾರ್ ಹೀರೋ ಆಗಿ ನಟಿಸಿರುವ ಈ ಸಿನಿಮಾದ ಆಗಸ್ಟ್ 29ರಂದು ತೆರೆಕಾಣಲಿದೆ. ನಟ ವಿನಯ್ ರಾಜ್‌ಕುಮಾರ್ ಹಾಗೂ ನಟಿ ಅದಿತಿ ಪ್ರಭುದೇವ ಅವರು 'ಅಂದೊಂದಿತ್ತು ಕಾಲ' ಸಿನಿಮಾದಲ್ಲಿ ಜೋಡಿಯಾಗಿ ನಟಿಸಿದ್ದಾರೆ. ಕೀರ್ತಿ ಕೃಷ್ಣ ಅವರು ನಿರ್ದೇಶನ ಮಾಡಿರುವ ಈ ಸಿನಿಮಾ ಆಗಸ್ಟ್ 29ಕ್ಕೆ ರಾಜ್ಯಾದ್ಯಂತ ಬಿಡುಗಡೆ ಆಗಲಿದೆ.

'ಭುವನ್ ಸಿನಿಮಾಸ್' ಮೂಲಕ ಭುವನ್ ಸುರೇಶ್ ಅವರು ಈ ಸಿನಿಮಾವನ್ನು ನಿರ್ಮಿಸಿದ್ದಾರೆ. ಕೀರ್ತಿ ಕೃಷ್ಣ ಅವರು ನಿರ್ದೇಶನದ ಜೊತೆಗೆ ಕಥೆ, ಚಿತ್ರಕಥೆ ಬರೆದಿದ್ದಾರೆ. ಹಾಡುಗಳ ಮೂಲಕ ಈ ಸಿನಿಮಾ ಈಗಾಗಲೇ ಸದ್ದು ಮಾಡಿದೆ. ಪ್ರತಿ ಹಾಡು ಕೂಡ ಭಿನ್ನವಾಗಿ ಮೂಡಿಬಂದಿದ್ದು. ರಾಘವೇಂದ್ರ ವಿ. ಅವರು 'ಅಂದೊಂದಿತ್ತು ಕಾಲ' ಸಿನಿಮಾಗೆ ಸಂಗೀತ ನೀಡಿದ್ದಾರೆ. ಧನಂಜಯ್ ರಂಜನ್ ಸಾಹಿತ್ಯದಲ್ಲಿ ಮೂಡಿಬಂದ 'ಮುಂಗಾರು ಮಳೆಯಲ್ಲಿ' ಹಾಡು ಈಗಾಗಲೇ ಸೂಪರ್ ಹಿಟ್ ಆಗಿದೆ.

ಆ ಮೂಲಕ ಅಂದೊಂದಿತ್ತು ಕಾಲ ಸಿನಿಮಾದ ಮೇಲೆ ನಿರೀಕ್ಷೆ ಮೂಡಿಸಿದೆ. ಗಾಯಕ ಸಿದ್ ಶ್ರೀರಾಮ್ ಧ್ವನಿ ನೀಡಿರುವ ಈ ಹಾಡಿಗೆ ಕೇಳುಗರು ಫಿದಾ ಆಗಿದ್ದಾರೆ. ಪ್ರೇಕ್ಷಕರನ್ನು ಚಿತ್ರಮಂದಿರಕ್ಕೆ ಕರೆಯಲು ಈ ಹಾಡು ಆಹ್ವಾನದ ರೀತಿ ಇದೆ. ಹಾಡುಗಳ ರೀತಿಯೇ 'ಅಂದೊಂದಿತ್ತು ಕಾಲ' ಸಿನಿಮಾದ ಟೀಸರ್ ಮತ್ತು ಟ್ರೇಲರ್ ಸಹ ಬಹಳಷ್ಟು ನಿರೀಕ್ಷೆ ಕಾರಣ.

# 'ಇದ್ರೆ ನೆಮ್ಮದಿಯಾಗ್ ಇರ್ಬೇಕ್'



ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿದ್ದ ದರ್ಶನ್ ಅವರ 'ಡೆವಿಲ್' ಸಿನಿಮಾದ ಹಾಡು 'ಇದ್ರೆ ನೆಮ್ಮದಿಯಾಗ್ ಇರ್ಬೇಕ್' ಬಿಡುಗಡೆಯಾಗಿದೆ. ಈ ಹಾಡಿನಲ್ಲಿ ದರ್ಶನ್ ಧರಿಸಿರುವ ದುಬಾರಿ ಡಿಸೆಲ್ ಜಾಕೆಟ್ ಸಾಕಷ್ಟು ಚರ್ಚೆಗೆ ಕಾರಣವಾಗಿದೆ. ಚಿತ್ರದ ರಿಲೀಸ್‌ಗೆ ಅಭಿಮಾನಿಗಳು ಕಾತುರರಾಗಿದ್ದಾರೆ. ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ದರ್ಶನ್ ಜೈಲು ಸೇರಿದ್ದಾರೆ. ಅವರು ಜೈಲಿನಲ್ಲಿ ಇರುವಾಗಲೇ 'ಡೆವಿಲ್' ಸಿನಿಮಾದ ರಿಲೀಸ್‌ಗೆ ಸಿದ್ಧತೆ ನಡೆದಿದೆ. ಈ ಚಿತ್ರದ ಮೊದಲ ಹಾಡು 'ಇದ್ರೆ ನೆಮ್ಮದಿಯಾಗ್ ಇರ್ಬೇಕ್' ಹಾಡು ಆಗಸ್ಟ್ 24ರಂದು ರಿಲೀಸ್ ಆಗಿದೆ. ಈ ಹಾಡಿನಲ್ಲಿ ದರ್ಶನ್ ಅವರು ಹಾಕಿದ್ದ ಜಾಕೆಟ್ ಗಮನ ಸೆಳೆದಿದೆ. ಈ ಜಾಕೆಟ್‌ನ ಬೆಲೆಯನ್ನು ಕೆಲ ಅಭಿಮಾನಿಗಳು ಹುಡುಕಿ ತೆಗೆದಿದ್ದಾರೆ. ಈ ಬೆಲೆಯಲ್ಲಿ ಒಂದು ಬೈಕ್‌ನೇ ಖರೀದಿಸಬಹುದಾಗಿದೆ.

'ಡೆವಿಲ್' ಚಿತ್ರದಲ್ಲಿ ದರ್ಶನ್ ದ್ವಿಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಒಂದು ಒಳ್ಳೆಯ ಶೇಡ್‌ನ ಪಾತ್ರವಾದರೆ, ಮತ್ತೊಂದು ನೆಗೆಟಿವ್ ಶೇಡ್‌ನ ಪಾತ್ರ. ಈ ಸಿನಿಮಾ ಡಿಸೆಂಬರ್ 12ರಂದು ರಿಲೀಸ್ ಆಗಲಿದೆ. ಈ ಚಿತ್ರದ ಬಗ್ಗೆ ಫ್ಯಾನ್ಸ್ ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಹೀಗಿರುವಾಗಲೇ ಚಿತ್ರದ ಬಗ್ಗೆ 'ಇದ್ರೆ ನೆಮ್ಮದಿಯಾಗ್ ಇರ್ಬೇಕ್' ಹಾಡು ಬಿಡುಗಡೆ ಕಂಡಿದೆ. ಈ ಹಾಡನ್ನು ಕೇಳಿ ಫ್ಯಾನ್ಸ್ ಖುಷಿಪಟ್ಟಿದ್ದಾರೆ.

'ಸು ಫ್ರಮ್ ಸೋ' ಹಂಚಿಕೆಗೆ ಸಹಾಯ ಮಾಡಿದ್ದ ದುಲ್ಬರ್ ಋಣ ತೀರಿಸಿದ ರಾಜ್‌ಹಾಡಿನಲ್ಲಿ ದರ್ಶನ್ ಡಿಸೆಲ್ ಕಂಪನಿಯ ಕೆಂಪು ಬಣ್ಣದ ಜಾಕೆಟ್ ಒಂದನ್ನು ಧರಿಸಿ ಕಾಣಿಸಿಕೊಳ್ಳುತ್ತಾರೆ. ಈ ಜಾಕೆಟ್ ಎಲ್ಲರ ಗಮನ ಸೆಳೆದಿತ್ತು. ಕೆಲವರು ಇದನ್ನು ಖರೀದಿಸಲು ಹುಡುಕಾಟ ಕೂಡ ನಡೆಸಿದ್ದರು. ಆದರೆ, ಇದರ ಬೆಲೆ ಬರೋಬ್ಬರಿ 99 ಸಾವಿರ ರೂಪಾಯಿ. ಇದಕ್ಕೆ ಸಂಸ್ಥೆ ಸದ್ಯ ಶೆ.20 ಆಫರ್ ನೀಡಿದ್ದು, 79,200 ರೂಪಾಯಿಗೆ ಮಾರಾಟ ಆಗುತ್ತಿದೆ. ಮೂಲ ಬೆಲೆಯಲ್ಲಿ ಒಂದು ಸಾಧಾರಣ ಬೈಕ್ ಬರುತ್ತದೆ ಎಂದು ಅನೇಕರು ಅಭಿಪ್ರಾಯಪಟ್ಟಿದ್ದಾರೆ. ದರ್ಶನ್ ಅವರು ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ಬಂಧನಕ್ಕೆ ಒಳಗಾದರು. ಆ ಬಳಿಕ ಅವರು ಜಾಮೀನು ಪಡೆದು ಹೊರ ಬಂದರು. ಕರ್ನಾಟಕ ಹೈಕೋರ್ಟ್ ದರ್ಶನ್‌ಗೆ ಜಾಮೀನು ಕೊಟ್ಟಿತ್ತು.

# ಸ್ಕೇಟಿಂಗ್ ಚಾಂಪಿಯನ್ ಶಿಪ್ ಭಾರತ ತಂಡ ಎರಡನೇ ಸ್ಥಾನ

• ಉದಯವಾಹಿನಿ, ಕೆ.ಆರ್.ಪುರ



ಬೆಲ್ಜಿಯಂನ ಓಸ್ಟೆಂಡ್ ನಲ್ಲಿ ನಡೆದ 2025ರ ಯುರೋಪಿಯನ್ ಕಪ್ ಇನ್ ಲೈನ್ ಸ್ಪೀಡ್ ಸ್ಕೇಟಿಂಗ್ ಚಾಂಪಿಯನ್ ಶಿಪ್ ನಲ್ಲಿ ಭಾರತ ತಂಡ ಎರಡನೇ ಸ್ಥಾನ ಪಡೆದು ದೇಶಕ್ಕೆ ಕೀರ್ತಿ ತಂದಿದೆ. ಕರ್ನಾಟಕದಿಂದ 7 ಆಟಗಾರರು ಭಾಗವಹಿಸಿ ಕಿರಿಯರ ವಿಭಾಗದ ಅತೀ ದೂರದ ಓಟದಲ್ಲಿ ಇಲ್ಲಿನ ಕು. ಅರ್ನಮಧುಸೂದನ್ 1 ಚಿನ್ನದ ಪದಕ 2 ಬೆಳ್ಳಿ, 1 ಕಂಚಿನ ಪದಕ ಪಡೆದು ದೇಶದ ಕೀರ್ತಿ ಪತಾಕೆಯನ್ನು ಹರಿಸಿದ್ದಾರೆ. ಎಸ್ತರ್ ರೋಲರ್ ಸ್ಕೇಟಿಂಗ್ ಕ್ಲಬ್ ನ ಮಾಲೀಕರು ಹಾಗೂ ಮುಖ್ಯ ಕೋಚ್ ಎಸ್ತರ್ ಮಾತನಾಡಿ, ಬೆಲ್ಜಿಯಂನಲ್ಲಿ ನಡೆದ ಯೂರೋಪಿಯನ್ ಚಾಂಪಿಯನ್ ಶಿಪ್ ನಲ್ಲಿ ಭಾರತ, ಜರ್ಮನಿ, ಫ್ರಾನ್ಸ್, ನೆದರ್ಲ್ಯಾಂಡ್ ಸೇರಿದಂತೆ ಒಟ್ಟು 21 ದೇಶಗಳು ಭಾಗವಹಿಸಿದ್ದು ಎಲ್ಲಾ ವಿಭಾಗಗಳಿಂದ ಭಾರತ ಎರಡನೇ ಸ್ಥಾನ ಪಡೆದಿರುವುದಾಗಿ ತಿಳಿಸಿದರು. ತಂಡದ ಆಟಗಾರರಾಗಿ ಹಿರಣ್ಮಯಿ, ರುತ್ವಿಕ್ ರೆಡ್ಡಿ, ಅಪೂರ್ವ ಹಾಸಿನಿ, ಅಶ್ವತ್, ಅಭಿನವ್, ಹವಿಸಾ ಪ್ರಸಾದ್ ಭಾಗವಹಿಸಿ ದೇಶದ ಪರವಾಗಿ ಉತ್ತಮ ಪ್ರದರ್ಶನ ನೀಡಿದ್ದಾರೆ. ಎಸ್ತಾರ್ ಕ್ಲಬ್ ನ ಸದಸ್ಯರಾದ ಪ್ರಸನ್ನಕುಮಾರ್, ಮ್ಯಾನೇಜರ್ ಸಂಥೀಲ್, ಸಹಾಯಕ ತರಬೇತುದಾರ ಮುರಳಿ, ಮನೋಜ್, ಗಣೇಶ್ ಸೇರಿದಂತೆ ಹಾಗೂ ಪೋಷಕರು ಸಾಧಕ ಆಟಗಾರರಿಗೆ ಸನ್ಮಾನಿಸಿ ಅಭಿನಂಧಿಸಿದರು.

# ನಮ್ಮ ತಂಡದ ವಿರುದ್ಧ ಸೂರ್ಯ ಆಟ ನಡೆಯಲ್ಲ




ಭಾರತ ಕ್ರಿಕೆಟ್ ತಂಡದ ನಾಯಕ ಸೂರ್ಯಕುಮಾರ್ ಯಾದವ್ ಪಾಕಿಸ್ತಾನದ ವಿರುದ್ಧ ತುಂಬಾ ಚೆನ್ನಾಗಿ ಆಡಿಲ್ಲ ಎಂದು ಪಿಟಿವಿ ಸ್ಪೋರ್ಟ್ಸ್‌ನಲ್ಲಿ ಬಾಜಿದ್ ಖಾನ್ ಹೇಳಿದ್ದಾರೆ. ಸೂರ್ಯಕುಮಾರ್ ಬಹುತೇಕ ಎಲ್ಲರ ವಿರುದ್ಧ ರನ್ ಗಳಿಸಿದ್ದಾರೆ. ಆದರೆ ಅವರು ಪಾಕಿಸ್ತಾನ ವಿರುದ್ಧ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಿಲ್ಲ ಎಂದಿದ್ದಾರೆ. 2025 ರ ಏಷ್ಯಾಕಪ್ ಸೆಪ್ಟೆಂಬರ್ 9 ರಿಂದ ಆರಂಭವಾಗಲಿದೆ. ಈ ಟೂರ್ನಿ ಹೈವೋಲ್ಟೇಜ್ ಕದನ ಸೆಪ್ಟೆಂಬರ್ 14 ರಂದು ಭಾರತ ಹಾಗೂ ಪಾಕಿಸ್ತಾನದ ನಡುವೆ ನಡೆಯಲಿದೆ. ಎರಡು ತಂಡಗಳ ಬಲಾಬಲವನ್ನು ನೋಡಿದರೆ, ಈ ಬಾರಿಯೂ ಟೀಂ ಇಂಡಿಯಾವೇ ಗೆಲುವಿನ ಫೇವರೇಟ್ ಎನಿಸಿಕೊಂಡಿದೆ. ಆದಾಗ್ಯೂ ಪಾಕಿಸ್ತಾನದ ಮಾಜಿ ಆಟಗಾರರು ಇದನ್ನು ಅಲ್ಲಗಳೆಯುತ್ತಿದ್ದಾರೆ. ಏಷ್ಯಾಕಪ್ ವೇಳಾಪಟ್ಟಿ ಪ್ರಕಟವಾದ ಬಳಿಕ ಪಾಕ್ ತಂಡದ ಮಾಜಿ ಆಟಗಾರರು ಒಂದಿಲ್ಲೊಂದು ಹೇಳಿಕೆಗಳನ್ನು ನೀಡುತ್ತ ಟೀಂ ಇಂಡಿಯಾದ ನ್ಯೂನತೆಗಳ ಬಗ್ಗೆ ಮಾತನಾಡುತ್ತಿದ್ದಾರೆ. ಇದೀಗ ಅವರ ಸಾಲಿಗೆ ಬಾಜಿದ್ ಖಾನ್ ಸೇರಿಕೊಂಡಿದ್ದಾರೆ. ಬಾಜಿದ್ ಖಾನ್, 'ವಿರಾಟ್ ಕೊಹ್ಲಿ, ರೋಹಿತ್ ಶರ್ಮಾ ಮತ್ತು ರವೀಂದ್ರ ಜಡೇಜಾ ಅವರ ಅನುಪಸ್ಥಿತಿಯನ್ನು ಭಾರತ ತುಂಬಾ ಅನುಭವಿಸಲಿದೆ ಎಂದು ಹೇಳಿದ್ದಾರೆ. ಒಟ್ಟಾರೆಯಾಗಿ ಭಾರತ ತಂಡ ಉತ್ತಮವಾಗಿದೆ ಆದರೆ ಕೆಲವು ಸ್ಟಾರ ಆಟಗಾರರ ಅನುಪಸ್ಥಿತಿಯನ್ನು ಅದು ಮಿಸ್ ಮಾಡಿಕೊಳ್ಳುತ್ತದೆ ಎಂದಿದ್ದಾರೆ.

ಇದರ ಜೊತೆಗೆ, ಸೂರ್ಯಕುಮಾರ್ ಯಾದವ್ ಪಾಕಿಸ್ತಾನ ವಿರುದ್ಧ ಪರಿಣಾಮಕಾರಿಯಾಗಿ ಆಡಿಲ್ಲ. ಇದು ತಂಡಕ್ಕೆ ದೊಡ್ಡ ಹೊಡೆತ ನೀಡಬಹುದು ಎಂದಿದ್ದಾರೆ. ಪಾಕಿಸ್ತಾನ ವಿರುದ್ಧ ಭಾರತದ ನಾಯಕ ಸೂರ್ಯಕುಮಾರ್ ಯಾದವ್ ಅವರ ದಾಖಲೆ ಉತ್ತಮವಾಗಿಲ್ಲ ಎಂದು ಬಾಜಿದ್ ಖಾನ್ ಪಿಟಿವಿ ಸ್ಪೋರ್ಟ್ಸ್‌ನಲ್ಲಿ ಹೇಳಿದ್ದಾರೆ. ಸೂರ್ಯಕುಮಾರ್ ಬಹುತೇಕ ಎಲ್ಲರ ವಿರುದ್ಧ ರನ್ ಗಳಿಸಿದ್ದಾರೆ. ಆದರೆ ಅವರು ಪಾಕಿಸ್ತಾನ ವಿರುದ್ಧ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಿಲ್ಲ. ಇದಕ್ಕೆ ಕಾರಣ ವೇಗದ ದಾಳಿ ಅಥವಾ ಇನ್ನಾವುದೋ ಕಾರಣ ಇರಬಹುದು. ಅದು ಏನೇ ಇರಲಿ, ಸೂರ್ಯ ಮಾತ್ರ ಪಾಕ್ ವಿರುದ್ಧ ಪರಿಣಾಮಕಾರಿಯಾಗಿಲ್ಲ ಎಂದಿದ್ದಾರೆ. ಟಿ20 ಅಂತಾರಾಷ್ಟ್ರೀಯ ಪಂದ್ಯಗಳಿಂದ ನಿವೃತ್ತರಾದ ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಅವರ ಬಗ್ಗೆಯೂ ಮಾತನಾಡಿದ ಅವರು, ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಆಟಕ್ಕೆ ತೀವ್ರತೆಯನ್ನು ತರುತ್ತಾರೆ, ಹೀಗಾಗಿ ಭಾರತ ಖಂಡಿತವಾಗಿಯೂ ಅದನ್ನು ಕಳೆದುಕೊಳ್ಳುತ್ತದೆ. ರವೀಂದ್ರ ಜಡೇಜಾ ಅನುಪಸ್ಥಿತಿ ಭಾರತಕ್ಕೆ ದೊಡ್ಡ ಕಳವಳಕಾರಿ.



# ಟಿ20 ಏಷ್ಯಾಕಪ್‌ನಲ್ಲಿ ಮುರಿಯದ ದಾಖಲೆ

2025ರ ಏಷ್ಯಾ ಕಪ್ ಟಿ20 ಮಾದರಿಯಲ್ಲಿ ಸೆಪ್ಟೆಂಬರ್ 9 ರಿಂದ ಆರಂಭವಾಗಲಿದೆ. ಟಿ20 ಏಷ್ಯಾ ಕಪ್‌ನ ಇತಿಹಾಸದಲ್ಲಿ ಭಾರತ ತಂಡ ಮಾತ್ರ 200 ಕ್ಕಿಂತ ಹೆಚ್ಚು ರನ್ ಗಳಿಸಿದೆ (212 ರನ್). ಪಾಕಿಸ್ತಾನ ಎರಡನೇ ಸ್ಥಾನದಲ್ಲಿದೆ (193 ರನ್). ಈ ಬಾರಿ ಹೊಸ ದಾಖಲೆಗಳು ನಿರ್ಮಾಣವಾಗುವ ನಿರೀಕ್ಷೆಯಿದೆ. ಯುವ ಆಟಗಾರರ ಆಕ್ರಮಣಕಾರಿ ಆಟದಿಂದ ಟಿ20 ಮಾದರಿಯಲ್ಲಿ ಮೂರನೇ ಬಾರಿಗೆ ನಡೆಯುತ್ತಿರುವ 2025 ರ ಏಷ್ಯಾಕಪ್ ಇದೇ ಸೆಪ್ಟೆಂಬರ್ 9 ರಿಂದ ಆರಂಭವಾಗಲಿದೆ. ಈ ಬಾರಿಯ ಏಷ್ಯಾಕಪ್‌ನಲ್ಲಿ ಒಟ್ಟು 8 ತಂಡಗಳು ಭಾಗವಹಿಸುತ್ತಿದ್ದು, ಎಲ್ಲಾ ತಂಡಗಳು ತಮ್ಮ ಸಿದ್ಧತೆಗಳನ್ನು ಅಂತಿಮಗೊಳಿಸುತ್ತಿವೆ. ಈ ಟೂರ್ನಿಯಲ್ಲಿ ಇದುವರೆಗೆ ಹಲವು ದಾಖಲೆಗಳು ನಿರ್ಮಾಣಗೊಂಡಿವೆ. ಆದರೆ ಈ ಟೂರ್ನಿಯಲ್ಲಿ ಅತ್ಯಂತ ಯಶಸ್ವಿ ತಂಡ ಎನಿಸಿಕೊಂಡಿರುವ ಟೀಂ ಇಂಡಿಯಾ ನಿರ್ಮಿಸಿರುವ ಅದೊಂದು ದಾಖಲೆಯನ್ನು ಯಾವ ತಂಡಕ್ಕೂ ಮುರಿಯಲು ಸಾಧ್ಯವಾಗಿಲ್ಲ.

# ಡ್ರೀಮ್ 11 ಜೊತೆಗಿನ ಒಪ್ಪಂದಕ್ಕೆ ಅಂತ್ಯ

ಬಿಸಿಸಿಐ ತನ್ನ ಪ್ರಮುಖ ಪ್ರಾಯೋಜಕ ಡ್ರೀಮ್ 11 ಜೊತೆಗಿನ 358 ಕೋಟಿ ರೂಪಾಯಿಗಳ ಒಪ್ಪಂದವನ್ನು ರದ್ದುಗೊಳಿಸಿದೆ. ಆನ್‌ಲೈನ್ ಗೇಮಿಂಗ್ ನಿಯಂತ್ರಣ ಮಸೂದೆಯಿಂದಾಗಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಬಿಸಿಸಿಐ ಇನ್ನು ಮುಂದೆ ಇಂತಹ ಕಂಪನಿಗಳೊಂದಿಗೆ ಕೆಲಸ ಮಾಡುವುದಿಲ್ಲ ಎಂದು ಘೋಷಿಸಿದೆ. ಈ ನಿರ್ಧಾರದಿಂದ ಬಿಸಿಸಿಐ ಏಷ್ಯಾಕಪ್‌ಗೂ ಮುನ್ನ ಹೊಸ ಪ್ರಾಯೋಜಕರನ್ನು ಕಂಡುಕೊಳ್ಳಬೇಕಾಗಿದೆ. ವಿಶ್ವದ ಅತ್ಯಂತ ಶ್ರೀಮಂತ ಕ್ರಿಕೆಟ್ ಮಂಡಳಿ ಬಿಸಿಸಿಐ ನಿರೀಕ್ಷೆಯಂತೆ ಡ್ರೀಮ್ 11 ಜೊತೆಗಿನ ಒಪ್ಪಂದವನ್ನು ಕಡಿದುಕೊಂಡಿದೆ. ಆನ್‌ಲೈನ್ ಗೇಮಿಂಗ್ ಪ್ರಚಾರ ಮತ್ತು ನಿಯಂತ್ರಣ ಮಸೂದೆ ಅಂಗೀಕಾರವಾದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಡ್ರೀಮ್ ಇಲೆವೆನ್ ಜೊತೆಗಿನ ಸಂಬಂಧವನ್ನು ಕಡಿದುಕೊಂಡ ಬಳಿಕ ಮಹತ್ವದ ನಿರ್ಧಾರ ತೆಗೆದುಕೊಂಡಿರುವ ಬಿಸಿಸಿಐ, ಮತ್ತೆ ಎಂದಿಗೂ ಇಂತಹ ಕಂಪನಿಗಳೊಂದಿಗೆ ಸಹಭಾಗಿತ್ವ ವಹಿಸುವುದಿ ಕೈಜೋಡಿಸುವುದಿಲ್ಲ ಎಂದು ಹೇಳಿಕೊಂಡಿದೆ. ಡ್ರೀಮ್ 11 ಜೊತೆಗಿನ ಒಪ್ಪಂದವನ್ನು ಮುರಿದುಕೊಂಡ ನಂತರ ಮಾತನಾಡಿರುವ ಬಿಸಿಸಿಐ ಕಾರ್ಯದರ್ಶಿ ದೇವ್ಜಿತ್ ಸೈಕಿಯಾ ಅವರು, ನಾವು ಭವಿಷ್ಯದಲ್ಲಿ ಇಂತಹ ಕಂಪನಿಗಳೊಂದಿಗೆ ಕೆಲಸ ಮಾಡುವುದಿಲ್ಲ ಎಂದು ಹೇಳಿದ್ದಾರೆ. ವಾಸ್ತವವಾಗಿ ಡ್ರೀಮ್11 ಮತ್ತು ಬಿಸಿಸಿಐ ನಡುವೆ 2023 ರಲ್ಲಿ ಒಪ್ಪಂದ ನಡೆದಿತ್ತು. ಈ ಒಪ್ಪಂದದ ಪ್ರಕಾರ, 2026 ರವರೆಗೆ ಡ್ರೀಮ್11 ಬಿಸಿಸಿಐಗೆ 358 ಕೋಟಿ ರೂ.ಗಳನ್ನು ಪಾವತಿಸಬೇಕಾಗಿತ್ತು. ಆದರೆ ಈಗ ಈ ಒಪ್ಪಂದವನ್ನು ಮಧ್ಯದಲ್ಲಿಯೇ ಕಡಿದುಕೊಳ್ಳಲಾಗಿದೆ.

# ನನ್ನ ಹೃದಯ ಯಾವಾಗಲೂ ಆರ್‌ಸಿಬಿ ಜೊತೆ




ಎಬಿ ಡಿವಿಲಿಯರ್ಸ್ ಅವರು ಐಪಿಎಲ್‌ಗೆ ಭವಿಷ್ಯದಲ್ಲಿ ಬೇರೆ ಪಾತ್ರದಲ್ಲಿ ಮರಳಬಹುದು ಎಂದು ಹೇಳಿದ್ದಾರೆ. ಆದರೆ ಪೂರ್ಣ ಸೀಸನ್ ಆಡುವುದು ಕಷ್ಟ ಎಂದೂ ಅವರು ತಿಳಿಸಿದ್ದಾರೆ. ಅವರ ಹೃದಯ ಆರ್‌ಸಿಬಿಯೊಂದಿಗೆ ಇದೆ ಎಂದು ಹೇಳಿ, ತರಬೇತಿ ಅಥವಾ ಮಾರ್ಗದರ್ಶನದ ಪಾತ್ರಕ್ಕೆ ಅವಕಾಶ ಸಿಕ್ಕರೆ ಆರ್‌ಸಿಬಿಯಲ್ಲಿ ಖಂಡಿತವಾಗಿಯೂ ಇರುತ್ತೇನೆ ಎಂದು ಸೂಚಿಸಿದ್ದಾರೆ. ಎಬಿ ಡಿವಿಲಿಯರ್ಸ್ ದಕ್ಷಿಣ ಆಫ್ರಿಕಾದ ಆಟಗಾರನಾಗಿ ಭಾರತದಲ್ಲಿ ಜನಪ್ರಿಯರಾಗಿದ್ದಕ್ಕಿಂತ ಆರ್‌ಸಿಬಿಯ ಆಪತ್ಭಾಂದವರೆಂದೇ ಖ್ಯಾತರಾದರು. ಈ ತಂಡದ ಪರ 11 ವರ್ಷಗಳ ಕಾಲ ಆಡಿದ ಡಿವಿಲಿಯರ್ಸ್ ಅವಕಾಶ ಸಿಕ್ಕಾಗಲೆಲ್ಲ ಆರ್‌ಸಿಬಿ ಮೇಲಿನ ಪ್ರೀತಿಯನ್ನು ವ್ಯಕ್ತಪಡಿಸುತ್ತ ಬಂದಿದ್ದಾರೆ.

ಇದೀಗ ಆರ್‌ಸಿಬಿ ವಿಚಾರವಾಗಿ ಮಾತನಾಡಿರುವ ಎಬಿ, ಮತ್ತೊಮ್ಮೆ ಆರ್‌ಸಿಬಿ ತಂಡವನ್ನು ಸೇರುವ ಸುಳಿವು ನೀಡಿದ್ದಾರೆ. ಐಎಎನ್‌ಎಸ್ ಜೊತೆ ಮಾತನಾಡಿದರುವ ಎಬಿ ಡಿವಿಲಿಯರ್ಸ್, 'ಭವಿಷ್ಯದಲ್ಲಿ ನಾನು ಬೇರೆ ಯಾವುದಾದರೂ ಪಾತ್ರದಲ್ಲಿ ಐಪಿಎಲ್ ಗೆ ಸೇರಬಹುದು. ಆದರೆ ಒಬ್ಬ ವೃತ್ತಿಪರ ಆಟಗಾರನಾಗಿ ಇಡೀ ಸೀಸನ್ ಆಡುವುದು ಸ್ವಲ್ಪ ಕಷ್ಟ. ಆ ದಿನಗಳು ಮುಗಿದು ಹೋಗಿವೆ ಎಂದು ನಾನು ಭಾವಿಸುತ್ತೇನೆ. ನನ್ನ ಹೃದಯ ಆರ್‌ಸಿಬಿ ಜೊತೆಗಿದೆ ಮತ್ತು ಯಾವಾಗಲೂ ಇರುತ್ತದೆ.

ಆದ್ದರಿಂದ ಫ್ರಾಂಚೈಸಿ ನನಗೆ ಒಂದು ಪಾತ್ರ (ತರಬೇತುದಾರ ಅಥವಾ ಮಾರ್ಗದರ್ಶಕ) ಇದೆ ಎಂದು ಭಾವಿಸಿದರೆ, ಇದಕ್ಕೆ ಪೂರಕವಾಗಿ ಸಮಯ ಕೂಡಿ ಬಂದರೆ ನಾನು ಖಂಡಿತವಾಗಿಯೂ ಆರ್‌ಸಿಬಿಯಲ್ಲಿ ಇರುತ್ತೇನೆ ಎಂದು ಡಿವಿಲಿಯರ್ಸ್ ಹೇಳಿಕೊಂಡಿದ್ದಾರೆ. ಮೇಲೆ ಹೇಳಿದಂತೆ ಆರ್‌ಸಿಬಿ ತಂಡದಲ್ಲಿ 11 ಸೀಸನ್‌ಗಳನ್ನು ಆಡಿದ್ದ ಡಿವಿಲಿಯರ್ಸ್, ಅದ್ಭುತ ಪ್ರದರ್ಶನ ನೀಡಿದ್ದರು ಮತ್ತು ತಂಡದ ಅತ್ಯಂತ ವಿಶ್ವಾಸಾರ್ಹ ಆಟಗಾರರಲ್ಲಿ ಒಬ್ಬರಾಗಿದ್ದರು. ಆದಾಗ್ಯೂ, ಎಬಿ ತಂಡದಲ್ಲಿದ್ದಾಗ ಆರ್‌ಸಿಬಿಗೆ ಕಪ್ ಗೆಲ್ಲಲು ಸಾಧ್ಯವಾಗಿರಲಿಲ್ಲ. ಅಂತಿಮವಾಗಿ ಅವರು 2021 ರಲ್ಲಿ ಕ್ರಿಕೆಟ್‌ನಿಂದ ನಿವೃತ್ತರಾಗಿದ್ದರು. ಇದೀಗ ಭವಿಷ್ಯದಲ್ಲಿ ಕೋಚ್ ಅಥವಾ ಮಾರ್ಗದರ್ಶಕ ಪಾತ್ರದಲ್ಲಿ ಆರ್‌ಸಿಬಿಗೆ ಸೇರಬಹುದು ಎಂದು ಡಿವಿಲಿಯರ್ಸ್ ಸೂಚಿಸಿದ್ದಾರೆ. ಇನ್ನು ಆರ್‌ಸಿಬಿ ತಂಡದಲ್ಲಿದ್ದಾಗ ಡಿವಿಲಿಯರ್ಸ್ ಪ್ರದರ್ಶನ ಹೇಗಿತ್ತು ಎಂಬುದನ್ನು ನೋಡುವುದಾದರೆ.. ಈ ತಂಡದ ಪರ 157 ಪಂದ್ಯಗಳನ್ನಾಡಿದ್ದ ಎಬಿ 41.10 ಸರಾಸರಿಯಲ್ಲಿ 4522 ರನ್ ಗಳಿಸಿದ್ದಾರೆ. ಈ ಅವಧಿಯಲ್ಲಿ ಅವರ ಸ್ಟ್ರೈಕ್ ರೇಟ್ 158.33 ಆಗಿತ್ತು. ಆರ್‌ಸಿಬಿಯಲ್ಲಿದ್ದಾಗ ಅವರು 2 ಶತಕಗಳು ಮತ್ತು 37 ಅರ್ಧಶತಕಗಳನ್ನು ಬಾರಿಸಿದ್ದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966